ಸಂಪುಟ: 21, ಸಂಚಿಕೆ: 282, ಪುಟಗಳು: 8, ಶನಿವಾರ, 20 ಜುಲೈ 2024 RNI NO. KARKAN/2002/08054
epaper: www.sanjemugilu.com



ಸುದ್ದಿಗಳ ಹೊನಲು

# ಸಂಜೆ ಮುಗಿಲು

ಕನ್ನಡ ಪ್ರಾದೇಶಿಕ ಸಂಜೆ ದಿನಪತ್ರಿಕೆ

ವೇಣು ಸಾರಥ್ಯದಲ್ಲಿ...

ಬೆಂಗಳೂರು। ಬೆಂಗಳೂರು ಗ್ರಾಮಾಂತರ। ಕೋಲಾರ। ಚಿಕ್ಕಬಳ್ಳಾಪುರ। ರಾಮನಗರ। ಮಂಡ್ಯ। ಮೈಸೂರು। ಚಾಮರಾಜನಗರ ₹3

ಸುಭಾಷಿತ

ತುಕ್ಕು ಹಿಡಿದು ಅಳಿಯುವುದಕ್ಕಿಂತ ದುಡಿದು ಸವೆಯುವುದು ಮೇಲು.

। ಸರ್.ಎಂ.ವಿಶ್ವೇಶ್ವರಯ್ಯ

ಪಂಚಾಂಗ

(ಶನಿವಾರ 20, ಜುಲೈ-2024)

- ಶ್ರೀ ಕ್ರೋಧಿನಾಮ ಸಂವತ್ಸರ,
- ದಕ್ಷಿಣಾಯಣ, ಗ್ರೀಷ್ಮ ಋತು,
- ಆಷಾಡ ಮಾಸ, ಶುಕ್ಲ ಪಕ್ಷ,
- ಚತುರ್ದಶಿ, ಶನಿವಾರ,
- ಪೂರ್ವಾಷಾಡ ನಕ್ಷತ್ರ.
- ರಾಹುಕಾಲ: 09:18 ರಿಂದ 10:54
- ಗುಳಿಕಕಾಲ: 06:07 ರಿಂದ 07:42
- ಯಮಗಂಡಕಾಲ: 02:05 ರಿಂದ 03:41




# ದಶಪ್ರಮತಿ ಮುದ್ರಣಾಲಯ

dashapramathi mudranalaya

PRE-PRESS PRINTERS

Contact: +91 9483589085 | e-mail: dashapramathimudranalaya@gmail.com



We Undertake Printing of Newspapers | Tabloids | Magazines


# ರಂಗನತಿಟ್ಟು ಪಕ್ಷಿಧಾಮದ ದೋಣಿ ವಿಹಾರ ತಾತ್ಕಾಲಿಕ ಬಂದ್

**ಮಂಡ್ಯ:** ಕೆಆರ್ ಎಸ್ ಜಲಾಶಯದಿಂದ ಕಾವೇರಿ ನದಿಗೆ ಹೆಚ್ಚಾಗಿ ನೀರು ಬಿಡುತ್ತಿರುವ ಹಿನ್ನೆಲೆಯಲ್ಲಿ ರಂಗನತಿಟ್ಟು ಪಕ್ಷಿಧಾಮದ ದೋಣಿ ವಿಹಾರವನ್ನು ತಾತ್ಕಾಲಿಕವಾಗಿ ಸ್ಥಗಿತಗೊಳಿಸಲಾಗಿದೆ. ಇಂದಿನಿಂದ ಮುಂದಿನ ಆದೇಶದವರೆಗೆ ದೋಣಿ ವಿಹಾರ ಬಂದ್ ಇರಲಿದೆ. ಪ್ರವಾಸಿಗರಿಗೆ ರಂಗನತಿಟ್ಟು ವೀಕ್ಷಣೆಗೆ ಮಾತ್ರ ಅವಕಾಶ ನೀಡಲಾಗಿದೆ ಎಂದು ಮೈಸೂರು ವನ್ಯಜೀವಿ ವಿಭಾಗ ಮಾಧ್ಯಮ ಪ್ರಕಟಣೆ ಹೊರಡಿಸಿದೆ.

ಕೆಆರ್‌ಎಸ್ ಜಲಾಶಯ ಸಂಪೂರ್ಣ ಭರ್ತಿ ಅಂಚಿಗೆ ತಲುಪಿದ ಹಿನ್ನೆಲೆಯಲ್ಲಿ ಇಂದು (ಜು.20) ಕಾವೇರಿ ನದಿಗೆ ಸದ್ಯ 10 ಸಾವಿರ ಕ್ಯೂಸೆಕ್ ನೀರು ಬಿಡುಗಡೆ ಮಾಡಲಾಗಿದೆ. ಡ್ಯಾಂನ 10 ಕ್ರೆಸ್ಟ್ ಗೇಟ್ ಗಳ ಮೂಲಕ ಹಾಲ್ನೊರೆಯಂತೆ ನೀರು ರಭಸವಾಗಿ ಹೊರ ಬರುತ್ತಿದೆ. ಸಂಜೆ ವೇಳೆಗೆ ಡ್ಯಾಂ ಹೊರ ಹರಿವಿನ ಪ್ರಮಾಣ ಮತ್ತಷ್ಟು




ಏರಿಕೆ ಸಾಧ್ಯತೆ ಇದೆ. ಒಳಹರಿವು ಹೆಚ್ಚಳವಾದರೆ ಹೊರಹರಿವು ಕೂಡ ಹೆಚ್ಚಳವಾಗುವ ಸಾಧ್ಯತೆ ಇದೆ. ಸದ್ಯಕ್ಕೆ 10 ರಿಂದ 25 ಸಾವಿರ ಕ್ಯೂಸೆಕ್ ನೀರನ್ನ ನದಿಗೆ ಬಿಡಲು ತೀರ್ಮಾನ ಮಾಡಲಾಗಿದೆ. ಪುಟ 2

## ಶಿವಮೊಗ್ಗದಲ್ಲಿ ಮಳೆ ಅಬ್ಬರ: 3 ಮನೆಗಳು ಧರೆಗೆ

# ಶಾಲಾ ಕಾಲೇಜುಗಳಿಗೆ ರಜೆ

**ಶಿವಮೊಗ್ಗ:** ಮಲೆನಾಡಿನಲ್ಲಿ ಮಳೆಯ ಅಬ್ಬರ ಮುಂದುವರಿದ ಹಿನ್ನಲೆ ಶಿವಮೊಗ್ಗ ಜಿಲ್ಲೆಯಾದ್ಯಂತ ಶಾಲಾ ಕಾಲೇಜು ಹಾಗೂ ಅಂಗನವಾಡಿಗಳಿಗೆ ಇಂದು ರಜೆ ಘೋಷಣೆ ಮಾಡಲಾಗಿದೆ.

ಭಾರೀ ಮಳೆಯ ಹಿನ್ನಲೆ ಇಂದು ರಜೆ ಘೋಷಣೆ ಮಾಡಿ ಆಯಾ ತಾಲೂಕಿನ ತಹಶೀಲ್ದಾರ್‌ಗಳು ಆದೇಶ ಹೊರಡಿಸಿದ್ದಾರೆ. ಮಕ್ಕಳ ಹಿತದೃಷ್ಟಿಯಿಂದ ಆಯಾ ತಾಲೂಕಿನ ತಹಶೀಲ್ದಾರ್‌ಗಳು ರಜೆ ಘೋಷಣೆ ಮಾಡಿದ್ದಾರೆ.

ಇನ್ನು ಧಾರಾಕಾರ ಮಳೆಗೆ 3 ಮನೆಗಳು ಧರೆಗುರುಳಿವೆ. ಶಿವಮೊಗ್ಗ ಜಿಲ್ಲೆಯ ಸಾಗರ ಪಟ್ಟಣದ ಗಾಂಧಿನಗರದಲ್ಲಿ ಘಟನೆ ನಡೆದಿದೆ. ಹಬೀಬಾ, ಇನಾಯತ್ ಹಾಗೂ ನಿಸಾರ್ ಎಂಬವರಿಗೆ ಸೇರಿದ ಮನೆಗಳು ಕುಸಿದು ನೆಲಸಮವಾಗಿವೆ. ಮನೆ ಬಿದ್ದರೂ ಸ್ಥಳಕ್ಕೆ ಬಾರದ ನಗರಸಭೆ ಅಧಿಕಾರಿಗಳು, ಜನಪ್ರತಿನಿಧಿಗಳ ವಿರುದ್ಧ ಸ್ಥಳೀಯರು ಆಕ್ರೋಶ ವ್ಯಕ್ತಪಡಿಸಿದ್ದಾರೆ.



## ಸಂಕ್ಷಿಪ್ತ ಸುದ್ದಿ

### ನಟ ದರ್ಶನ್ ಗ್ಯಾಂಗ್‌ನ 4ನೇ ಆರೋಪಿ ತಾಯಿ ನಿಧನ




**ಚಿತ್ರದುರ್ಗ:** ರೇಣುಕಾಸ್ವಾಮಿ ಕೊಲೆ ಪ್ರರಕಣದಲ್ಲಿ ಬಂಧನಕ್ಕೊಳಗಾಗಿರುವ ನಟ ದರ್ಶನ್ ಗ್ಯಾಂಗ್‌ನ ನಾಲ್ಕನೇ ಆರೋಪಿ ರಾಘವೇಂದ್ರನ ತಾಯಿ ನಿಧನರಾಗಿದ್ದಾರೆ. ರಾಘವೇಂದ್ರ, ಅಲಿಯಾಸ್ ರಘು ತಾಯಿ ಮಂಜುಳಮ್ಮ (75) ಇಂದು ಬೆಳಗ್ಗೆ ಕೊನೆಯುಸಿರೆಳೆದಿದ್ದಾರೆ. ರಾಘವೇಂದ್ರ, ಚಿತ್ರದುರ್ಗ ದರ್ಶನ್ ಅಭಿಮಾನಿಗಳ ಸಂಘದ ಅಧ್ಯಕ್ಷನಾಗಿದ್ದ. ಸದ್ಯ ರೇಣುಕಾಸ್ವಾಮಿ ಕೊಲೆ ಪ್ರಕರಣದಲ್ಲಿ ನ್ಯಾಯಾಂಗ ಬಂಧನದಲ್ಲಿದ್ದಾನೆ. ಮಾನಸಿಕ ಅಸ್ವಸ್ಥತೆ, ವಯೋಸಹಜ ಕಾಯಿಲೆಯಿಂದ ರಾಘವೇಂದ್ರನ ತಾಯಿ ಕೋಳಿಬುರುಜನಹಟ್ಟಿ ಮನೆಯಲ್ಲಿ ಇಂದು ಮುಂಜಾನೆ 5 ಗಂಟೆ ಸುಮಾರಿಗೆ ನಿಧನರಾಗಿದ್ದಾರೆ. ಪುಟ 2

### ಪಾಕಿಸ್ತಾನಿ ಭಯೋತ್ಪಾದಕರನ್ನು ಬೇಟೆಯಾಡಲು 500 ಪ್ಯಾರಾ ಕಮಾಂಡೋಗಳ ಎಂಟ್ರಿ



**ನವದೆಹಲಿ:** ಜಮ್ಮು ಪ್ರದೇಶದಲ್ಲಿ ಭಯೋತ್ಪಾದಕರ ಒಳನುಸುಳುವಿಕೆ ಮತ್ತು ದಾಳಿ ಹೆಚ್ಚುತ್ತಿದೆ. ಪಾಕಿಸ್ತಾನಿ ಉಗ್ರರನ್ನು ಬಗ್ಗುಬಡಿಯಲು ಭಾರತೀಯ ಸೇನೆಯ 500 ಕ್ಕೂ ಹೆಚ್ಚು ಪ್ಯಾರಾ ಕಮಾಂಡೋಗಳು ಬೀಡುಬಿಟ್ಟಿದ್ದಾರೆ. ಭಯೋತ್ಪಾದನೆ ಪುನರುಜ್ಜೀವನಗೊಳಿಸಲು ಪಾಕಿಸ್ತಾನದ 50 ರಿಂದ 55 ಭಯೋತ್ಪಾದಕರು ಜಮ್ಮು ಪ್ರದೇಶಕ್ಕೆ ಮತ್ತೆ ಎಂಟ್ರಿ ಕೊಟ್ಟಿದ್ದಾರೆ. ಅವರನ್ನು ಬೇಟೆಯಾಡಲು ಭಾರತೀಯ ಸೇನೆಯು ಸುಮಾರು 500 ಪ್ಯಾರಾ ವಿಶೇಷ ಪಡೆಗಳ ಕಮಾಂಡೋಗಳನ್ನು ಈ ಪ್ರದೇಶದಲ್ಲಿ ನಿಯೋಜಿಸಿದೆ. ಪುಟ 2

## ರಾಜ್ಯದಲ್ಲಿ ದಿನೇ ದಿನೆ ಹೆಚ್ಚುತ್ತಲೇ ಇದೆ ಡೆಂಗ್ಯೂ

# 12 ಸಾವಿರ ಪ್ರಕರಣ ಪತ್ತೆ

**ಬೆಂಗಳೂರು:** ರಾಜ್ಯ ರಾಜಧಾನಿ ಬೆಂಗಳೂರು ಸೇರಿದಂತೆ ರಾಜ್ಯದಲ್ಲಿ ದಿನದಿಂದ ದಿನಕ್ಕೆ ಡೆಂಗ್ಯೂ ಕೇಸ್‌ಗಳು ಹೆಚ್ಚಳವಾಗುತ್ತಿದ್ದು, ನಿನ್ನೆ ಕೂಡ 12 ಸಾವಿರ ಸಮೀಪ ಕೇಸ್ ಗಳು ದಾಖಲಾಗಿವೆ. ಮುಂದಿನ ದಿನಗಳಲ್ಲಿ ಮತ್ತಷ್ಟು ಕೇಸ್ ಗಳು ಹೆಚ್ಚಳವಾಗುವ ಸಾಧ್ಯತೆ ಇದೆ. ನಿನ್ನೆ ರಾಜ್ಯದಲ್ಲಿ 11,480ರಷ್ಟು ಕೇಸ್ ಗಳು ದಾಖಲಾಗಿದ್ದು, ಹೊಸದಾಗಿ 448 ಮಂದಿಯಲ್ಲಿ ಡೆಂಗ್ಯೂ ಪತ್ತೆಯಾಗಿದೆ. ಸದ್ಯ ರಾಜ್ಯದಲ್ಲಿ 3,230 ಡೆಂಗ್ಯೂ ಪ್ರಕರಣಗಳು ಸಕ್ರಿಯವಾಗಿದ್ದು, ಅದರಲ್ಲಿ 2,610 ಮಂದಿಗೆ ಮನೆಗಳಲ್ಲಿ ಚಿಕಿತ್ಸೆ ನೀಡಲಾಗುತ್ತಿದೆ. ಇನ್ನು ಡೆಂಗ್ಯೂ ಜ್ವರದಿಂದ ಆಸ್ಪತ್ರೆಯಲ್ಲಿ 620 ಮಂದಿ ಚಿಕಿತ್ಸೆ ಪಡೆಯುತ್ತಿದ್ದು, 604 ಮಂದಿಯನ್ನು ಸಾಮಾನ್ಯ ವಾರ್ಡ್ ನಲ್ಲಿ ದಾಖಲಾತಿ ಮಾಡಿಕೊಂಡು ಚಿಕಿತ್ಸೆ ನೀಡಲಾಗುತ್ತಿದೆ.

ಇನ್ನು 16 ಮಂದಿಗೆ ಐಸಿಯೂ ನಲ್ಲಿ ಚಿಕಿತ್ಸೆ ನೀಡುತ್ತಿದ್ದು, ಇಲ್ಲಿಯವರೆಗೆ ಡೆಂಗ್ಯೂ ಹಾವಳಿಗೆ 8 ಮಂದಿ ಬಲಿಯಾಗಿದ್ದಾರೆ. ಕಳೆದ 24 ಗಂಟೆಯಲ್ಲಿ ಒಂದು ವರ್ಷದೊಳಗಿನ 201 ಮಕ್ಕಳು, 18 ವರ್ಷ ಮೇಲ್ಪಟ್ಟ 7,289 ಜನರಲ್ಲಿ ಡೆಂಗ್ಯೂ ದೃಢವಾಗಿದೆ. ಇನ್ನು ಬಿಬಿಎಂಪಿ ವ್ಯಾಪ್ತಿಯಲ್ಲಿ 4 ಸಾವಿರದ ಗಡಿದಾಟಿದ್ದು, ಕಳೆದ 24 ಗಂಟೆಯಲ್ಲಿ ಬಿಬಿಎಂಪಿ ವ್ಯಾಪ್ತಿಯಲ್ಲಿ 265 ಪ್ರಕರಣಗಳು




ದೃಢವಾಗಿವೆ. ಇನ್ನು ಬಿಬಿಎಂಪಿ ವ್ಯಾಪ್ತಿಯಲ್ಲಿ 4305 ಪ್ರಕರಣಗಳು ವರದಿಯಾಗಿದ್ದು ಮುಂದಿನ ಡಿಸೆಂಬರ್ ವರೆಗೂ ಡೆಂಗ್ಯೂ ಕೇಸ್ ಗಳು ಹೆಚ್ಚಾಗುವ ಸಾಧ್ಯತೆ ಇದೆ ಎಂದು ತಜ್ಞರು ಹೇಳುತ್ತಿದ್ದಾರೆ.

ಇನ್ನು ಡೆಂಗ್ಯೂ ಹೆಚ್ಚಾಗುತ್ತಿರುವ ಹಿನ್ನೆಲೆ ಆರೋಗ್ಯ ಸಚಿವ ದಿನೇಶ್ ಗುಂಡೂರಾವ್ ಜಾಗೃತಿ ಮೂಡಿಸುವ ಸಲುವಾಗಿ ನಿನ್ನೆ ಫೀಲ್ಡ್ ಗಿಳಿದಿದ್ರು. ಬೆಂಗಳೂರಿನ ವಾರ್ಡ್ ಗಳಲ್ಲಿ ಲಾರ್ವಾ ನಾಶಪಡಿಸುವ ಔಷಧಿ ಸಿಂಪಡಣೆ ಮಾಡುವ ಸಲುವಾಗಿ ಬೆಂಗಳೂರಿನ ರಾಮಸ್ವಾಮಿ ಪಾಳ್ಯದಲ್ಲಿ ಫೀವರ್ ಕ್ಲಿನಿಕ್‌ಗೆ ಚಾಲನೆ ನೀಡಿದ್ರು. ಪುಟ 2

## ವಿಶ್ವನಾಯಕ ಮೋದಿಗೆ ಎಲಾನ್ ಮಸ್ಕ್ ಅಭಿನಂದನೆ

**ನವದೆಹಲಿ:** ಸಾಮಾಜಿಕ ಮಾಧ್ಯಮ ಪ್ಲಾಟ್ ಫಾರ್ಮ್ ಎಕ್ಸ್‌ನಲ್ಲಿ ಅತಿ ಹೆಚ್ಚು ಫಾಲೋವರ್ಸ್ ಹೊಂದಿರುವ ವಿಶ್ವ ನಾಯಕ ಪ್ರಧಾನಿ ನರೇಂದ್ರ ಮೋದಿ ಅವರನ್ನು ಸಿಇಒ ಮತ್ತು ಬಿಲಿಯನೇರ್ ಎಲಾನ್ ಮಸ್ಕ್ ಅಭಿನಂದಿಸಿದ್ದಾರೆ.

ಅತಿ ಹೆಚ್ಚು ಫಾಲೋವರ್ಸ್ ಹೊಂದಿರುವ ವಿಶ್ವ ನಾಯಕರಾಗಿದ್ದಕ್ಕಾಗಿ ಪ್ರಧಾನಿ ನರೇಂದ್ರ ಮೋದಿ ಅವರಿಗೆ ಅಭಿನಂದನೆಗಳು ಎಂದು ತಮ್ಮ ಎಕ್ಸ್ ಖಾತೆಯಲ್ಲಿ ಮಸ್ಕ್ ಪೋಸ್ಟ್ ಹಾಕಿದ್ದಾರೆ.

ಕೆಲ ದಿನಗಳ ಹಿಂದೆಯಷ್ಟೇ, ಎಕ್ಸ್ ಖಾತೆಯಲ್ಲಿ ಮೋದಿ ಅವರ ಫಾಲೋವರ್ಸ್ ಸಂಖ್ಯೆ 100 ಮಿಲಿಯನ್ (10 ಕೋಟಿ) ತಲುಪಿತ್ತು. ಎಕ್ಸ್ ಖಾತೆಯಲ್ಲಿ ಅತಿ ಹೆಚ್ಚು ಫಾಲೋವರ್ಸ್ ಹೊಂದಿರುವ ವಿಶ್ವ ನಾಯಕರ ಪಟ್ಟಿಯಲ್ಲಿ ಅಮೆರಿಕ ಮಾಜಿ ಅಧ್ಯಕ್ಷ ಬರಕ್ ಒಬಾಮಾ ಮೊದಲ ಸ್ಥಾನದಲ್ಲಿದ್ದಾರೆ. ಪುಟ 2



## ಕುಡಿದ ಮತ್ತಿನಲ್ಲಿ ಪೊಲೀಸ್ ಅಧಿಕಾರಿಗೆ ದೊಣ್ಣೆಯಿಂದ ಹಲ್ಲೆ ನಡೆಸಿದ ವ್ಯಕ್ತಿ

**ಆಂಧ್ರಪ್ರದೇಶ:** ಕುಡಿದ ಮತ್ತಿನಲ್ಲಿ ವ್ಯಕ್ತಿಯೊಬ್ಬ ಪೊಲೀಸ್ ಅಧಿಕಾರಿ ಮೇಲೆ ದೊಣ್ಣೆಯಿಂದ ಹಲ್ಲೆ ನಡೆಸಿರುವ ಘಟನೆ ಆಂಧ್ರಪ್ರದೇಶದಲ್ಲಿ ನಡೆದಿದೆ. ತಿರುಪತಿ ಜಿಲ್ಲೆಯ ಗುಡೂರು ಪಟ್ಟಣದಲ್ಲಿ ಪೊಲೀಸರ ಮೇಲೆ ಹಲ್ಲೆ ನಡೆಸಿದಾಗ ಆರೋಪಿ ಕುಡಿದ ಅಮಲಿನಲ್ಲಿದ್ದ ಎಂದು ಪೊಲೀಸರು ತಿಳಿಸಿದ್ದಾರೆ. ದಾಳಿಯಲ್ಲಿ ಹೆಡ್ ಕಾನ್ಸ್‌ಟೇಬಲ್ ಸ್ವಾಮಿ ದಾಸ್ ಎಂದು ಗುರುತಿಸಲಾದ ಪೊಲೀಸ್ ತಲೆಗೆ ತೀವ್ರ ಗಾಯಗಳಾಗಿವೆ ಎಂದು ಪೊಲೀಸರು ತಿಳಿಸಿದ್ದಾರೆ.

ಘಟನೆಯ ಸಿಸಿಟಿವಿ ದೃಶ್ಯಾವಳಿಯಲ್ಲಿ



ಪೊಲೀಸರು ಅಂಗಡಿಯೊಂದಕ್ಕೆ ಹೋಗುತ್ತಿರುವುದನ್ನು ತೋರಿಸಿದೆ. ಸ್ವಲ್ಪ ಸಮಯದ ನಂತರ, ಆರೋಪಿಯು ತನ್ನ ಕೈಯಲ್ಲಿ ದೊಣ್ಣೆಯನ್ನು ಹಿಡಿದುಕೊಂಡು ಆತ ಆರೋಪಿ ಕೂಡ ಹಿಂಬಾಲಿಸಿದ್ದ.

ಆರೋಪಿ ದಾಸ್ ತಲೆಗೆ ಹೊಡೆದಿರುವುದು ವಿಡಿಯೋದಲ್ಲಿದೆ. ಪೊಲೀಸ್ ಸಿಬ್ಬಂದಿ ನೆಲಕ್ಕೆ ಕುಸಿದು ಬೀಳುತ್ತಿರುವುದು ಕಂಡು ಬರುತ್ತಿದೆ. ಮತ್ತೊಬ್ಬ ಪೊಲೀಸ್ ಸಿಬ್ಬಂದಿ ಮತ್ತು ಸ್ಥಳೀಯರು ಮಧ್ಯಪ್ರವೇಶಿಸುವ ಮೊದಲು ಆರೋಪಿಯು ಒಂದೆರಡು ಏಟು ಹೊಡೆದಿದ್ದಾನೆ. ಪುಟ 2

# ದರ್ಶನ್ ಥಳಿಸ್ತಿರೋ 3 ಸೆಕೆಂಡ್ ದೃಶ್ಯ ಡಿಲೀಟ್

**ಬೆಂಗಳೂರು:** ರೇಣುಕಾಸ್ವಾಮಿ ಕೊಲೆ ಪ್ರಕರಣಕ್ಕೆ ಸಂಬಂಧಿಸಿದಂತೆ ಒಂದೊಂದೇ ಸ್ಫೋಟಕ ಸತ್ಯಗಳು ಹೊರ ಬರುತ್ತಿವೆ. ದರ್ಶನ್ ಕರಾಳತೆ ಬಟಾ ಬಯಲಾಗುತ್ತಿದೆ. ರೇಣುಕಾಸ್ವಾಮಿ ಮೇಲೆ ಹಲ್ಲೆ ಮಾಡಿದ್ದ ವಿಡಿಯೋವನ್ನ ದರ್ಶನ್ ಶಿಷ್ಯರು ರೆಕಾರ್ಡ್ ಮಾಡಿದ್ದಾರೆ.

ಪಟ್ಟಣಗೆರೆ ಶೆಡ್‌ನಲ್ಲಿ ರೇಣುಕಾ ಸ್ವಾಮಿಯನ್ನು ಹೊಡೆಯುತ್ತಿರುವ ದೃಶ್ಯವನ್ನು ಪ್ರದೂಷ್ ರೆಕಾರ್ಡ್ ಮಾಡಿದ್ದಾನೆ. 3 ಸೆಕೆಂಡ್ ವಿಡಿಯೋದಲ್ಲಿ



**» ರೇಣುಕಾನನ್ನು ಹೊಡೆಯೋ ದೃಶ್ಯ ಮೊಬೈಲ್‌ನಲ್ಲಿ ರೆಕಾರ್ಡ್**

ದರ್ಶನ್ ಕರಾಳತೆ ಇದೆ ಎನ್ನಲಾಗಿದೆ. ರೇಣುಕಾಸ್ವಾಮಿ ಮೇಲೆ ದರ್ಶನ್ ಹಲ್ಲೆ ನಡೆಸುವಾಗ ಪ್ರದೂಷ್ ತನ್ನ ಐಫೋನ್ ನಲ್ಲಿ ವಿಡಿಯೋ ಮಾಡಿದ್ದನಂತೆ. ಹಲ್ಲೆ ನಡೆಸೋದನ್ನು ವಿಡಿಯೋ ಮಾಡಿಕೋ ಅಂತ ದರ್ಶನ್ ಹೇಳಿದ್ದರಂತೆ. ಪುಟ 2

## ಮಳೆಯಲ್ಲೇ 5 ಕಿ.ಮೀ ಮಹಿಳಾ ರೋಗಿಯನ್ನು ಹೊತ್ತು ಸಾಗಿದ ಜನರು

# ಪ್ರಾಣ ಉಳಿಸಿದ ಕಾಡಂಚಿನ ಗ್ರಾಮಸ್ಥರು

**ಬೆಳಗಾವಿ:** ಧಾರಾಕಾರ ಮಳೆಯಲ್ಲೇ ಗ್ರಾಮಸ್ಥರು ರೋಗಿಯ ಪ್ರಾಣ ಉಳಿಸಿದ ಘಟನೆ ನಡೆದಿದೆ. ಐದು ಕಿಲೋಮೀಟರ್ ವರೆಗೆ ಹೆಗಲ ಮೇಲೆ ಮಹಿಳಾ ರೋಗಿಯನ್ನು ಹೊತ್ತುಕೊಂಡು ಬಂದು ಗ್ರಾಮಸ್ಥರು ಆಸ್ಪತ್ರೆಗೆ ಸೇರಿಸಿದ ಹೃದಯವಿದ್ರಾವಕ ಘಟನೆ ಬೆಳಗಾವಿ ಜಿಲ್ಲೆಯ ಖಾನಾಪುರ ತಾಲೂಕಿನಲ್ಲಿ ನಡೆದಿದೆ. ದಟ್ಟವಾದ ಕಾಡಂಚಿನಲ್ಲಿ ಇರುವ ಅಂಗಾವ್ ಗ್ರಾಮದ 36 ವರ್ಷದ ಮಹಿಳೆ ಹರ್ಷದಾ ಎಂಬುವವರು ತೀವ್ರ ಜ್ವರದಿಂದ ಮೂರ್ಛೆ ಹೋಗಿದ್ದರು. ಮಹಿಳೆಯನ್ನು ಉಳಿಸಲು ಗ್ರಾಮಸ್ಥರು ಮಳೆಯನ್ನೂ ಚಿಂತಿಸದೆ ಪ್ರಾಣ ಉಳಿಸಿದ್ದಾರೆ.

ಅಸ್ವಸ್ಥಗೊಂಡಿದ್ದ ಹರ್ಷದಾ ಅವರನ್ನು ತಕ್ಷಣವೇ ಆಸ್ಪತ್ರೆಗೆ ದಾಖಲಿಸಬೇಕಿತ್ತು. ದಟ್ಟ ಅಭಯಾರಣ್ಯದಲ್ಲಿ ಇರುವ ಅಂಗಾವ್ ಗ್ರಾಮಕ್ಕೆ ರಸ್ತೆಯೂ ಇಲ್ಲ, ಸೇತುವೆಯೂ ಇಲ್ಲ, ಮೊಬೈಲ್ ನೆಟ್ವರ್ಕ್ ಸಹ ಬರೋದಿಲ್ಲ. ಆದರೆ ಹರ್ಷದಾರ ಪ್ರಾಣ ಉಳಿಸಲು ಗ್ರಾಮಸ್ಥರು ಕಟ್ಟಿಗೆಯಲ್ಲಿ ಸ್ಟ್ರೆಚರ್ ಮಾದರಿ ಮಾಡಿ ಮಹಿಳೆಯನ್ನು ಹೊತ್ತುಕೊಂಡು, ರಕ್ಕಸ



ಮಳೆಯಲ್ಲೇ ಐದು ಕಿಲೋಮೀಟರ್ ದೂರು ಸಾಗಿದ್ದಾರೆ. ಆ ಯಂಬುಲೆನ್ಸ್ ಬರೋಕೆ ರಸ್ತೆ ಇರುವ ಅರಣ್ಯ ಇಲಾಖೆ ಚೆಕ್ ಪೋಸ್ಟ್ ಚಿಕಲೆ ವರೆಗೂ ಮಹಿಳೆಯನ್ನು ಹೊತ್ತುಕೊಂಡು ಬಂದಿದ್ದು ಅಲ್ಲಿಂದ ಮತ್ತೆ 1 ಕಿಲೋಮೀಟರ್ ದೂರ ಹೋಗಿ ಮೊಬೈಲ್ ನೆಟ್ವರ್ಕ್ ಬರೋ ಸ್ಥಳದಿಂದ 108ಗೆ ಕರೆ ಮಾಡಿ ಮಹಿಳೆಯ ಪ್ರಾಣ ಉಳಿಸುವಲ್ಲಿ ಗ್ರಾಮಸ್ಥರು ಬಹಳಷ್ಟು ಪರಿಶ್ರಮ ಪಟ್ಟಿದ್ದಾರೆ. ಪುಟ 2

## 2 ಇಟ್ಟಿಗೆಗಳಿಂದ ಸಾವಿನ ದವಡೆಯಿಂದ ಪಾರಾದ ಕುಟುಂಬ

# ಮಳೆಗೆ ಕುಸಿದ ಮನೆ

**ಬೆಳಗಾವಿ:** ರಾಜ್ಯದೆಲ್ಲೆಡೆ ಭಾರೀ ಮಳೆಯಾಗುತ್ತಿದ್ದು ಅನಾಹುತಗಳಿಗೇನೂ ಕಮ್ಮಿ ಇಲ್ಲ. ರಸ್ತೆಗಳು ಕೆರೆಯಂತಾಗಿ ಅಲ್ಲಲ್ಲಿ ಗುಂಡಿ ಬೀಳುತ್ತಿದೆ. ಸೇತುವೆಗಳು ಮುಳುಗಿ ರಸ್ತೆ ಸಂಪರ್ಕ ಕಡಿತಗೊಳ್ಳುತ್ತಿದೆ. ಮಣ್ಣು ಕುಸಿದು ಬಿದ್ದು ವಾಹನ ಸವಾರರು ಪರದಾಡುವಂತಾಗಿದೆ. ಬೆಳಗಾವಿ ಜಿಲ್ಲೆಯಲ್ಲೂ ಭಾರೀ ಮಳೆಯಾಗುತ್ತಿದ್ದು ಮನೆ ಕುಸಿದಿದೆ. ಅದೃಷ್ಟವಶಾತ್ ಎರಡು



ಇಟ್ಟಿಗೆಗಳಿಂದಾಗಿ ಇಡೀ ಕುಟುಂಬ ಸಾವಿನ ದವಡೆಯಿಂದ ಪಾರಾಗಿದೆ. ಪುಟ 2

## ಕಾಂಗ್ರೆಸ್ ಅಧಿಕಾರದಲ್ಲಿರುವಾಗಲೇ ಇಂದಿರಾ ಕ್ಯಾಂಟೀನ್ ಬಂದ್

# 40 ಕೋಟಿ ಬಿಲ್ ಬಾಕಿ

**ಬೆಂಗಳೂರು:** 2013ರಲ್ಲಿ ಕಾಂಗ್ರೆಸ್ ಸರ್ಕಾರದ ಅವಧಿಯಲ್ಲಿ ಜಾರಿಯಾದ ಇಂದಿರಾ ಕ್ಯಾಂಟೀನ್ ಬಡವರು, ಕೂಲಿ ಕಾರ್ಮಿಕರು, ನಿರಾಶ್ರಿತರು ಸೇರಿದಂತೆ ಅನೇಕರ ಹಸಿದ ಹೊಟ್ಟೆ ತುಂಬಿಸಿತ್ತು. ಅಲ್ಲದೇ ಇತರ ರಾಜ್ಯಗಳಿಗೂ ಈ ಯೋಜನೆ ಸ್ಫೂರ್ತಿ ಆಗಿತ್ತು. ಆದರೆ ಈಗ ಬೆಂಗಳೂರು ದಕ್ಷಿಣದಲ್ಲಿ ಈ ಯೋಜನೆ ಸಂಪೂರ್ಣ ಹಳ್ಳ ಹಿಡಿಯುವಂತಾಗಿದೆ. ಕಳೆದ ಒಂದು ವರ್ಷದಿಂದ ಬಾಕಿ ಹಣ ಪಾವತಿ ಮಾಡಿಲ್ಲ ಎಂದು ಆಹಾರ ಪೂರೈಕೆಯ ಟೆಂಡರ್ ಪಡೆದಿದ್ದ ಶೆಫ್ ಟಾಕ್ ಸಂಸ್ಥೆ ಆಹಾರ ಪೂರೈಸುತ್ತಿಲ್ಲ. ಇದರಿಂದ ಪಾಲಿಕೆಯ ದಕ್ಷಿಣ ವಲಯಕ್ಕೆ ಬರುವ 11ಕ್ಕೂ ಹೆಚ್ಚು ಇಂದಿರಾ ಕ್ಯಾಂಟೀನ್‌ಗಳು ಕಳೆದ 15-20 ದಿನಗಳಿಂದ ಬಾಗಿಲು ಬಂದ್ ಮಾಡಿವೆ.

ಬಡವರ ಪಾಲಿನ ಅಕ್ಷಯ ಪಾತ್ರೆ, ಅಂತಲೇ ಕರೆಸಿಕೊಳ್ಳುತ್ತಿದ್ದ ಇಂದಿರಾ ಕ್ಯಾಂಟೀನ್‌ಗಳು ಕಾಂಗ್ರೆಸ್ ಸರ್ಕಾರದ ಅವಧಿಯಲ್ಲೇ ಈ ರೀತಿ



ಅವನತಿಯ ಹಾದಿ ಹಿಡಿದಿರೋದು ಸಿಎಂ ಸಿದ್ದರಾಮಯ್ಯರಿಗೆ ಮುಜುಗರ ತರಿಸಿದೆ. ಅದರಲ್ಲೂ ನಗರದ ಪ್ರಮುಖ ಆಸ್ಪತ್ರೆಗಳ ಆವರಣ, ಅಕ್ಕಪಕ್ಕದಲ್ಲಿರುವ ಕ್ಯಾಂಟೀನ್‌ಗಳೇ ಮುಚ್ಚಿದ್ದು, ನಿಜವಾಗಿ ಯಾರಿಗೆ ಯೋಜನೆ ತಲುಪಬೇಕಿತ್ತೋ ಅವರೇ ಯೋಜನೆ ಸಿಗದೇ ಪರದಾಡುವಂತಾಗಿದೆ. ಪುಟ 2

## ಕಾವೇರಿ ಕಣಿವೆಯಲ್ಲಿ ಸತತ ಮಳೆಗೆ ಕುಸಿದ ಮನೆ

**ಬೆಟ್ಟದಪುರ :** ಕಳೆದೊಂದು ವಾರದಿಂದ ಕಾವೇರಿ ಕಣಿವೆ ಭಾಗದಲ್ಲಿ ಅಬ್ಬರಿಸುತ್ತಿರುವ ಮಳೆಯಿದಾಗಿ ರಸ್ತೆಗಳು ಜಲಾವೃತವಾಗಿದ್ದು ಗೋಡೆ ಕುಸಿತ, ರಸ್ತೆ ಕುಸಿತ ಸಾಮಾನ್ಯವಾಗಿದೆ. ಹಳ್ಳ ಕೊಳ್ಳಗಳು ತುಂಬಿ ಹರಿಯುತ್ತಿದು ಕಾವೇರಿ ನದಿ ಪಾತ್ರಗಳಲ್ಲಿ ನೀರಿನ ಪ್ರಮಾಣ ಹೆಚ್ಚಾಗಿ ಓಡಾಟಕ್ಕೆ ಅಡೆತಡೆ ಉಂಟಾಗಿದೆ. ನಿನ್ನೆ ಬೆಳಗಿನ ಜಾವ ಸಮೀಪದ ಐಚನಹಳ್ಳಿ ಗ್ರಾಮದ ನಿವಾಸಿಗಳಾದ ವೈರಮುಡಿಶೆಟ್ಟಿಯವರ ಮನೆ ಗೋಡೆ ಕುಸಿದಿದೆ. ಅದೃಷ್ಟವಶಾತ್ ಯಾವುದೇ ಪ್ರಾಣ ಹಾನಿ ಸಂಭವಿಸಿಲ್ಲ. ಸ್ಥಳಕ್ಕೆ ವಾರ್ಡಿನ ಸದಸ್ಯರಾದ ಹನುಮಂತೇಗೌಡರು ಭೇಟಿ ನೀಡಿ ಪರಿಶೀಲನೆ ಮಾಡಿ ಮನೆ ಸಮಾಧಾನ ಹೇಳಿದ್ದಾರೆ. ಸಚಿವರು ಕೂಡಲೇ ಅಧಿಕಾರಿಗಳಿಗೆ ಸೂಚನೆ ನೀಡಿ ಆಗಿರುವ ಅನಾಹುತಕ್ಕೆ ಪರಿಹಾರ ಕೊಡಿಸಿ ಮುಂದೆ ಯಾವುದೇ ಅನಾಹುತ ಸಂಭವಿಸದಂತೆ ಮುನ್ನಚ್ಚರಿಕೆ ಕ್ರಮ ಕೈಗೊಳಬೇಕೆಂದು ಇದೇ ಸಂದರ್ಭದಲ್ಲಿ ಒತ್ತಾಯಿಸಿದ್ದಾರೆ.



## ಬೆಂಗಳೂರು-ಮಂಗಳೂರು ನಡುವೆ ಹೆಚ್ಚುವರಿ ರೈಲು ಆರಂಭ

**ಮಂಗಳೂರು:** ಭಾರೀ ಮಳೆಗೆ ರಾಷ್ಟ್ರೀಯ ಹೆದ್ದಾರಿಗಳಲ್ಲಿ ಗುಡ್ಡ ಕುಸಿತದಿಂದ ವಾಹನ ಸಂಪರ್ಕ ಸ್ಥಗಿತಗೊಂಡಿರುವ ಹಿನ್ನೆಲೆಯಲ್ಲಿ ಬೆಂಗಳೂರು-ಮಂಗಳೂರು ನಡುವೆ ಹೆಚ್ಚುವರಿ ರೈಲು ಸೇವೆಗೆ ಅನುಮತಿ ನೀಡಿ ರೈಲ್ವೆ ಇಲಾಖೆ ಆದೇಶ ಹೊರಡಿಸಿದೆ. ಹೆಚ್ಚುವರಿ ರೈಲು ಸೇವೆ ಕಲ್ಪಿಸುವಂತೆ ಮನವಿ ಮಾಡಿ ರೈಲ್ವೆ ಇಲಾಖೆಗೆ ದಕ್ಷಿಣ ಕನ್ನಡ ಸಂಸದ ಕ್ಯಾಪ್ಟನ್ ಬ್ರಿಜೇಶ್ ಚೌಟ ಪತ್ರ ಬರೆದಿದ್ದರು. ಪತ್ರ ತಲುಪಿದ ಕೇವಲ ಒಂದು ಗಂಟೆಯಲ್ಲೇ ರೈಲ್ವೆ ಇಲಾಖೆ ಸಕಾರಾತ್ಮಕವಾಗಿ ಸ್ಪಂದಿಸಿದೆ. ಬೆಂಗಳೂರು-ಮಂಗಳೂರು ನಡುವೆ ಹೆಚ್ಚುವರಿ ರೈಲು ಆರಂಭಕ್ಕೆ ಅನುಮತಿ ನೀಡಿದೆ. ಕರಾವಳಿ ಭಾಗದಲ್ಲಿ ಹಲವು ದಿನಗಳಿಂದ ವ್ಯಾಪಕ ಮಳೆಯಾಗುತ್ತಿದೆ. ಮಂಗಳೂರು ಮತ್ತು ಬೆಂಗಳೂರನ್ನು ಸಂಪರ್ಕಿಸುವ ಮುಖ್ಯ ಎರಡೂ ರಾಷ್ಟ್ರೀಯ ಹೆದ್ದಾರಿಗಳಲ್ಲಿ ಗುಡ್ಡ ಕುಸಿತದಿಂದ ವಾಹನ ಸಂಪರ್ಕ ಕಡಿತವಾಗಿದೆ. ಈ ಹಿನ್ನೆಲೆಯಲ್ಲಿ ಬೆಂಗಳೂರು ನಡುವೆ ಹೆಚ್ಚುವರಿ ರೈಲು ಸೇವೆಯನ್ನು ತುರ್ತಾಗಿ ಪ್ರಾರಂಭಿಸುವಂತೆ ಸಂಸದ ಕ್ಯಾಪ್ಟನ್ ಬ್ರಿಜೇಶ್ ಚೌಟ ಅವರು ನೈರುತ್ಯ ರೈಲ್ವೆ ಇಲಾಖೆಯ ಅಧಿಕಾರಿಗಳಿಗೆ ಪತ್ರ ಬರೆದು ವಿನಂತಿಸಿದ್ದರು.ಸಂಸದರ ಪತ್ರ ತಲುಪಿದ ತಕ್ಷಣವೇ ರೈಲ್ವೆ ಇಲಾಖೆ ಸ್ಪಂದಿಸಿದೆ. ನಾಲ್ಕು ದಿನಗಳ ಕಾಲ ಬೆಂಗಳೂರಿನ ಕ್ರಾಂತಿವೀರ ಸಂಗೊಳ್ಳಿ ರಾಯಣ್ಣ ರೈಲ್ವೆ ನಿಲ್ದಾಣದಿಂದ ಮಂಗಳೂರು ಜಂಕ್ಷನ್ ರೈಲು ನಿಲ್ದಾಣಕ್ಕೆ ಹಾಗೂ ಮಂಗಳೂರು ಜಂಕ್ಷನ್ ರೈಲ್ವೆ ನಿಲ್ದಾಣದಿಂದ ಯಶವಂತಪುರ ರೈಲ್ವೆ ನಿಲ್ದಾಣಕ್ಕೆ ವಿಶೇಷ ರೈಲನ್ನು ನೀಡಿ ಆದೇಶ ಹೊರಡಿಸಿದೆ. ರಸ್ತೆ ಸಂಪರ್ಕ ಕಡಿತದಿಂದ ಉಂಟಾದ ಸಮಸ್ಯೆ ಪರಿಹರಿಸುವ ನಿಟ್ಟಿನಲ್ಲಿ ವಿಶೇಷ ರೈಲು ವ್ಯವಸ್ಥೆ ಮಾಡಲಾಗಿದೆ. ಮುಂದಿನ ದಿನಗಳಲ್ಲಿ ಜನರ ಅವಶ್ಯಕತೆ ಪರಿಗಣಿಸಿ ಕ್ರಮಕೈಗೊಳ್ಳಲಾಗುವುದು ಎಂದು ತಿಳಿಸಲಾಗಿದೆ.

# ಸದನದಲ್ಲಿ ಒಂದು ಮೊಟ್ಟೆಯ ಕಥೆ; ನಾನಂತೂ ಮೊಟ್ಟೆ ತಿನ್ನಲ್ಲ, ಮುಟ್ಟೋದು ಇಲ್ಲ

**ಬೆಂಗಳೂರು:** ನೀವೆಲ್ಲಾ ಮೊಟ್ಟೆ ತಿನ್ನುತ್ತೀರಿ, ನಾನಂತೂ ಮೊಟ್ಟೆ ತಿನ್ನಲ್ಲ, ಮುಟ್ಟೋದು ಇಲ್ಲ ಅಂತ ಸಚಿವೆ ಲಕ್ಷ್ಮಿ ಹೆಬ್ಬಾಳ್ಕರ್ ಹೇಳಿದರು.

ಪ್ರಶ್ನೋತ್ತರ ಕಲಾಪದ ವೇಳೆ ಅಂಗನವಾಡಿ ಮಕ್ಕಳಿಗೆ ಗುಣಮಟ್ಟದ ಮೊಟ್ಟೆ ಪೂರೈಕೆ ಮಾಡಬೇಕೆನ್ನುವ ವಿಚಾರ ಚರ್ಚೆ ನಡೆಯುತ್ತಿದ್ದ ವೇಳೆ ಹಾಸ್ಯ ಪ್ರಸಂಗವೊಂದು ನಡೆಯಿತು.

ಬಿಜೆಪಿ ಸದಸ್ಯೆ ಹೇಮಲತಾ ನಾಯಕ್, ಅಂಗನವಾಡಿಗಳಲ್ಲಿ ಆಹಾರ ಸರಿಯಿಲ್ಲ. ಕೆಟ್ಟ ಮೊಟ್ಟೆಗಳನ್ನ ಕೊಡ್ತಿದ್ದಾರೆ. ಹಾಲು ಸರಿಯಾಗಿಲ್ಲ, ಬಾಳೆಹಣ್ಣು ಇಲ್ಲ, ಶೇಂಗಾ ಕಡಲೆ ಕೊಡ್ತಿಲ್ಲ, ಹುಳು ಬಿದ್ದ ಆಹಾರ ನೀಡ್ತಿದ್ದಾರೆ. ಆಹಾರ ಕಳಪೆಯಾಗಿದೆ, ಇದಕ್ಕೆ ಸರ್ಕಾರ ಏನು ಕ್ರಮ ಕೈಗೊಂಡಿದೆ? ಅಂತ ಪ್ರಶ್ನಿಸಿದರು. ಈ ವೇಳೆ ಅಂಗನವಾಡಿಗಳಲ್ಲಿ ತಯಾರು ಮಾಡುವ ಆಹಾರ ಪದಾರ್ಥಗಳ ಪೊಟ್ಟಣ ತೋರಿಸಲು ಮುಂದಾದರು. ಕೊನೆಗೆ ಸದನದಲ್ಲಿ ಇದೆಲ್ಲವನ್ನು ತರುವಂತಿಲ್ಲ ಅಂತ ಸಭಾಪತಿಗಳು ಸೂಚಿಸಿದರು.

ಹೇಮಲತಾ ನಾಯಕ್ ಪ್ರಶ್ನೆಗೆ ಉತ್ತರಿಸಲು ಮುಂದಾದ ಲಕ್ಷ್ಮಿ ಹೆಬ್ಬಾಳ್ಕರ್, ನೀವೆಲ್ಲಾ ಮೊಟ್ಟೆ ತಿನ್ನುತ್ತೀರಿ, ನಾನಂತೂ ತಿನ್ನಲ್ಲ. ಮೊಟ್ಟೆ ಮುಟ್ಟೋದು ಇಲ್ಲ ಎಂದು ಹೇಳಿದರು. ಇದಕ್ಕೆ ಕಾಲೆಳೆದ ಸಭಾಪತಿಗಳು 'ಒಮ್ಮೆ ತಿಂದು ನೋಡ್ರಿ, ಟೇಸ್ಟ್ ಗೊತ್ತಾಗುತ್ತೆ' ಅಂತ ಹಾಸ್ಯ ಚಟಾಕಿ ಹಾರಿಸಿದರು. ಕೆಲ ಕ್ಷಣ ಪರಿಷತ್ ಸದಸ್ಯರು ನಗೆಗಡಲಲ್ಲಿ ತೇಲಿದರು.

ಬಳಿಕ ಕಳಪೆ ಆಹಾರ ಪೂರೈಕೆ ಬಗ್ಗೆ ಸ್ಪಷ್ಟನೆ ನೀಡಿದ ಸಚಿವರು, ನಾವು ಸ್ಥಳೀಯವಾಗಿ ಮೊಟ್ಟೆ ಖರೀದಿ ಮಾಡುತ್ತೇವೆ. ಮಾರ್ಕೆಟ್ ನಲ್ಲಿ 8 ರೂಪಾಯಿ ಇದೆ. ಸೃಷ್ಟಿ ಯೋಜನೆ ಅಡಿ ಮೊಟ್ಟೆ ಕೊಡಲಾಗ್ತಿದೆ. ಮಕ್ಕಳಿಗೆ ಪೌಷ್ಟಿಕಾಂಶ ನೀಡಲು ಮೊಟ್ಟೆ



ಕೊಡ್ತಿದ್ದೇವೆ. ಕಳೆದ 8 ವರ್ಷಗಳಿಂದ ಒಂದು ಮಗುವಿಗೆ 8 ರೂಪಾಯಿ ಮಾತ್ರ ಕೇಂದ್ರ ಸರ್ಕಾರ ಕೊಡ್ತಿದೆ. ಕೇಂದ್ರ ಸರ್ಕಾರ ಬೆಲೆ ಪರಿಷ್ಕರಣೆ ಮಾಡಿಲ್ಲ. ಆದರೂ ನಾವು ಗುಣಮಟ್ಟದ ಮೊಟ್ಟೆ, ಆಹಾರ ನೀಡಲು ಕ್ರಮವಹಿಸುತ್ತಿದ್ದೇವೆ. ಎಲ್ಲಾದ್ರು ಇಂತಹ ಸಮಸ್ಯೆ ಆಗಿದ್ರೆ ಕ್ರಮ ತೆಗೆದುಕೊಳ್ತೀವಿ ಎಂದು ಉತ್ತರಿಸಿದರು.

ಇದೇ ವೇಳೆ ಅಂಗನವಾಡಿ ಕಟ್ಟಡಗಳ ಸುರಕ್ಷತೆ ಬಗ್ಗೆಯೂ ಕೈಗೊಂಡ ಕ್ರಮಗಳ ಬಗ್ಗೆ ವಿವರಿಸಿದರು. ರಾಜ್ಯದಲ್ಲಿ ಒಟ್ಟು 69,919 ಅಂಗನವಾಡಿ ಕೇಂದ್ರಗಳಿವೆ. ಇದರಲ್ಲಿ 47,236 ಸ್ವಂತ ಕಟ್ಟಡದಲ್ಲಿ ಇವೆ. 12,653 ಅಂಗನವಾಡಿ ಕೇಂದ್ರಗಳು ಬಾಡಿಗೆ ಕಟ್ಟಡಗಳಲ್ಲಿ ಇವೆ. 30 ವರ್ಷ ಮೇಲ್ಪಟ್ಟ ಅಂಗನವಾಡಿ ಕಟ್ಟಡ ಮತ್ತು ದುಸ್ಥಿತಿಯಲ್ಲಿರೋ ಕಟ್ಟಡಗಳ ಮಾಹಿತಿ ನೀಡುವಂತೆ ಜಿಲ್ಲಾಧಿಕಾರಿಗಳಿಗೆ ಸೂಚನೆ ನೀಡಿದ್ದೇನೆ. ಅಂಗನವಾಡಿ ಕೇಂದ್ರಗಳ ಕಲ್ಪನೆ ಪ್ರಾರಂಭವಾಗಿ 49 ವರ್ಷ ಆಗಿದೆ. ಇಂದಿರಾಗಾಂಧಿ ಅವರು ಅಂಗನವಾಡಿ ಕೇಂದ್ರ ಪ್ರಾರಂಭ ಮಾಡಿದ್ರು. ಈವರೆಗೂ ಯಾವುದೇ ಅನಾಹುತ ಆಗಿಲ್ಲ. 30 ವರ್ಷ ಮೇಲ್ಪಟ್ಟ ಕಟ್ಟಡಗಳನ್ನೂ ನಾನು ಶೀಘ್ರವೇ ತಪಾಸಣೆ ನಡೆಸಲು ಕ್ರಮ ವಹಿಸುತ್ತೇನೆ ಎಂದು ಭರವಸೆ ನೀಡಿದರು.

# ಬಿಜೆಪಿ ಅವಧಿಯಲ್ಲಿ 21 ಹಗರಣ ನಡೆದಿದೆ: ಹಗರಣಗಳ ಪಟ್ಟಿ ಬಿಡುಗಡೆ ಮಾಡಿದ ಸಿಎಂ

**ಬೆಂಗಳೂರು:** ಬಿಜೆಪಿ ಅವಧಿಯಲ್ಲಿ 21 ಹಗರಣಗಳು ನಡೆದಿವೆ ಎಂದು ಆರೋಪಿಸಿರುವ ಮುಖ್ಯಮಂತ್ರಿ ಸಿದ್ದರಾಮಯ್ಯ ಅವರು, ವಿಧಾನಸಭೆ ಕಲಾಪದಲ್ಲಿ 21 ಹಗರಣಗಳ ಪಟ್ಟಿ ಬಿಡುಗಡೆ ಮಾಡಿದ್ದಾರೆ.

ವಿಧಾನಸಭೆಯ ಕಲಾಪದಲ್ಲಿ ಮುಡಾ ಹಾಗೂ ವಾಲ್ಮೀಕಿ ನಿಗಮದಲ್ಲಿನ ಹಗರಣ ವಿರುದ್ಧ ವಿಪಕ್ಷಗಳ ಹೋರಾಟ ತೀವ್ರಗೊಂಡಿತ್ತು. ಬಿಜೆಪಿ-ಜೆಡಿಎಸ್‌ನಿಂದ ಸದನದಲ್ಲಿ ಪ್ರತಿಭಟನೆ ಮುಂದುವರುದು, ಸದನದ ಬಾವಿಗಿಳಿದು ದೋಸ್ತಿ ನಾಯಕರು ಪ್ರತಿಭಟನೆ ನಡೆಸಿದರು. ಬಳಿಕ ವಾಲ್ಮೀಕಿ ನಿಗಮದ ಹಗರಣ ಚರ್ಚೆ ವೇಳೆ ಉತ್ತರ ನೀಡಲು ಮುಂದಾದ ಸಿಎಂ ಬಿಜೆಪಿ ಅವಧಿಯಲ್ಲಿ ನಡೆದಿದೆ ಎನ್ನಲಾದ 21 ಹಗರಣಗಳ ಪಟ್ಟಿ ಬಿಡುಗಡೆ ಮಾಡಿದರು.

ವಿಪಕ್ಷಗಳ ಗದ್ದಲದ ನಡುವೆಯೂ 21 ಹಗರಣಗಳ ಪಟ್ಟಿಯನ್ನ ಸದನದಲ್ಲಿ ಓದಿದರು. ಮಾಜಿ ಸಿಎಂ ಬಿ.ಎಸ್ ಯಡಿಯೂರಪ್ಪ, ಬಸವರಾಜ ಬೊಮ್ಮಾಯಿ, ಆರ್. ಅಶೋಕ್ ಸೇರಿದಂತೆ ಅನೇಕ ಬಿಜೆಪಿ ನಾಯಕರ ಹೆಸರುಗಳನ್ನು ಹಗರಣ ಪಟ್ಟಿಯಲ್ಲಿ ಪ್ರಸ್ತಾಪಿಸಿದರು.

ಇದೇ ವೇಳೆ ಬೊಮ್ಮಾಯಿ, ಯಡಿಯೂರಪ್ಪ ಕಾಲದಲ್ಲಿ ಹಗರಣಗಳು ನಡೆದಿವೆ. ಭ್ರಷ್ಟಾಚಾರ ಪಿತಾಮಹರೇ ಬಿಜೆಪಿಗರು. ನಮ್ಮ ಹಗರಣಗಳು ಬಿಚ್ಚಬಾರದು ಎಂದು ಇಲ್ಲಿ ಗಲಾಟೆ ಮಾಡ್ತಿದ್ದಾರೆ? ನನ್ನ ರಾಜಕೀಯ ಜೀವನದಲ್ಲೇ ಇಷ್ಟು ಕೆಟ್ಟದಾಗಿ ಪ್ರತಿಪಕ್ಷಗಳು ನಡೆದುಕೊಂಡಿಲ್ಲ. ಕೇಂದ್ರ ಹಾಗೂ ಆರ್ ಎಸ್‌ಎಸ್ ಸೂಚನೆಯಿಂದ ಈ ರೀತಿ ಮಾಡ್ತಿದ್ದಾರೆ. ಕೇವಲ



ಪ್ರಚಾರಕ್ಕಾಗಿ ಈ ರೀತಿ ಗಲಾಟೆ ಮಾಡ್ತಿದ್ದಾರೆ. ರಾಜ್ಯದ ಜನರ ಬಗ್ಗೆ ಚರ್ಚೆ ಮಾಡುವ ಆಸಕ್ತಿ ಇವರಿಗಿಲ್ಲ. ಇದು ಪ್ರಜಾಪ್ರಭುತ್ವದ ಕಗ್ಗೊಲೆ ಎಂದು ಪ್ರತಿಪಕ್ಷಗಳ ವಿರುದ್ಧ ಅಬ್ಬರಿಸಿ ಬೊಬ್ಬರಿದರು.

ಬಿಜೆಪಿ ಅವಧಿಯಲ್ಲಿ ಲೆಕ್ಕ ಹಾಕಲಾಗದಷ್ಟು ಹಗರಣಗಳು ಬಯಲಾಗುತ್ತಲೇ ಇವೆ. ಈ ಹಗರಣಗಳ ಕುರಿತು ವಿವಿಧ ತನಿಖೆ ನಡೆಯುತ್ತಿವೆ. ಭ್ರಷ್ಟರು ಹಾಗೂ ದುರುಳರು ಜೈಲಿಗೆ ಹೋಗುವ ದಿನಗಳ ದೂರವಿಲ್ಲ ಎಂದು ಅವರು ಗುಡುಗಿದರು.

# ಬಡವರ ಬಗ್ಗೆ ಕಾಳಜಿ ಇಲ್ಲವೆಂಬುದು ಇಂದಿರಾ ಕ್ಯಾಂಟೀನ್ ಮುಚ್ಚಿದ್ದರಿಂದಲೇ ಗೊತ್ತಾಗುತ್ತದೆ

**ಬೆಂಗಳೂರು:** ಬೆಂಗಳೂರಿನಲ್ಲಿ 11 ಇಂದಿರಾ ಕ್ಯಾಂಟೀನ್‌ಗಳನ್ನು ಮುಚ್ಚಲಾಗಿದೆ ಎಂಬ ವರದಿಯ ವಿಚಾರವಾಗಿ ಕರ್ನಾಟಕ ಕಾಂಗ್ರೆಸ್ ಸರ್ಕಾರವನ್ನು ಬಿಜೆಪಿ ರಾಜ್ಯಾಧ್ಯಕ್ಷ ಬಿವೈ ವಿಜಯೇಂದ್ರ ತೀವ್ರವಾಗಿ ತರಾಟೆಗೆ ತೆಗೆದುಕೊಂಡಿದ್ದಾರೆ. ಈ ವಿಚಾರವಾಗಿ ಸಾಮಾಜಿಕ ಮಾಧ್ಯಮ ಎಕ್ಸ್‌ನಲ್ಲಿ ಸಂದೇಶ ಪ್ರಕಟಿಸಿರುವ ಅವರು, ಈ ಹಿಂದೆ ಬಿಜೆಪಿ ಸರ್ಕಾರ ಇದ್ದಾಗ ಹಿಂದಿನ ಕ್ಯಾಂಟೀನ್ ಬಗ್ಗೆ ಕಾಳಜಿ ವಹಿಸುತ್ತಿಲ್ಲ ಎಂದು ಆರೋಪಿಸಿದ್ದ ಕಾಂಗ್ರೆಸ್ ಪಕ್ಷದವರು ಈಗೇನು ಮಾಡುತ್ತಿದ್ದಾರೆ ಎಂದು ಪ್ರಶ್ನಿಸಿದ್ದಾರೆ.

ಹಿಂದಿನ ಸರ್ಕಾರದಲ್ಲಿ ಬಡವರ ಹಸಿವು ನೀಗಿಸಲು ಇಂದಿರಾ ಕ್ಯಾಂಟೀನ್ ಗಳನ್ನು ತೆರೆದಿರುವ ಬಗ್ಗೆ ಹೆಮ್ಮೆಪಟ್ಟು ಕೊಂಡಿದ್ದ ಕಾಂಗ್ರೆಸ್ಸಿಗರೇ, ಕಳೆದ ಬಾರಿಯ ನಮ್ಮ ಬಿಜೆಪಿ ಸರ್ಕಾರದ ಆಡಳಿತ ಅವಧಿಯಲ್ಲಿ ಕ್ಯಾಂಟೀನ್‌ಗಳನ್ನು ನಾವು ಮುಚ್ಚಿಸಲು ಹೊರಟಿದ್ದೇವೆ ಎಂದು ಅಪಪ್ರಚಾರ ನಡೆಸಿದಿರಿ. ಆದರೆ ಈಗೇನಾಗುತ್ತಿದೆ ಎಂದು ವಿಜಯೇಂದ್ರ ಪ್ರಶ್ನಿಸಿದ್ದಾರೆ. ಬಡವರು



ಹಾಗೂ ಶ್ರಮಿಕ ವರ್ಗದವರಿಗೆ ಹಸಿವು ನೀಗಿಸುತ್ತಿದ್ದ ನಿಮ್ಮದೇ ಯೋಜನೆಯ ಇಂದಿರಾ ಕ್ಯಾಂಟೀನ್ ಮುಚ್ಚಿಸುತ್ತಿದ್ದೀರಿ. ಬಡವರ ಬಗ್ಗೆ, ಹಸಿದವರ ಬಗ್ಗೆ, ನಿಮಗೆ ಪ್ರಾಮಾಣಿಕ ಕಾಳಜಿ ಇದ್ದರೆ ಇಂತಹ ಪರಿಸ್ಥಿತಿ ಬರುತ್ತಿರಲಿಲ್ಲ. ಗ್ಯಾರಂಟಿ ಯೋಜನೆಗಳನ್ನು ಮಾತ್ರ ಕೇಂದ್ರೀಕರಿಸಿರುವ ನೀವು ಅದನ್ನೂ ಪರಿಪೂರ್ಣವಾಗಿ ನಿಭಾಯಿಸಲಾಗದೆ, ಆರ್ಥಿಕ ಸಮತೋಲನ ಕಾಯ್ದುಕೊಳ್ಳಲಾಗದೆ, ರಾಜ್ಯದ ಬೊಕ್ಕಸ ಬರಿದು ಮಾಡಿ ಹಿಂದುಳಿದವರು, ದಲಿತರ ಕಲ್ಯಾಣ ಕಾರ್ಯಗಳನ್ನು ಮೂಲೆಗೊತ್ತಿ ಇದೀಗ ಬೀದಿಬದಿ ವ್ಯಾಪಾರ ಮಾಡಿ ಜೀವನ ಸಾಗಿಸುವ ಶ್ರಮಿಕ ವರ್ಗ ಹಾಗೂ ಬಡವರಿಗೆ ಹಸಿವು ನೀಗಿಸುವ ತಾಣವಾಗಿದೆ ಎಂದು ಹೇಳಿಕೊಳ್ಳುತ್ತಿದ್ದ ನಿಮ್ಮ ಇಂದಿರಾ ಕ್ಯಾಂಟೀನ್ ಅನ್ನು ಮುಚ್ಚಿಸಲು ಹೊರಟಿದ್ದೀರಿ ಎಂದು ವಿಜಯೇಂದ್ರ ಆಕ್ರೋಶ ವ್ಯಕ್ತಪಡಿಸಿದ್ದಾರೆ.

ನಿಮ್ಮ ಸರ್ಕಾರದ ಕಾರ್ಯವೈಖರಿ ನೋಡಿದರೆ ಕರ್ನಾಟಕದ ಚಲನಶೀಲತೆಗೆ ತುಕ್ಕು ಹಿಡಿಸಲು ಹೊರಟಂತಿದೆ. ಇಂದಿರಾ ಕ್ಯಾಂಟೀನ್‌ಗೆ ಆಗುತ್ತಿರುವ ಗತಿಯೇ ಬಡವರ ಇತರ ಯೋಜನೆಗಳಿಗೂ ಆಗುವುದು ನಿಶ್ಚಿತ ಎಂಬುದು ಸರ್ಕಾರದ ಆರ್ಥಿಕ ಸ್ಥಿತಿಗತಿಯನ್ನು ಗಮನಿಸಿದರೆ ವೇದ್ಯವಾಗುತ್ತದೆ ಎಂದು ಅವರು ಉಲ್ಲೇಖಿಸಿದ್ದಾರೆ. ಬಾಕಿ ಬಿಲ್ ಪಾವತಿ ಮಾಡದ ಕಾರಣ ಗುತ್ತಿಗೆ ಪಡೆದ ಸಂಸ್ಥೆ ಆಹಾರ ಪೂರೈಸದೆ ಇರುವುದರಿಂದ ಬಿಬಿಎಂಪಿ ದಕ್ಷಿಣ ವಲಯದ 11 ಇಂದಿರಾ ಕ್ಯಾಂಟೀನ್ ಗಳು ಸ್ಥಗಿತಗೊಂಡಿರುವ ಬಗ್ಗೆ ಇತ್ತೀಚೆಗೆ ವರದಿಯಾಗಿತ್ತು. ಈ ವಿಚಾರವನ್ನು ಮುಂದಿಟ್ಟುಕೊಂಡು ವಿಜಯೇಂದ್ರ ರಾಜ್ಯ ಸರ್ಕಾರವನ್ನು ತರಾಟೆಗೆ ತೆಗೆದುಕೊಂಡಿದ್ದಾರೆ.

# ಬಿಎಸ್‌ವೈ, ಬೊಮ್ಮಾಯಿ ಕಾಲದಲ್ಲಿ 300 ಕೋಟಿಗೂ ಹೆಚ್ಚು ಅಕ್ರಮ: ಡಿಕೆಶಿ ಆರೋಪ

**ಬೆಂಗಳೂರು:** ಬಿಜೆಪಿಗರು ಭ್ರಷ್ಟಾಚಾರದ ಪಿತಾಮಹರು. ಯಡಿಯೂರಪ್ಪ ಹಾಗೂ ಬೊಮ್ಮಾಯಿ ಅವರ ಕಾಲದಲ್ಲಿ ಹಲವಾರು ನಿಗಮಗಳ ಸುಮಾರು 300 ಕೋಟಿ ರೂ.ಗಳಿಗೂ ಹೆಚ್ಚು ಅಕ್ರಮ ನಡೆದಿದೆ. ಇದನ್ನು ನಾವು ಸದನದ ಮೂಲಕ ಜನರಿಗೆ ತಿಳಿಸುತ್ತೇವೆ ಎಂದು ಡಿಸಿಎಂ ಡಿ.ಕೆ.ಶಿವಕುಮಾರ್ ಹೇಳಿದರು.

ವಿಧಾನಸೌಧದ ಬಳಿ ಮಾಧ್ಯಮದವರ ಪ್ರಶ್ನೆಗಳಿಗೆ ಉತ್ತರಿಸಿದ ಅವರು, ಬಿಜೆಪಿ ಸರ್ಕಾರದ ಅವಧಿಯಲ್ಲಿ ಭೋವಿ ನಿಗಮದ 87 ಕೋಟಿ ರೂ., ಎಪಿಎಂಸಿಯ 47 ಕೋಟಿ ರೂ., 2019ರಲ್ಲಿ ಅಂಗವಿಕಲ ಕಲ್ಯಾಣ ಇಲಾಖೆಯ 22 ಕೋಟಿ ರೂ., ಅಂಬೇಡ್ಕರ್ ನಿಗಮದ ಕೆನರಾ ಬ್ಯಾಂಕ್ ಅಲ್ಲಿನ ಹಣ ಜೂನ್ 2018 ರಲ್ಲಿ 5 ಕೋಟಿ ರೂ., ದೇವರಾಜ್ ಅರಸು ನಿಗಮದ 47 ಕೋಟಿ ರೂ., ಮಾಲಿನ್ಯ ನಿಯಂತ್ರಣ ಮಂಡಲಿಯ 10 ಕೋಟಿ ರೂ. ಹಾಗೂ ಕೆಐಡಿಬಿಯ ಹಣ ಸೇಲಂಗೆ ಅಕ್ರಮವಾಗಿ ವರ್ಗಾವಣೆಯಾಗಿದೆ ಎಂದು ಆರೋಪಿಸಿದರು.

ಬಿಜೆಪಿಯ ಅಕ್ರಮಗಳನ್ನು ತನಿಖೆ ನಡೆಸುವಿರಾ ಎಂದು ಪ್ರಶ್ನಿಸಿದಾಗ, ಖಂಡಿತವಾಗಿಯೂ ತನಿಖೆ ನಡೆಸುತ್ತೇವೆ. ಆದರೆ ಎಲ್ಲವೂ ದಾಖಲೆಯಲ್ಲಿ ಇರಬೇಕು ಎನ್ನುವ ಕಾರಣಕ್ಕೆ ಸದನದಲ್ಲಿ ಎಲ್ಲಾ ದಾಖಲೆಗಳನ್ನು ಬಯಲು ಮಾಡುತ್ತೇವೆ. ಅಕ್ರಮಗಳ ಹಿಂದೆ ಇರುವ ಯಾವ ಮಂತ್ರಿ, ಅಧ್ಯಕ್ಷರು, ಮುಖ್ಯಮಂತ್ರಿಗಳು ಇದ್ದರು ಎಂದು ಜನರಿಗೆ ತಿಳಿಸುತ್ತೇವೆ ಎಂದು ಹೇಳಿದರು.

ಮುಖ್ಯಮಂತ್ರಿ ಹುದ್ದೆಗೆ 2500 ಕೋಟಿ ರೂ., ಮಂತ್ರಿ ಸ್ಥಾನಕ್ಕೆ 100 ಕೋಟಿ ರೂ. ನೀಡಬೇಕು ಎನ್ನುವ ಬಸನಗೌಡ ಪಾಟೀಲ ಯತ್ನಾಳ ಅವರ ಆರೋಪ ಹಾಗೂ ಭೋವಿ ನಿಗಮದ ಅಕ್ರಮದ ಬಗ್ಗೆ ಗೂಳಿಹಟ್ಟಿ ಶೇಖರ್ ಮಾಡಿದ



ಆರೋಪಗಳ ಮೇಲೆ ಏಕೆ ಬಿಜೆಪಿ ತನಿಖೆ ನಡೆಸಲಿಲ್ಲ ಎಂದು ಮರುಪ್ರಶ್ನಿಸಿದರು.

ಯಾವುದೇ ಭ್ರಷ್ಟಾಚಾರದ ಮೇಲೆ ತನಿಖೆ ನಡೆಯುತ್ತಿದ್ದರೆ ಆ ವಿಚಾರದಲ್ಲಿ ವಿಧಾನಸಭೆಯಲ್ಲಿ ಚರ್ಚೆ ನಡೆಸಲು ಅವಕಾಶವಿಲ್ಲ. ಆದರೆ ನಾವು ಪ್ರಜಾಪ್ರಭುತ್ವದ ಮೌಲ್ಯಗಳಿಗೆ ಬೆಲೆಕೊಟ್ಟು ಸದನದಲ್ಲಿ ಚರ್ಚೆ ಅವಕಾಶ ಮಾಡಿಕೊಟ್ಟಿದ್ದೇವೆ. ಅಕ್ರಮ ಎಸಗಿದ್ದರೆ ಯಾವುದೇ ಅಧಿಕಾರಿ, ಮಂತ್ರಿ, ಶಾಸಕ, ಯಾರೇ ಆಗಿರಲಿ ಅವರನ್ನು ರಕ್ಷಿಸುವ ಉದ್ದೇಶ ನಮಗಿಲ್ಲ ಎಂದು ಹೇಳಿದರು.

ವಾಲ್ಮೀಕಿ ನಿಗಮದ 86 ಕೋಟಿ ರೂ. ಹಣ ತೆಲಂಗಾಣಕ್ಕೆ ಅಕ್ರಮವಾಗಿ ವರ್ಗಾವಣೆಯಾದ ತನಿಖೆ ನಡೆಸಲು ಎಸ್ ಐಟಿ ರಚನೆ ಮಾಡಿದ್ದೇವೆ. ತನಿಖಾ ತಂಡವು ಸುಮಾರು 36 ಕೋಟಿ ರೂ.ಗಳಷ್ಟು ಹಣವನ್ನು ವಶಕ್ಕೆ ಪಡೆದುಕೊಂಡಿದೆ. ಬ್ಯಾಂಕ್ ಅಧಿಕಾರಿ ಒಂದೇ ದಿನದಲ್ಲಿ ಕೋಟ್ಯಂತರ ರೂಪಾಯಿ ಸಾಲ ಮಂಜೂರು ಮಾಡಿದ್ದಾನೆ. ಇದಕ್ಕೆ ಕೇಂದ್ರ ಹಣಕಾಸು ಸಚಿವರನ್ನು ಹೊಣೆಗಾರರನ್ನಾಗಿ ಮಾಡಲು ಆಗುತ್ತದೆಯೇ? ನಾವು ಪ್ರತಿಪಕ್ಷಗಳಿಗೆ ಈ ವಿಚಾರವಾಗಿ ಉತ್ತರ ಕೊಡಬೇಕಾಗಿದೆ ಎಂದು ಖಾರವಾಗಿ ತಿಳಿಸಿದರು.

## ತಾತ್ಕಾಲಿಕ ಬಂದ್

ಹೀಗಾಗಿ ಕಾವೇರಿ ನದಿ ಪಾತ್ರದ 92 ಗ್ರಾಮಗಳಲ್ಲಿ ನೆರೆ ಭೀತಿ ಎದುರಾಗಿದೆ. ಪ್ರವಾಸಿ ತಾಣಗಳಲ್ಲೂ ಪ್ರವಾಹದ ಆತಂಕ ಎದುರಾಗಿದೆ. ಹೀಗಾಗಿ ಪ್ರವಾಹ ಪರಿಸ್ಥಿತಿ ಎದುರಿಸಲು ಮಂಡ್ಯ ಜಿಲ್ಲಾಡಳಿತ ಸಕಲ ಸಿದ್ಧತೆ ಮಾಡಿಕೊಂಡಿದೆ. ಮಂಡ್ಯ ಜಿಲ್ಲಾಡಳಿತ ಈಗಾಗಲೇ ಕಂಟ್ರೋಲ್ ರೂಂ ಸ್ಥಾಪಿಸಿದೆ.

ಕೆಆರ್ ಎಸ್ ಜಲಾಶಯಕ್ಕೆ ಕಳೆದ ಐದು ದಿನಗಳಲ್ಲಿ 15 ಟಿಎಂಸಿ ನೀರು ಹರಿದು ಬಂದಿದೆ. ಕೆಆರ್ ಎಸ್ ಡ್ಯಾಂನಲ್ಲಿ ಸದ್ಯ 120 ಅಡಿ ನೀರು ಸಂಗ್ರಹವಾಗಿದೆ. ಸಂಪೂರ್ಣ ಭರ್ತಿಗೆ ಕೇವಲ 4 ಅಡಿ ಮಾತ್ರ ಭಾಕಿ ಇದೆ. ಡ್ಯಾಂ ರವಿವಾರ ಸಂಜೆ ವೇಳೆಗೆ ಸಂಪೂರ್ಣ ಭರ್ತಿಯಾಗುವ ಸಾಧ್ಯತೆ ಇದೆ. ಸದ್ಯ ಡ್ಯಾಂಗೆ 51,374 ಕ್ಯೂಸೆಕ್ ನೀರು ಹರಿದು ಬರುತ್ತಿದೆ.

## 12 ಸಾವಿರ ಪ್ರಕರಣ ಪತ್ತೆ

ರಾಮಸ್ವಾಮಿ ಪಾಳ್ಯದ ಕಾಲೋನಿಗಳಲ್ಲಿ ಪರಿಶೀಲನೆ ನಡೆಸಿ, ನೀರು ಶೇಖರಣೆ ಮಾಡದಂತೆ ನಿವಾಸಿಗಳಿಗೆ ತಿಳುವಳಿಕೆ ಹೇಳುವ ಮೂಲಕ ಸ್ಥಳೀಯರೊಂದಿಗೆ ಮಾತುಕತೆ ನಡೆಸಿ ನೀರು ನಿಲ್ಲದಂತೆ ಎಚ್ಚರ ವಹಿಸಿ ಡೆಂಗ್ಯೂ ನಿಯಂತ್ರಣ ಮಾಡಿ ಎಂದು ಮನವಿ ಮಾಡಿದ್ರು. ಅಲ್ಲದೇ ವಸಂತನಗರದ ಸರ್ಕಾರಿ ಶಾಲೆಗೆ ಭೇಟಿ ನೀಡಿ ಮಕ್ಕಳಲ್ಲಿ ಡೆಂಗ್ಯೂ ಕುರಿತು ಜಾಗೃತಿ ಮೂಡಿಸಿದ್ರು. ಇದೇ ವೇಳೆ ಆರೋಗ್ಯ ಸಚಿವರಿಗೆ ಶಿವಾಜಿನಗರ ಶಾಸಕ ರಿಜ್ವಾನ್ ಹರ್ಷದ್ ಅವರು ಕೂಡ ಸಾಥ್ ನೀಡಿದ್ರು.

ಒಟ್ನಲ್ಲಿ, ಮಳೆ ಜೋರಾಗಿ ಬಂದ್ರೆ ನೀರಲ್ಲಿ ಇರುವಂತಹ ಲಾರ್ವಗಳು ಕೊಚ್ಚಿ ಹೋಗುತ್ತವೆ. ಆದ್ರೆ ತುಂತುರು ಮಳೆ ಬಂದ್ರೆ, ನೀರು ಅಲ್ಲಲ್ಲೆ ನಿಲ್ಲಲಿದ್ದು, ಲಾರ್ವಗಳು ಉತ್ಪತ್ತಿಯಾಗುತ್ತವೆ. ಹೀಗಾಗಿ ಜನರು ಈ ಮಳೆಯಲ್ಲಿ ಎಚ್ಚರಿಕೆಯಿಂದ ಇರಬೇಕಾಗಿದೆ.

## ಎಲಾನ್ ಮಸ್ಕ್ ಅಭಿನಂದನೆ

ಬರಕ್ ಒಬಾಮಾ 131 ಮಿಲಿಯನ್ ಫಾಲೋವರ್ಸ್ ಹೊಂದಿದ್ದಾರೆ. ಅವರ ನಂತರದ ಸ್ಥಾನದಲ್ಲಿ ಭಾರತದ ಪ್ರಧಾನಿ ನರೇಂದ್ರ ಮೋದಿ ಅವರಿದ್ದಾರೆ. 2024 ರ ಅಮೆರಿಕ ಚುನಾವಣೆಗಳಿಗೆ ರಿಪಬ್ಲಿಕನ್ ಅಧ್ಯಕ್ಷೀಯ ಅಭ್ಯರ್ಥಿ ಮತ್ತು ಯುಎಸ್ ಮಾಜಿ ಅಧ್ಯಕ್ಷ ಡೊನಾಲ್ಡ್ ಟ್ರಂಪ್ ಮೂರನೇ ಸ್ಥಾನದಲ್ಲಿದ್ದಾರೆ. ಎಕ್ಸ್‌ನಲ್ಲಿ ಅವರು 87 ಮಿಲಿಯನ್‌ಗಿಂತಲೂ (8 ಕೋಟಿ) ಹೆಚ್ಚು ಫಾಲೋವರ್ಸ್ ಹೊಂದಿದ್ದಾರೆ.

38 ಮಿಲಿಯನ್‌ಗೂ ಹೆಚ್ಚು ಫಾಲೋವರ್ಸ್ ಹೊಂದಿರುವ ಯುಎಸ್ ಅಧ್ಯಕ್ಷ ಜೋ ಬೈಡೆನ್ ನಾಲ್ಕನೇ ಸ್ಥಾನದಲ್ಲಿದ್ದಾರೆ. ಅವರ ನಂತರದಲ್ಲಿ ಕೇಂದ್ರ ಗೃಹ ಸಚಿವ ಅಮಿತ್ ಶಾ ಮತ್ತು ಹಿಲರಿ ಕ್ಲಿಂಟನ್ ಇದ್ದಾರೆ.

## ಹಲ್ಲೆ ನಡೆಸಿದ ವ್ಯಕ್ತಿ

ಸ್ಥಳೀಯರು ದಾಸ್ ಅವರನ್ನು ಎದ್ದು ನಿಲ್ಲಿಸಲು ಪ್ರಯತ್ನಿಸುತ್ತಿರುವುದನ್ನು ಕಾಣಬಹುದು, ಆದರೆ ಅವರು ಪ್ರಜ್ಞಾಹೀನ ಸ್ಥಿತಿಯಲ್ಲಿದ್ದರು. ನಂತರ ಗಾಯಗೊಂಡ ಪೊಲೀಸರನ್ನು ಅಂಗಡಿಯಿಂದ ಹೊರಕ್ಕೆ ಹೊತ್ತೊಯ್ಯುತ್ತಿರುವುದು ಕಂಡುಬರುತ್ತದೆ.

ಸ್ವಾಮಿ ದಾಸ್ ಅವರ ತಲೆಗೆ ತೀವ್ರ ಪೆಟ್ಟಾಗಿದ್ದು, ಪ್ರಜ್ಞಾಹೀನ ಸ್ಥಿತಿಯಲ್ಲಿದ್ದ ಅವರನ್ನು ಚಿಕಿತ್ಸೆಗಾಗಿ ಗುಡೂರು ಏರಿಯಾ ಆಸ್ಪತ್ರೆಗೆ ರವಾನಿಸಲಾಗಿದೆ ಎಂದು ಪೊಲೀಸರು ತಿಳಿಸಿದ್ದಾರೆ. ಪ್ರಕರಣ ದಾಖಲಾಗಿದ್ದು, ತನಿಖೆ ನಡೆಯುತ್ತಿದೆ ಎಂದು ಪೊಲೀಸರು ತಿಳಿಸಿದ್ದಾರೆ.

ಗುಡೂರು ಡಿಎಸ್‌ಪಿ ಸೂರ್ಯನಾರಾಯಣರೆಡ್ಡಿ ಮಾತನಾಡಿ, ಗುಡೂರು ವ್ಯಾಪ್ತಿಯಲ್ಲಿ ಕರ್ತವ್ಯ ನಿರ್ವಹಿಸುತ್ತಿದ್ದ ಹೆಡ್‌ಕಾನ್ಸ್‌ಟೇಬಲ್ ಮೇಲೆ ಮದ್ಯದ ಅಮಲಿನಲ್ಲಿ ವ್ಯಕ್ತಿಯೊಬ್ಬ ಹಲ್ಲೆ ನಡೆಸಿದ್ದಾನೆ.

### ಮೊದಲನೇ ಪುಟದಿಂದ...

ದಾಳಿಕೋರನನ್ನು ಪಶ್ಚಿಮ ಬಂಗಾಳದ ಲಾಲ್ತುಕ್ ಕಾಲಿಂದ ಎಂದು ಗುರುತಿಸಲಾಗಿದ್ದು, ಯಾವ ಕಾರಣದಿಂದ ಹಲ್ಲೆ ನಡೆಸಿದ್ದಾನೆ ಎಂಬುದು ತಿಳಿದುಬಂದಿಲ್ಲ. ದಾಳಿಕೋರನನ್ನು ಬಂಧಿಸಲಾಗಿದ್ದು ತನಿಖೆ ನಡೆಯುತ್ತಿದೆ.

## ದೃಶ್ಯ ಡಿಲೀಟ್

ಅದರಂತೆ ಪ್ರದೂಷ್ ತನ್ನ ಐಫೋನ್ ತೆಗೆದು ರೆಕಾರ್ಡ್ ಮಾಡಿದ್ದಾನೆ. ಮೂರ್‍ನಾಲ್ಕು ಸೆಕೆಂಡ್ ಆಗುತ್ತಿದ್ದಂತೆ ಸ್ಟಾಪ್ ಮಾಡಿ ವಿಡಿಯೋ ಡಿಲೀಟ್ ಮಾಡಿದ್ದಾನೆ.

ಈಗ ಪೊಲೀಸರು ಡಿಲೀಟ್ ಆಗಿರುವ ದೃಶ್ಯವನ್ನು ರಿಟ್ರೀವ್‌ಗೆ ಒದ್ದಾಡುತ್ತಿದ್ದಾರೆ. ಕಾಮಾಕ್ಷಿಪಾಳ್ಯ ಪೊಲೀಸರು ಸಿಐಡಿ ಟೆಕ್ನಿಕಲ್ ಸೆಲ್‌ಗೆ ಐಫೋನ್ ರವಾನಿಸಿದ್ದಾರೆ. ಐಫೋನ್‌ನಿಂದ ವಿಡಿಯೋ ರಿಟ್ರೀವ್ ಮಾಡೋದು ಅಷ್ಟು ಸುಲಭವಲ್ಲ. ಹಾಗಾಗಿ ಹೊಸ ಟೆಕ್ನಾಲಜಿ ಬಳಸಿ ವಿಡಿಯೋ ರಿಟ್ರೀವ್‌ಗೆ ಸಿಐಡಿ ಮುಂದಾಗಿದೆ. ಒಂದು ವೇಳೆ ವಿಡಿಯೋ ರಿಟ್ರೀವ್ ಆದರೆ ಅದು ಕೇಸ್‌ಗೆ ಮಹತ್ತರ ಸಾಕ್ಷಿಯಾಗೋದು ಸತ್ಯ.

## 40 ಕೋಟಿ ಬಿಲ್ ಬಾಕಿ

ಇತ್ತ ಬಿಬಿಎಂಪಿ ವ್ಯಾಪ್ತಿಯಲ್ಲಿ 174 ಸ್ಥಿರ ಹಾಗೂ 24 ಮೊಬೈಲ್ ಕ್ಯಾಂಟಿನ್‌ಗಳಿವೆ. ಶುರುವಾದಾಗಿನಿಂದ ಪ್ರತಿ ನಿತ್ಯ ಮೂರೂವರೆ ಲಕ್ಷ ಜನ ಊಟ, ತಿಂಡಿ ಮಾಡುತ್ತಿದ್ದರು. ಕಳೆದ ಒಂದು ವರ್ಷದಿಂದ ಕಂಪನಿಗೆ ಪಾಲಿಕೆ 40 ಕೋಟಿ ಹಣ ನೀಡಬೇಕಿದೆ. ಕ್ಯಾಂಟೀನ್ ಸಿಬ್ಬಂದಿ ಸಂಬಳ, ದಿನಸಿ ಬಿಲ್ ಸಮಸ್ಯೆಯಿಂದಾಗಿ ಟೆಂಡರ್ ಪಡೆದ ಸಂಸ್ಥೆ ಕ್ಯಾಂಟೀನ್ ಗೆ ಬೀಗ ಹಾಕಿದೆ. ಬಸವನಗುಡಿ, ಪದ್ಮನಾಭನಗರ, ಚಿಕ್ಕಪೇಟೆ, ಜಯನಗರ ಕ್ಷೇತ್ರಗಳಲ್ಲಿ ಕ್ಯಾಂಟೀನ್‌ಗಳಿಗೆ ಬೀಗ ಹಾಕಲಾಗಿದೆ. ಇತ್ತ ಬಿಬಿಎಂಪಿಯ ಅಧಿಕಾರಿಗಳನ್ನ ಕೇಳಿದ್ರೆ, ಎಲ್ಲವನ್ನೂ ಸರಿಪಡಿಸ್ತೀವೆ ಅಂತಾ ಸಬೂಬು ನೀಡ್ತಿದ್ದಾರೆ

ಸದ್ಯ ಇಂದಿರಾ ಕ್ಯಾಂಟೀನ್ ಬಂದ್ ಆಗಿರೋದಕ್ಕೆ ಬಿಜೆಪಿ ರಾಜ್ಯಾಧ್ಯಕ್ಷ ವಿಜಯೇಂದ್ರ ಸರ್ಕಾರದ ವಿರುದ್ಧ ಚಾಟಿಬೀಸಿದ್ದಾರೆ. ಬಿಜೆಪಿ ಅವಧಿಯಲ್ಲಿ ಕ್ಯಾಂಟೀನ್ ಮುಚ್ಚಿದ್ದಾರೆ ಅಂತಿದ್ರೀ, ಈಗ ನಿಮ್ಮದೇ ಸರ್ಕಾರ ಇದ್ರೂ ಯಾಕೆ ಬಂದ್ ಆಗಿದೆ ಅಂತಾ ಪ್ರಶ್ನಿಸಿದ್ದಾರೆ. ಇತ್ತ ಇಂದಿರಾ ಕ್ಯಾಂಟೀನ್ ಬಂದ್ ಆಗಿರೋ ಬಗ್ಗೆ ಸ್ಪಷ್ಟನೆ ಕೊಟ್ಟಿರೋ ಪಾಲಿಕೆ ಎಲ್ಲವನ್ನೂ ಸರಿಪಡಿಸಿ ಪುನಾರಂಭ ಮಾಡ್ತೀವೆ ಅಂತಾ ಪ್ರಕಟಣೆ ಹೊರಡಿಸಿದೆ. ಒಟ್ಟಿನಲ್ಲಿ ಬಡವರ ಹೊಟ್ಟೆ ತುಂಬಿಸಬೇಕಿದ್ದ ಇಂದಿರಾ ಕ್ಯಾಂಟೀನ್ ಲಾಕ್ ಆಗಿದ್ದು, ಸರ್ಕಾರ ಹಾಗೂ ಪಾಲಿಕೆಯ ನಿರ್ಲಕ್ಷ್ಯವನ್ನ ಅನಾವರಣ ಮಾಡಿದೆ. ಸದ್ಯ ಇನ್ನಾದ್ರೂ ಇಂದಿರಾ ಕ್ಯಾಂಟೀನ್ ಗಳ ಬಗ್ಗೆ ಸರ್ಕಾರ ಗಮನಹರಿಸುತ್ತಾ ಕಾದುನೋಡಬೇಕಿದೆ.

## ಕಾಡಂಚಿನ ಗ್ರಾಮಸ್ಥರು

ಇನ್ನು ಕರೆ ಬರುತ್ತಿದ್ದಂತೆ ತಕ್ಷಣವೇ ಜಾಂಬೋಟಿಯಲ್ಲಿ ಇರುವ ಆಯಂಬುಲೆನ್ಸ್ ರೋಗಿ ಇರುವ ಸ್ಥಳಕ್ಕೆ ಬಂದಿದ್ದು ಮೊದಲು ಆ ಯಂಬುಲೆನ್ಸ್ ಸಿಬ್ಬಂದಿ ಮೂರ್ಚೆ ಹೋಗಿದ್ದ ಹರ್ಷದಾಗೆ ಪ್ರಾಥಮಿಕ ಚಿಕಿತ್ಸೆ ನೀಡಿ ಬಳಿಕ ಬೆಳಗಾವಿ ಜಿಲ್ಲಾಸ್ಪತ್ರೆಗೆ ದಾಖಲಿಸಿ ಚಿಕಿತ್ಸೆ ನೀಡುತ್ತಿದ್ದಾರೆ. ಖಾನಾಪುರ ತಾಲೂಕಿನ ಕಾಡಂಚಿನಲ್ಲಿ ಇರುವ ಹತ್ತಾರು ಗ್ರಾಮಸ್ಥರ ಪರಿಸ್ಥಿತಿ ವಿಭಿನ್ನವಾಗಿಲ್ಲ. ಮಕ್ಕಳು, ಗರ್ಭಿಣಿಯರು, ವಯಸ್ಸಾದವರನ್ನ ವೈದ್ಯಕೀಯ ಚಿಕಿತ್ಸೆ ಕೊಡಿಸಬೇಕೆಂದ್ರೆ, ಇಂತಹ ಕಷ್ಟ ಎದುರಿಸುವ ಸ್ಥಿತಿ ಇದೆ. ಆದಷ್ಟು ಬೇಗ ಸಂಬಂಧ ಪಟ್ಟ ಅಧಿಕಾರಿಗಳು ಮೂಲ ಸೌಕರ್ಯ ನೀಡಬೇಕು ಎಂದು ಗ್ರಾಮಸ್ಥರು ಮನವಿ ಮಾಡಿದ್ದಾರೆ.

**ಈಜಲು ಹೋಗಿ ಕೆರೆಯಲ್ಲಿ ಮುಳುಗಿ ಸಾವು:** ಕೆರೆಯಲ್ಲಿ ಈಜಲು ಹೋಗಿದ್ದ ವ್ಯಕ್ತಿ ಮುಳುಗಿ ಸಾವನ್ನಪ್ಪಿದ್ದಾನೆ. ಶಿವಮೊಗ್ಗ ಜಿಲ್ಲೆ ಶಿಕಾರಿಪುರ ತಾಲೂಕಿನ ಶೆಟ್ಟಿಹಳ್ಳಿಯಲ್ಲಿ ಘಟನೆ ನಡೆದಿದ್ದು, ರಾಜಪ್ಪ ಎಂಬಾತ ಮೃತಪಟ್ಟಿದ್ದಾನೆ. ಅಗ್ನಿಶಾಮಕ ಸಿಬ್ಬಂದಿಯಿಂದ ರಾಜಪ್ಪನ ಮೃತ ದೇಹಕ್ಕಾಗಿ ಕೆರೆಯಲ್ಲಿ ಶೋಧ ಕಾರ್ಯ ನಡೆದಿದೆ. ಶಿಕಾರಿಪುರ ಗ್ರಾಮಾಂತರ ಠಾಣೆಯಲ್ಲಿ ಪ್ರಕರಣ ದಾಖಲು ಮಾಡಿಕೊಳ್ಳಲಾಗಿದೆ.

## ಮಳೆಗೆ ಕುಸಿದ ಮನೆ

ಮನೆ ಬೀಳುವುದಕ್ಕೂ ಮುನ್ನ ಮರಣ ಮೃದಂಗ ನಡೆಯುವ ಸೂಚನೆ ಕೊಟ್ಟ ಇಟ್ಟಿಗೆಗಳಿಂದ ಕುಟುಂಬ ಬದುಕುಳಿದಿದೆ.

ಬೆಳಗಾವಿ ಜಿಲ್ಲೆಯ ಖಾನಾಪುರ ತಾಲೂಕಿನ ಹೊಸಟ್ಟಿಯಲ್ಲಿ ಮಳೆಗೆ ಮನೆ ಬೀಳುವ ಹಂತಕ್ಕೆ ತಲುಪಿತ್ತು. ಅದೃಷ್ಟವಶಾತ್ ಮನೆ ಬೀಳುವುದಕ್ಕಿಂತ ಮುನ್ನ ಎರಡು ಇಟ್ಟಿಗೆ ಕಲ್ಲುಗಳು ಬಿದ್ದಿವೆ. ಇದನ್ನು ಕಂಡು ಗಾಬರಿಗೊಂಡ ಕುಟುಂಬಸ್ಥರು ಮನೆಯನ್ನು ಬಿಟ್ಟು ಹೊರ ಓಡಿದ್ದಾರೆ. ಕುಟುಂಬಸ್ಥರೆಲ್ಲಾ ಮನೆಯಿಂದ ಆಚೆ ಬಂದ ಬಳಿಕ ಮನೆ ಕುಸಿದು ಬಿದ್ದಿದೆ. ತಡರಾತ್ರಿ 1 ಗಂಟೆ ಸುಮಾರಿಗೆ ನಿಂಗಪ್ಪ ಕಮತಗಿ ಎಂಬುವವರಿಗೆ ಸೇರಿದ ಮನೆ ಬಿದ್ದು ಕುಟುಂಬ ಬೀದಿಪಾಲಾಗಿದೆ.

ಬಿಟ್ಟು ಬಿಡದೆ ಸುರಿಯುತ್ತಿರುವ ಮಳೆಯಿಂದ ಅನಾಹುತಗಳು ಹೆಚ್ಚಾಗ್ತಿವೆ. ಸದ್ಯ ಬಿದ್ದ ಮನೆಯಲ್ಲಿಯೇ ನಿಂಗಪ್ಪ ಕಮತಗಿ ಕುಟುಂಬ ಬೇರೆ ದಾರಿ ಇಲ್ಲದೆ ವಾಸಿಸುವಂತಾಗಿದೆ. ಮನೆಯ ಒಂದು ಗೋಡೆ ಉರುಳಿ ಬಿದ್ದು ಅವಾಂತರವಾಗಿದೆ. ಮನೆಯ 11 ಜನ ಸದಸ್ಯರು ಪ್ರಾಣಾಪಾಯದಿಂದ ಪಾರಾಗಿದ್ದಾರೆ. ಸದ್ಯ ಕಮತಗಿ ಕುಟುಂಬ ಸರ್ಕಾರದಿಂದ ಸಿಗುವ ಪರಿಹಾರದ ನಿರೀಕ್ಷೆಯಲ್ಲಿದೆ.

ಇನ್ನು ಮತ್ತೊಂದೆಡೆ ಇದೇ ರೀತಿಯ ಘಟನೆ ಮರುಕಳಿಸಿದೆ. ಬೆಳಗಾವಿ ಜಿಲ್ಲೆಯ ಬೈಲಹೊಂಗಲ ತಾಲೂಕಿನ ಪಟ್ಟಿಹಾಳ ಗ್ರಾಮದಲ್ಲಿ ನಿರಂತರ ಮಳೆಗೆ ತಡರಾತ್ರಿ ಮನೆ ಕುಸಿದು ಬಿದ್ದಿದೆ. ಮನೆ ಕುಸಿಯುತ್ತಿದ್ದಂತೆ ಮನೆಯ ಸದಸ್ಯರು ಹೊರ ಓಡಿ ಬಂದು ಪ್ರಾಣ ಉಳಿಸಿಕೊಂಡಿದ್ದಾರೆ. ಬಸಪ್ಪ ಹಡಪದ ಎಂಬುವವರಿಗೆ ಸೇರಿದ ಮನೆ ಕುಸಿತವಾಗ್ತಿದ್ದಂತೆ ಐದು ಜನ ಸದಸ್ಯರು ಹೊರ ಬಂದಿದ್ದಾರೆ. ಮನೆಯ ಸಾಮಾಗ್ರಿ ಸೇರಿದಂತೆ ಎಲ್ಲವನ್ನೂ ಕಳೆದುಕೊಂಡು ಕುಟುಂಬ ಬೀದಿ ಪಾಲಾಗಿದೆ.

## ಎಂಟ್ರಿ

ಪಾಕಿಸ್ತಾನದ ಪ್ರಾಕ್ಸಿ ಆಕ್ರಮಣದ ವಿರುದ್ಧ ಸೇನೆಯು ಈಗಾಗಲೇ ಸುಮಾರು 3,500-4000 ಸಿಬ್ಬಂದಿಯ ಒಂದು ಬ್ರಿಗೇಡ್ ಬಲವನ್ನು ಒಳಗೊಂಡಂತೆ ಪಡೆಗಳನ್ನು ಈ ಪ್ರದೇಶಕ್ಕೆ ಕರೆತಂದಿದೆ ಎಂದು ರಕ್ಷಣಾ ಮೂಲಗಳು ತಿಳಿಸಿವೆ.

ಅತ್ಯಾಧುನಿಕ ಶಸ್ತ್ರಾಸ್ತ್ರಗಳು ಮತ್ತು ಸಂವಹನ ಸಾಧನಗಳನ್ನು ಹೊಂದಿರುವ ಭಯೋತ್ಪಾದಕರ ಪತ್ತೆ ಮಾಡಿ ಬೇಟೆಯಾಡಲು ಭೂಸೇನೆಯು ಕಾರ್ಯತಂತ್ರ ರೂಪಿಸಿದೆ. ಉಗ್ರರ ಉಪಟಳದ ಪ್ರದೇಶದಲ್ಲಿ ಈಗಾಗಲೇ ಇರುವ ಭಯೋತ್ಪಾದನಾ ನಿಗ್ರಹ ಪಡೆಗಳ ಸಹಾಯವನ್ನೂ ಸೇನೆ ಪಡೆದುಕೊಂಡಿದೆ.

ರೋಮಿಯೋ ಮತ್ತು ಡೆಲ್ಟಾ ಪಡೆಗಳು ಸೇರಿದಂತೆ ರಾಷ್ಟ್ರೀಯ ರೈಫಲ್ಸ್‌ನ ಎರಡು ಪಡೆಗಳು ಹಾಗೂ ಪ್ರದೇಶದಲ್ಲಿ ಇತರ ನಿಯಮಿತ ಪದಾತಿ ದಳಗಳ ಉಪಸ್ಥಿತಿ ಇದೆ.

## ನಿಧನ

ಇವರು ರಘು ಸಹೋದರ ಮುರುಳಿ ಮನೆಯಲ್ಲಿದ್ದರು.

ಮುರುಳಿ ಮದುವೆಯಾಗದೇ ತಾಯಿ ಆರೈಕೆ ಮಾಡುತಿದ್ದ. ರಘು ಲವ್ ಮ್ಯಾರೇಜ್ ಆಗಿ ಪತ್ನಿ ಜೊತೆ ಪ್ರತ್ಯೇಕವಾಗಿ ವಾಸವಾಗಿದ್ದ. ಆಗಾಗ್ಗೆ ಆಗಮಿಸಿ ತಾಯಿ ಆರೋಗ್ಯ ವಿಚಾರಿಸುತ್ತಿದ್ದ.

# ವ್ಯವಸ್ಥೆ ರಾಜಿ ಮಾಡಿಕೊಂಡರೆ ಮುಂದೆ ಶ್ರೀಮಂತರು ಮಾತ್ರ ಐಎಎಸ್ , ಐಪಿಎಸ್ ಅಧಿಕಾರಿಯಾಗುತ್ತಾರೆ

**ಮಹಾರಾಷ್ಟ್ರ:** ವಿವಾದಿತ ಟ್ರೈನಿ ಐಎಎಸ್ ಅಧಿಕಾರಿ ಪೂಜಾ ಖೇಡ್ಕರ್ ಅವರು ಅಧಿಕಾರ ದುರುಪಯೋಗಪಡಿಸಿಕೊಂಡಿರುವ ಕುರಿತು ಐಪಿಎಸ್ ಅಧಿಕಾರಿ ಅರುಣ್ ಬೋಥ್ರಾ, ಅಭಿಪ್ರಾಯ ವ್ಯಕ್ತಪಡಿಸಿದ್ದಾರೆ. ಯುಪಿಎಸ್ ಸಿಯು ದೇಶದ ಅತ್ಯಂತ ವಿಶ್ವಾಸಾರ್ಹ ಸಂಸ್ಥೆಗಳಲ್ಲಿ ಒಂದಾಗಿದೆ. ಬಡ ಮತ್ತು ಮಧ್ಯಮ ವರ್ಗದ ಹೆಚ್ಚಿನ ಸಂಖ್ಯೆಯ ಯುವಕರು ಮತ್ತು ಹುಡುಗಿಯರು ಪ್ರತಿ ವರ್ಷ ನಾಗರಿಕ ಸೇವೆಗಳಿಗೆ ಸೇರುತ್ತಾರೆ.

ವ್ಯವಸ್ಥೆಯು ಸಂಪೂರ್ಣವಾಗಿ ರಾಜಿ ಮಾಡಿಕೊಂಡಿದ್ದರೆ ನೀವು ಐಎಎಸ್ ಮತ್ತು ಐಪಿಎಸ್‌ನಂತಹ ಸೇವೆಗಳಲ್ಲಿ ಶ್ರೀಮಂತ ಮತ್ತು ಶಕ್ತಿಶಾಲಿಗಳನ್ನು ಮಾತ್ರ ಪಡೆಯುತ್ತೀರಿ. ಪೂಜಾ ಖೇಡ್ಕರ್ ಗೆ ಸಂಬಂಧಿಸಿದಂತೆ ಸೇವೆಯಲ್ಲಿರುವ ಅಧಿಕಾರಿಗಳಿಗೆ ದಾಖಲೆ ಪರಿಶೀಲನೆ ಪ್ರಕ್ರಿಯೆಯನ್ನು ಮರುಪರಿಶೀಲಿಸುವ ಅಗತ್ಯವನ್ನು ಒತ್ತಿಹೇಳಿದ್ದಾರೆ.

ಮಹಾರಾಷ್ಟ್ರದಲ್ಲಿ ಪೂಜಾ ಖೇಡ್ಕರ್ ಅವರ ತರಬೇತಿಯನ್ನು ಸ್ಥಗಿತಗೊಳಿಸಲಾಗಿದೆ. ವಿವಾದಿತ ಟ್ರೈನಿ ಐಎಎಸ್ ಅಧಿಕಾರಿ ಪೂಜಾ ಖೇಡ್ಕರ್ ಎಂಬಿಬಿಎಸ್ ಗೆ ಸೇರುವ ಸಮಯದಲ್ಲಿ ಸಲ್ಲಿಸಿದ್ದ ವೈದ್ಯಕೀಯ ಪ್ರಮಾಣಪತ್ರದಿಂದ ಅವರಿಗೆ ಯಾವ ಸಮಸ್ಯೆಯೂ ಇಲ್ಲ ದೈಹಿಕವಾಗಿ ಫಿಟ್ ಆಗಿದ್ದಾರೆ ಎಂಬುದು



ತಿಳಿದುಬಂದಿದೆ.

ಅವರು ನಾಗರಿಕ ಸೇವಾ ಪರೀಕ್ಷೆಯಲ್ಲಿ ತೇರ್ಗಡೆಯಾಗಲು ನಕಲಿ ಅಂಗವೈಕಲ್ಯ ಮತ್ತು ಇತರೆ ಹಿಂದುಳಿದ ವರ್ಗ ಪ್ರಮಾಣ ಪತ್ರಗಳನ್ನು ಸಲ್ಲಿಸಿದ್ದಾರೆ ಎಂದು ಆರೋಪಿಸಲಾಗಿತ್ತು. ಈ ಕುರಿತು ತನಿಖೆ ಮಾಡಿದಾಗ ಅವರು 2007ರಲ್ಲಿ ಎಂಬಿಬಿಎಸ್ ಗೆ ಸೇರ್ಪಡೆಗೊಳ್ಳುವ ಸಮಯದಲ್ಲಿ ಸಲ್ಲಿಸಲಾದ ವೈದ್ಯಕೀಯ ಪ್ರಮಾಣಪತ್ರದಲ್ಲಿ ಅವರಿಗೆ ಯಾವ ದೋಷವೂ ಇಲ್ಲ ಅವರು ಫಿಟ್ ಆಗಿದ್ದಾರೆಂದು ಅದರಲ್ಲಿ ಬರೆಯಲಾಗಿತ್ತು.

ಕೆಂಪು- ನೀಲಿ ಬೀಕನ್ ಲೈಟ್ ಮತ್ತು ವಿಐಪಿ ನಂಬರ್ ಪ್ಲೇಟ್‌ನೊಂದಿಗೆ ಖಾಸಗಿ ಆಡಿ ಕಾರನ್ನು ಬಳಸಿದ್ದಕ್ಕಾಗಿ ತನಿಖೆಗೆ ಖೇಡ್ಕರ್ ಅವರನ್ನು ಒಳಪಡಿಸಿದಾಗ ಅವರು ಒಬಿಸಿ ಮತ್ತು ದೃಷ್ಟಿಹೀನ ವರ್ಗಗಳ ಅಡಿಯಲ್ಲಿ ಸಿವಿಲ್ ಸರ್ವೀಸ್ ಪರೀಕ್ಷೆಗೆ ಹಾಜರಾಗಿದ್ದರು ಮತ್ತು ಮಾನಸಿಕ ಅಸ್ವಸ್ಥತೆಯ ಪ್ರಮಾಣಪತ್ರವನ್ನೂ ಸಲ್ಲಿಸಿದ್ದಾರೆ ಎನ್ನುವುದು ಬಯಲಾಗಿದೆ.

2007ರಲ್ಲಿ ಎಂಬಿಬಿಎಸ್‌ಗೆ ಪ್ರವೇಶ ಪಡೆಯುವಾಗ ಪೂಜಾ ಖೇಡ್ಕರ್ ಅವರು ಕಾಶಿಬಾಯಿ ನವ್ಲೆ ವೈದ್ಯಕೀಯ ಕಾಲೇಜಿಗೆ ಸಲ್ಲಿಸಿದ್ದರು . ಫಿಟ್‌ನೆಸ್ ಪ್ರಮಾಣಪತ್ರದಲ್ಲಿ ದೈಹಿಕ ಅಥವಾ ಮಾನಸಿಕ ಯಾವುದೇ ಅಂಗವೈಕಲ್ಯತೆಯ ಉಲ್ಲೇಖವಿಲ್ಲ.

ಯೂನಿಯನ್ ಪಬ್ಲಿಕ್ ಸರ್ವಿಸ್ ಕಮಿಷನ್ (ಯುಪಿಎಸ್‌ಸಿ) ಗೆ ತನ್ನ ಅಫಿಡವಿಟ್‌ನಲ್ಲಿ, ಮಹಾರಾಷ್ಟ್ರ ಕೇಡರ್‌ನ 2023-ಬ್ಯಾಚ್ ಐಎಎಸ್ ಅಧಿಕಾರಿ ಖೇಡ್ಕರ್ ಅವರು ತಮಗೆ ದೃಷ್ಟಿದೋಷವಿದೆ ಎಂದು ಹೇಳಿಕೊಂಡಿದ್ದಾರೆ.

ಆದರೂ ಪೂಜಾ ಖೇಡ್ಕರ್ ಒಬಿಸಿ ವರ್ಗದ ಅಡಿಯಲ್ಲಿ ನಾಗರಿಕ ಸೇವೆಗಳ ಪರೀಕ್ಷೆಗೆ ಹಾಜರಾಗಿದ್ದರು. ಅಲ್ಲಿ ಕ್ರೀಮಿ ಲೇಯರ್ ಪ್ರಮಾಣಪತ್ರದ ಮಿತಿಯು ಪೋಷಕರ ವಾರ್ಷಿಕ ಆದಾಯ 8 ಲಕ್ಷ ರೂಪಾಯಿಯಾಗಿದೆ. ಆದರೆ ಇವರ ತಂದೆ ಕೋಟ್ಯಧೀಶರಾಗಿದ್ದರೂ ಒಬಿಸಿ ಪ್ರಮಾಣಪತ್ರ ಪಡೆದಿದ್ದಾರೆ ಎಂದು ತನಿಖಾ ಅಧಿಕಾರಿಗಳು ತಿಳಿಸಿದ್ದಾರೆ.

# ಜೈನ ಧರ್ಮದವರ ಬಳಿ ಕ್ಷಮೆ ಕೇಳಿದ ಹಂಸಲೇಖ

**ಬೆಂಗಳೂರು:** ಹಂಸಲೇಖ ಅವರು ಕನ್ನಡ ಚಿತ್ರರಂಗಕ್ಕೆ ಸಾಕಷ್ಟು ಹಾಡುಗಳನ್ನು ನೀಡಿದ್ದಾರೆ. ಅವರ ಹಾಡುಗಳು ಈಗಲೂ ಅನೇಕರ ಫೇವರಿಟ್ ಎನಿಸಿಕೊಂಡಿದೆ. ಹಂಸಲೇಖ ಗೀತ ಸಾಹಿತ್ಯಕ್ಕೆ ಮರುಳಾಗದವರೇ ಇಲ್ಲ. ಅವರ ಹಾಡುಗಳ ಬಗ್ಗೆ ಯಾರಿಗೂ ತಕರಾರು ಇಲ್ಲ. ಆದರೆ, ವೈಯಕ್ತಿವಾಗಿ ಕೆಲವೊಮ್ಮೆ ಅವರು ವಿವಾದಗಳನ್ನು ಮಾಡಿಕೊಳ್ಳುತ್ತಾರೆ. ಇತ್ತೀಚೆಗೆ ಅವರು ಜೈನ ಸಮುದಾಯದ ಬಗ್ಗೆ ಕೆಟ್ಟದಾಗಿ ಮಾತನಾಡಿದ್ದರು. ಇದು ಸಾಕಷ್ಟು ವಿವಾದ ಸೃಷ್ಟಿ ಮಾಡಿತ್ತು. ಅನೇಕರು ಹಂಸಲೇಖ ಬಳಿ ಕ್ಷಮೆ ಕೇಳುವಂತೆ ಆಗ್ರಹಿಸಿದ್ದರು. ಅಂತೆಯೇ ಹಂಸಲೇಖ ಅವರು ಕ್ಷಮೆ ಕೇಳಿದ್ದಾರೆ.

**ಹಂಸಲೇಖ ಹೇಳಿದ್ದು ಏನು?:** ಇತ್ತೀಚೆಗೆ ಕಾರ್ಯಕ್ರಮ ಒಂದರಲ್ಲಿ ಮಾತನಾಡಿದ್ದ ಹಂಸಲೇಖ ಅವರು 'ಜೈನರ ಫಿಲಾಸಫಿಯಲ್ಲಿ 24 ಜನ್ಮಗಳು ಇವೆಯಂತೆ. ಅದೆಲ್ಲ ಸುಳ್ಳು, ಬುಲ್



ಶಿಟ್' ಎಂದು ಹೇಳಿದ್ದರು ಹಂಸಲೇಖ. ಇದಕ್ಕೆ ಜೈನ ಧರ್ಮದವರು ವಿರೋಧ ವ್ಯಕ್ತಪಡಿಸಿದ್ದಾರೆ. 'ಹಂಸಲೇಖ ಅವರು ಸಾರ್ವಜನಿಕವಾಗಿ ಜೈನ ಧರ್ಮವನ್ನು ಹೀಯಾಳಿಸಿದ್ದು ಸರಿ ಅಲ್ಲ. ಜಗತ್ತಿನ ಅತೀ ದೊಡ್ಡ ಅಂಹಿಸಾಮಯ ಹಾಗೂ ದಾನಧರ್ಮಗಳಲ್ಲಿ ಅಗ್ರ ಸ್ಥಾನದಲ್ಲಿ ಇರುವ ಜೈನ ಧರ್ಮವನ್ನು ಟೀಕಿಸಿದ ಹಂಸಲೇಖ ಈಗಲೇ ಕ್ಷಮೆ ಕೇಳಬೇಕು' ಎಂದು ಜೈನ ಧರ್ಮದವರು ಆಗ್ರಹಿಸಿದ್ದರು.

ಈಗ ಹಂಸಲೇಖ ಅವರು ವಿಡಿಯೋ ಮಾಡಿ ಪೋಸ್ಟ್ ಮಾಡಿದ್ದಾರೆ. ಜೊತೆಗೆ ಇದು ಬಾಯ್ತಪ್ಪಿನಿಂದ ಆಡಿರೋ ಮಾತು ಎಂದಿರೋ ಅವರು, ಇನ್ಮುಂದೆ ಈ ರೀತಿಯ ತಪ್ಪನ್ನು ಮಾಡುವುದಿಲ್ಲ ಎನ್ನುವ ಭರವಸೆ ನಿಡಿದ್ದಾರೆ.

'ದಯಮಾಡಿ ಕ್ಷಮಿಸಿ. ನಾನು ಯಾವತ್ತೂ ಅದರ ವಿರುದ್ಧ ಮಾತನಾಡಬೇಕು ಎಂದು ಯೋಚನೆ ಮಾಡಿದವನಲ್ಲ. ಆ ಪದವನ್ನು ಬಳಕೆ ಮಾಡಬೇಕು ಎಂದು ಕೂಡ ನಾನು ಅಂದುಕೊಂಡಿಲ್ಲ. ನಾನಿದ್ದ ಜಾಗದಲ್ಲಿ ಎಲ್ಲರೂ ಎಳೆದಾಡುತ್ತಿದ್ದರು. ಅವರಿಗೆ ಗದರೋಕೆ ಹೋಗಿ ಈಕಡೆ ಬಂದೆ. ಆ ಮಾತು ಬಂದಿದ್ದು ತಪ್ಪಾಯ್ತು. ಇನ್ನು ಎಂದಿಗೂ ಆ ಮಾತನ್ನು ಆಡಲ್ಲ. ನಾನು ಪಂಪನ ದಾಸಾನು ದಾಸ. ಕನ್ನಡ ಕಟ್ಟಿದ ಆ ಮಹಾನ್ ವ್ಯಕ್ತಿಯ ಸೇವೆಗೆ ನಿಂತಿದ್ದೇನೆ. ಇದನ್ನು ದಯಮಾಡಿ ಬೆಳೆಸಬೇಡಿ. ಪತ್ರದಲ್ಲಿ ಬರೆದು ಪೋಸ್ಟ್ ಮಾಡಿ ಕ್ಷಮೆ ಕೇಳಿದ್ದೇನೆ. ಅದೇ ನನ್ನ ಧ್ವನಿ ಎಂದುಕೊಳ್ಳಿ' ಎಂದಿದ್ದಾರೆ ಅವರು.

### ಅಧ್ಯಯನಾಸಕ್ತರಿಗೆ ನಿರಾಸೆ: ಪ್ರತಿಕೃತಿ ಮಂಟಪ ಲೋಕಾರ್ಪಣೆ ಯಾವಾಗ?

# ಹಲ್ಮಿಡಿ ಕನ್ನಡ ಶಿಲಾ ಶಾಸನ: ಪೂರ್ಣಗೊಳ್ಳದ ಪುನರ್ ನಿರ್ಮಾಣ

**ಬೇಲೂರು:** ಕನ್ನಡದ ಪ್ರಥಮ ಶಿಲಾ ಶಾಸನ ದೊರೆತ ಬೇಲೂರು ತಾಲ್ಲೂಕಿನ ಹಲ್ಮಿಡಿ ಗ್ರಾಮದಲ್ಲಿ ಜೀರ್ಣೋದ್ಧಾರಗೊಂಡಿರುವ ಶಾಸನದ ಪ್ರತಿಕೃತಿ ಮಂಟಪದ ಲೋಕಾರ್ಪಣೆಗೆ ಕಾಲ ಕೂಡಿಬಂದಿಲ್ಲ. ಪರಿಣಾಮ ಹಲ್ಮಿಡಿ ಶಾಸನ ದೊರೆತ ಗ್ರಾಮ ಹಾಗೂ ಪ್ರತಿಕೃತಿ ಮಂಟಪ ವೀಕ್ಷಣೆಗೆ ಗ್ರಾಮಕ್ಕೆ ಆಗಮಿಸುವ ಪ್ರವಾಸಿಗರು ನಿರಾಶೆಯಿಂದ ವಾಪಸ್ಸಾಗುವ ಸ್ಥಿತಿ ಉಂಟಾಗಿದೆ.



ಗ್ರಾನೈಟ್ ರಾಜಶೇಖರ್

ಉಧ್ಯಮಿ ಹಾಗೂ ಕಾಂಗ್ರೆಸ್ ಮುಖಂಡ ಗ್ರಾನೈಟ್ ರಾಜಶೇಖರ್ ಅವರು ಹಲ್ಮಿಡಿ ಗ್ರಾಮಕ್ಕೆ ಭೇಟಿ ಕೊಟ್ಟಂತ ಸಂದರ್ಭ 2003 ರಲ್ಲಿ ಜಿಲ್ಲಾ ಕನ್ನಡ ಸಾಹಿತ್ಯ ಪರಿಷತ್ತು ಅಧ್ಯಕ್ಷರಾಗಿದ್ದ ಹೆಚ್.ಬಿ.ಮದನಗೌಡ ತಾಲ್ಲೂಕು ಕಸಾಪ ಅಧ್ಯಕ್ಷರಾಗಿದ್ದಂತ ಅನಂತರಾಜೇಅರಸು ಅವರ ಅವಧಿಯಲ್ಲಿ ಇಟ್ಟಿಗೆ ಸಿಮೆಂಟ್ ಹಾಗೂ ಕಲ್ಲು ಮಿಶ್ರಿತ ನಿರ್ಮಾಣಗೊಂಡ ಶಾಸನದ ಪ್ರತಿಕೃತಿ ಮಂಟಪ ವೀಕ್ಷಿಸಿದ್ದಾರೆ. ನಾಡಿಗೆ ಕನ್ನಡ ಭಾಷೆಯ ಶಿಲಾ ಶಾಸನ ಕೊಡುಗೆ ನೀಡಿದ ಗ್ರಾಮದಲ್ಲಿ ಶಾಶ್ವತವಾಗಿ ಇರಬೇಕಾದ ಶಾಸನದ ಪ್ರತಿಕೃತಿ ಮಂಟಪ ಇರುವ ಸ್ಥಿತಿ ಸರಿಯಲ್ಲ ಎಂದು ಭಾವಿಸಿ ಪ್ರತಿಕೃತಿ ಮಂಟಪವನ್ನು ಪೂರ್ಣ ಪ್ರಮಾಣದಲ್ಲಿ ಗ್ರಾನೈಟ್ ಶಿಲೆಯಿಂದಲೇ ನಿರ್ಮಿಸುವ ಇರಾದೆ ವ್ಯಕ್ತಪಡಿಸಿದ್ದರು. ಇದೇ ಕಾರಣಕ್ಕೆ ಗ್ರಾಮಸ್ಥರು ಹಾಗೂ ಅಂದಿನ ಜಿಲ್ಲಾಧ್ಯಕ್ಷರಾಗಿದ್ದ ಹೆಚ್.ಬಿ.ಮದನಗೌಡರು, ಸಂಶೋಧಕ ಶ್ರೀವತ್ಸ ಎಸ್.ವಟಿ ತಾ.ಕಸಾಪ ಅಧ್ಯಕ್ಷ ರಾಜೇಗೌಡರು ಸೇರಿದಂತೆ ಪ್ರಮುಖರ ಸಭೆಯನ್ನು ನಡೆಸಿ ವಿಸ್ಕೃತ ಚರ್ಚೆ ನಡೆಸಿದ್ದಲ್ಲದೆ ಲೋಕಾರ್ಪಣೆಗೆ ಮುಖ್ಯಮಂತ್ರಿಯವರನ್ನು ಆಹ್ವಾನಿಸಿ ಗ್ರಾಮದ ಸರ್ವೋತೋಮುಖ ಅಭಿವೃದ್ಧಿಗೆ ಹೆಚ್ಚಿನ ಅನುದಾನ ಪಡೆಯುವ ಸದುದ್ದೇಶವನ್ನು ರಾಜಶೇಖರ್ ವ್ಯಕ್ತಪಡಿಸಿದ್ದರು.



**ಉದ್ಘಾಟನೆ ಕಾರ್ಯ ಬೇಗ ಆಗಬೇಕು. ತಾ.ಕಸಾಪ ಅಧ್ಯಕ್ಷನಾಗಿ ಇದೀಗ ತಾನೆ ನೇಮಕಗೊಂಡಿದ್ದೇನೆ. ಕಾಮಗಾರಿ ಪ್ರಗತಿಯಲ್ಲಿದ್ದು ಏನೆಲ್ಲಾ ಆಗಿದೆ ಎಂಬ ಬಗ್ಗೆ ವಿಷಯ ತಿಳಿದು ಶೀಘ್ರ ಪೂರ್ಣಗೊಳಿಸಲು ಧಾನಿ ಗ್ರಾನೈಟ್ ರಾಜಶೇಖರ್ ಅವರನ್ನು ಕನ್ನಡ ಸಾಹಿತ್ಯ ಪರಿಷತ್ತು ವತಿಯಿಂದ ಭೇಟಿ ಮಾಡಿ ಮಾತುಕತೆ ನಡೆಸಿ ಆದಷ್ಟು ಬೇಗ ಲೋಕಾರ್ಪಣೆಗೆ ಮನವಿ ಮಾಡುತ್ತೇವೆ.**

**। ಮಾ.ನ.ಮಂಜೇಗೌಡ**
ತಾ.ಅಧ್ಯಕ್ಷ ಕಸಾಪ ಬೇಲೂರು

**“ 30 ಲಕ್ಷರೂ.ಗಳಿಗೂ ಅಧಿಕ ವೆಚ್ಚಮಾಡಿ ಗ್ರಾನೈಟ್ ಶಿಲೆಯಿಂದ ಪ್ರತಿಕೃತಿ ಮಂಟಪವನ್ನು ಗ್ರಾನೈಟ್ ರಾಜಶೇಖರ್ ಪುನರ್ ನಿರ್ಮಿಸಿಕೊಟ್ಟಿದ್ದಾರೆ, ಅದಕ್ಕಾಗಿ ಕೃತಜ್ಞತೆಗಳು. ಆದರೆ ಶಾಸನದ ಪ್ರತಿಕೃತಿ ಅಳವಡಿಕೆ ಸೇರಿದಂತೆ ಇನ್ನೂ ಕೆಲವೊಂದು ಕೆಲಸ ಬಾಕಿಯಿದ್ದು ಅದನ್ನು ಪೂರ್ಣಗೊಳಿಸಿಕೊಡಬೇಕಿದೆ. ಗ್ರಾಮಸ್ಥರು ಆರ್ಥಿಕವಾಗಿ ಸದೃಢರಲ್ಲದ ಕಾರಣ ರಾಜಶೇಖರ್ ಅವರು ಡಿಸೆಂಬರ್ ಅಂತ್ಯದೊಳಗೆ ಲೋಕಾರ್ಪಣೆ ಕಾರ್ಯ ಪೂರ್ಣಗೊಳಿಸಿಕೊಡಲಿ ಎಂಬುದೆ ನಮ್ಮ ಮನವಿ.**

**-ಚನ್ನೇಗೌಡ**
ಕಾರ್ಯದರ್ಶಿ, ಹಲ್ಮಿಡಿ ಶಾಸನ ಅಭಿವೃದ್ಧಿ ಟ್ರಸ್ಟ್ ಕಾರ್ಯದರ್ಶಿ

ಎಲ್ಲರ ಒಪ್ಪಿಗೆಯಂತೆ ಪ್ರತಿಕೃತಿ ಮಂಟಪ ಪುನರ್ ನಿರ್ಮಾಣದ ಮಾಡಲು ಯೋಜನೆ ರೂಪಿಸಿ 2023 ಫೆಬ್ರವರಿಯಿಂದ ಕಾಮಗಾರಿ ಆರಂಭಿಸಲಾಯಿತು. ಅಂದಾಜು 30 ಲಕ್ಷ ರೂ. ವೆಚ್ಚದಲ್ಲಿ ಏಕಶಿಲೆಯ ಕಂದಬರ ಛತ್ರಿಯ ಲಾಂಛನದೊಂದಿಗೆ ಇಡಿ ಮಂಟಪವನ್ನು ನಿರ್ಮಿಸಲಾಯಿತು. ಆದರೆ ಒಂದು, ಎರಡು ತಿಂಗಳೊಳಗೆ ಪೂರ್ಣಗೊಳ್ಳಬೇಕಿದ್ದ ಪ್ರತಿಕೃತಿ ಮಂಟಪದ ಕೆಲಸ ಪೂರ್ಣಗೊಂಡಿಲ್ಲ. ಶಾಸನದ ಪ್ರತಿಕೃತಿ ಅಳವಡಿಸಿಲ್ಲ, ಪೂರ್ವ ಹಳೆಗನ್ನಡ ಹಾಗೂ ಹಳೆಗನ್ನಡಕ್ಕೆ ಅರ್ಥ, ಅಂದು ಲೋಕಾರ್ಪಣೆ ಮಾಡಿದ ಪ್ರಮುಖರ ಹಾಗೂ ಫಲಕ, ಗೇಟ್ ಅಳವಡಿಕೆ ಕಾರ್ಯ ಆಗಬೇಕಿದೆ.

ಸ್ವಹಿತಾಸಕ್ತಿಯಿಂದ ಸ್ವಂತ ಹಣ ಭರಿಸಿ ಶಿಲಾ ಪ್ರತಿಕೃತಿ ಮಂಟಪ ನಿರ್ಮಿಸಿಕೊಟ್ಟ ಧಾನಿ ಗ್ರಾನೈಟ್ ರಾಜಶೇಖರ್ ಅವರು ಉಳಿಕೆ ಕೆಲಸ ಪೂರ್ಣಗೊಳಿಸುವಿಕೆಗೆ ಹಿನ್ನಡೆ ಏಕಾಗುತ್ತಿದೆ ಎಂಬುದು ತಿಳಿದಿಲ್ಲ. ಪುನರ್ ನಿರ್ಮಾಣ ಕಾರ್ಯಕ್ಕೆ 30 ಲಕ್ಷರೂ. ದಾಟಿದ್ದು ಹೆಚ್ಚಿನ ವೆಚ್ಚವೇ ಆಗಿದೆ.

**“ ಆದಷ್ಟು ಬೇಗ ಪುನರ್ ನಿರ್ಮಾಣಕಾರ್ಯ ಪೂರ್ಣಗೊಳ್ಳಬೇಕು. ಮೂಲ ಶಾಸನ ವೀಕ್ಷಣೆಗೆ ಬೆಂಗಳೂರಿಗೆ ಹೋಗಲಾಗದವರಿಗೆ ಹಲ್ಮಿಡಿ ಶಾಸನದ ಸ್ವರೂಪ, ಲಿಪಿ ಅಧ್ಯಯನಕ್ಕೆ ಶಾಸನದ ತೌವರಿನಲ್ಲೆ ಅರ್ಥ ಮಾಡುವಂತೆ ಮಾಡುವುದು ಪ್ರತಿಕೃತಿ ಮಂಟಪದ ಉದ್ದೇಶ. ಹಾಲಿ ಪುನರ್ ನಿರ್ಮಾಣವಾಗುತ್ತಿರುವ ಪತಿಕೃತಿ ಮಂಟಪಕ್ಕೆ ನಾಲ್ಕು ಬದಿಗಳಲ್ಲಿ ಅಳವಡಿಸಬೇಕಾದ ಶಾಸನ ಸಾಹಿತ್ಯ, ಅದರ ಅರ್ಥ, ಮೂಲ ನಿರ್ಮಾಪಕರು ಮತ್ತು ಪ್ರಸ್ತುತ ನಿರ್ಮಾಪಕರು, ಪ್ರತಿಕೃತಿ ವಿನ್ಯಾಸಕಾರರು ಈ ಕುರಿತಾದ ವಿವರಗಳನ್ನು ಈಗಾಗಲೇ ಒದಗಿಸಿದ್ದೇನೆ.**

**। ಡಾ.ಶ್ರೀವತ್ಸ ಎಸ್.ವಟಿ.** ಸಂಶೋಧಕರು

ಆರಂಭದಲ್ಲಿ ಅಂದಾಜು 15 ಲಕ್ಷರೂ. ವೆಚ್ಚ ಆಗಬಹುದೆಂದು ಊಹಿಸಲಾಗಿತ್ತಾದರೂ ಅಂತಿಮದಲ್ಲಿ 30 ಲಕ್ಷರೂ. ದಾಟಿದ್ದರಿಂದ ಲೋಕಾರ್ಪಣೆ ಕಾರ್ಯಕ್ರಮದ ಖರ್ಚು ವೆಚ್ಚ ಗ್ರಾಮಸ್ಥರು ಅಂದರೆ ಹಲ್ಮಿಡಿ ಗ್ರಾಮಾಭಿವೃದ್ಧಿ ಟ್ರಸ್ಟ್ ಹಾಗೂ ಕಸಾಪ, ಇನ್ನಿತರ ಕನ್ನಡಪರ ಸಂಘಟನೆಗಳು ಭರಿಸಲಿ ಎಂಬ ಆಲೋಚನೆ ಏನಾದರೂ ಇದೆಯಾ ಎಂಬುದು ಪ್ರಶ್ನೆ ಎದುರಾಗಿದೆ.

ಒಟ್ಟಾರೆ, ಕನ್ನಡ ನಾಡಿಗೆ ಶಿಲಾ ಶಾಸನ ಕೊಡುಗೆ ನೀಡಿದ ನಾಡಿನ ಕನ್ನಡಿಗರ ಹೆಮ್ಮೆಯ ಸಂಕೇತವಾದ ಹಲ್ಮಿಡಿ ಶಾಸನದ ಪ್ರತಿಕೃತಿ ಮಂಟದ ಪುನರ್ ನಿರ್ಮಾಣದ ಲೋಕಾರ್ಪಣೆ ಆದಷ್ಟು ಶೀಘ್ರ ನೆರವೇರಲಿ, ಇದಕ್ಕಾಗಿ ಕನ್ನಡ ಸಾಹಿತ್ಯ ಪರಿಷತ್ತಿನ ರಾಜ್ಯ, ಜಿಲ್ಲೆ, ತಾಲ್ಲೂಕು ಪದಾಧಿಕಾರಿಗಳು ಹಾಗೂ ಗ್ರಾಮಸ್ಥರು, ಕನ್ನಡಪರ ಸಂಘಟನೆ ಪ್ರಮುಖರು ಗನಬ ಹರಿಸಲಿ ಎಂಬುದೇ ಕನ್ನಡಿಗರ ಆಶಯ.

## ಬಿತ್ತಿದಂತೆ ಬೆಳೆ ಎಂಬುದು ಎಷ್ಟು ಸತ್ಯವೋ ಬೀಜದಂತೆ ಬೆಳೆ ಎಂಬುವುದು ಅಷ್ಟೇ ಸತ್ಯ

**ವಿಜಯಪುರ:** ಹಿರಿಯರ ನಾಡನುಡಿಯಂತೆ ಭಿತ್ತಿದಂತೆ ಬೀಜ ಎಂಬ ಮಾತು ಎಷ್ಟು ಸತ್ಯವೋ ಇದೀಗ ಅದೇ ರೀತಿ ಬೀಜದಂತೆ ಬೆಳೆ ಎಂಬುವ ಮಾತು ಸಹ ಅಷ್ಟೇ ಸತ್ಯವಾಗಿದ್ದು ಬೀಜಕ್ಕೆ ಮಾಡುವ ಉಪಚಾರ ಮನೆಗೆ ಹಾಕುವ ಅಡಿಪಾಯದಂತೆ, ಆದ ಕಾರಣ ಎಲ್ಲಾ ರೈತರು ಮುನ್ನ ಬಿತ್ತನೆಗೆ ಮುನ್ನ ಬೀಜಕ್ಕೆ ಮಾಡುವ ಉಪಚಾರದ ಬಗ್ಗೆ ಹೆಚ್ಚಿನ ಗಮನ ಹರಿಸಬೇಕೆಂದು ಮಣ್ಣು ವಿಜ್ಞಾನಿ ಡಾ. ದಿಲೀಪ್ ರವರು ತಿಳಿಸಿದರು,

ಇಲ್ಲಿನ ರೈತ ಸಂಪರ್ಕ ಕೇಂದ್ರದಲ್ಲಿ ಕೃಷಿ ಇಲಾಖೆ ವತಿಯಿಂದ ಏರ್ಪಡಿಸಲಾಗಿದ್ದ ಬಿಜೋಪಚಾರ, ಮಣ್ಣು ಸಂರಕ್ಷಣೆ, ಸುರಕ್ಷಿತ ಕೀಟನಾಶಕಗಳ ಬಳಕೆ ಬಗ್ಗೆ ರೈತರಿಗೆ ಅರಿವು ಮೂಡಿಸುವ ಕಾರ್ಯಕ್ರಮದಲ್ಲಿ ಪ್ರಾತ್ಯಕ್ಷಿಕೆಗಳ ಮೂಲಕ ಮಾತನಾಡುತ್ತಿದ್ದರು.

ಪ್ರಗತಿಪರ ರೈತರಾದ ಮೂರ್ತಿರವರು ಮಾತನಾಡಿ, ಪ್ರತಿಯೊಬ್ಬ ಮನುಷ್ಯರಿಗೆ 40 ವರ್ಷಗಳ ನಂತರ ಕ್ಯಾಲ್ಸಿಯಂ, ರಂಜಕ, ಪೊಟ್ಯಾಶಿಯಂ ಮುಂತಾದವುಗಳ ಕೊರತೆಯಿಂದ ಮೂಳೆಗಳನ್ನು ಸವೆಯುವಿಕೆ, ಮಧುಮೇಹ, ರಕ್ತದೊತ್ತಡ ಮತ್ತಿತರೆ ರೋಗಗಳಿಗೆ ತುತ್ತಾಗುತ್ತಾರೆ ಅದೇ ರೀತಿ ಮನುಷ್ಯನಿಗೆ ಅವಶ್ಯಕವಿರುವ ಈ ಪೋಷಕಾಂಶಗಳನ್ನು ನಾವು ನಮ್ಮ ಬೆಳೆಗಳಿಗೂ ಮೂಲದಲ್ಲಿಯೇ ನೀಡಿದಲ್ಲಿ ಅದನ್ನು ಬಳಸುವ ಮನುಷ್ಯರಿಗೂ ಇವುಗಳ ಕೊರತೆ ಆಗದಂತೆ ನೋಡಿಕೊಳ್ಳಬಹುದು, ಭೂಮಿ ಆರೋಗ್ಯವಾಗಿದ್ದರೆ ಅದರಿಂದ ಬರುವ ಬೆಳೆಯು ಉತ್ತಮವಾಗಿರುತ್ತದೆ, ಅದನ್ನು ಬಳಸುವ ಮನುಷ್ಯನ ದೇಹದ ಆರೋಗ್ಯವು ಚೆನ್ನಾಗಿರುತ್ತದೆ, ಮನುಷ್ಯ ಅರೋಗ್ಯವಾಗಿದ್ದರೆ ದೇಶದ ಆರೋಗ್ಯವು ಚೆನ್ನಾಗಿರುತ್ತದೆ ಎಂದು ತಿಳಿಸಿದರು.

ಒಂದು ಕೆಜಿ ರಾಗಿಗೆ ಎರಡು ಗ್ರಾಂ ಬ್ಯಾರಸಿನ್ ಬೆರೆಸುವುದರೊಂದಿಗೆ ಕಪ್ಪು ಚುಕ್ಕೆ, ಬೆಂಕಿ ರೋಗ ಬಾರದಂತೆ ತಡೆಯಬಹುದು ಮಣ್ಣಿನಲ್ಲಿ ಒಳ್ಳೆಯ ಸೂಕ್ಷ್ಮಾಣು ಜೀವಿಗಳು ಹಾಗೂ ಕೆಟ್ಟ ಸೂಕ್ಷ್ಮಾಣು ಜೀವಿ ಎಂಬುದಾಗಿದ್ದು ಒಳ್ಳೆಯ ಸೂಕ್ಷ್ಮಾಣು ಜೀವಿಗಳನ್ನು ಹೆಚ್ಚು ಬೆಳೆಸಲು ಅವಶ್ಯಕ ಕ್ರಮಗಳನ್ನು ಕೈಗೊಳ್ಳಬೇಕಾಗಿದೆ ಎಂದು ತಿಳಿಸಿದರು.

ಈ ಕಾರ್ಯಕ್ರಮದಲ್ಲಿ ಸಹಾಯಕ ಕೃಷಿ ನಿರ್ದೇಶಕರಾದ ಎನ್ ಸುಶೀಲಮ್ಮ ರವರು ಹೋಬಳಿಯ ಬಿಜವಾರ ಪಂಚಾಯಿತಿ ವ್ಯಾಪ್ತಿಯ ರೈತರಿಗೆ ರಾಷ್ಟ್ರೀಯ ಆಹಾರ ಭದ್ರತಾ ಯೋಜನೆ ಅಡಿಯಲ್ಲಿ ರಾಗಿ ಪ್ರಾತ್ಯಕ್ಷಿಕೆ ಮಾಡಿ ಸುಮಾರು 78.75 ಹೆಕ್ಟೇರ್ ಜಮೀನಿನ 98 ಮಂದಿ ರೈತರಿಗೆ ಉಚಿತವಾಗಿ ಬಿತ್ತನೆ ರಾಗಿಯನ್ನು ವಿತರಿಸಿದರು. ಇದೇ ಸಂದರ್ಭದಲ್ಲಿ ದೇವನಹಳ್ಳಿ ತಾಲೂಕು ಪಂಚಾಯಿತಿ ಮಾಜಿ ಅಧ್ಯಕ್ಷರಾದ ನಾರಾಯಣಸ್ವಾಮಿ, ವಿಜಯಪುರ ರೈತ ಸಂಪರ್ಕ ಕೇಂದ್ರದ ಕೃಷಿ ಅಧಿಕಾರಿ ಶ್ವೇತ, ತಾಂತ್ರಿಕ ವ್ಯವಸ್ಥಾಪಕಿ ಸೌಮ್ಯ, ಸಹಾಯಕರಾದ ವಿಜಯ್ ಹಾಗೂ ಕೃಷಿ ಸಖಿಯರು ಉಪಸ್ಥಿತರಿದ್ದರು. ಆಗಮಿಸಿದ್ದ ಎಲ್ಲಾ ರೈತ ಬಾಂಧವರಿಗೂ ಊಟದ ವ್ಯವಸ್ಥೆ ಮಾಡಲಾಗಿತು.



## ಇಂದು ಷೇಜ ಆರತಿಯವರೆಗೆ ಭಜನೆ

**ಬೆಂಗಳೊರು:** ಬೆಂಗಳೊರಿನ ತ್ಯಾಗರಾಜ ನಗರದ ಸಾಯಿ ಆದ್ಯಾತ್ಮ ಕೇಂದ್ರದಲ್ಲಿ ಇಂದಿನಿಂದ ಎರಡು ದಿನಗಳಕಾಲ ವಿಶೇಷ ಕಾರ್ಯಕ್ರಮವನ್ನ ಆಯೋಜಿಸಿದ್ದು ಅದರ ನಿಮಿತ್ತ ಇಂದು ಶನಿವಾರ ದೇವಸ್ಥಾನದ ಆವರಣದಲ್ಲಿ ಬೆಳಗಿನ 9 ಗಂಟೆಯಿಂದ ರಾತ್ರಿಯ ಷೇಜ ಆರತಿಯವರೆಗೆ ಭಜನೆಯನ್ನ ಎರ್ಪಡಿಸಲಾಗಿದೆ ಈ ಕಾರ್ಯಕ್ರಮದಲ್ಲಿ ನಗರದ ಮತ್ತು ಸುತ್ತಮುತ್ತಲಿನ ಹೆಸರಾಂತ ಭಜನಾ ಮಂಡಳಿ ಮತ್ತು ಸಂಘದವರು ಭಾಗವಹಿಸಲಿದ್ದಾರೆ. ದೇವಸ್ಥಾನವನ್ನ ಮತ್ತು ದೇವರನ್ನ ವಿಶೇಷವಾಗಿ ಹೊವುಗಳಿಂದ ಅಲಂಕರಿಸಲಾಗುವುದು. ಈ ಕಾರ್ಯಕ್ರಮಕ್ಕೆ ಸದ್ಭಕ್ತರು ಆಗಮಿಸಲು ಆಡಳಿತ ಮಂಡಳಿಯವರು ಕೋರಿದ್ದಾರೆ.

### ಎಂ.ಎಸ್.ಪುಣ್ಯಾಗೆ ಬೆಳ್ಳಿ –ಕಂಚು : ವರ್ಷಿಣಿಗೆ ಕಂಚಿನ ಪದಕ

# ಮೈಸೂರು ಶೂಟಿಂಗ್ ಕ್ಲಬ್‌ಗೆ 3 ಪದಕ

**ಬೆಂಗಳೂರು :** ಕರ್ನಾಟಕ ಸ್ಟೇಟ್ ರೈಫಲ್ ಅಸೋಸಿಯೇಷನ್ ವತಿಯಿಂದ ಬೆಂಗಳೂರಿನ ಸಾಯಿ ಶೂಟಿಂಗ್ ರೇಂಜ್‌ನಲ್ಲಿ ನಡೆಯುತ್ತಿರುವ 12ನೇ ಶೂಟಿಂಗ್ ಸ್ಪರ್ಧೆಯಲ್ಲಿ ಮೈಸೂರು ಶೂಟಿಂಗ್ ಕ್ಲಬ್ ಶೂಟರ್‌ಗಳು 3 ವೈಯುಕ್ತಿಕ ಪದಕಗಳನ್ನು ಮುಡಿಗೇರಿಸಿಕೊಂಡು ಕೀರ್ತಿ ತಂದಿದ್ದಾರೆ.

ಮೈಸೂರು ಕ್ಲಬ್‌ನ 6 ಶೂಟರ್‌ಗಳು ಪ್ರಥಮಬಾರಿಗೆ .177 ಮತ್ತು .22(50ಮೀ.ಫೈರ್ ಆರ್ಮ್ಸ್)ಪೀಪ್ ಸೈಟ್ ರೈಫಲ್ ಸ್ಪರ್ಧೆಯಲ್ಲಿ ಭಾಗವಹಿಸಿ ದಕ್ಷಿಣ ವಲಯಕ್ಕೆ ಆಯ್ಕೆಯಾಗಿದ್ದಾರೆ.

ಪುಣ್ಯಗೆ ಬೆಳ್ಳಿ ಪದಕ : ಮೈಸೂರು ಶೂಟಿಂಗ್ ಕ್ಲಬ್ ನಲ್ಲಿ ಕಳೆದ ಎರಡು ತಿಂಗಳಿಂದ ತರಬೇತಿ ಪಡೆಯುತ್ತಿದ್ದ ಜೆಎಸ್‌ಎಸ್ ಮಹಿಳಾ ಕಾಲೇಜಿನಲ್ಲಿ ವಿದ್ಯಾರ್ಥಿನಿ ಮಂಡ್ಯದ ಎಂ.ಎಸ್.ಪುಣ್ಯ ಸ್ಪರ್ಧೆಯಲ್ಲಿ ಬೆಳ್ಳಿ ಮತ್ತು ಕಂಚಿನ ಪದಕಗಳನ್ನು ಗಳಿಸಿ ವಿಜೇತರಾಗಿದ್ದಾರೆ.

ವರ್ಷಿಣಿಗೆ ಕಂಚು : ಮೈಸೂರಿನ ಪಿಯುಸಿ ವಿದ್ಯಾರ್ಥಿನಿ ಪಿ.ವರ್ಷಿಣಿ ಕಂಚಿನ ಪದಕ ಗಳಿಸಿ ಕೀರ್ತಿ ತಂದಿದ್ದಾರೆ. ಶೂಟರ್ ಸ್ಪರ್ಧೆಯಲ್ಲಿ ಪಾಲ್ಗೊಂಡಿದ್ದ ಹಾಸನದ ತನ್ಯೆಚಂದ್ರ, ನಂದಿತಾ ರವಿಚಂದ್ರ, ಕಾವ್ಯ, ಬೆಂಗಳೂರಿನ ಚೇತನ ಓಬುಲಕ್ಷ್ಮಿ ಉತ್ತಮ ಪ್ರದರ್ಶನ ನೀಡಿ ದಕ್ಷಿಣ ವಲಯಕ್ಕೆ ಆಯ್ಕೆಯಾಗಿದ್ದಾರೆ.

ದಶನ್‌ಕುಮಾರ್ ಆಯ್ಕೆ : ಮೈಸೂರು ಶೂಟಿಂಗ್ ಕ್ಲಬ್ ಕೂಚ್ ಹಾಗೂ ರೈಫಲ್ ತರಬೇತುದಾರರಾದ ಬಿ.ಆರ್.ದರ್ಶನ್‌ಕುಮಾರ್ ಸ್ಪರ್ಧೆಯಲ್ಲಿ




ಉತ್ತಮ ಪ್ರದರ್ಶನ ನೀಡಿ ದಕ್ಷಿಣ ವಲಯಕ್ಕೆ ಆಯ್ಕೆಯಾಗಿದ್ದಾರೆ.

ಮೈಸೂರು ಶೂಟಿಂಗ್ ಕ್ಲಬ್ ಕೋಚ್ ಪ್ಯಾರ ಶೂಟರ್ ಬಿ.ಆರ್.ದರ್ಶನ್‌ಕುಮಾರ್ ಅವರಿಂದ ತರಬೇತಿ ಪಡೆದು ಮೈಸೂರು ವಿಭಾಗಕ್ಕೆ ಕೀರ್ತಿ ತಂದ ಕ್ಲಬ್‌ನ 7 ಶೂಟರ್‌ಗಳನ್ನು ರಾಷ್ಟ್ರಮಟ್ಟದ ಶೂಟರ್ ಕೋಚ್ ಹುಬ್ಬಳ್ಳಿಯ ರವಿಚಂದ್ರ, ಬಾಳೆಹೊಸೂರು ಅಭಿನಂದಿಸಿದ್ದಾರೆ.

### ಇತಿಹಾಸದಲ್ಲೇ ಪ್ರಥಮ ಸಾಧನೆ

**ವಿಕಲಚೇತನರಾದರೂ ಯುವಕರಿಗೆ ಸ್ಪೂರ್ತಿಯ ಸೆಲೆಯಾಗಿರುವ ಪ್ಯಾರ ಶೂಟರ್ ಬಿ.ಆರ್ .ದರ್ಶನ್‌ಕುಮಾರ್ ರೈಫಲ್ ಶೂಟಿಂಗ್‌ನಲ್ಲಿ ಆಸಕ್ತಿ ಹೊಂದಿರುವ ಸಾಹಸಿಗಳಿಗೆ ಉತ್ತಮ ತರಬೇತಿ ನೀಡಿ ಕರ್ನಾಟಕ ಸ್ಟೇಟ್ ರೈಫಲ್ ಅಸೋಸಿಯೇಷನ್ ವತಿಯಿಂದ ಬೆಂಗಳೂರಿನ ಸಾಯಿ ಶೂಟಿಂಗ್ ರೇಂಜ್‌ನಲ್ಲಿ ನಡೆದ ಸ್ಪರ್ಧೆಯಲ್ಲಿ ಎಲ್ಲಾ ಸ್ಪರ್ಧಿಗಳನ್ನು ದಕ್ಷಿಣವಲಯಕ್ಕೆ ಆಯ್ಕೆಯಾಗುವಂತೆ ಮಾಡುವ ಮೂಲಕ ಇತಿಹಾಸ ಸೃಷ್ಟಿಸಿದ್ದಾರೆ. ಮುಂಬರುವ ದಿನಗಳಲ್ಲಿ ಮೈಸೂರು ವಿಭಾಗದಿಂದ ಹೆಚ್ಚು ಮಂದಿ ರಾಜ್ಯ ಹಾಗೂ ರಾಷ್ಟ್ರಮಟ್ಟಕ್ಕೆ ಸ್ಪರ್ಧಿಗಳನ್ನು ಕಳಿಸಿಕೊಡುವ ಕನಸು ಹೊತ್ತ ದರ್ಶನ್‌ಕುಮಾರ್ ಮೈಸೂರಿನಲ್ಲಿ ಹೈಟೆಕ್ ಶೂಟಿಂಗ್ ಕ್ಲಬ್ ತೆರೆಯುವ ಯೋಜನೆ ರೂಪಿಸಿದ್ದಾರೆ. ಪೀಪ್‌ಸೈಟ್ ರೈಫಲ್ ತರಬೇತಿ ಪಡೆಯಲಿಚ್ಛಿಸುವವರು ಮೊ. 9986950999 ಸಂಖ್ಯೆಯನ್ನು ಸಂಪರ್ಕಿಸಬಹುದು.**

## ಪೋಷಕರು ಮಕ್ಕಳಿಗೆ ಉತ್ತಮ ವಿದ್ಯಾಭ್ಯಾಸ ಕೊಡಿಸಿ

**ವಿಜಯಪುರ:** ಪೋಷಕರು ಏನೇ ತೊಂದರೆ ಇದ್ದರೂ ಮಕ್ಕಳಿಗೆ ಉತ್ತಮ ವಿದ್ಯಾಭ್ಯಾಸ ಕೊಡಿಸುವ ಮೂಲಕ ಸರಕಾರದ ಯೋಜನೆಗಳನ್ನು ಬಳಸಿಕೊಳ್ಳಬೇಕು ಎಂದು ಜಿಲ್ಲಾ ಶರಣ ಸಾಹಿತ್ಯ ಪರಿಷತ್ ಅಧ್ಯಕ್ಷ ಚಂದ್ರಶೇಕರ್ ಹಡಪದ್ ತಿಳಿಸಿದರು.

ಸಮೀಪದ ನಾರಾಯಣಪುರ ಗ್ರಾಮದ ಸರಕಾರಿ ಫ್ರೌಡಶಾಲೆಯಲ್ಲಿ ಶುಕ್ರವಾರದಂದು ತಾಲೂಕು ಶರಣ ಸಾಹಿತ್ಯ ಪರಿಷತ್ತುವತಿಯಿಂದ ಸರಕಾರಿ ಶಾಲೆಯ ಮಕ್ಕಳಿಗೆ ಉಚಿತ ನೋಟ್ ಪುಸ್ತಕಗಳು ವಿತರಿಸಿ ಮಾತನಾಡಿದರು.

ಸರಕಾರಿ ಶಾಲೆಗಳಲ್ಲಿ ಕುಸಿಯುತ್ತಿರುವ ದಾಖಲಾತಿಯನ್ನು ಆಯಾ ಶಾಲೆಗಳ ಎಸ್‌ಡಿಎಂಸಿ ಹಾಗೂ ಶಾಲಾ ಶಿಕ್ಷಕರು ಮಕ್ಕಳ ದಾಖಲಾತಿ ಹೆಚ್ಚಿಸುವಲ್ಲಿ ಮುತುವರ್ಜಿ ವಹಿಸಬೇಕು. ಸರಕಾರಿ ಶಾಲೆಗಳ ಕಡೆಗೆ ಮಕ್ಕಳನ್ನು ಸೆಳೆಯುವುದು ಮಾತ್ರವಲ್ಲ ಅಲ್ಲಿನ ಸೌಲಭ್ಯಗಳ ಬಗ್ಗೆಯು ಪೋಷಕರಿಗೆ ಮಾಹಿತಿ ನೀಡಬೇಕು ಎಂದು ತಿಳಿಸಿದರು.

ಮಕ್ಕಳಿಗೆ ನೀಡುವ ಉಡುಗೊರೆ ಶಿಕ್ಷಣ: ನಾವು ಜೀವನದಲ್ಲಿ ಏನೇ ಸಾಧಿಸಿದರೂ, ಎಷ್ಟೆ? ಎತ್ತರಕ್ಕೆ ಹಾಗೂ ಉನ್ನತ ಸ್ಥಾನಕ್ಕೆ ಏರಬೇಕಾದರೆ, ಅದಕ್ಕೆ ಮುಖ್ಯ ಕಾರಣ ತಾಯಿ. ಹಾಗೇ ಹೆತ್ತವರು ಮಕ್ಕಳಿಗೆ ನೀಡುವ ಅತ್ಯುತ್ತಮ ಉಡುಗೊರೆ ಶಿಕ್ಷಣವಾಗಿದೆ ಎಂದರು.

ತಾಲೂಕು ಶರಣ ಸಾಹಿತ್ಯ ಪರಿಷತ್ತು ಅಧ್ಯಕ್ಷ ಮ..ಸುರೇಶ್ ಬಾಬು ಮಾತನಾಡಿ, ಪೋಷಕರೂ ಕೂಡ ಮಕ್ಕಳ ಪುಸ್ತಕ ಪ್ರೇಮ ಬೆಳೆಸಲು ಪೂರಕವಾಗಿ ಸ್ಪಂದಿಸಬೇಕು. ಅಂದರೆ ಉತ್ತಮವಾದ ಓದಿಗೆ ಎಲ್ಲಾ ರೀತಿಯ ಅನುಕೂಲಕರ ವಾತಾವರಣ ಕಲ್ಪಿಸಿಕೊಡಬೇಕು. ನಿಮ್ಮ ಮಕ್ಕಳಿಗೆ ಏನಾದರೂ ಉಡುಗೊರೆ ಕೊಡುವ ಅಭ್ಯಾಸ ಇಟ್ಟುಕೊಂಡಿದ್ದರೆ, ಪುಸ್ತಕವನ್ನೇ ಕೊಡಿ. ಮಕ್ಕಳೂ ಕೂಡ ಓದಿನ ಮೂಲಕವೇ ಸಂಪೂರ್ಣವಾದ ಓದು ಬರಹದ ಕೌಶಲ ಮಾತ್ರವಲ್ಲ, ಕ್ರಿಯಾಶೀಲ ಯೋಚನಾ ವಿಧಾನವನ್ನು ಬೆಳೆಸಿಕೊಳ್ಳುತ್ತಾರೆ ಎಂದರು.

ಮುಖ್ಯಶಿಕ್ಷಕ ಕೋಟ್ರೇಶ್ ಮಾತನಾಡಿ, ನಮ್ಮ ಶಾಲೆಯಲ್ಲಿ ಮಕ್ಕಳ ಉತ್ತಮ ವಿದ್ಯಾಭ್ಯಾಸ ಕಲಿಯಲೆಂದು ಸರಕಾರದಲ್ಲಿ ಸಿಗುವಂತಹ ಎಲ್ಲಾ ಸೌಲಭ್ಯಗಳ ಜೊತೆಗೆ ಧಾನಿಗಳ ಸಹಾಯ ಪಡೆದು ಮಕ್ಕಳ ವಿದ್ಯಾಭ್ಯಾಸಕ್ಕೆ ಒತ್ತು ನೀಡಲಾಗುತ್ತಿದೆ ಮಕ್ಕಳು ಹೆಚ್ಚಿಗೆ ಸರಕಾರಿ ಶಾಲೆಗಳಿಗೆ ದಾಖಲಾತಿ ಪಡೆದುಕೊಂಡು ಉತ್ತಮ ವಿದ್ಯಾಭ್ಯಾಸಕ್ಕೆ ಒತ್ತು ಕೊಡಬೇಕು ಎಂದರು. ಈ ಸಂದರ್ಭದಲ್ಲಿ ಶರಣ ಸಾಹಿತ್ಯ ಪರಿಷತ್ತು ಸದಸ್ಯರಾದ ಭಾರತಿ ಜಗದೀಶ್, ಎಸ್.ಡಿ.ಎಂ.ಸಿ ಅಧ್ಯಕ್ಷರಾದ ರೂಪ, ಗ್ರಾಮ.ಪಂ. ಸದಸ್ಯ ಮುರುಳಿ, ಕೋಮಲ ಬಸವರಾಜು, ಶಿಕ್ಷಕರಾದ ಕನ್ನಡ ಸಹಶಿಕ್ಷಕ ಗಂಗರಾಜು, ದೈಹಿಕ ಶಿಕ್ಷಕ ಬಾಲಚಂದ್ರ, ಅಂಜನೇಯ್ಯರೆಡ್ಡಿ, ಎನ್.ಸುಷ್ಮ, ಎಂ.ವೆಂಕಟೇಶಪ್ಪ, ಡಿ.ಯಾಸ್ಮಿನ್, ಎಲ್.ಸೌಂದರ್ಯ, ವಿದ್ಯಾರ್ಥಿಗಳು ಹಾಜರಿದ್ದರು.



## ದ್ವಿಚಕ್ರ ವಾಹನ(ಬೈಕ್) ರಿಪೇರಿ ಮತ್ತು ಸೇವೆ ಉಚಿತ ತರಬೇತಿ

**ಬೆಂಗಳೂರು ಗ್ರಾಮಾಂತರ:** ಶ್ರೀ ಧರ್ಮಸ್ಥಳ ಮಂಜುನಾಥೇಶ್ವರ ಶಿಕ್ಷಣ ಟ್ರಸ್ಟ್ ಮತ್ತು ಕೆನರಾ ಬ್ಯಾಂಕ್‌ನ ಸಹಯೋಗದಲ್ಲಿ ನಡೆಸುತ್ತಿರುವ ರುಡ್‌ಸೆಟ್ ಸಂಸ್ಥೆಯ ವತಿಯಿಂದ ಆಯೋಜಿಸಲಾಗಿರುವ ದ್ವಿಚಕ್ರ ವಾಹನ ರಿಪೇರಿ ಮತ್ತು ಸೇವೆ ಕುರಿತ 30 ದಿನಗಳ ಉಚಿತ ತರಬೇತಿಯನ್ನು ಆಗಸ್ಟ್ 21 ರಿಂದ ಹಮ್ಮಿಕೊಳ್ಳಲಾಗಿದ್ದು, ಬೆಂಗಳೂರು ಗ್ರಾಮಾಂತರ, ಬೆಂಗಳೂರು ನಗರ, ರಾಮನಗರ ಹಾಗೂ ತುಮಕೂರು ಜಿಲ್ಲಾ ವ್ಯಾಪ್ತಿಯ ಗ್ರಾಮೀಣ ಆಸಕ್ತ ನಿರುದ್ಯೋಗಿ ಯುವಕರಿಂದ ಅರ್ಜಿ ಆಹ್ವಾನಿಸಲಾಗಿದೆ. ಆಸಕ್ತರು 18 ರಿಂದ 45 ವರ್ಷ ವಯೋಮಾನದವರಾಗಿದ್ದು, ಕನ್ನಡ ಭಾಷೆ ಓದಲು ಮತ್ತು ಬರೆಯಲು ಬಲ್ಲವರಾಗಿರಬೇಕು. ಬಿಪಿಎಲ್ ಕಾರ್ಡ್ ಅಥವಾ ಜಾಬ್ ಕಾರ್ಡ್ ಹಾಗೂ ಆಧಾರ್ ಕಾಡ್ ‍ನ್ನು ಕಡ್ಡಾಯವಾಗಿ ಹೊಂದಿರಬೇಕು. ಅರ್ಜಿ ಸಲ್ಲಿಸಲು ಜುಲೈ 31 ಕೊನೆಯ ದಿನವಾಗಿದೆ. ತರಬೇತಿಯು ಕಡ್ಡಾಯವಾಗಿ ವಸತಿಯುತವಾಗಿದ್ದು, ತರಬೇತಿಯ ಅವಧಿಯಲ್ಲಿ ಉಚಿತವಾಗಿ ಊಟ ಮತ್ತು ವಸತಿ ನೀಡಲಾಗುವುದು ಹಾಗೂ ತರಬೇತಿ ಪೂರ್ಣಗೊಂಡ ನಂತರ ಕೇಂದ್ರ ಸರ್ಕಾರದ ಗ್ರಾಮೀಣಾಭಿವೃದ್ಧಿ ಸಚಿವಾಲಯದಿಂದ ಪ್ರಮಾಣಪತ್ರವನ್ನು ವಿತರಿಸಲಾಗುವುದು. ಆಸಕ್ತರು ಅರ್ಜಿ ಸಲ್ಲಿಸಲು ಹಾಗೂ ಹೆಚ್ಚಿನ ಮಾಹಿತಿಗಾಗಿ ರುಡ್‌ಸೆಟ್ ಸಂಸ್ಥೆ, ಅರಿಶಿನಕುಂಟೆ, ನೆಲಮಂಗಲ ತಾಲ್ಲೂಕು, ಬೆಂಗಳೂರು ಗ್ರಾಮಾಂತರ ಜಿಲ್ಲೆ ಅಥವಾ ಮೊಬೈಲ್ ಸಂಖ್ಯೆ: 9740982585, 9380162042 ಅನ್ನು ಸಂಪರ್ಕಿಸಬಹುದಾಗಿದೆ ಎಂದು ರುಡ್‌ಸೆಟ್ ಸಂಸ್ಥೆಯ ಬೆಂಗಳೂರು ಶಾಖೆಯ ನಿರ್ದೇಶಕರಾದ ರವಿಕುಮಾರ ಅವರು ತಿಳಿಸಿದ್ದಾರೆ.

## ಅತಿಥಿ ಶಿಕ್ಷಕರ ನೇಮಕಾತಿಗೆ ಅರ್ಜಿ

**ಬೆಂಗಳೂರು ಗ್ರಾಮಾಂತರ:** 2024-25ನೇ ಸಾಲಿಗೆ ಬೆಂಗಳೂರು ಗ್ರಾಮಾಂತರ ಜಿಲ್ಲೆ, ಅಲ್ಪಸಂಖ್ಯಾತರ ಕಲ್ಯಾಣ ಇಲಾಖೆಯಡಿ ಕಾರ್ಯನಿರ್ವಹಿಸುತ್ತಿರುವ ವಸತಿ ಶಾಲೆಗಳು ಮತ್ತು ಮೌಲಾನಾ ಆಜಾದ್ ಮಾದರಿ ಶಾಲೆಗಳಲ್ಲಿ ಖಾಲಿ ಇರುವ ಅತಿಥಿ ಶಿಕ್ಷಕರ ಹುದ್ದೆಗೆ ಗೌರವಧನದ ಆಧಾರದ ಮೇಲೆ ಪಡೆಯಲು ಉದ್ದೇಶಿಸಿರುವುದರಿಂದ ಅರ್ಹ ವಿದ್ಯಾರ್ಹತೆ ಹೊಂದಿರುವ ಅಭ್ಯರ್ಥಿಗಳು ತಮ್ಮ ಸ್ವವಿವರಗಳಿರುವ (Biodata, Resume) ಮನವಿಗಳನ್ನು ಅವಶ್ಯ ದಾಖಲೆಗಳೊಂದಿಗೆ ಜಿಲ್ಲಾ ಕಛೇರಿ, ಅಲ್ಪಸಂಖ್ಯಾತರ ಕಲ್ಯಾಣ ಇಲಾಖೆ, ಬೆಂಗಳೂರು ಗ್ರಾಮಾಂತರ ಜಿಲ್ಲೆ, ಜಿಲ್ಲಾಡಳಿತ ಭವನ, ಬೀರಸಂದ್ರ ಗ್ರಾಮ, ದೇವನಹಳ್ಳಿ ತಾಲ್ಲೂಕು ಇಲ್ಲಿಗೆ ಸಲ್ಲಿಸುವುದು.

## ಕಥಾ ಸಂಕಲನದ ಬಿಡುಗಡೆ

**ಮೈಸೂರು:** ಆಕಾಶವಾಣಿ ಮತ್ತು ಜಿಲ್ಲಾ ಕನ್ನಡ ಸಾಹಿತ್ಯ ಪರಿಷತ್ತು ಮೈಸೂರು ಇವರ ಸಹಯೋಗದಲ್ಲಿ ಲಾಕ್ಡೌನ್ ಕಥೆಗಳು-ಕಥಾ ಸಂಕಲನದ ಬಿಡುಗಡೆ ಸಮಾರಂಭವನ್ನು ಜುಲೈ 20 ರಂದು ಸಂಜೆ 4:30 ಗಂಟೆಗೆ ವಿಜಯನಗರದ 1ನೇ ಹಂತದ ಜಿಲ್ಲಾ ಕನ್ನಡ ಸಾಹಿತ್ಯ ಭವನದಲ್ಲಿ ಆಯೋಜಿಸಲಾಗಿದೆ.ಕನ್ನಡ ಸಾಹಿತ್ಯ ಪರಿಷತ್ತಿನ ಅಧ್ಯಕ್ಷರಾದ ಮಡ್ಡೀಗೆರೆ ಗೋಪಾಲ್ ಅವರು ಕಥಾಸಂಕಲನ ಬಿಡುಗಡೆ ಮಾಡಲಿದ್ದು, ಆಕಾಶವಾಣಿಯ ಉಪ ನಿರ್ದೇಶಕರಾದ ಉಮೇಶ್ ಎಸ್ ಅಧ್ಯಕ್ಷತೆ ವಹಿಸಲಿದ್ದಾರೆ.

## ಇಂದಿನಿಂದ ಎನ್‌ಎಸ್‌ಎಸ್ ಶಿಬಿರ

**ಹುಳಿಯಾರು:** ಹುಳಿಯಾರು-ಕೆಂಕೆರೆ ಬಿಎಂಎಸ್ ಸರ್ಕಾರಿ ಪ್ರಥಮ ದರ್ಜೆ ಕಾಲೇಜಿನ 2023-24 ನೇ ಸಾಲಿನ ವಾರ್ಷಿಕ ವಿಶೇಷ ಶಿಬಿರವನ್ನು ಜು.20 ರಿಂದ ಜು.26 ರ ವರೆವಿಗೆ ಸೋರಲಮಾವು ಗ್ರಾಮದಲ್ಲಿ ಹಮ್ಮಿಕೊಳ್ಳಲಾಗಿದೆ. ಜು.20 ರ ಶನಿವಾರ ಮಧ್ಯಾಹ್ನ 3 ಗಂಟೆಗೆ ಉದ್ಘಾಟನಾ ಕಾರ್ಯಕ್ರಮ ಜರುಗಲಿದ್ದು ಶಾಸಕ ಸಿ.ಬಿ.ಸುರೇಶ್‌ಬಾಬು ಉದ್ಘಾಟಿಸುವರು. ಪ್ರಾಚಾರ್ಯ ಎಸ್.ಸಿ.ವೀರಣ್ಣ ಅಧ್ಯಕ್ಷತೆ ವಹಿಸುವರು. ಎನ್‌ಎಸ್‌ಎಸ್ ಕಾರ್ಯಕ್ರಮಾಧಿಕಾರಿ ಮಲ್ಲಿಕಾರ್ಜುನ್ ಪ್ರಾಸ್ತಾವಿಕ ನುಡಿ ನುಡಿಯುವರು. ಎನ್‌ಎಸ್‌ಎಸ್ ಸಂಯೋಜನಾಧಿಕಾರಿ ಡಾ.ಮೌನೇಶ್ವರ ಶ್ರೀನಿವಾಸರಾವ್ ವಿಶೇಷ ಆಹ್ವಾನಿತರಾಗಿ ಆಗಮಿಸುವರು. ಚೌಳಕಟ್ಟೆ ಗ್ರಾಪಂ ಅಧ್ಯಕ್ಷ ಸಿ.ಎನ್.ಶಿವಣ್ಣ, ಗ್ರಾಪಂ ಮಾಜಿ ಅಧ್ಯಕ್ಷ ನಿರಂಜನಮೂರ್ತಿ, ಎಸ್‌ಡಿಎಂಸಿ ಅಧ್ಯಕ್ಷ ಶಿವಕುಮಾರ್, ಸದಸ್ಯ ರಾಜೇಶ್, ಮೋಹನ್ ಕುಮಾರ್, ರಂಗಸ್ವಾಮಿ, ಉಪನ್ಯಾಸಕ ಚನ್ನಬಸವಯ್ಯ, ಪಿಡಿಒ ನವೀನ್, ಕಾರ್ಯದರ್ಶಿ ರಂಗಸ್ವಾಮಿ, ಉಪನ್ಯಾಸಕ ಚಂದ್ರಹಾಸ, ಆನಂದ್ ಮುಖ್ಯ ಅತಿಥಿಗಳಾಗಿ ಆಗಮಿಸಲಿದ್ದಾರೆ.

## 7 ನೇ ವೇತನ ಅಯೋಗದ ವರದಿ ಯಥಾವತ್ ಜಾರಿ ಅಭಿನಂದನಾರ್ಹ

**ಚಿಕ್ಕಬಳ್ಳಾಪುರ:** ಕಾಂಗ್ರೆಸ್ ನೇತೃತ್ವದ ರಾಜ್ಯ ಸರ್ಕಾರ ಇತ್ತೀಚಿಗೆ ನಡೆಸಿದ ಸಚಿವ ಸಂಪುಟ ಸಭೆಯಲ್ಲಿ 7ನೇ ವೇತನ ಆಯೋಗದ ಶಿಪಾರಸು ವರದಿಯನ್ನು ಯಥಾವತ್ತಾಗಿ ಜಾರಿಗೆ ತರಲು ಅನುಮೋದಿಸಿರುವುದಕ್ಕೆ ರಾಜ್ಯ ಮತ್ತು ಚಿಕ್ಕಬಳ್ಳಾಪುರ ಜಿಲ್ಲೆಯ ಸಮಸ್ತ ಸರ್ಕಾರಿ ನೌಕರರ ಪರವಾಗಿ ಚಿಕ್ಕಬಳ್ಳಾಪುರ ಜಿಲ್ಲಾ ಸರ್ಕಾರಿ ನೌಕರರ ಸಂಘದ ಜಿಲ್ಲಾಧ್ಯಕ್ಷ ಜಿ. ಹರೀಶ್



ರವರು ಮಾನ್ಯ ಮುಖ್ಯಮಂತ್ರಿಗಳಾದ ಸಿದ್ದರಾಮಯ್ಯ ನೇತೃತ್ವದ ರಾಜ್ಯ ಸರ್ಕಾರವನ್ನು ಅಭಿನಂದಿಸಿದ್ದಾರೆ. ರಾಜ್ಯ ಸರ್ಕಾರವು ರಾಜ್ಯ ಸರ್ಕಾರಿ ನೌಕರ ಸಂಘದ ಮನವಿಗೆ ಸ್ಪಂಧಿಸಿ 7ನೇ ವೇತನ ಆಯೋಗದ ಶಿಪಾರಸ್ಸಿನಂತೆ ಸರ್ಕಾರಿ ನೌಕರರ ವೇತನ, ವೇತನ ಸಂಬಂಧಿತ ಭತ್ಯೆ, ಪಿಂಚಣಿಯನ್ನು ದಿನಾಂಕ 1-7-2022 ರಿಂದ ಅನ್ವಯವಾಗುವಂತೆ ಪರಿಷ್ಕರಿಸಿ ದಿನಾಂಕ 1-8-2024 ರಿಂದ ಅನುಷ್ಠಾನಗೊಳಿಸಲು ದಿ. 15-07-2024 ರ ಸಚಿವ ಸಂಪುಟ ಸಭೆಯಲ್ಲಿ ನಿರ್ಧರಿಸಲಾಗಿದ್ದು ಸ್ವಾಗತಾರ್ಹ ಎಂದಿದ್ದಾರೆ. ಸರ್ಕಾರಿ ನೌಕರರ ವೇತನ ಪರಿಷ್ಕರಣೆಯಿಂದ ರಾಜ್ಯ ಸರ್ಕಾರಕ್ಕೆ ವಾರ್ಷಿಕ 20,208 ಕೋಟಿಗಳನ್ನು ಹೆಚ್ಚುವರಿ ಹೊರೆ ಆದರೂ ಮುಖ್ಯಮಂತ್ರಿ ಸಿದ್ದರಾಮಯ್ಯ ನೇತೃತ್ವದ ರಾಜ್ಯ ಸರ್ಕಾರ ಈ ದಿಟ್ಟ ಐತಿಹಾಸಿಕ ನಿರ್ಧಾರಕ್ಕೆ ಚಿಕ್ಕಬಳ್ಳಾಪುರ ಜಿಲ್ಲಾ ಸರ್ಕಾರಿ ನೌಕರ ಸಂಘದ ಜಿಲ್ಲಾಧ್ಯಕ್ಷ ಜಿ.ಹರೀಶ್ ಅಭಿನಂಧಿಸಿದ್ದಾರೆ.

## ಪಾರ್ಶ್ವವಾಯು ಪೀಡಿತ ಜನಪದ ಗಾಯಕನ ನೆರವಿಗೆ ಮುಂದಾದ ಹಾಲಪ್ಪ

**ಹುಳಿಯಾರು:** ಹುಳಿಯಾರು ಹೋಬಳಿಯ ಹೊಯ್ಸಲಕಟ್ಟೆ ಗ್ರಾಪಂ ವ್ಯಾಪ್ತಿಯ ಲಕ್ಕೇನಹಳ್ಳಿಯ ಪಾರ್ಶ್ವವಾಯು ಪೀಡಿತ ಜನಪದ ಕಲಾವಿದ ಲ.ಪು. ಕರಿಯಪ್ಪ ಅವರ ನೆರವಿಗೆ ರಾಜ್ಯ ಕೌಶಲ್ಯ ಅಭಿವೃದ್ಧಿ ನಿಗಮ ಮಾಜಿ ಅಧ್ಯಕ್ಷ ಮುರಳೀಧರ ಹಾಲಪ್ಪ ಧಾವಿಸಿದ್ದಾರೆ.

ಲ.ಪು.ಕರಿಯಪ್ಪ ಅವರು ಶಾಲಾಕಾಲೇಜುಗಳಲ್ಲಿ, ಸಭೆ ಸಮಾರಂಭಗಳಲ್ಲಿ ಜನಪದ ಹಾಡುಗಳನ್ನು ಹಾಡಿ ಬದುಕು ಕಟ್ಟಿಕೊಂಡಿದ್ದರು. ಇವರಿಗೆ ಕೆಲ ತಿಂಗಳ ಹಿಂದೆ ಪಾರ್ಶ್ವವಾಯು ಬಡಿದು ಆಯ್ಕಂಡು ತಿನ್ನೋ ಕೋಳಿ ಕಾಲು ಮುರಿದ ಪರಿಸ್ಥಿತಿ ನಿರ್ಮಾಣವಾಗಿತ್ತು. ಇವರ ಕಷ್ಟ ತಿಳಿದ ಮುರುಳೀಧರ ಹಾಲಪ್ಪ ಅವರು ಶುಕ್ರವಾರ ಲಕ್ಕೇನಹಳ್ಳಿಯ ಕರಿಯಪ್ಪ ಅವರ ಮನೆಗೆ ಆಗಮಿಸಿ ವೈಯಕ್ತಿಕ ಧನ ಸಹಾಯ ಮಾಡಿದರಲ್ಲದೆ ಜಗತ್ತನ್ನೇ ಬೆಳಗುವ ಸೂರ್ಯನಿಗೂ ಗ್ರಹಣ ಬಡಿಯುತ್ತದೆ. ಬರುವ ಕಷ್ಟದ ದಿನಗಳು ಶಾಶ್ವತವಾಗಿರುವುದಿಲ್ಲ ಮಂಜಿನಂತೆ ಕರಗುತ್ತದೆ ಧೃತಿಗೆಡಬೇಡಿ ಎಂದು ಧೈರ್ಯ ತುಂಬಿದರು.

ಕರಿಯಪ್ಪ ಅವರಿಗೆ ಈ ಹಿಂದೆ ಅಂಗವಿಕಲ ಕಲ್ಯಾಣ ಇಲಾಖೆಯಿಂದ ದ್ವಿಚಕ್ರವಾಹನ ಮಂಜೂರಾಗಿತ್ತಾದರೂ



ಪಾರ್ಶ್ವವಾಯು ತಗುಲಿದ್ದರಿಂದ ವಿತರಣೆಗೆ ತೊಡಕಾಗಿತ್ತು. ಹಾಲಪ್ಪ ಅವರು ಇಲಾಖೆ ಎಂಡಿಗೆ ದೂರವಾಣಿ ಕರೆ ಮಾಡಿ ದ್ವಿಚಕ್ರ ವಾಹನದ ಬದಲಿಗೆ ಎಲೆಕ್ಟ್ರಿಕಲ್ ಟ್ರೈಸಿಕಲ್ ವಿತರಿಸುವಂತೆ ತಿಳಿಸಿದರಲ್ಲದೆ ಜೀವನ ನಿರ್ವಹಣೆಗೆ ಗೂಡಂಗಡಿ ಇಟ್ಟುಕೊಳ್ಳಲು 2 ಲಕ್ಷ ರೂ. ನೆರವು ನೀಡುವಂತೆ ಕೇಳಿಕೊಂಡರು. ಅಲ್ಲದೆ 2021 ರಲ್ಲಿ ಮಂಜೂರಾಗಿದ್ದ ಗಂಗಾಕಲ್ಯಾಣ ಕೊಳವೆಬಾವಿಯನ್ನೂ ಇಲ್ಲಿಯವರೆವಿಗೆ ಕೊರೆಸದೆ ನಿರ್ಲಕ್ಷ್ಯಿಸಿರುವುದರ ಬಗ್ಗೆ ಮೇಲಧಿಕಾರಿಗಳ ಗಮನಕ್ಕೆ ತಂದು ಕೊರೆಸಿಕೊಡುವ ಭರವಸೆ ನೀಡಿದರು.

## ಶ್ರದ್ಧೆ ಧೈರ್ಯ, ಭಕ್ತಿಯನ್ನು ಸಾಧನವಾಗಿ ಬಳಸಿ

**ವಿಜಯಪುರ:** ಕಾಲೇಜು ವಿದ್ಯಾರ್ಥಿಗಳು ತಮ್ಮ ಜೀವನದಲ್ಲಿ ಏನನ್ನಾದರೂ ಸಾಧಿಸುವ ವಯಸ್ಸಿನೊಂದಿಗಿದ್ದು ಈ ಸಂದರ್ಭವನ್ನು ವ್ಯರ್ಥ ಮಾಡಿಕೊಳ್ಳದೆ, ಮಾಡುವ ಕೆಲಸದಲ್ಲಿ ಶ್ರದ್ಧೆ, ಗುರು ಹಿರಿಯರಲ್ಲಿ ಭಕ್ತಿಯನ್ನು ಇಟ್ಟುಕೊಂಡು ಧೈರ್ಯವಾಗಿ ಮುನ್ನುಗ್ಗಿದಾಗ ಜೀವನದಲ್ಲಿ ಏನನ್ನಾದರೂ ಸಾಧಿಸಬಹುದೆಂದು ಜಾನಪದ ಸಾಹಿತಿ ಅಪ್ಪಗೆರೆ ತಿಮ್ಮರಾಜುರವರು ತಿಳಿಸಿದರು.

ಇಲ್ಲಿನ ಗಿರಿಜಾ ಶಂಕರ ಕಲ್ಯಾಣ ಮಂಟಪದಲ್ಲಿ ಪ್ರಗತಿ ಸಂಯುಕ್ತ ಪದವಿ ಪೂರ್ವ ಕಾಲೇಜಿನ ವತಿಯಿಂದ ಏರ್ಪಡಿಸಲಾಗಿದ್ದ ದ್ವಿತೀಯ ಪಿಯುಸಿ ವಿದ್ಯಾರ್ಥಿಗಳಿಂದ ಪ್ರಥಮ ಪಿಯು ವಿದ್ಯಾರ್ಥಿಗಳಿಗೆ ಏರ್ಪಡಿಸಿದ್ದ ಸ್ವಾಗತ ಕಾರ್ಯಕ್ರಮದಲ್ಲಿಮಾತನಾಡುತ್ತಿದ್ದರು. ಮನೆಮನೆಗೆಪತ್ರಿಕೆ ಹಂಚುತ್ತಿದ್ದ ಹುಡುಗ ಖ್ಯಾತ ವಿಜ್ಞಾನಿಯಾಗುವುದರೊಂದಿಗೆ ಭಾರತದ ಪ್ರಥಮ ವ್ಯಕ್ತಿಯಾಗಿ ರಾಷ್ಟ್ರಪತಿಯಾಗಲು ಅವರಲ್ಲಿನ ಭಕ್ತಿ ಶ್ರದ್ಧೆ ಛಲವೇ ಕಾರಣವೆಂದು ತಿಳಿಸಿದರು.

ಪ್ರಗತಿ ಶಿಕ್ಷಣ ಸಂಸ್ಥೆಗಳ ವ್ಯವಸ್ಥಾಪಕ ನಿರ್ದೇಶಕರಾದ ಡಾ. ಕೃಪಾ ಶಂಕರ್ ರವರು ಮಾತನಾಡುತ್ತ ವಿದ್ಯಾರ್ಥಿಗಳು ಶಿಸ್ತಿಗೆ ಸಿಪಾಯಿಗಳಾಗಿ, ಶ್ರದ್ದೆಗೆ ದಾಸರಾಗಿ, ಗುರಿ ಮುಟ್ಟುವ ತನಕ ಇಟ್ಟ ಛಲವನ್ನು ಬಿಡದಿರಿ ಎಂದು ತಿಳಿಸಿದರು.

ಪ್ರಾಂಶುಪಾಲರಾದ ಸುರೇಶ್ ರವರು ಮಾತನಾಡುತ್ತ ಇಂದಿನ ಯುಗ ಸ್ಪರ್ಧಾತ್ಮಕವಾಗಿದ್ದು ಸಿಕ್ಕ ಅವಕಾಶವನ್ನು ಬಳಸಿಕೊಂಡು ಕೌಶಲ್ಯಭರಿತರಾಗಿ ಉತ್ತಮಸ್ಥಾಯಿಗೆ ತಲುಪಲು ಮೊದಲ ದಿನದಿಂದಲೇ ಪ್ರಯತ್ನಿಸಿ ಎಂದು ತಿಳಿಸಿದರು.



**ರಾಷ್ಟ್ರೀಯ ಆರೋಗ್ಯ ಅಭಿಯಾನ**
**ಜಿಲ್ಲಾ ಆರೋಗ್ಯ ಮತ್ತು ಕು.ಕ.ಸಂಘ, ಕೋಲಾರ ಜಿಲ್ಲೆ.**
ಕೆ.ಎನ್.ಟಿ.ಬಿ ಸ್ಯಾನಿಟೋರಿಯಂ ಆಸ್ಪತ್ರೆ ಆವರಣ, ಬಂಗಾರಪೇಟೆ ರಸ್ತೆ, ಕೋಲಾರ- 563102

ಸಂಖ್ಯೆ: ಡಿಹೆಚ್‌ಎಸ್/15thFC/MH/ಕೋ/01/2024-25

ದಿನಾಂಕ:18.07.2024

**E-PROCUREMENT TENDAR NOTIFICATION**

ಕೋಲಾರ ಜಿಲ್ಲೆಯ 15 ನೇ ಹಣಕಾಸು ಆಯೋಗದ ಅಡಿಯಲ್ಲಿ ಕೋಲಾರ ಜಿಲ್ಲೆಯ ಎಲ್ಲಾ ಗರ್ಭಿಣಿಯರಿಗೆ ಸರ್ಕಾರಿ ಸುಮನ್ ಆರೋಗ್ಯ ಸಂಸ್ಥೆಗಳಲ್ಲಿ FT4,TSH&Vit B-12 ರಕ್ತ ಪರೀಕ್ಷೆ ಸೇವೆ ಪಡೆಯುವ ಸಲುವಾಗಿ ಕರ್ನಾಟಕ ಸಾರ್ವಜನಿಕ ಸಂಗ್ರಹಣಗಳಲ್ಲಿ ಪಾರದರ್ಶಕ ಅಧಿನಿಯಮ (KTPP) 1999 ನಿಯಮಗಳು 2000 ರ ಪ್ರಕಾರ E-Procurement ಟೆಂಡರ್ ಮೂಲಕ ಆಹ್ವಾನಿಸಿದ್ದು, ಹೆಚ್ಚಿನ ವಿವರಗಳು ಟೆಂಡರ್ ದಸ್ತಾವೇಜುಗಳಲ್ಲಿ ಲಭ್ಯವಿದ್ದು, **www.kppp.karnataka.gov.in/kolar.nic.in/https://kolarhfwd.karnataka.gov.in** ವೆಬ್‌ಸೈಟ್‌ನಲ್ಲಿ ಪಡೆದು ಪರಿಶೀಲಿಸುವುದು ಹಾಗೂ ಹೆಚ್ಚಿನ ಮಾಹಿತಿಗಾಗಿ ಜಿಲ್ಲಾ ಆರೋಗ್ಯ ಮತ್ತು ಕುಟುಂಬ ಕಲ್ಯಾಣಾಧಿಕಾರಿಗಳು, ಜಿಲ್ಲಾ ಆ.ಕು.ಕ ಅಧಿಕಾರಿಗಳ ಕಛೇರಿ, ಕೋಲಾರ ಜಿಲ್ಲೆ ಇಲ್ಲಿ ಕಛೇರಿ ವೇಳೆಯಲ್ಲಿ ಸಂಪರ್ಕಿಸುವುದು.

**ಸಹಿ/-ಜಿಲ್ಲಾ ಆರೋಗ್ಯ ಮತ್ತು ಕುಟುಂಬ ಕಲ್ಯಾಣಾಧಿಕಾರಿಗಳು**
**ಕೋಲಾರ ಜಿಲ್ಲೆ. ಕೋಲಾರ**

ವಾಸಾಸಂಇ/ಕೋಲಾರ/ಆರ್.ಓ.ಸಂಖ್ಯೆ:108/ಕೆಎಸ್‌ಎಂಸಿಎ/2024-25

# ಸಂಸದ ಸುನಿಲ್ ಬೋಸ್ ಅವರಿಗೆ ಕಾರ್ಯಕರ್ತರಿಂದ ಸನ್ಮಾನ




**ಚಾಮರಾಜನಗರ:** ಚಾಮರಾಜನಗರ ಲೋಕಸಭೆಕ್ಷೇತ್ರದ ಅಭಿವೃದ್ದಿಗೆ ಕೇಂದ್ರದಿಂದ ಹೆಚ್ಚಿನ ಅನುದಾನ ತರುವುದಾಗಿ ಚಾಮರಾಜನಗರ ಸಂಸದ ಸುನಿಲ್‌ಬೋಸ್ ಹೇಳಿದರು.

ಸಂಸದರಾಗಿಆಯ್ಕೆಯಾದ ಬಳಿಕ ಮೊದಲ ಬಾರಿಗೆ ನಗರದ ಜಿಲ್ಲಾ ಕಾಂಗ್ರೆಸ್ ಸಮಿತಿಕಚೇರಿ ಭೇಟಿನೀಡಿ, ಪಕ್ಷದ ಪದಾಧಿಕಾರಿಗಳು, ಮುಖಂಡರು ಹಾಗೂ ಕಾರ್ಯಕರ್ತರಿಂದ ಸನ್ಮಾನಸ್ವೀಕರಿಸಿ ಮಾತನಾಡಿದರು.

ಚಾಮರಾಜನಗರ ಲೋಕಸಭೆಕ್ಷೇತ್ರದ ಒಡನಾಟ ನಮ್ಮ ತಂದೆಯವರಿಗೆಇದ್ದು, ಅಂದಿನಿಂದಲೂ ಈ ಭಾಗದಜನರ ಪರಿಚಯವಿದೆ. ಪಕ್ಷದ ಶಾಸಕರು, ಮುಖಂಡರ ಸಲಹೆ ಪಡೆದು, ಚಾಮರಾಜನಗರ ಲೋಕಸಭೆಕ್ಷೇತ್ರದಅಭಿವೃದ್ದಿಗೆ ಹೆಚ್ಚಿನಅನುದಾನತರಲು ಶ್ರಮಿಸುತ್ತೇನೆ. ಮಾಜಿಸಂಸದ ಕ್ರಿಯಾಶೀಲ ರಾಜಕಾರಣಿಆರ್.ಧ್ರುವನಾರಾಯಣಅವರ ಆಡಳಿತಶೈಲಿಯನ್ನು ಅನುಸರಣೆ ಮಾಡಿ, ಜನಪರ ಕಾರ್ಯಕ್ರಮಗಳ ಅನುಷ್ಠಾನಕ್ಕೆ ಕ್ರಮವಹಿಸುವುದಾಗಿ ತಿಳಿಸಿದರು.

ಜಿಲ್ಲಾಕಾಂಗ್ರೆಸ್ ಸಮಿತಿಅಧ್ಯಕ್ಷ ಸುನಿಲ್ ಬೋಸ್ ಅವರನ್ನುಚಾಮರಾಜನಗರ ಲೋಕಸಭೆಕ್ಷೇತ್ರದಜನತೆ 1.88 ಲಕ್ಷಮತಗಳ ಅಂತರದಿಂದ ಗೆಲ್ಲಿಸಿದ್ದಾರೆ. ಚಾಮರಾಜನಗರಕಾಂಗ್ರೆಸ್ ಭದ್ರಕೋಟೆಎಂಬುದನ್ನುಜನತೆ ಸಾಬೀತುಪಡಿಸಿದ್ದಾರೆ. ಮಾಜಿಸಂಸದ ದಿ.ಆರ್.ಧ್ರುವನಾರಾಯಣ ಅವರ ಅಭಿವೃದ್ದಿ ಕಾರ್ಯಗಳನ್ನು ನೂತನಸಂಸದರು ಮುಂದುವರೆಸಿಕೊಂಡು ಹೋಗಬೇಕು, ಕನಿಷ್ಠ 15 ದಿನಕ್ಕೊಮ್ಮೆಯಾದರೂ ಚಾಮರಾಜನಗರ ಲೋಕಸಭೆಕ್ಷೇತ್ರಕ್ಕೆಜನರ ಸಮಸ್ಯೆ ಆಲಿಸಿ ಪರಿಹರಿಸಬೇಕುಎಂದು ಸಲಹೆನೀಡಿದರು. ಇದೇವೇಳೆ ಜಿಲ್ಲೆಯಲ್ಲಿನ ಹಲವಾರು ಸಮಸ್ಯೆಗಳು, ಅವುಗಳ ಪರಿಹಾರಕ್ಕೆ ಸಂಬಂಧಿಸಿದಂತೆ ಕಾರ್ಯಕರ್ತರು, ಮುಖಂಡರು ಸಂಸದರ ಗಮನಕ್ಕೆ ತಂದರು. ಜಿಲ್ಲಾಕಾಂಗ್ರೆಸ್‌ಉಪಾಧ್ಯಕ್ಷ ಬಿ.ಕೆ. ರವಿಕುಮಾರ್, ಪ್ರಧಾನ ಕಾರ್ಯದರ್ಶಿಗಳಾದ ಚಿಕ್ಕಮಹಾದೇವು, ಆರ್.ಮಹಾದೇವು, ಬ್ಲಾಕ್‌ಕಾಂಗ್ರೆಸ್‌ಅಧ್ಯಕ್ಷರಾದಚುಡಾಅಧ್ಯಕ್ಷ ಮಹಮದ್‌ಅಸ್ಗರ್, ಎ.ಎಸ್.ಗುರುಸ್ವಾಮಿ, ಜಿಲ್ಲಾಮಹಿಳಾ ಕಾಂಗ್ರೆಸ್‌ಅಧ್ಯಕ್ಷೆ ಲತಾರಾಜಶೇಖರಜತ್ತಿ, ಎಸ್ಸಿಮೋರ್ಚಾ ಜಿಲ್ಲಾಧ್ಯಕ್ಷ ನಲ್ಲೂರುಸೋಮೇಶ್ವರ್, ಒಬಿಸಿ ರಾಜ್ಯ ಕಾರ್ಯದರ್ಶಿ ಸಿ.ಎ.ಮಹದೇವಶೆಟ್ಟಿ, ಎಪಿಎಂಸಿ ಅಧ್ಯಕ್ಷ ಸೋಮೇಶ್, ಜಿ,ಪಂ ಮಾಜಿ ಸದಸ್ಯರಾದ ಶಿವಕುಮಾರ್, ಕಾವೇರಿ, ನಗರಸಭೆಮಾಜಿಅಧ್ಯಕ್ಷೆ ಹಾಗೂ ಹಾಲಿ ಸದಸೆಚಿನ್ನಮ್ಮ, ಗ್ರಾ.ಪಂಅಧ್ಯಕ್ಷರು, ಸದಸ್ಯರುಮಹಿಳಾ ಘಟಕದ ಸದಸ್ಯರುಸೇರಿದಂತೆ ಮುಖಂಡರು, ಕಾರ್ಯಕರ್ತರು ಹಾಜರಿದ್ದರು.

## ಅಪರ ಜಿಲ್ಲಾ ಸರ್ಕಾರಿ ವಕೀಲರ ಹುದ್ದೆಗೆ ಅರ್ಜಿ ಆಹ್ವಾನ

**ಮೈಸೂರು:** ನಂಜನಗೂಡು ತಾಲ್ಲೂಕಿನ ಅಪರ ಜಿಲ್ಲಾ ಸರ್ಕಾರಿ ವಕೀಲರ ಹುದ್ದೆಯ ಗರಿಷ್ಠ ಅವಧಿ ಮುಕ್ತಾಯವಾಗಿರುವ ಹಿನ್ನಲೆಯಲ್ಲಿ ಸದರಿ ಹುದ್ದೆಯನ್ನು ಹೊಸ ಅಭ್ಯರ್ಥಿಯಿಂದ ತುಂಬಲು ಕರ್ನಾಟಕ ಕಾನೂನು ಅಧಿಕಾರಿಗಳ ನಿಯಮಾವಳಿ 1977 ನಿಯಮ 26 ರಲ್ಲಿ ತಿಳಿಸಿರುವ ಅಗತ್ಯ ಷರತ್ತುಗಳನ್ನು ಪೂರೈಸಿರುವ ಅಭ್ಯರ್ಥಿಗಳಿಂದ ಅರ್ಜಿಗಳನ್ನು ಆಹ್ವಾನಿಸಲಾಗಿದೆ.ಸದರಿ ಹುದ್ದೆಗೆ ನೇಮಕಾತಿ ಬಯಸುವವರು, 07 ವರ್ಷಗಳ ಕಾಲ ವಕೀಲ ವೃತ್ತಿಯನ್ನು ಪೂರೈಸಿರುವ ಆಸಕ್ತ ಅರ್ಹ ಅಭ್ಯರ್ಥಿಗಳು ತಮ್ಮ ಹೆಸರು/ ವಿಳಾಸ/ಜಾತಿ/ವಿದ್ಯಾರ್ಹತೆ/ವಕೀಲ ವೃತ್ತಿಯಲ್ಲಿನ ಅನುಭವ, ಇತ್ಯಾದಿ ವಿವರಗಳನ್ನು ನಮೂದಿಸಿದ ಸ್ವಯಂ ವಿವರಣೆಯ ಮಾಹಿತಿಯೊಂದಿಗೆ (ಬಯೋಡೇಟಾ) ವಿದ್ಯಾರ್ಹತೆ/ ವಕೀಲ ವೃತ್ತಿಯಲ್ಲಿ ರಾಜ್ಯ ಬಾರ್ ಕೌನ್ಸಿಲ್ ನೊಂದಣಿ ಮತ್ತು ವಕೀಲ ವೃತ್ತಿಯಲ್ಲಿ ಹೊಂದಿರುವ ಅನುಭವದ ಬಗ್ಗೆ ಸ್ಥಳೀಯ ವಕೀಲರ ಸಂಘದ ದೃಢೀಕರಣ ಪತ್ರ, ಇತ್ಯಾದಿ ದಾಖಲಾತಿಗಳೊಂದಿಗೆ ಭರ್ತಿ ಮಾಡಿದ ಅರ್ಜಿಯನ್ನು ಜುಲೈ 29 ರೊಳಗಾಗಿ ಜಿಲ್ಲಾಧಿಕಾರಿಗಳ ಕಛೇರಿಗೆ ಸಲ್ಲಿಸಬೇಕು ಎಂದು ಜಿಲ್ಲಾಧಿಕಾರಿಗಳಾದ ಜಿ ಲಕ್ಷ್ಮೀಕಾಂತ ರೆಡ್ಡಿ ಅವರು ಪ್ರಕಟಣೆಯಲ್ಲಿ ತಿಳಿಸಿದ್ದಾರೆ.

## 8ನೇ ತರಗತಿಗೆ ಪ್ರವೇಶಕ್ಕಾಗಿ ಅರ್ಜಿ ಆಹ್ವಾನ

**ಮೈಸೂರು:** ರಾಷ್ಟ್ರೀಯ ಇಂಡಿಯನ್ ಮಿಲಿಟರಿ ಕಾಲೇಜಿನ ಡೆಹರಾಡೂನ್ನಲ್ಲಿ 8ನೇ ತರಗತಿಗೆ ಪ್ರವೇಶ ಬಯಸುವ ಕರ್ನಾಟಕ ರಾಜ್ಯದ ಬಾಲಕ ಮತ್ತು ಬಾಲಕಿಯರ ಪ್ರವೇಶಕ್ಕಾಗಿ ಅರ್ಜಿಯನ್ನು ಆಹ್ವಾನಿಸಲಾಗಿದೆ. ಅರ್ಹತಾ ಪ್ರವೇಶ ಪರೀಕ್ಷೆಯನ್ನು ಬೆಂಗಳೂರು ಕೇಂದ್ರದಲ್ಲಿ ಡಿಸೆಂಬರ್ 01 ರಂದು ನಡೆಸಲಾಗುವುದು. ಅಭ್ಯರ್ಥಿಗಳು ಯಾವುದೇ ಸರ್ಕಾರದಿಂದ ಮಾನ್ಯತೆ ಪಡೆದಿರುವ ಶಾಲೆಯಲ್ಲಿ 7ನೇ ತರಗತಿಯಲ್ಲಿ ಓದುತ್ತಿರುವ ಅಥವಾ ಉತ್ತೀರ್ಣರಾಗಿರುವ ಬಾಲಕ ಮತ್ತು ಬಾಲಕಿಯರು ಸೆಪ್ಟಂಬರ್ 30 ರೊಳಗೆ ಅರ್ಜಿಯನ್ನು ಬೆಂಗಳೂರಿನ ಫೀಲ್ಡ್ ಮಾರ್ಷಲ್ ಕೆ ಎಂ ಕಾರ್ಯಪ್ಪ ಭವನದ ಸೈನಿಕ ಕಲ್ಯಾಣ ಮತ್ತು ಪುನರ್ವಸತಿ ಇಲಾಖೆಯ ನಿರ್ದೇಶಕರಿಗೆ ಸಲ್ಲಿಸಬಹುದಾಗಿದೆ. ಹೆಚ್ಚಿನ ಮಾಹಿತಿಗಾಗಿ ನಿರ್ದೇಶನಾಲಯದ ದೂ.ಸಂ:080-25589459 ಅಥವಾ ಜಿಲ್ಲಾ ಸೈನಿಕ ಕಲ್ಯಾಣ ಮತ್ತು ಪುನರ್ವಸತಿ ಇಲಾಖೆಯ ಕಾರ್ಯಾಲಯವನ್ನು ಸಂಪರ್ಕಿಸಬಹುದು ಎಂದು ಸೈನಿಕ ಕಲ್ಯಾಣ ಮತ್ತು ಪುನರ್ವಸತಿ ಇಲಾಖೆಯ ಉಪ ನಿರ್ದೇಶಕರು ಪ್ರಕಟಣೆಯಲ್ಲಿ ತಿಳಿಸಿದ್ದಾರೆ.

## ಇಂದು ಜನಸಂಖ್ಯಾ ದಿನಾಚರಣೆ

**ಮೈಸೂರು:** 2024-25ನೇ ಸಾಲಿನ ಜಿಲ್ಲಾ ಮಟ್ಟದ ವಿಶ್ವ ಜನಸಂಖ್ಯಾ ದಿನಾಚರಣೆಯನ್ನು ಜುಲೈ 20 ರಂದು ಹೆಚ್.ಡಿ.ಕೋಟೆಯ ಅಂಬೇಡ್ಕರ್ ಭವನದಲ್ಲಿ (ಹುಣಸೂರು ರಸ್ತೆ, ಪೋಲಿಸ್ ಠಾಣೆ ಎದುರು) ಹೆಚ್.ಡಿ.ಕೋಟೆಯ ಶಾಸಕರಾದ ಅನಿಲ್ ಚಿಕ್ಕಮಾದು ಅವರ ಅಧ್ಯಕ್ಷತೆಯಲ್ಲಿ ಹಮ್ಮಿಕೊಳ್ಳಲಾಗಿದೆ ಎಂದು ಜಿಲ್ಲಾ ಆರೋಗ್ಯ ಮತ್ತು ಕುಟುಂಬ ಕಲ್ಯಾಣಾಧಿಕಾರಿಗಳು ಪ್ರಕಟಣೆಯಲ್ಲಿ ತಿಳಿಸಿದ್ದಾರೆ.

## 6ನೇ ತರಗತಿ ಪ್ರವೇಶಾತಿಗೆ ಅರ್ಜಿ

**ಮೈಸೂರು:** ಜವಾಹರ ನವೋದಯ ವಿದ್ಯಾಲಯದ 2025-26 ನೇ ಶೈಕ್ಷಣಿಕ ವರ್ಷಕ್ಕಾಗಿ 6ನೇ ತರಗತಿಗಾಗಿ ಪ್ರವೇಶ ಪರೀಕ್ಷೆಯ ಮೂಲಕ ಅರ್ಹ ಅಭ್ಯರ್ಥಿಗಳಿಂದ ಅರ್ಜಿಗಳನ್ನು ಆನ್ಲೈನ್ ಮೂಲಕ ಆಹ್ವಾನಿಸಲಾಗಿದೆ. ಆಸಕ್ತ ಅರ್ಹ ವಿದ್ಯಾರ್ಥಿಗಳು www.navodaya.gov.in ವೆಬ್ಸೈಟ್ ನಲ್ಲಿ ಆನ್ಲೈನ್ ಮೂಲಕ ಅರ್ಜಿ ಸಲ್ಲಿಸಬಹುದಾಗಿದೆ. ಅರ್ಜಿ ಸಲ್ಲಿಸಲು ಸೆಪ್ಟಂಬರ್ 16 ಕೊನೆಯ ದಿನಾಂಕವಾಗಿದ್ದು, ಪ್ರವೇಶ ಪರೀಕ್ಷೆಯು 18-01-2025 ರಂದು ನಡೆಯಲಿದೆ. ಆಯ್ಕೆ ಬಯಸುವ ಅಭ್ಯರ್ಥಿಗಳು 2024-25ನೇ ಸಾಲಿನಲ್ಲಿ 5 ನೇ ತರಗತಿಯಲ್ಲಿ ಸರ್ಕಾರಿ/ಅನುದಾನಿತ/ಸರ್ಕಾರದ ಅನುಮತಿ/ ಮಾನ್ಯತೆ ಪಡೆದಿರುವ ಶಾಲೆಯಲ್ಲಿ ಮತ್ತು ಮೈಸೂರು ಜಿಲ್ಲೆಯಲ್ಲಿ ಆಧ್ಯಯನ ಮಾಡುತ್ತಿರಬೇಕು, ದಿ.01-05-2013 ರಿಂದ ದಿ.31-07-2015 ರೊಳಗೆ ಜನಿಸಿರಬೇಕು ಮತ್ತು ಮೈಸೂರು ಜಿಲ್ಲೆಯ ನಿವಾಸಿಯಾಗಿರಬೇಕು. ಅರ್ಜಿಯನ್ನು ಭರ್ತಿ ಮಾಡುವಾಗ 5ನೇ ತರಗತಿಯಲ್ಲಿ ಅಧ್ಯಯನ ಮಾಡುತ್ತಿರುವ ಶಾಲೆಯ ಮುಖ್ಯೋಪಾಧ್ಯಾಯರಿಂದ ಪಡೆದ ಪ್ರಮಾಣ ಪತ್ರ, ವಿದ್ಯಾರ್ಥಿಯ ಇತ್ತೀಚಿನ ಭಾವಚಿತ್ರ, ಪಾಲಕ ಅಥವಾ ಪೋಷಕರ ಸಹಿ, ವಿದ್ಯಾರ್ಥಿಯ ಸಹಿಯನ್ನು ಕಡ್ಡಾಯವಾಗಿ ಅಪ್ಲೋಡ್ ಮಾಡಬೇಕು. ಹೆಚ್ಚಿನ ಮಾಹಿತಿಗಾಗಿ ಪಿಎಂ ಶ್ರೀ ಜವಾಹರ ನವೋದಯ ವಿದ್ಯಾಲಯದ ಅಧಿಕೃತ ವೆಬ್ಸೈಟ್ ತಿತಿತಿ.ಟಿಚಿತಿಠಜಚಿಥಿಚಿ.ರಠತ.ಟಿ ಮತ್ತು ದೂ.ಸಂ: 0821-2970040 ನ್ನು ಸಂಪರ್ಕಿಸಬಹುದು ಎಂದು ಜವಾಹರ ನವೋದಯ ವಿದ್ಯಾಲಯದ ಪ್ರಾಂಶುಪಾಲರು ತಿಳಿಸಿದ್ದಾರೆ.

## ಉಚಿತ ಕಾರ್ಯಾಗಾರ

**ಮಂಡ್ಯ:** HCL Tech ವತಿಯಿಂದ 2024 ನೇ ದ್ವಿತೀಯ ಪಿಯುಸಿ ಯಲ್ಲಿ ಶೇ.70 ಕ್ಕಿಂತ ಅಧಿಕ ಅಂಕ ಪಡೆದಿರುವ ವಾಣಿಜ್ಯ, ಕಲಾ, ವಿಜ್ಞಾನ ವಿದ್ಯಾರ್ಥಿಗಳಿಗೆ ಭಾರತ ದೇಶದ ದೊಡ್ಡ 3ನೇ ಸಾಫ್ಟ್ವೇರ್ ಕಂಪನಿಯಾದ HCL Tech ನಲ್ಲಿ ಸ್ಟೈಫಂಡ್ ಸಹಿತ ತರಬೇತಿ, ಖಾಯಂ ಉದ್ಯೋಗದ ಜೊತೆಗೆ ಹಣಕಾಸಿನ ಸಹಾಯದೊಂದಿಗೆ ಉನ್ನತ ಶಿಕ್ಷಣ ಪಡೆಯಬಹುದು ಎಂದು ತಿಳಿಸಿದ್ದಾರೆ. ಈ ಉಪಯೋಗಗಳನ್ನು ಪಡೆಯಲು ಮಂಡ್ಯ ಕೌಶಲ್ಯ ಅಭಿವೃದ್ಧಿ ನಿಗಮ, ಪದವಿ ಪೂರ್ವ ಶಿಕ್ಷಣ ಇಲಾಖೆ, ಮಹಿಳಾ ಸರ್ಕಾರಿ ಕಾಲೇಜು, ಕಲ್ಲು ಕಟ್ಟದ ಇವರು ಜಂಟಿಯಾಗಿ ಜುಲೈ 20 ರಂದು ಬೆಳಿಗ್ಗೆ 10 ಗಂಟೆಗೆ ಮಹಿಳಾ ಸರ್ಕಾರಿ ಕಾಲೇಜು, ಕಲ್ಲು ಕಟ್ಟದಲ್ಲಿ ಉಚಿತ ಕಾರ್ಯಾಗಾರಕ್ಕೆ ಹಾಜರಾಗಬೇಕಾಗಿವನ್ನು ಆಯೋಜಿಸಲಾಗಿದೆ. https://bit.ly/TechBeeKSDC ವೆಬ್ ಸೈಟ್ ಮೂಲಕ ಇಂದಿನಿಂದಲೇ ಉಚಿತವಾಗಿ ನೋಂದಣಿ ಮಾಡಿಕೊಳ್ಳಿಬಹುದು ಹಾಗೂ ಹೆಚ್ಚಿನ ಮಾಹಿತಿಗಾಗಿ ದೂ. ಸಂ: 8722790340/984545471 ನ್ನು ಸಂಪರ್ಕಿಸಬಹುದು ಎಂದು ಮಂಡ್ಯ ಜಿಲ್ಲಾ ಕೌಶಲ್ಯಾಭಿವೃದ್ಧಿ ಕಚೇರಿಯ ಸಹಾಯಕ ನಿರ್ದೇಶಕರು ಪ್ರಕಟಣೆಯಲ್ಲಿ ತಿಳಿಸಿರುತ್ತಾರೆ.

### ಚಿಕ್ಕಬಳ್ಳಾಪುರ ಜಿಲ್ಲಾಧಿಕಾರಿ ಪಿ.ಎನ್. ರವೀಂದ್ರ ಮಾಹಿತಿ

# ರೈತರೇ ಸ್ವತಃ ಬೆಳೆ ಸಮೀಕ್ಷೆ ಕೈಗೊಳ್ಳಲು ಅವಕಾಶ

**ಚಿಕ್ಕಬಳ್ಳಾಪುರ:** ಬೆಳೆ ವಿಮೆ ಪಡೆಯಲು ರೈತರು ನೇರವಾಗಿ ಪಾರ್ಮರ್ಸ್ ಆಪ್(ಜಿಚಿಡಿಟಜಡಿ) ಮೂಲಕ ತಮ್ಮ ಬೆಳೆಗಳ, ತಾಕುಗಳ ಸ್ಥಿತಿಗತಿ ವಿವರವನ್ನು ನಮೂದಿಸಲು ಅವಕಾಶವಿದ್ದು, ಈ ಸುವರ್ಣಾವಕಾಶವನ್ನು ಜಿಲ್ಲೆಯ ರೈತರು ಬಳಸಿಕೊಳ್ಳುವಂತೆ ಜಿಲ್ಲಾಧಿಕಾರಿ ಪಿ.ಎನ್. ರವೀಂದ್ರ ಅವರು ಮನವಿ ಮಾಡಿದರು.

ಜಿಲ್ಲಾಧಿಕಾರಿಗಳ ಕಚೇರಿ ಸಭಾಂಗಣದಲ್ಲಿ ಶುಕ್ರವಾರ ನಡೆದ ವಿಪತ್ತು ನಿರ್ವಹಣಾ ಪ್ರಾಧಿಕಾರದ ಸಭೆಯ ಅಧ್ಯಕ್ಷತೆ ವಹಿಸಿ ಅವರು ಮಾತನಾಡಿದರು. ಕೃಷಿ ಇಲಾಖೆಯ ಸಿಬ್ಬಂದಿ, ಅಧಿಕಾರಿಗಳ ಸಮ್ಮುಖದಲ್ಲಿ ಬೆಳೆ ಸಮೀಕ್ಷೆ ಮಾಡಲು ಮುಂದಿನ ಆಗಸ್ಟ್ 15 ರ ನಂತರ ಅವಕಾಶವಿದೆ,ಅದಕ್ಕೂ ಮುನ್ನವೇ ರೈತರು ತಮ್ಮ ಕೃಷಿ ಬೆಳೆಗಳ ಸ್ಥಿತಿಗತಿಗಳನ್ನು ಪಾರ್ಮರ್ಸ್ ಆಪ್ ಮೂಲಕ ಅಪ್ಲೋಡ್ ಮಾಡಬಹುದು. ರೈತರು ತಮ್ಮ ಜಮೀನುಗಳಿಗೆ ತೆರಳಿ ಬೆಳೆ ಬೆಳೆದಿರುವ ಸ್ಥಿತಿಗತಿಯ ಛಾಯಾಚಿತ್ರಗಳನ್ನು ಮತ್ತಿತರ ವಿವರಗಳನ್ನು ಆನ್ ಲೈನ್ ನಲ್ಲಿಯೇ ನಮೂದಿಸಬಹುದು. ಇಂತಹ ಸುವರ್ಣಾವಕಾಶವನ್ನು ರೈತರು ಬಳಸಿಕೊಳ್ಳಲು ರೈತ ಸಂಪರ್ಕ ಕೇಂದ್ರಗಳ, ಕೃಷಿ ಇಲಾಖೆಯ ಅಧಿಕಾರಿಗಳು ಜಾಗೃತಿ ಮೂಡಿಸಲು ಮುಂದಾಗಬೇಕು. ಪಾರ್ಮರ್ ಆಪ್ ಮೂಲಕ ಬೆಳೆ ಸಮೀಕ್ಷೆ ಕೈಗೊಳ್ಳದ ರೈತರ ಜಮೀನುಗಳಿಗೆ ಆಗಸ್ಟ್ 15 ರ ನಂತರ ತೆರಳಿ ಇಲಾಖೆಯ ವತಿಯಿಂದ ಬೆಳೆ ಸಮೀಕ್ಷೆ ಮಾಡಬೇಕು. ಒಟ್ಟಾರೆ ಜಿಲ್ಲೆಯ ಎಲ್ಲಾ ರೈತರ ಕೃಷಿ ಬೆಳೆಗಳ ಸಮೀಕ್ಷೆ ಕಾರ್ಯವನ್ನು ಸೂಕ್ತ ರೀತಿಯಲ್ಲಿ ಮಾಡಲು ಅಧಿಕಾರಿಗಳಿಗೆ ಸೂಚಿಸಿದರು.

ಈ ಬಾರಿ ಮಳೆಯ ಪ್ರಮಾಣ ಚೆನ್ನಾಗಿರುವುದರಿಂದ ಬಿತ್ತನೆ ಕಾರ್ಯಗಳು ಜಿಲ್ಲೆಯಲ್ಲಿ ಚುರುಕಾಗಿವೆ. ರಸಗೊಬ್ಬರ ಮತ್ತು ಬಿತ್ತನೆ ಬೀಜಗಳ ದಾಸ್ತಾನು ಸಾಕಷ್ಟು ಲಭ್ಯವಿದ್ದು, ನಿಯಮಿತವಾಗಿ ಹಾಗೂ ಕಾಲೋಚಿತವಾಗಿ ರೈತರ ಬೇಡಿಕೆ ಅನುಸಾರ ವಿತರಿಸುವ ಕಾರ್ಯ ಆಗಬೇಕು. 17,097 ಮೆಟ್ರಿಕ್ ಟನ್ ರಸ ಗೊಬ್ಬರ ಪ್ರಸ್ತುತ ಲಭ್ಯವಿದೆ ಜೊತೆಗೆ 1041 ಮೆಟ್ರಿಕ್ ಟನ್ ಬಫರ್ ಸ್ಟಾಕ್ ಇಡಲಾಗಿದೆ. ರೈತರು ಈ ಬಾರಿ ನೆಲಗಡಲೆ ಬೆಳೆಯಿಂದ ರಾಗಿ ಬೆಳಗ್ಗೆ ಒಲವು ತೋರಿಸುತ್ತಿದ್ದಾರೆ ಅದರಂತೆ ಬಿತ್ತನೆ ಬೀಜಗಳನ್ನು ಪೂರೈಸಲು ತಿಳಿಸಿದರು.



### ಜುಲೈ-22ರ ಒಳಗಾಗಿ ಬೆಳೆ ವಿಮೆ ವರದಿ ನೀಡಿ

**ಕಳೆದ ಬಾರಿ ಬೆಳೆ ವಿಮೆ ಮಾಡಿಸಿದ ಕೆಲವು ರೈತರಿಗೆ ಬೆಳೆ ವಿಮೆ ಈ ವರೆಗೆ ಸಂದಾಯ ಆಗಿರುವುದಿಲ್ಲ. ಸಂದಾಯವಾಗದಿರಲು ಕಾರಣಗಳೇನು ಎನ್ನುವ ಕುರಿತು ತ್ವರಿತವಾಗಿ ಪರಿಶೀಲಿಸಿ ಜುಲೈ 22ರ ಒಳಗೆ ವರದಿ ನೀಡಬೇಕು ಜೊತೆಗೆ ಈ ಬಾರಿಯೂ ಬೆಳೆ ವಿಮೆ ಮಾಡಿಸಲು ರೈತರಲ್ಲಿ ಜಾಗೃತಿ ಮೂಡಿಸಬೇಕು ಎಂದು ಕೃಷಿ ಇಲಾಖೆಯ ಅಧಿಕಾರಿಗಳಿಗೆ ಡಿಸಿ ತಿಳಿಸಿದರು. ಕೃಷಿ, ತೋಟಗಾರಿಕೆ ಹಾಗೂ ರೇಷ್ಮೆ ಬೆಳೆಗಳಿಗೆ ಮೊಡದ ವಾತಾವರಣವಿರುವ ಈ ಸಮಯದಲ್ಲಿ ರೋಗಗಳು ಬರುವ ಸಾಧ್ಯತೆ ಇರುತ್ತದೆ. ಮೋಡದ ವಾತಾವರಣ ತೆರವಾಗಿ ಬಿಸಿಲು ಆರಂಭವಾದರೆ ರೋಗಗಳು ಉಲ್ಬಣವಾಗುವ ಸಾಧ್ಯತೆ ಇರುತ್ತದೆ. ಈ ರೋಗಗಳು ಕಾಣಿಸಿಕೊಳ್ಳುವ ಮುನ್ನವೇ ಪರಿಹಾರೋಪಾಯಗಳನ್ನು ರೈತರಿಗೆ ತಿಳಿಸಿಕೊಡುವ ಕೆಲಸವನ್ನು ಅಧಿಕಾರಿಗಳು ಮಾಡಬೇಕು. ಜಾನುವಾರುಗಳಿಗೆ ಕಂದು ರೋಗ, ಕರಳುಬೇನೆ ರೋಗ ಈ ಅವಧಿಯಲ್ಲಿ ಹೆಚ್ಚು ಕಾಣಿಸಿಕೊಳ್ಳುತ್ತದೆ. ಜಾನುವಾರು ರೋಗಗಳು ಬರದಂತೆ ಜಿಲ್ಲೆಯಲ್ಲಿರುವ ಸುಮಾರು 5000 ಕರುಗಳಿಗೆ ಮತ್ತು ಮೇಕೆ, ಕುರಿಗಳಿಗೆ ಲಸಿಕೆ ಹಾಕುವ ಕಾರ್ಯವನ್ನು ನಿರಂತರವಾಗಿ ಕೈಗೊಳ್ಳಲು ಪಶುಪಾಲನಾ ಇಲಾಖೆಯ ಅಧಿಕಾರಿಗಳಿಗೆ ತಿಳಿಸಿದರು.**

### ಕುರಿಗಾಹಿಗಳಿಗೆ ಗುರುತಿನ ಚೀಟಿ ನೀಡಿ

**ಜಿಲ್ಲೆಯಲ್ಲಿವ ಕುರಿ ಮೇಕೆ ಸಾಕಾಣಿಕೆಯಲ್ಲಿ ತೊಡಗಿರುವವರ ಕುರಿಗಾಹಿಗಳಿಗೆ ಗುರುತಿನ ಚೀಟಿಯನ್ನು ಆದಷ್ಟು ಬೇಗ ವಿತರಿಸಬೇಕು. ಕುರಿಗಾಹಿಗಳು ಗನ್ ಲೈಸೆನ್ಸ್ ಗಾಗಿ ಅರ್ಜಿ ಸಲ್ಲಿಸಿದ್ದಲ್ಲಿ ನಿಯಮಾನುಸಾರ ಪರಿಶೀಲನೆ ಮಾಡಿ ತ್ವರಿತ ವಿಲೇವಾರಿಗೆ ಸಂಬಂಧಪಟ್ಟ ಅಧಿಕಾರಿಗಳು ಕ್ರಮ ವಹಿಸಲು ಹಾಗೂ ಜಾನುವಾರು ಸಾವು ಸಂಭವಿಸಿದ್ದಲ್ಲಿ ಪರಿಶೀಲಿಸಿ ಪರಿಹಾರ ನೀಡಲು ಜಿಲ್ಲಾಧಿಕಾರಿಗಳು ಅಧಿಕಾರಿಗಳಿಗೆ ಸೂಚಿಸಿದರು. ಪ್ರಸ್ತುತ ಜಿಲ್ಲೆಯಲ್ಲಿ ಚಿಂತಾಮಣಿ ತಾಲ್ಲೂಕಿನಲ್ಲಿ ಒಂದು ಸಿಮೆ ಹಸು ಮೃತಪಟ್ಟಿದ್ದು, 37,500 ರೂ.ಗಳನ್ನು ವಿತರಿಸಲಾಗಿದೆ ಎಂದು ಅಧಿಕಾರಿಗಳು ಪ್ರತಿಕ್ರಿಯಿಸಿದರು. ವಾಡಿಕೆ ಮಳೆಗಿಂತಲೂ ಮಳೆಯ ಪ್ರಮಾಣ ಉತ್ತಮವಾಗಿದ್ದರೂ ಸಹ ಅಂತರ್ ಜಲ ಮರುಪೂರ್ಣ ಆಗಿರುವುದಿಲ್ಲ ಆದ್ದರಿಂದ ಜಿಲ್ಲೆಯ 37 ಗ್ರಾಮಗಳು 30 ವಾರ್ಡ್ ಗಳಿಗೆ ಖಾಸಗಿ ಬೋರ್ ವೆಲ್ ಗಳ ಮೂಲಕ ಕುಡಿಯುವ ನೀರು ಪೂರೈಕೆ ಮಾಡಲಾಗುತ್ತಿದೆ. ಮುಂದಿನ ದಿನಗಳಲ್ಲಿ 24 ವಾರ್ಡ್ ಗಳಲ್ಲಿ ಹಾಗೂ 53 ಗ್ರಾಮಗಳಲ್ಲಿ ಕುಡಿಯುವ ನೀರಿನ ಸಮಸ್ಯೆ ತಲೆದೋರುವ ಸಂಭವವಿದ್ದು, ಆ ಎಲ್ಲಾ ಕಡೆ ಖಾಸಗಿ ಕೊಳವೆ ಬಾವಿ ಮಾಲಿಕರೊಂದಿಗೆ ನೀರು ಪೂರೈಕೆಗಾಗಿ ಒಪ್ಪಂದ ಮಾಡಿಕೊಂಡು ಸೂಕ್ತ ಮುನ್ನೆಚ್ಚರಿಕೆ ಕ್ರಮವಹಿಸಬೇಕು. ಜೊತೆಗೆ ಈಗಾಗಲೇ ನೀರು ಪೈರೈಸುತ್ತಿರುವವರಿಗೆ ನಿಗದಿತವಾಗಿ ಹಣ ಪಾವತಿಯನ್ನು ತ್ವರಿತವಾಗಿ ಮಾಡಿ ಜಿಲ್ಲಾಡಳಿತಕ್ಕೆ ವರದಿ ಮಾಡಲು ತಾಲ್ಲೂಕು ಮಟ್ಟದ ಅಧಿಕಾರಿಗಳಿಗೆ ಸೂಚಿಸಿದರು. ಈವರೆಗೆ ಮುನ್ಸೂನ್ ಮಳೆಯಿಂದ ಜಿಲ್ಲೆಯಲ್ಲಿ 3 ಮನೆಗಳು, 52.55 ಹೇಕ್ಟರ್ ಪ್ರದೇಶದ ತೋಟಗಾರಿಕೆ ಬೆಳೆಗಳು, 386 ವಿದ್ಯುತ್ ಕಂಬಗಳು, 16 ವಿದ್ಯುತ್ ಪರಿವರ್ತಕಗಳು ಹಾಳಾಗಿವೆ. ಮಳೆ ಹಾನಿಗೊಳಗಾದ ರೈತರು ಹಾಗೂ ಮನೆ ಮಾಲಿಕರಿಗೆ ಪರಿಹಾರ ಒದಗಿಸಲು ಕ್ರಮಕ್ಕಾಗಿ ಜಿಲ್ಲಾಧಿಕಾರಿಗಳು ಸೂಚಿಸಿದರು. ಸಭೆಯಲ್ಲಿ ಅಪರ ಜಿಲ್ಲಾಧಿಕಾರಿ ಡಾ.ಎನ್.ಭಾಸ್ಕರ್, ಉಪವಿಭಾಗಾಧಿಕಾರಿ ಡಿ.ಹೆಚ್. ಅಶ್ವಿನ್ ಹಾಜರಿದ್ದರು.**

## ಹಬ್ಬದಂತೆ ಸ್ವಾತಂತ್ರ್ಯ ದಿನ ಆಚರಿಸಲು ಕರೆ

ಸ್ವಾತಂತ್ರ್ಯ ದಿನಾಚರಣೆಯ ಅಂಗವಾಗಿ ಆಗಸ್ಟ್ 15 ರಂದು ಈ ಬಾರಿಯ ಸ್ವಾತಂತ್ರ್ಯ ದಿನಾಚರಣೆಯ ಜಿಲ್ಲಾ ಮಟ್ಟದ ಕಾರ್ಯಕ್ರಮವನ್ನು ನಗರದ ಸರ್.ಎಂ.ವಿಶ್ವೇಶ್ವರಯ್ಯ ಜಿಲ್ಲಾ ಕ್ರೀಡಾಂಗಣದಲ್ಲಿ ಅರ್ಥ ಪೂರ್ಣವಾಗಿ ಹಾಗೂ ಹಬ್ಬದ ಸಂಭ್ರಮದಂತೆ ಆಚರಿಸಲಾಗುವುದು ಎಂದು ಜಿಲ್ಲಾಧಿಕಾರಿ ಪಿ.ಎನ್ ರವೀಂದ್ರ ತಿಳಿಸಿದರು. ಈ ಬಾರಿಯ ಸ್ವಾತಂತ್ರ್ಯ ಮಹೋತ್ಸವದ ದಿನಾಚರಣೆಯನ್ನು ಹಬ್ಬದಂತೆ ಸಂಭ್ರಮದಿಂದ ಆಚರಿಸಲು ನಿರ್ಧರಿಸಲಾಗಿದೆ. ಧ್ವಜಾರೋಹಣ, ಗೌರವ ವಂದನೆ, ಪೊಲೀಸ್ ಕವಾಯತು, ಸಾಧಕರಿಗೆ ಸನ್ಮಾನ, ಸಾಂಸ್ಕೃತಿಕ ಕಾರ್ಯಕ್ರಮಗಳನ್ನು ಎಂದಿನಂತೆಯೇ ಆಯೋಜಿಸಲು ಹಾಗೂ ಶಾಲಾ ಕಾಲೇಜುಗಳಲ್ಲಿ ಪೂರ್ವಭಾವಿಯಾಗಿ ಚರ್ಚಾ ಸ್ಪರ್ಧೆಯನ್ನು ಏರ್ಪಡಿಸಿ ವಿಜೇತರಿಗೆ ಸನ್ಮಾನಿಸಲು ಸಂಬಂಧಪಟ್ಟ ಇಲಾಖೆಯ ಅಧಿಕಾರಿಗಳಿಗೆ ಇದಕ್ಕೆ ಪೂರ್ವ ಸಿದ್ಧತೆಯನ್ನು ವ್ಯವಸ್ಥಿತವಾಗಿ ನಿರ್ವಹಿಸುವಂತೆ ಸೂಚಿಸಿದರು. ಕ್ರೀಡಾಂಗಣದಲ್ಲಿ ತುರ್ತು ಅರೋಗ್ಯ ಸೇವೆಗೆ ಆಂಬುಲೆನ್ಸ್ ವ್ಯವಸ್ಥೆ ಕಲ್ಪಿಸುವುದು ಸೇರಿದಂತೆ ಮುನ್ನೆಚ್ಚರಿಕಾ ಸುರಕ್ಷಿತ ಕ್ರಮಗಳನ್ನು ಕೈಗೊಳ್ಳಲು ಆರೋಗ್ಯ ಇಲಾಖೆ ಅಧಿಕಾರಿಗಳಿಗೆ ಸೂಚನೆ ನೀಡಿದರು. ವೇದಿಕೆ ಸಿದ್ಧತೆ, ಅಲಂಕಾರ, ಆಸನ ವ್ಯವಸ್ಥೆ, ಕುಡಿಯುವ ನೀರಿನ ವ್ಯವಸ್ಥೆ,ಶಿಷ್ಟಚಾರ ರೀತ್ಯಾ ಆಹ್ವಾನ ಪತ್ರಿಕೆಗಳ ಮುದ್ರಣ, ವಿತರಣೆ,ಕಾರ್ಯಕ್ರಮ ನಿರ್ವಹಣೆ, ನಿರೂಪಣೆ, ಕ್ರೀಡಾಂಗಣ ಸ್ವಚ್ಛತೆ ಇನ್ನಿತರೆ ಸಿದ್ಧತಾ ಕಾರ್ಯಗಳನ್ನು ಸಂಬಂಧ ಪಟ್ಟ ಇಲಾಖೆಗಳ ಅಧಿಕಾರಿಗಳಿಗೆ ಕಾರ್ಯಭಾರ ಹಂಚಿಕೆ ಮಾಡಿ ಈ ಎಲ್ಲಾ ಕಾರ್ಯಗಳನ್ನು ಸಮರ್ಪಕವಾಗಿ ಮಾಡುವಂತೆ ಕಟ್ಟುನಿಟ್ಟಿನ ಸೂಚನೆ ನೀಡಿದರು. ಕಾರ್ಯಕ್ರಮಕ್ಕೆ ಆಗಮಿಸುವವರಿಗೆ ಮೂಲ ಭೂತ ಸೌಕರ್ಯ ಒದಗಿಸಲು ಮುಖ್ಯವಾಗಿ ಕುಡಿಯುವ ನೀರು, ಶೌಚಾಲಯ ವ್ಯವಸ್ಥೆ ಕಲ್ಪಿಸುವುದು, ವಿದ್ಯುತ್ ವ್ಯತ್ಯಯ ಆಗದಂತೆ ಹಾಗೂ ಸನ್ಮಾನಕ್ಕೆ ಯಾವ ಕ್ಷೇತ್ರದವರನ್ನು ಆಯ್ಕೆ ಮಾಡಬೇಕು ಎಂಬುದನ್ನು ಉಪವಿಭಾಗಾಧಿಕಾರಿಗಳ ಮಟ್ಟದ ಸಮಿತಿಯಲ್ಲಿ ನಿರ್ಧರಿಸಿ ಪಟ್ಟಿಯನ್ನು ಜಿಲ್ಲಾಡಳಿತಕ್ಕೆ ಸಲ್ಲಿಸಲು ಸಂಬಂಧಪಟ್ಟ ಅಧಿಕಾರಿಗಳಿಗೆ ತಿಳಿಸಿದರು. ಸಭೆಯಲ್ಲಿ ಅಪರ ಜಿಲ್ಲಾಧಿಕಾರಿ ಡಾ.ಎನ್ .ಭಾಸ್ಕರ್, ಹೆಚ್ಚುವರಿ ಪೊಲೀಸ್ ವರಿಷ್ಟಾಧಿಕಾರಿ ಆರ್.ಐ. ಖಾಸಿಂ, ಉಪವಿಭಾಗಾಧಿಕಾರಿ ಡಿ.ಹೆಚ್. ಅಶ್ವಿನ್ ಸೇರಿದಂತೆ ವಿವಿಧ ಇಲಾಖೆಗಳ ಅಧಿಕಾರಿಗಳು ಹಾಗೂ ಸಿಬ್ಬಂದಿ ಹಾಜರಿದ್ದರು.

## ಶಿವಶರಣ ಹಡಪದ ಅಪ್ಪಣ್ಣನವರ ಜಯಂತ್ಯೋತ್ಸವ ನಾಳೆ

**ಕೋಲಾರ:** ಜಿಲ್ಲಾಡಳಿತ, ಜಿಲ್ಲಾ ಪಂಚಾಯತ್, ಕನ್ನಡ ಮತ್ತು ಸಂಸ್ಕೃತಿ ಇಲಾಖೆ, ಕೋಲಾರ ಇವರ ಸಂಯುಕ್ತಾಶ್ರಯದಲ್ಲಿ ನಡೆಯಲಿರುವ ಶಿವಶರಣ ಶ್ರೀ ಹಡಪದ ಅಪ್ಪಣ್ಣನವರ ಜಯಂತ್ಯೋತ್ಸವನ್ನು ಜುಲೈ 21 ರಂದು ಬೆಳಗ್ಗೆ 11.00 ಗಂಟೆಗೆ ನಗರದ ಶ್ರೀ ಟಿ.ಚನ್ನಯ್ಯ ರಂಗಮಂದಿರದಲ್ಲಿ ಹಮ್ಮಿಕೊಳ್ಳಲಾಗಿದೆ.

ಕಾರ್ಯಕ್ರಮದ ಉದ್ಘಾಟನೆಯನ್ನು ಸನ್ಮಾನ್ಯ ನಗರಾಭಿವೃದ್ಧಿ ಮತ್ತು ನಗರ ಯೋಜನೆ ಸಚಿವರು ಹಾಗೂ ಕೋಲಾರ ಜಿಲ್ಲಾ ಉಸ್ತುವಾರಿ ಸಚಿವರಾದ ಬಿ.ಎಸ್. ಸುರೇಶ್ ಅವರು ನೆರವೇರಿಸುವರು. ಅಧ್ಯಕ್ಷತೆಯನ್ನು ಕೋಲಾರ ವಿಧಾನಸಭಾ ಕ್ಷೇತ್ರದ ಶಾಸಕರಾದ ಡಾ|| ಕೊತ್ತೂರು ಜಿ.ಮಂಜುನಾಥ್ ಅವರು ವಹಿಸುವರು.

ಮುಖ್ಯ ಅತಿಥಿಗಳಾಗಿ ವಿಧಾನ ಪರಿ?ತ್ ಸದಸ್ಯರು ಮತ್ತು ಸನ್ಮಾನ್ಯ ಮುಖ್ಯಮಂತ್ರಿಗಳ ರಾಜಕೀಯ ಕಾರ್ಯದರ್ಶಿಗಳಾದ ನಸೀರ್ ಅಹಮದ್, ಕೋಲಾರ ಲೋಕಸಭಾ ಕ್ಷೇತ್ರದ ಸಂಸದರಾದ ಎಂ.ಮಲ್ಲೇಶ್ ಬಾಬು, ಬಂಗಾರಪೇಟೆ ವಿಧಾನಸಭಾ ಕ್ಷೇತ್ರದ ಶಾಸಕರಾದ ಎಸ್.ಎನ್ ನಾರಾಯಣಸ್ವಾಮಿ ಕೆ.ಎಂ, ಮಾಲೂರು ವಿಧಾನಸಭಾ ಕ್ಷೇತ್ರದ ಶಾಸಕರಾದ ಕೆ.ವೈ.ನಂಜೇಗೌಡ, ಕೆ.ಜಿ.ಎಫ್ ವಿಧಾನಸಭಾ ಕ್ಷೇತ್ರದ ಶಾಸಕರಾದ ಡಾ|| ರೂಪಕಲಾ ಎಂ.ಶಶಿಧರ್, ಶ್ರೀನಿವಾಸಪುರ ವಿಧಾನಸಭಾ ಕ್ಷೇತ್ರದ ಶಾಸಕರಾದ ಜಿ.ಕೆ ವೆಂಕಟಶಿವಾರೆಡ್ಡಿ, ಮುಳಬಾಗಿಲು ವಿಧಾನಸಭಾ ಕ್ಷೇತ್ರದ ಶಾಸಕರಾದ ಸಮೃದ್ಧಿ ಮಂಜುನಾಥ್. ವಿಧಾನ ಪರಿ?ತ್ ಶಾಸಕರಾದ ಇಂಚರ ಗೋವಿಂದರಾಜು, ಚಿದಾನಂದ ಎಂ.ಗೌಡ, ಎಂ.ಎಲ್ ಅನಿಲ್ ಕುಮಾರ್, ಡಿ.ಟಿ ಶ್ರೀನಿವಾಸ ಅವರು ಭಾಗವಹಿಸುವರು.

## ಪರೀಕ್ಷಾ ಕೇಂದ್ರದ ಸುತ್ತಲೂ ನಿಷೇಧಾಜ್ಞೆ

**ಮೈಸೂರು:** ನಗರ ಪೊಲೀಸ್ ಕಮೀಷನರೇಟ್ ವ್ಯಾಪ್ತಿಯ 09 ಪರೀಕ್ಷಾ ಕೇಂದ್ರಗಳಲ್ಲಿ ಜುಲೈ 20 ರಂದು ಕರ್ನಾಟಕ ನಗರ ನೀರು ಸರಬರಾಜು ಮತ್ತು ಒಳಚರಂಡಿ ಸಂಸ್ಥೆಯ ನೇಮಕಾತಿಯ ಕಡ್ಡಾಯ ಕನ್ನಡ ಭಾಷೆ ಪರೀಕ್ಷೆಯು ನಡೆಯಲಿದ್ದು, ಮಧ್ಯಾಹ್ನ 12:30 ಗಂಟೆಯಿಠದ ಸಂಜೆ 6 ಗಂಟೆಯವರೆ ಭಾರತೀಯ ನಾಗರೀಕ ಸುರಕ್ಷಾ ಸಂಹಿತೆ-2023 ಸೆಕ್ಷನ್ 163 ರೀತ್ಯ ಪರೀಕ್ಷಾ ಕೇಂದ್ರಗಳ ಸುತ್ತಲೂ 200 ಮೀಟರ್ ವ್ಯಾಪ್ತಿಯ ನಿಷೇಧಾಜ್ಞೆಯನ್ನು ಜಾರಿಗೊಳಿಸಲಾಗಿದೆ.

ಪೀಪಲ್ಸ್ ಪಾರ್ಕ್ನ ಸರ್ಕಾರಿ ಬಾಲಕಿಯರ ಪಿಯು ಕಾಲೇಜು, ದೇವರಾಜ ಮೊಹಲ್ಲಾದ ದೇವರಾಜ ಸರ್ಕಾರಿ ಬಾಲಕಿಯರ ಪಿಯು ಕಾಲೇಜು, ನ್ಯೂ ಸಯ್ಯಾಜಿ ರಾವ್ ರಸ್ತೆಯ ಡಿ.ಬನುಮಯ್ಯ ಪಿಯು ಕಾಲೇಜು, ಒಂಟಿಕೊಪ್ಪಲಿನ ಮಾತೃ ಮಂಡಳಿ ವೃತ್ತದ ಸರ್ಕಾರಿ ಪಿಯು ಕಾಲೇಜು, ಜಯಲಕ್ಷ್ಮೀಪುರಂನ ಎಸ್ಬಿಆರ್‌ಆರ್ ಮಹಾಜನ ಪಿಯು ಕಾಲೇಜು, ಕಾಳಿದಾಸ ರಸ್ತೆಯ ಶ್ರೀ ವಿವೇಕಾನಂದ ಪಿಯು ಕಾಲೇಜು, ನಾರಾಯಣ ಶಾಸ್ತ್ರೀ ರಸ್ತೆಯ ಮಹಾರಾಣಿ ಸರ್ಕಾರಿ ಪಿಯು ಕಾಲೇಜು, ಸೀತಾವಿಲಾಸ ರಸ್ತೆಯ ಮರಿಮಲ್ಲಪ್ಪ ಪ್ರೌಢಶಾಲೆ, ಜೆಎಲ್ಬಿ ರಸ್ತೆಯ ಮಹಾರಾಜ ಸರ್ಕಾರಿ ಪಿಯು ಕಾಲೇಜು ಪರೀಕ್ಷಾ ಕೇಂದ್ರಗಳಲ್ಲಿ ಪರೀಕ್ಷೆ ನಡೆಯಲಿದೆ.

ಈ ಸಂದರ್ಭದಲ್ಲಿ ಪರೀಕ್ಷಾರ್ಥಿಗಳು ಹಾಗೂ ಪರೀಕ್ಷಾ ಸಿಬ್ಬಂದಿಗಳನ್ನು ಹೊರತುಪಡಿಸಿ ಅನಧಿಕೃತ ವ್ಯಕ್ತಿಗಳು ಸಂಚರಿಸಬಾರದು ಮತ್ತು ಯಾರು ಆಕ್ಷೇಪಾರ್ಹ ವಸ್ತುಗಳನ್ನು ಒಯ್ಯಬಾರದು ಹಾಗೂ ಪರೀಕ್ಷಾ ಕೇಂದ್ರಗಳ ಸುತ್ತಮುತ್ತಲಿರುವ ಜೆರಾಕ್ಸ್ ಅಥವಾ ಸೈಬರ್ ಅಂಗಡಿಗಳನ್ನು ಪರೀಕ್ಷಾ ಅವಧಿಯಲ್ಲಿ ಮುಚ್ಚುವಂತೆ ಆದೇಶಿಸಲಾಗಿದೆ ಎಂದು ನಗರ ಪೊಲೀಸ್ ಆಯುಕ್ತರಾದ ಸೀಮಾ ಲಾಟ್ಕರ್ ಅವರು ಪ್ರಕಟಣೆಯಲ್ಲಿ ತಿಳಿಸಿದ್ದಾರೆ.

## ಪ್ರವಾಸ ಕಾರ್ಯಕ್ರಮ ಆಯೋಜನೆ

**ಮೈಸೂರು:** ಭಾರತೀಯ ರೈಲ್ವೆ ಕ್ಯಾಟರಿಂಗ್ ಮತ್ತು ಟೂರಿಸಮ್ ಕಾರ್ಪೊರೇಷನ್ ಲಿಮಿಟೆಡ್ (ಐ.ಆರ್.ಸಿ.ಟಿ.ಸಿ) ವತಿಯಿಂದ ಆಗಸ್ಟ್ 22 ರಿಂದ 11 ದಿನಗಳ '' ಭಾರತ ಗೌರವ್ ಮಾನಸ್ಖಂಡ್ ಎಕ್ಸ್ಪ್ರೆಸ್ನಿಂದ ದೇವ್ ಭೂಮಿ ಉತ್ತರಾಖಂಡ ಯಾತ್ರೆ'' ರೈಲು ಹಾಗೂ ವಿಮಾನ ಪ್ರವಾಸಗಳನ್ನು ಏರ್ಪಡಿಸಲಾಗಿದೆ.

ರೈಲು 22ನೇ ಆಗಸ್ಟ್ 2024 ರಂದು ಬೆಂಗಳೂರಿನಿಠದ ಹೊರಡಲಿದೆ. ಪುವಾಸಿಗರು ದಾವಣಗೆರೆ, ಹುಬ್ಬಳ್ಳಿ ಮತ್ತು ಬೆಳಗಾವಿಯಿಂದ ರೈಲನ್ನು ಹತ್ತಬಹುದು. 11 ದಿನಗಳ ಪ್ರವಾಸದಲ್ಲಿ ಭೇಟಿ ನೀಡುವ ಸ್ಥಳಗಳು ನೈನಿತಾಲ್- ನೈನಾ ದೇವಿ ದೇವಸ್ಥಾನ, ಕೈಂಚಿ ಧಾಮ್ ದೇವಸ್ಥಾನ ಅಲೋರಾ - ನಂದಾ ದೇವಿ ದೇವಸ್ಥಾನ, ಕಸರ್ ದೇವಿ ದೇವಸ್ಥಾನ, ಜಾಗೇಶ್ವರ್ ಧಾಮ್, ಗೋಲು ಚಿತ್ತೆ ದೇವಸ್ಥಾನ, ಕಥರ್ಮಲ್ ದೇವಸ್ಥಾನ, ಕೌಸನಿ - ಬೈಜನಾಥ್ ದೇವಸ್ನಾನ, ಬಾಗೇಶ್ವರ್ ದೇವಸ್ಥಾನ ಪ್ಯಾಕೇಜ್ ಬೆಲೆ: ಸ್ಟ್ಯಾಂಡರ್ಡ್ ರೂ. 28,020 ಮತ್ತು ಡೀಲಕ್ಸ್ - 35,340 (ಪ್ರತಿ ವ್ಯಕ್ತಿಗೆ) ಆಗಿರುತ್ತದೆ.

IRCTC ವತಿಯಿಂದ ಮುಂಬರುವ ತಿಂಗಳಲ್ಲಿ ಶ್ರೀಲಂಕಾ ಮತ್ತು ಭೂತಾನ್ಗೆ ''ಶ್ರೀಲಂಕಾ ರಾಮಾಯಣ ಯಾತ್ರಾ'' ಎಂಬ 07 ದಿನಗಳ ಅಂತರಾಷ್ಟ್ರೀಯ ಪ್ರವಾಸಗಳನ್ನು ಪ್ರಾರಂಭಿಸಿದೆ. ಆಗಸ್ಟ್ 21 ರಿಂದ ಪ್ರಾರಂಭವಾಗುತ್ತದೆ. ಪ್ಯಾಕೇಜ್ ಬೆಲೆ 65,650 (ಪ್ರತಿ ವ್ಯಕ್ತಿಗೆ) ಭೇಟಿನೀಡುವ ಸ್ಥಳಗಳು: ಕೊಲಂಬೊ, ದಂಬುಲ್ಲಾ, ಟೆಂಕೋಮಲೀ, ಕ್ಯಾಂಡಿ, ನೂವಾರ ಎಲೆಯ, ಭೂತಾನ್- 7 ದಿನಗಳ ಪ್ರವಾಸದಲ್ಲಿ ಪಾರೋ, ಪುನಾಖಾ ಮತ್ತು ಥಿಂಪು ಪ್ರದೇಶಗಳಿಗೆ ಭೇಟಿ ನೀಡಲಾಗುವುದು. ಸೆಪ್ಟಂಬರ್ 05 ರಿಂದ ಪ್ರಾರಂಭವಾಗುತ್ತದೆ ಪ್ಯಾಕೇಜ್ ಬೆಲೆ ರೂ.78,500 (ಪ್ರತಿ ವ್ಯಕ್ತಿಗೆ) ಆಗಿರುತ್ತದೆ.ಪ್ರವಾಸಕ್ಕೆ ಹೋಗಲು ಇಚ್ಛಿಸುವವರು ಐ.ಆರ್.ಸಿ.ಟಿ.ಸಿ ಕೌಂಟರ್ಗಳು ಮತ್ತು www.irctctourism.com ವೆಬ್ಸೈಟ್ ಮೂಲಕ ಆನ್ಲೈನ್ನಲ್ಲಿ ಟಿಕೆಟ್ ಬುಕಿಂಗ್ ಮಾಡಬಹುದಾಗಿದೆ.

ಹೆಚ್ಚನಿ ಮಾಹಿತಿಗಾಗಿ ಬೆಂಗಳೂರಿನ ದೂ.ಸಂ: 9003140710/708, ಮೈಸೂರಿನ ದೂ.ಸಂ: 8595931294 ಹಾಗೂ ಹುಬ್ಬಳ್ಳಿಯ ದೂ.ಸಂ: 8595931293-291 ಅನ್ನು ಸಂಪರ್ಕಿಸಬಹುದು ಎಂದು ಐ.ಆರ್.ಸಿ.ಟಿ.ಸಿ ನ ಪ್ರಾದೇಶಿಕ ವ್ಯವಸ್ಥಾಪಕರು ಪ್ರಕಟಣೆಯಲ್ಲಿ ತಿಳಿಸಿದ್ದಾರೆ.

# ಬಾಲ್ಯ ವಿವಾಹ ತಡೆಯಲು ಎಲ್ಲರ ಸಹಕಾರ ಅಗತ್ಯ

**ಚಾಮರಾಜನಗರ:** ಬಾಲ್ಯ ವಿವಾಹದಿಂದ ಹೆಣ್ಣು ಮಕ್ಕಳು ದೈಹಿಕ, ಮಾನಸಿಕ ಹಾಗೂ ಬೌದ್ಧಿಕವಾಗಿ ಶೋ?ಣೆಗೆ ಒಳಗಾಗುತ್ತಿರುವುದರಿಂದ ಭವಿಷ್ಯ ಕುಂಠಿತಗೊಳ್ಳಲಿದ್ದು. ಇದನ್ನು ತಡೆಯುವಲ್ಲಿ ಎಲ್ಲರ ಸಹಕಾರ ಅಗತ್ಯವಾಗಿದೆ ಎಂದು ಜಿಲ್ಲಾ ವಕೀಲರ ಸಂಘದ ನಿಕಟ ಪೂರ್ವ ಅಧ್ಯಕ್ಷ ಉಮ್ಮತ್ತೂರು ಇಂದುಶೇಖರ್ ಅವರು ಹೇಳಿದರು.

ತಾಲೂಕಿನ ಅಮಚವಾಡಿ ಗ್ರಾಮದ ಸರ್ಕಾರಿ ಪದವಿ ಪೂರ್ವ ಕಾಲೇಜಿನಲ್ಲಿ ಜಿಲ್ಲಾಡಳಿತ, ಜಿಲ್ಲಾ ಪಂಚಾಯತ್, ಜಿಲ್ಲಾ ಯುವ ಸಬಲೀಕರಣ ಮತ್ತು ಕ್ರೀಡಾ ಇಲಾಖೆ ಹಾಗೂ ಸರ್ಕಾರಿ ಪದವಿ ಪೂರ್ವ ಕಾಲೇಜಿನ ಸಂಯುಕ್ತ ಆಶ್ರಯದಲ್ಲಿ ಆಯೋಜಿಸಿದ್ದ ಕಾನೂನು ಅರಿವು ಕಾರ್ಯಕ್ರಮವನ್ನು ಉದ್ಘಾಟಿಸಿ ಅವರು ಮಾತನಾಡಿದರು.

ಬಾಲ್ಯದಲ್ಲಿಯೇ ಮದುವೆ ಮಾಡುವುದು ಅಪರಾಧ. 18 ವ?ಕ್ಕಿಂತ ಕಡಿಮೆ ವಯಸ್ಸಿನ ಹೆಣ್ಣು ಮಕ್ಕಳನ್ನು ಹಾಗೂ 21 ವರ್ಷಕ್ಕಿಂತ ಕಡಿಮೆ ವಯಸ್ಸಿನ ಗಂಡು ಮಕ್ಕಳ ವಿವಾಹ ಮಾಡುವುದು ಬಾಲ್ಯ ವಿವಾಹ ನಿಷೇಧ ಕಾಯ್ದೆ 2006ರ ಪ್ರಕಾರ ಅಪರಾಧವಾಗಲಿದೆ. ಇದರಿಂದ ಮಕ್ಕಳ ಹಕ್ಕುಗಳಿಗೆ ಧಕ್ಕೆಯಾಗುವುದರ ಜೊತೆಗೆ ಮಕ್ಕಳ ಆರೋಗ್ಯದ ಮೇಲೆ ದುಷ್ಪರಿಣಾಮಗಳು



ಉಂಟಾಗಲಿದೆ ಎಂದರು.

ವಿದ್ಯಾರ್ಥಿಗಳ ಮೇಲೆ ಇತ್ತೀಚಿನ ದಿನಗಳಲ್ಲಿ ಲೈಂಗಿಕ ದೌರ್ಜನ್ಯ ಪ್ರಕರಣಗಳು ಹೆಚ್ಚಾಗುತ್ತಿದ್ದು, ಈ ಹಿನ್ನಲೆಯಲ್ಲಿ ವಿದ್ಯಾರ್ಥಿಗಳು ಯಾವುದೇ ದೌರ್ಜನ್ಯವಾಗದಂತೆ ಜಾಗೃತರಾಗಿ, ಸಮಾಜದ ಇತರರಿಗು ದೌರ್ಜನ್ಯ ಪ್ರಕರಣಗಳ ಬಗ್ಗೆ ಅರಿವು ಮೂಡಿಸಬೇಕು ಎಂದು ಇಂದುಶೇಖರ್ ಅವರು ತಿಳಿಸಿದರು.

ಕಾಲೇಜಿನ ಉಪನ್ಯಾಸಕರಾದ ಸುರೇಶ್ ಎನ್. ಋಗ್ವೇದಿ ಅವರು ಪ್ರಾಸ್ತವಿಕವಾಗಿ ಮಾತನಾಡಿ ಮಕ್ಕಳ ರಕ್ಷಣೆಗಾಗಿ ಕೇಂದ್ರ ಹಾಗೂ ರಾಜ್ಯ ಸರ್ಕಾರಗಳು ಹಲವು ಕಾನೂನುಗಳನ್ನು ಜಾರಿಗೆ ತಂದಿದ್ದು, ಈ ಕಾನೂನುಗಳ ಅರಿವು ಪಡೆದು ಸದುಪಯೋಗ ಹೊಂದಬೇಕು ಎಂದರು.

ಹಿರಿಯ ವಕೀಲರಾದ ವಿದ್ಯಾಲತಾ ಅವರು ಮಾತನಾಡಿ ಪ್ರಸ್ತುತ ಸಮಾಜದಲ್ಲಿ ಹೆಣ್ಣು ಗಂಡು ಇಬ್ಬರು ಸಮಾನರು. ವಿದ್ಯಾರ್ಥಿ ಜೀವನದ ಭವಿ?ೃ ರೂಪಿಸಿಕೊಳ್ಳಲು ಇದು ಸಕಾಲ. ವಿದ್ಯಾರ್ಥಿಗಳು ಪ್ರೀತಿ ಪ್ರೇಮದ ಆಕ?ಣೆಗೆ ಒಳಗಾಗಬಾರದು. ಯಾವುದೇ ಕಾನೂನು ಬಾಹಿರ ಚಟುವಟಿಕೆಗಳಲ್ಲಿ ಭಾಗಿಯಾಗದೆ ಓದಿನ ಕಡೆ ಗಮನಹರಿಸಿ ಜೀವನದಲ್ಲಿ ಏನಾದರೂ ಸಾಧನೆ ಮಾಡಬೇಕು. ತಂದೆ ತಾಯಿ ಕಂಡ ಕನಸುಗಳನ್ನು ಸಾಕಾರಗೊಳಿಸಬೇಕೆಂದು ತಿಳಿಸಿದರು.

ಜಿಲ್ಲಾ ಬಾಲ ನ್ಯಾಯ ಮಂಡಳಿಯ ಸದಸ್ಯರಾದ ಟಿ.ಜೆ. ಸುರೇಶ್ ಅವರು ಮಾತನಾಡಿ ವಿದ್ಯಾರ್ಥಿಗಳು ಹದಿಹರೆಯದ ವಯಸ್ಸಿನಲ್ಲಿ ಜಾಗೃತರಾಗಿ ಹೆಜ್ಜೆ ಇಡಬೇಕು. ಕೆಟ್ಟ ಆಲೋಚನೆಯಿಂದ ದೂರವಿದ್ದು, ಒಳ್ಳೆಯದರ ಕಡೆ ಗಮನ ಹರಿಸಿ ಉತ್ತಮ ಪುಸ್ತಕಗಳನ್ನು ಓದುವ ಹವ್ಯಾಸ ಬೆಳೆಸಿಕೊಳ್ಳಬೇಕು ಎಂದರು.

ಕಾರ್ಯಕ್ರಮದ ಅಧ್ಯಕ್ಷತೆ ವಹಿಸಿ ಮಾತನಾಡಿದ ಕಾಲೇಜಿನ ಪ್ರಭಾರ ಪ್ರಾಂಶುಪಾಲರಾದ ಆರ್. ಮೂರ್ತಿ ಅವರು ವಿದ್ಯಾರ್ಥಿಗಳು ಪಾಠ ಪ್ರವಚನದ ಜೊತೆಗೆ ಕಾನೂನಿನ ಅರಿವು ಪಡೆದು ಉತ್ತಮ ಜೀವನ ರೂಪಿಸಿಕೊಳ್ಳುವಂತೆ ವಿದ್ಯಾರ್ಥಿಗಳಿಗೆ ಕಿವಿಮಾತು ಹೇಳಿದರು. ಸಾರ್ವಜನಿಕ ಗ್ರಂಥಾಲಯ ಇಲಾಖೆಯ ಸಹಾಯಕ ಗ್ರಂಥ ಪಾಲಕ ಶಿವಕುಮಾರ್, ಉಪನ್ಯಾಸಕರಾದ ಪಿ. ಶಿವಸ್ವಾಮಿ, ಆರ್. ಬಸವಣ್ಣ, ಬಿ.ಎನ್. ರಮೇಶ್, ಸುರೇಶ್ ಯುವ ಸ್ಪಂದನ ಕೇಂದ್ರದ ಪರಿವರ್ತಕ ಗುರುರಾಜ್ ಇದ್ದರು.

# ಕೃಷಿ ಪ್ರಶಸ್ತಿಗಾಗಿ ಅರ್ಜಿ ಆಹ್ವಾನ

**ಕೋಲಾರ:** ಪ್ರಸಕ್ತ ಸಾಲಿನಲ್ಲಿ ಮುಂಗಾರು ಹಂಗಾಮಿನಲ್ಲಿ ಖುಷ್ಕಿ ಬಿತ್ತನೆ ಕಾರ್ಯ ಪ್ರಗತಿಯಲ್ಲಿರುತ್ತವೆ. ಜಿಲ್ಲೆಯಲ್ಲಿ ಕೃಷಿ ಕ್ಷೇತ್ರದಲ್ಲಿ ಉತ್ಪಾದನೆ ಮತ್ತು ಉದ್ಪಾದಕತೆ ಹೆಚ್ಚಿಸಲು ರೈತರಲ್ಲಿ ಸ್ಪರ್ಧಾತ್ಮಕ ಮನೋಭಾವನೆಯನ್ನು ಬೆಳೆಸುವುದೇ ಕೃಷಿ ಪ್ರಶಸ್ತಿ ನೀಡುವ ಕಾರ್ಯಕ್ರಮ ಉದ್ದೇಶವಾಗಿರುತ್ತದೆ. ಜಿಲ್ಲೆಯಲ್ಲಿ ಎಲ್ಲಾ ತಾಲ್ಲೂಕಿನಲ್ಲಿ ಹೆಚ್ಚಾಗಿ ಬೆಳೆಯುವ ಮಳೆಯಾಶ್ರಿತ ಪ್ರದೇಶದ ರಾಗಿಯನ್ನು ಜಿಲ್ಲಾ ಮತ್ತು ತಾಲ್ಲೂಕು ಮಟ್ಟದ ಬೆಳೆ ಸ್ಪರ್ಧೆಗೆ ಪರಿಗಣಿಸಿದೆ. ಆಯ್ಕೆ ಮಾಡಿರುವ ಬೆಳೆಯಲ್ಲಿ ಜಿಲ್ಲಾದ್ಯಂತ ಅತಿ ಹೆಚ್ಚು ಇಳುವರಿ ಹೊಂದಿರುವ ಮೊದಲ 3 ರೈತರನ್ನು ಜಿಲ್ಲಾ ಮಟ್ಟಕ್ಕೆ ಪರಿಗಣಿಸಲಾಗುವುದು. ತದನಂತರ ತಾಲ್ಲೂಕು ಮಟ್ಟಕ್ಕೆ ಪರಿಗಣಿಸಲಾಗುವುದು. ಆದ್ದರಿಂದ ಹೆಚ್ಚಿನ ರೈತರು ಕೃಷಿ ಪ್ರಶಸ್ತಿ ಯೋಜನೆಯ ಪ್ರಯೋಜನೆ ಪಡೆದುಕೊಳ್ಳಲು ಆನ್‌ಲೈನ್ ಮೂಲಕ ಅರ್ಜಿ ಆಹ್ವಾನಿಸಲಾಗಿದೆ. ಕೃಷಿ ಇಲಾಖೆಯ ಕೆ-ಕಿಸಾನ್ ಪೋರ್ಟಲ್‌ನಲ್ಲಿ ನೂತನವಾಗಿ ಕೃಷಿ ಪ್ರಶಸ್ತಿಗೆ ಅರ್ಜಿ ನಮೂನೆಯನ್ನು ಅಳವಡಿಸಲಾಗಿರುತ್ತದೆ. Citizen Login ಅಥವಾ RSK Login ಮೂಲಕ ಹತ್ತಿರದ ರೈತ ಸಂಪರ್ಕ ಕೇಂದ್ರ, ಸೇವಾ ಕೇಂದ್ರ, ಸ್ವತ: ಆಸಕ್ತ ರೈತ ಮತ್ತು ರೈತ ಮಹಿಳೆಯರು ಪ್ರತ್ಯೇಕವಾಗಿ ಸದರಿ ಕೆ-ಕಿಸಾನ್ ಪೋರ್ಟಲ್‌ರಡಿ ಅಗತ್ಯ ದಾಖಲಾತಿಗಳೊಂದಿಗೆ ತಮ್ಮ ಎಫ್.ಐ.ಡಿ ಯನ್ನು ಬಳಸಿಕೊಂಡು ಅರ್ಜಿಗಳನ್ನು ಆಗಸ್ಟ್ 31 ರೊಳಗೆ ಸಲ್ಲಿಸಬಹುದು. ಪ್ರಸಕ್ತ ಸಾಲಿನಿಂದ ಕೃಷಿ ಪ್ರಶಸ್ತಿಯಡಿ ಬೆಳೆ ಸ್ಪರ್ಧೆಗೆ ಅರ್ಜಿ ಶುಲ್ಕವನ್ನು ರದ್ದುಪಡಿಸಲಾಗಿರುತ್ತದೆ. ಹೆಚ್ಚಿನ ಮಾಹಿತಿಗಾಗಿ ಹತ್ತಿರದ ರೈತ ಸಂಪರ್ಕ ಕೇಂದ್ರ, ಸಂಪರ್ಕಿಸಬಹುದು.

## ವಿದ್ಯಾರ್ಥಿನಿಲಯಕ್ಕೆ ಹೊಸ ಬಾಡಿಗೆ ಕಟ್ಟಡ

**ಕೋಲಾರ:** ಮಾಲೂರು ತಾಲ್ಲೂಕಿನ ಚಿಕ್ಕತಿರುಪತಿ ಗ್ರಾಮದಲ್ಲಿ ಸಮಾಜ ಕಲ್ಯಾಣ ಇಲಾಖೆ ವತಿಯಿಂದ ಬಾಡಿಗೆ ಕಟ್ಟಡದಲ್ಲಿ ನಡೆಯುತ್ತಿರುವ ಡಾ||ಬಿ.ಆರ್ ಅಂಬೇಡ್ಕರ್ ಸರ್ಕಾರಿ ಮೆಟ್ರಿಕ್ ಪೂರ್ವ ಬಾಲಕರ ವಿದ್ಯಾರ್ಥಿನಿಲಯಕ್ಕೆ ಈಗಿರುವ ಕಟ್ಟಡವು ವಿದ್ಯಾರ್ಥಿಗಳಿಗೆ ವಾಸ್ತವ್ಯ ಇರಲು ಸೂಕ್ತವಾಗಿರುವುದಿಲ್ಲ. ಪ್ರಸಕ್ತ ಸಾಲಿನ ಈ ವಿದ್ಯಾರ್ಥಿನಿಲಯವನ್ನು ಪ್ರಾರಂಭಿಸಬೇಕಾಗಿರುವುದರಿಂದ ವಿದ್ಯಾರ್ಥಿಗಳ ವಿದ್ಯಾಭ್ಯಾಸ ಹಾಗೂ ಆರೋಗ್ಯದ ಹಿತದೃಷ್ಟಿಯಿಂದ ಚಿಕ್ಕತಿರುಪತಿ ಗ್ರಾಮದಲ್ಲಿ ಸೂಕ್ತವಾದ ಮತ್ತು ಯೋಗ್ಯವಾದ ಕಟ್ಟಡವನ್ನು ಬಾಡಿಗೆಗೆ ನೀಡಲು ಇಚ್ಛಿಸುವವರು ನಿಲಯದ ವಾರ್ಡನ್ ಹಾಗೂ ಕಛೇರಿ ವೇಳೆಯಲ್ಲಿ ಸಂಪರ್ಕಿಸಬಹುದು. ಹೆಚ್ಚಿನ ಮಾಹಿತಿಗಾಗಿ ದೂ.ಸಂ.8088888312, 94808431260, 8970272207 ಮತ್ತು 08151-295190 ಸಂಪರ್ಕಿಸಬಹುದುಯೆಂದು ಇಲಾಖೆಯ ಸಹಾಯಕ ನಿರ್ದೇಶಕರು ಪ್ರಕಟಣೆಯಲ್ಲಿ ತಿಳಿಸಿದ್ದಾರೆ.

# ಸಂಜೆ ಟಿಪ್ಸ್




## ದೇಶದಾದ್ಯಂತ 'ಇಸುಜು ಐಕೇರ್ ಮಳೆಗಾಲದ ಸರ್ವೀಸ್ ಕ್ಯಾಂಪ್' ನಡೆಸಲಿರುವ ಇಸುಜು ಮೋಟರ್ಸ್ ಇಂಡಿಯಾ

ಗ್ರಾಹಕರಿಗೆ ಅತ್ಯುತ್ತಮ ಸೇವೆ ಮತ್ತು ಮಾಲೀಕತ್ವದ ಅನುಭವ ಒದಗಿಸಲು ಇಸುಜುದ ಬದ್ಧತೆ ಪುನರುಚ್ಚರಿಸುವ ನಿರಂತರ ಪ್ರಯತ್ನದಲ್ಲಿ, ಇಸುಜು ಮೋಟರ್ಸ್ ಇಂಡಿಯಾ ತನ್ನ ಇಸುಜು ಡಿಮ್ಯಾಕ್ಸ್ ಪಿಕ್ ಅಪ್ಸ್ ಮತ್ತು ಎಸ್ಯುವಿ ವೆಹಿಕಲ್ಗಳ ಶ್ರೇಣಿಗಾಗಿ ದೇಶದಾದ್ಯಂತ ಇಸುಜು ಐಕೇರ್ ಮಳೆಗಾಲದ ಸರ್ವೀಸ್ ಕ್ಯಾಂಪ್ ಆಯೋಜಿಸುತ್ತಿದೆ. ಈ ಮಳೆಗಾಲದ ಋತುವಿನಲ್ಲಿ ಕಿರಿಕಿರಿ ಮುಕ್ತ ಚಾಲನಾ ಅನುಭವಕ್ಕಾಗಿ ದೇಶದಾದ್ಯಂತ ನಡೆಯಲಿರುವ ಈ ಸರ್ವೀಸ್ ಕ್ಯಾಂಪ್ ಗ್ರಾಹಕರಿಗೆ ಉತ್ತೇಜಕಕರ ಅನುಕೂಲತೆಗಳನ್ನು ಮತ್ತು ತಡೆಗಟ್ಟಬಹುದಾದ ನಿರ್ವಹಣಾ ತಪಾಸಣೆಗಳನ್ನು ಒದಗಿಸುವ ಗುರಿಯನ್ನು ಹೊಂದಿದೆ.ಇಸುಜು ಕೇರ್'ನ ಈ ಉಪಕ್ರಮದ ಅಂಗವಾಗಿ ಮಳೆಗಾಲದ ಸರ್ವೀಸ್ ಕ್ಯಾಂಪ್‌ಅನ್ನು ಇಸುಜುವಿನ ಎಲ್ಲ ಅಧಿಕೃತ ಡೀಲರ್ ಸರ್ವೀಸ್ ಕೇಂದ್ರಗಳಲ್ಲಿ 2024ರ ಜುಲೈ 22 ರಿಂದ 28 ಜುಲೈ ರವರೆಗೆ ಆಯೋಜಿಸಲಾಗುವುದು. ಈ ಅವಧಿಯಲ್ಲಿ ಗ್ರಾಹಕರು ತಮ್ಮ ವಾಹನಗಳಿಗೆ ವಿಶೇಷ ಕೊಡುಗೆಗಳು ಮತ್ತು ಪ್ರಯೋಜನಗಳನ್ನು ಸಹ ಪಡೆಯಬಹುದು. ಬೆಂಗಳೂರು, ಮಂಗಳೂರು, ಅಹಮದಾಬಾದ್, ಬಾರಾಮುಲ್ಲಾ, ಭೀಮಾವರಂ, ಭುಜ್, ಕ್ಯಾಲಿಕಟ್, ಚೆನ್ನೈ, ಕೊಯಮತ್ತೂರು, ದೆಹಲಿ, ದಿಮಾಪುರ್, ಗಾಂಧಿಧಾಮ್, ಗೋರಖ್ಪುರ, ಗುರುಗ್ರಾಮ್, ಗುವಾಹಟಿ, ಹೈದರಾಬಾದ್, ಇಂದೋರ್, ಜೈಪುರ, ಜೈಗಾಂವ್, ಜಮ್ಮು, ಜಲಂಧರ್, ಪುಣೆ, ರಾಯ್ಪುರ, ರಾಜಮಂಡ್ರಿ, ರಾಜ್ಕೋಟ್, ಸಿಲಿಗುರಿ, ಸೂರತ್, ತಿರುಪತಿ, ತಿರುವನಂತಪುರ, ವಡೋದರಾ, ವಿಜಯವಾಡ ಮತ್ತು ವಿಶಾಖಪಟ್ಟಣಂ. ನಗರಗಳಲ್ಲಿ ಇರುವ ಇಸುಜುವಿನ ಎಲ್ಲಾ ಅಧಿಕೃತ ಸರ್ವೀಸ್ ಕೇಂದ್ರಗಳಲ್ಲಿ ಈ ಚಳಿಗಾಲದ ಸೇವಾ ಶಿಬಿರವನ್ನು ಆಯೋಜಿಸಲಾಗುತ್ತದೆ.ಹೆಚ್ಚಿನ ಮಾಹಿತಿಗಾಗಿ ಗ್ರಾಹಕರು ಉಚಿತ ಕರೆ ಸಂಖ್ಯೆ 1800 4199 188 ಸಂಪರ್ಕಿಸಬಹುದು.

## ಸೋಯಾ ಬೀನ್ ಕಬಾಬ್

### ಪಾಕ ಶಾಲೆ



### ಬೇಕಾಗಿರುವ ಪದಾರ್ಥ

ಸೋಯಾ ಬೀನ್- 20-25, ಶುಂಠಿ-ಬೆಳ್ಳುಳ್ಳಿ ಪೇಸ್ಟ್-2 ಚಮಚ, ಹಸಿ ಮೆಣಸಿನಕಾಯಿ-2, ಈರುಳ್ಳಿ- 3, ಮೊಸರು-ಸ್ವಲ್ಪ, ಕೊತ್ತಂಬರಿ ಸೊಪ್ಪು- ಸ್ವಲ್ಪ, ಖಾರದ ಪುಡಿ- ಒಂದು ಚಮಚ, ಗರಂ ಮಸಾಲ- ಒಂದೂವರೆ ಚಮಚ, ಕಾಳು ಮೆಣಸಿನ ಪುಡಿ- 1 ಚಮಚ, ಎಣ್ಣೆ- ಕರಿಯಲು ಅಗತ್ಯವಿದ್ದಷ್ಟು, ಉಪ್ಪು- ರುಚಿಗೆ ತಕ್ಕಷ್ಟು

### ಮಾಡುವ ವಿಧಾನ

ಸೋಯಾ ಬೀನ್ ಅನ್ನು 20-25 ನಿಮಿಷ ಬಿಸಿ ನೀರಿನಲ್ಲಿ ನೆನೆಸಿ. ಬಳಿಕ ಹಸಿ ಮೆಣಸಿನಕಾಯಿ, ಈರುಳ್ಳಿ, ಕೊತ್ತಂಬರಿ ಸೊಪ್ಪನ್ನು ಮಿಕ್ಸಿ ಜಾರಿಗೆ ಹಾಕಿ ಪೇಸ್ಟ್ ಮಾಡಿಟ್ಟುಕೊಳ್ಳಿ. ನಂತರ ಇದೇ ಮಿಕ್ಸಿ ಜಾರಿಗೆ ನೆನೆಸಿದ ಸೋಯಾ ಬೀನ್ ಹಾಕಿ ರುಬ್ಬಿಕೊಳ್ಳಿ. ಇದಕ್ಕೆ ಶುಂಠಿ- ಬೆಳ್ಳುಳ್ಳಿ ಪೇಸ್ಟ್, ಖಾರದ ಪುಡಿ, ಗರಂ ಮಸಾಲ, 2 ಚಮಚ ಮೊಸರು, ಕಾಳು ಮೆಣಸಿನ ಪುಡಿ, ಉಪ್ಪು, ಕೊತ್ತಂಬರಿ ಸೊಪ್ಪು ಹಾಕಿ ಮಿಶ್ರಣ ಮಾಡಿ ಅರ್ಧ ಗಂಟೆ ನೆನೆಯಲು ಬಿಡಿ.

ಪ್ಯಾನ್ ಬಿಸಿ ಮಾಡಿ, ಅದರಲ್ಲಿ ಎಣ್ಣೆ ಹಾಕಿ, ಎಣ್ಣೆ ಬಿಸಿಯಾದಾಗ ಮಸಾಲೆಯುಕ್ತ ಸೋಯಾ ಬೀನ್ ನಿಮಗೆ ಬೇಕಾಗ ಆಕಾರದಲ್ಲಿ ತಟ್ಟಿ ಎಣ್ಣೆ ಹಾಕಿ 10 ನಿಮಿಷ ಫ್ರೈ ಮಾಡಿದರೆ ರುಚಿಯಾದ ಸೋಯಾ ಬೀನ್ ಕಬಾಬ್ ಸವಿಯಲು ಸಿದ್ಧ.

## ಮೃಣಾಲ್ ಠಾಕೂರ್ ಡಯಟ್ ಸೀಕ್ರೆಟ್



ಸೌತ್ ಸಿನಿ ಪ್ರೇಕ್ಷಕರ ಮನಸೂರೆಗೊಂಡ ನಟಿ ಮೃಣಾಲ್ ಠಾಕೂರ್ ಬಗ್ಗೆ ವಿಶೇಷವಾಗಿ ಹೇಳಬೇಕಿಲ್ಲ.. ಸೀತಾರಾಮಂ ಸಿನಿಮಾದ ಮೂಲಕ ಈಗಾಗಲೇ ಎಲ್ಲಾ ವರ್ಗದ ಚಲನಚಿತ್ರ ಪ್ರೇಮಿಗಳ ಮನಗೆದ್ದ ಚೆಲುವೆ ಈಕೆ. ಈ ಸಿನಿಮಾದಿಂದ ಟಾಲಿವುಡ್ನಲ್ಲಿ ಸಖತ್ ಕ್ರೇಜ್ ಗಿಟ್ಟಿಸಿಕೊಂಡರು.

ಆರಂಭದಲ್ಲಿ ಕ್ಯಾರೆಕ್ಟರ್ ಆರ್ಟಿಸ್ಟ್ ಮತ್ತು ಸೀರಿಯಲ್ ಆರ್ಟಿಸ್ಟ್ ಆಗಿ ಕೆರಿಯರ್ ಆರಂಭಿಸಿದ ಸುಂದರಿ ಈಗ ನಾಯಕಿಯಾಗಿ ಸದ್ದು ಮಾಡುತ್ತಿದ್ದಾರೆ. ಮೃಣಾಲ್ ಠಾಕೂರ್ ಅವರ ಡಯಟ್ ಸೀಕ್ರೆಟ್ ತಿಳಿದರೆ ನೀವು ಅದನ್ನು ಅನುಸರಿಸುವುದೆ ಬಿಡುವುದಿಲ್ಲ. ಬನ್ನಿ ನಟಿಯ ಆಹಾರದ ರಹಸ್ಯವೇನು ಎಂದು ನೋಡೋಣ? ಇತ್ತೀಚೆಗೆ ಮೃಣಾಲ್ ಠಾಕೂರ್ ತಾವು ತಮ್ಮ ಫಿಟ್ನೆಸ್ ಕಾಪಾಡಿಕೊಳ್ಳಲು ಸ್ಮೂಥಿ ಕುಡಿಯುತ್ತಾರೆ ಅಂತ ಹೇಳಿದ್ದಾರೆ.. ಹಾಗಿದ್ರೆ, ಆ ಸ್ಮೂಥಿ ಯಾವುದು..? ಅದನ್ನ ಮಾಡುವುದು ಹೇಗೆ? ಅದಕ್ಕೆ ಬೇಕಾದ ಪದಾರ್ಥಗಳೇನು? ಬನ್ನಿ ನೋಡೋಣ.. ಮೊದಲು ಒಂದು ಮಿಕ್ಸಿ ಜಾರ್ ತೆಗೆದುಕೊಳ್ಳಿ.. ಅದರಲ್ಲಿ ಎರಡು ಚಮಚ ಓಟ್ಸ್, ಒಂದು ಕಪ್ ಹಾಲು ಅಥವಾ ಮೊಸರು, ಸ್ವಲ್ಪ ಬ್ಲೂಬೆರ್ರಿ, ಸ್ಟ್ರಾಬೆರಿ, ಸ್ವಲ್ಪ ಬಾದಾಮಿ, ಒಂದು ಅಥವಾ ಎರಡು ಖರ್ಜೂರ ಹಾಕಿ.. ಇವೆಲ್ಲವನ್ನೂ ಮೃದುವಾದ ಪೇಸ್ಟ್ ಆಗಿ ರುಬ್ಬಿಕೊಳ್ಳಿ.. ಅಷ್ಟೇ ಆರೋಗ್ಯಕರ ಸ್ಮೂಥಿ ಸಿದ್ಧವಾಗಿದೆ.. ಮೃಣಾಲ್ ಠಾಕೂರ್ ಅವರು ಪ್ರತಿದಿನ ಈ ಸ್ಮೂಥಿಯನ್ನು ಕುಡಿಯುತ್ತಾರಂತೆ... ಹುಡುಗಿಯರೇ ಇನ್ನು ಏನ್ ಕಾಯ್ತೀರಿ.. ನೀವೂ ಮೃಣಾಲ್ ಟ್ಯಾಗೋರ್ ಅವರಂತೆ ಸುಂದರವಾಗಿ, ಯಂಗ್ ಆಗಿ ಕಾಣಬೇಕೆಂದರೆ ಈ ಆರೋಗ್ಯಕರ ಸ್ಮೂಥಿ ಟ್ರೈ ಮಾಡಿ ನೋಡಿ. ಮೃನಾಲ್ ನಿತ್ಯದ ಆಹಾರ ಕ್ರಮವನ್ನು ಬಹಳ ಕಟ್ಟುನಿಟ್ಟಾಗಿ ಪಾಲನೆ ಮಾಡುತ್ತಾರೆ. ಪ್ರತಿನಿತ್ಯ ಎಂಟು ಲೋಟದಷ್ಟು ಬಿಸಿನೀರನ್ನು ಸೇವನೆ ಮಾಡುತ್ತಾರೆ. ಕಾರ್ಬೋಹೈಡ್ರೇಡ್ ಹೊಂದಿರುವ ಪದಾರ್ಥವನ್ನು ಸೇವಿಸುವುದಿಲ್ಲ. ಜೊತೆಗೆ ಆದಷ್ಟು ಸಮತೋಲಿತ ಆಹಾರವನ್ನು ಸೇವನೆ ಮಾಡುತ್ತಾರೆ. ಪತ್ನಿಯಿಂದ ಹಾರ್ದಿಕ್ ಪಾಂಡ್ಯ ವಿಚ್ಛೇದನ: ಎಷ್ಟಿದೆ ಪಾಂಡ್ಯ ಆಸ್ತಿ ? ಜೀವನಾಂಶ ಎಷ್ಟು ನೀಡಬೇಕು ಗೊತ್ತಾ? ಇನ್ನೂ ಶೂಟಿಂಗ್ ಮಧ್ಯದಲ್ಲಿ ಅವರು ಯಾವುದೇ ತರಹದ ತಿಂಡಿಯನ್ನು ಸೇವಿಸುವುದಿಲ್ಲ. ಬದಲಾಗಿ ಹಣ್ಣುಗಳನ್ನು ತಿನ್ನುತ್ತಾರೆ. ಇನ್ನು ಇವರ ನಿತ್ಯದ ಆಹಾರದಲ್ಲಿ ಪ್ರೋಟೀನ್, ಧಾನ್ಯಗಳು, ಆರೋಗ್ಯಕರ ಕೊಬ್ಬುಗಳು ಮತ್ತು ಅನೇಕ ಬಣ್ಣಗಳ ಹಣ್ಣುಗಳು ಮತ್ತು ತರಕಾರಿಗಳ ಜೊತೆಗೆ ಪೌಷ್ಠಿಕಾಂಶಯುಕ್ತ ಆಹಾರವನ್ನೇ ಸೇವನೆ ಮಾಡುತ್ತಾರೆ. ಈ ರೀತಿಯ ಆಹಾರಗಳು ನಮ್ಮ ದೇಹದ ಆರೋಗ್ಯವನ್ನು ಕಾಪಾಡುವಲ್ಲಿ ನೆರವಾಗುತ್ತದೆ. ಮೂಳೆಗಳು ಗಟ್ಟಿಯಾಗುತ್ತದೆ ಮತ್ತು ಹೃದಯ ಸಂಬಂಧಿ ಕಾಯಿಲೆಗಳ ಅಪಾಯವನ್ನು ಕಡಿಮೆ ಮಾಡುತ್ತದೆ.

## ಫುಡ್ ರೀಲ್ ನೋಡ್ತೀರಾ, ತೂಕ ಹೆಚ್ಚಾಗಬಹುದು ಜೋಕೆ.!



ರೀಲ್ಸ್ ನಲ್ಲೂ ಪ್ರತಿಯೊಬ್ಬರೂ ತಮ್ಮ ಅಭಿರುಚಿಯ ವಿಡಿಯೋ ಆಯ್ಕೆ ಆದ್ಯತೆಗಳಿದ್ದರೂ ಒಮ್ಮೆ ಸ್ಕ್ರೋಲಿಂಗ್ ಮಾಡಲು ಪ್ರಾರಂಭಿಸಿದರೆ, ಎಲಿಗೋ ಹೋಗಿ ತಲುಪುತ್ತೇವೆ.ಸುಲಭವಾಗಿ ನಮ್ಮ ಅಮೂಲ್ಯ ಸಮಯವನ್ನು ಕಳೆದುಕೊಳ್ಳುತ್ತೇವೆ.

ತರಹೇವಾರಿ ರೀಲ್ಗಳ ಮಧ್ಯೆ ಎಲ್ಲರನ್ನೂ ಸೆಳೆಯುವುದ ಆಕರ್ಷಕವಾಗಿ ಕಾಣುವ ತಿನಿಸುಗಳ ರೀಲ್ಸ್. ಇದನ್ನು ನೋಡುತ್ತದ್ದರೇ ಬಾಯಲ್ಲಿ ನೀರೂರೋದು ಗ್ಯಾರೆಂಟಿ. ಆಘಾತಕಾರಿ ವಿಚಾರ ಏನೆಂದರೆ ಆಹಾರದ ರೀಲ್ಗಳನ್ನು ನೋಡಿದರೆ ದೇಹದ ತೂಕವನ್ನು ಹೆಚ್ಚಾಗುತ್ತೆ ಎಂಬ ಮಾಃಇತಿ ಹೊರಬಿದ್ದಿದೆ.

ರೀಲ್ಸ್‌ಗಳು ಮನಸ್ಸಿನೊಂದಿಗೆ ಆಟವಾಡುತ್ತವೆ. ದೆಹಲಿ ಮೂಲದ ಸಮಾಲೋಚನೆ ಮನಶ್ಶಾಸ್ತ್ರಜ್ಞ ಶಿವಂಗಿ ರಜಪೂತ್ ಅವರ ಪ್ರಕಾರ ಫುಡ್ ರೀಲ್ಗಳನ್ನು ನೋಡುವುದು ನಮ್ಮ ಮನಸ್ಸಿನ ಮೇಲೆ ಹಲವಾರು ರೀತಿಯಲ್ಲಿ ಪರಿಣಾಮ ಬೀರುತ್ತದೆ. ಹಲವರಿಗೆ ಈ ರೀಲ್ಗಳು ರಿಲ್ಯಾಕ್ಸೇಷನ್ ನೀಡಬಹುದು, ಅಡುಗೆಮನೆಯಲ್ಲಿ ಸೃಜನಶೀಲತೆಯನ್ನು ಹೆಚ್ಚಿಸಬಹುದು , ಸಾಧನೆಯ ಭಾವವನ್ನು ನೀಡಬಹುದು. ಆದರೆ ಇನ್ನೊಂದು ದೃಷ್ಟಿಯಲ್ಲಿ ನೋಡುವುದಾದರೆ ಇದು ಬಲವಾಗಿ ಕಡುಬಯಕೆಗಳನ್ನು ಪ್ರಚೋದಿಸುತ್ತದೆ, ಇದು ಅತಿಯಾಗಿ ತಿನ್ನುವುದು ಅಥವಾ ಅನಾರೋಗ್ಯಕರ ತಿನ್ನುವೆಡೆ ಮನಸ್ಸನ್ನು ಪ್ರಚೋದಿಸುತ್ತದೆ ಎನ್ನುತ್ತಾರೆ ತಜ್ಞರು. ಆಕರ್ಷಕವಾದ ಫುಡ್ ರಿಲೇಟೆಡ್ ಚಿತ್ರಗಳನ್ನು ನಿರಂತರವಾಗಿ ನೋಡಿದರೆ ಡೋಪಮೈನ್ ಹಾರ್ಮೋನ್ ಬಿಡುಗಡೆಗೆ ಮೆದುರು ಪ್ರಚೋದಿತವಾಗುತ್ತದೆ. ಆಹ್ಲಾದಕರ ಭಾವನೆಗಳನ್ನು ಸೃಷ್ಟಿಸುತ್ತದೆ. ಈ ರೀಲ್ಗಳು ವ್ಯಸನಕಾರಿ ಪದಾರ್ಥಗಳಂತೆಯೇ ಮೆದುಳಿನ ಆನಂದ ಕೇಂದ್ರಗಳನ್ನು ಪ್ರಚೋದಿಸುತ್ತದೆ. ಫುಡ್ ರೀಲ್ಸ್ ವೀಕ್ಷಣೆಯಿಂದ ಬಾಯಿಯಲ್ಲಿನ ಲಾಲಾರಸ ಉತ್ಪತ್ತಿ ಹೆಚ್ಚಾಗುತ್ತದೆ. ಕೆಲವೊಮ್ಮೆ ಇದು ಪ್ಲಾಸ್ಮಾ ಇನ್ಸುಲಿನ್ ಮೇಲೆ ಪರಿಣಾಮ ಬೀರಬಹುದು ಎನ್ನುತ್ತೆ ತಜ್ಞ ಲೋಕ

ಹೆಲ್ತ್ ಟಿಪ್ಸ್

ಯಾರಾದರೂ ಬಹಳಷ್ಟು ಆಹಾರ ರೀಲ್ಗಳನ್ನು ವೀಕ್ಷಿಸಿದಾಗ, ಅವರು ಆ ಆಹಾರಗಳನ್ನು ಹೆಚ್ಚಾಗಿ ಹಂಬಲಿಸಲು ಪ್ರಾರಂಭಿಸಬಹುದು, ಜೊತೆಗೆ ಅವರ ನಡವಳಿಕೆಯ ಮೇಲೆ ಪ್ರಭಾವ ಬೀರಬಹುದು.

## ರೊಮ್ಯಾಂಟಿಕ್ ಆಗಿ ಕಾಣಿಸಿಕೊಂಡ ನಟ ಅಜಿತ್ ಕುಮಾರ್, ತ್ರಿಷಾ



ತಮಿಳಿನ ಸ್ಟಾರ್ ನಟ ಅಜಿತ್ ಕುಮಾರ್ ಜೊತೆ ತ್ರಿಷಾ ಹೊಸ ಸಿನಿಮಾಗಾಗಿ ಕೈಜೋಡಿಸಿದ್ದಾರೆ. ದಂಪತಿಗಳಾಗಿ ಅಜಿತ್ ಕುಮಾರ್ ಮತ್ತು ತ್ರಿಷಾ ಕಾಣಿಸಿಕೊಂಡಿದ್ದಾರೆ. ಈ ಸಿನಿಮಾದ 'ವಿದಾ ಮುಯಾರ್ಚಿ' ಚಿತ್ರದ ಹೊಸ ಪೋಸ್ಟರ್ ಈಗ ಬಿಡುಗಡೆಯಾಗಿದೆ.

ಸಾಕಷ್ಟು ದಿನಗಳಿಂದ ಅಜಿತ್ ಕುಮಾರ್ ಹೊಸ ಸಿನಿಮಾದಲ್ಲಿ ತ್ರಿಷಾ ನಾಯಕಿ ಎಂದು ಹೇಳಲಾಗಿತ್ತು. ಆದರೆ ಈ ಕುರಿತು ಚಿತ್ರತಂಡದಿಂದ ಯಾವುದೇ ಅಧಿಕೃತ ಮಾಹಿತಿ ಹೊರಬಿದ್ದಿರಲಿಲ್ಲ. ಈಗ ಅಜಿತ್ ಮತ್ತು ತ್ರಿಷಾ ಜೊತೆಯಾಗಿರುವ ಪೋಸ್ಟರ್‌ವೊಂದು ಹಂಚಿಕೊಂಡು ನಿರ್ಮಾಣ ಸಂಸ್ಥೆ ಅನೌನ್ಸ್ ಮಾಡಿದೆ.

ಹಸಿರು ಬಣ್ಣದ ಧಿರಿಸಿನಲ್ಲಿ ನಟಿ ಮಿಂಚಿದ್ರೆ, ಕಪ್ಪು ಬಣ್ಣದ ಉಡುಗೆಯಲ್ಲಿ ಅಜಿತ್ ಕಾಣಿಸಿಕೊಂಡಿದ್ದಾರೆ. 'ವಿದಾ ಮುಯಾರ್ಚಿ' ಸಿನಿಮಾದಲ್ಲಿ ಇಬ್ಬರೂ ದಂಪತಿಗಳಾಗಿ ನಟಿಸಿದ್ದಾರೆ. ಸದ್ಯ ಈ ಪೋಸ್ಟರ್‌ಗೆ ಫ್ಯಾನ್ಸ್ ಮೆಚ್ಚುಗೆ ಸೂಚಿಸಿದ್ದಾರೆ. ಇನ್ನೂ ಈ ಚಿತ್ರವನ್ನು ಲೈಕಾ ಸಂಸ್ಥೆ ನಿರ್ಮಾಣ ಮಾಡಿದೆ.ಇನ್ನೂ ತ್ರಿಷಾ ಕೃಷ್ಣನ್‌ಗೆ ಚಿತ್ರರಂಗದಲ್ಲಿ ಈಗ ಬೇಡಿಕೆ ಹೆಚ್ಚಾಗಿದೆ. ಸ್ಟಾರ್ ಸಿನಿಮಾಗಳಲ್ಲಿ ನಟಿಸಲು ತ್ರಿಷಾಗೆ ನಿರ್ಮಾಪಕರು ಮಣೆ ಹಾಕ್ತಿದ್ದಾರೆ. ತೆಲುಗು ಮತ್ತು ತಮಿಳಿನಲ್ಲಿ ನಟಿ ಆಕ್ಟೀವ್ ಆಗಿದ್ದಾರೆ.

## ತಲೆ ಹೊಟ್ಟು ನಿವಾರಿಸಲು ಕಹಿ ಬೇವು ಬಳಸಿ

### ಬ್ಯೂಟಿ ಟಿಪ್ಸ್



ಮಳೆಗಾಲದಲ್ಲಿ ತಲೆಹೊಟ್ಟು ಸಾಮಾನ್ಯವಾಗಿ ಎಲ್ಲರನ್ನೂ ಕಾಡುವ ಸಮಸ್ಯೆಯಾಗಿದೆ. ತಲೆಹೊಟ್ಟು ಬಂದರೆ ತುರಿಕೆ, ತಲೆ ಬುಡ ಶುಷ್ಕವಾಗುವ ಜೊತೆಗೆ ಕೂದಲು ಉದುರುವುದು, ಮೈ ಮೇಲೆ, ಹಣೆ ಮೇಲೆ ಬಿದ್ದರೆ ಮೊಡವೆ ಏಳುವುದು ಮುಂತಾದ ಸಮಸ್ಯೆ ಕಂಡು ಬರುತ್ತದೆ. ಇದರ ನಿವಾರಣೆಗೆ ಕಹಿ ಬೇವಿನ ಎಲೆ ಅತ್ಯುತ್ತಮ ಮದ್ದಾಗಬಲ್ಲದು. ಒಂದು ಪಾತ್ರೆಗೆ ನೀರು ಹಾಕಿ ಕುದಿಸಿ, ಕುದಿ ಬರುವಾಗ ಕಹಿ ಬೇವಿನ ಎಲೆ ಹಾಕಿ ನಂತರ ಆರಲು ಬಿಡಿ. ಆ ನೀರನ್ನು ಸೋಸಿ ಅಥವಾ ಕಹಿ ಬೇವಿನ ಎಲೆ ತೆಗೆದು ಬಿಡಿ, ಅದನ್ನು ತಲೆಗೆ ಹಚ್ಚಿ, ಸ್ವಲ್ಪ ಹೊತ್ತು ಬಿಟ್ಟು ತಲೆ ತೊಳೆಯಿರಿ. ಹೀಗೆ ಮಾಡುತ್ತಿದ್ದರೆ ತಲೆ ಹೊಟ್ಟಿನ ಸಮಸ್ಯೆ ಬರುವುದಿಲ್ಲ. ಕಹಿ ಬೇವಿನಂತೆ ಜೇನು ಕೂಡ ಬ್ಯಾಕ್ಟಿರಿಯಾ, ಶಿಲೀಂಧ್ರಗಳ ವಿರುದ್ಧ ಹೋರಾಡುತ್ತದೆ. ಇವೆರಡನ್ನೂ ಬೆರೆಸಿ ಹಚ್ಚುವುದರಿಂದ ಉತ್ತಮ ಪ್ರಯೋಜನ ಪಡೆಯಬಹುದು. ಒಂದು ಹಿಡಿ ಕಹಿ ಬೇವಿನ ಎಲೆಯನ್ನು ಪೇಸ್ಟ್ ಮಾಡಿ, ಅದರ ಜೊತೆ ಜೇನು ಬೆರೆಸಿ ತಲೆಗೆ ಹಚ್ಚಿ 15-20 ನಿಮಿಷ ಬಿಟ್ಟು ತಲೆ ತೊಳೆಯಿರಿ. ಇದರಿಂದ ಹೊಟ್ಟು ದೂರವಾಗುತ್ತದೆ ಮಾತ್ರವಲ್ಲ ತಲೆ ಕೂದಲು ಹೊಳಪು ಪಡೆಯುತ್ತದೆ.

## ಬೆಂಗಳೂರು, ಮುಂಬೈನಲ್ಲಿ 4 ಹೊಸ ಕೇಂದ್ರಗಳನ್ನು ಉದ್ಘಾಟಿಸಿದ ಕೋವರ್ಕ್ಸ್



ಪ್ರೀಮಿಯಂ ವರ್ಕ್ ಸ್ಪೇಸ್ ಗಳ ಪ್ರಮುಖ ಪೂರೈಕೆದಾರರಾದ ಕೋವರ್ಕ್ಸ್ ಸಂಸ್ಥೆಯು ಬೆಂಗಳೂರು ಮತ್ತು ಮುಂಬೈನಲ್ಲಿ 4 ಹೊಸ ಕೇಂದ್ರಗಳನ್ನು ಆರಂಭಿಸುವ ಮೂಲಕ ತನ್ನ ವ್ಯಾಪ್ತಿಯನ್ನು ವಿಸ್ತರಿಸಿಕೊಂಡಿದೆ. ಈ ಹೊಸ ಕೇಂದ್ರಗಳನ್ನು ಬೆಂಗಳೂರಿನ ಇಕೋವರ್ಲ್ಡ್ ಹಾಗೂ ಸೆಂಟೆನಿಯಲ್ನಲ್ಲಿ ಮತ್ತು ಮುಂಬೈನ ಈಕ್ವಿನಾಕ್ಸ್ ಆರಂಭಿಸಲಾಗಿದೆ.

ಈ ವಿಸ್ತರಣೆಯ ಮೂಲಕ ಕಂಪನಿಗೆ 1.4 ಲಕ್ಷ ಚದರ ಅಡಿಗಳನ್ನು ಸೇರಿಸಲಾಗಿದ್ದು, ಇದರಿಂದ ಕಂಪನಿಯು ಭಾರತದಾದ್ಯಂತ ತನ್ನ ವ್ಯಾಪ್ತಿಯನ್ನು 15 ಲಕ್ಷ ಚದರ ಅಡಿಗಳಿಗೆ ಹೆಚ್ಚಿಸಿದಂತಾಗಿದೆ. ದೇಶಾದ್ಯಂತ ಒಟ್ಟು 34 ಕೇಂದ್ರಗಳನ್ನು ಹೊಂದಿರುವ ಕಂಪನಿಯ ಈ ಬೆಳವಣಿಗೆಯು ಮೆಟ್ರೋಪಾಲಿಟನ್ ಸಿಟಿಗಳಲ್ಲಿ ಗ್ರೇಡ್ ಎ ವರ್ಕ್ಸ್ಪೇಸ್ ಜಾಗಗಳಿಗೆ ಹೆಚ್ಚುತ್ತಿರುವ ಬೇಡಿಕೆಯನ್ನು ಸೂಕ್ತವಾಗಿ ಪೂರೈಸುವ ಸಾಮರ್ಥ್ಯ ಹೊಂದಿದೆ.

ಈ ಕುರಿತು ಮಾತನಾಡುವ ಕೋವರ್ಕ್ಸ್ ನ ಹಿರಿಯ ಉಪಾಧ್ಯಕ್ಷ ಮತ್ತು ಬಿಸಿನೆಸ್ ಹೆಡ್ ಪಾರುಲ್ ಠಾಕೂರ್, ''ಈ ಹೊಸ ಕೇಂದ್ರಗಳ ಪ್ರಾರಂಭವು ಗ್ರೇಡ್ ಎ ಕಚೇರಿ ಸ್ಥಳಗಳನ್ನು ಬಯಸುವ ಸ್ಟಾರ್ಟ್‌ಅಪ್ಗಳು ಮತ್ತು ದೊಡ್ಡ ಉದ್ಯಮಗಳ ಬೇಡಿಕೆಯನ್ನು ತೋರಿಸುತ್ತದೆ. ಆ ಬೇಡಿಕೆಯು ನಮ್ಮ ಉದ್ದೇಶದ ಜೊತೆ ಸೂಕ್ತವಾಗಿ ಹೊಂದಿಕೊಳ್ಳುತ್ತದೆ. ಅತ್ಯುತ್ತಮ ಸ್ಥಳ, ಕಾರ್ಯಸ್ಥಳದಲ್ಲಿನ ಹೊಂದಾಣಿಕೆ, ಉದ್ಯೋಗಿಯ ತೊಡಗಿಸಿಕೊಳ್ಳುವಿಕೆ ಮತ್ತು ವ್ಯಾಪಾರ ನಿರಂತರತೆಯನ್ನು ಕಾಪಾಡಿಕೊಳ್ಳುವ ಕಾರ್ಯಸ್ಥಳಗಳ ಅಗತ್ಯದಿಂದಾಗಿ ಈ ಬೇಡಿಕೆ ಉಂಟಾಗಿದೆ. ಕೋವರ್ಕ್ಸ್ ನಲ್ಲಿ ನಾವು ನಮ್ಮ ಪಾಲುದಾರರ ಯಶಸ್ಸಿಗೆ ನೆರವಾಗುವಂತಹ ಅಸಾಧಾರಣ ಆತಿಥ್ಯ ಒದಗಿಸುವ ಮತ್ತು ನವೀನ ವಿನ್ಯಾಸಗಳನ್ನು ಒಳಗೊಂಡಿರುವ ಕಾರ್ಯಸ್ಥಳಗಳನ್ನು ನೀಡಲು ಬದ್ಧರಾಗಿದ್ದೇವೆ'' ಎಂದು ಹೇಳಿದರು.ಹೊಸ ಕೋವರ್ಕ್ಸ್ ಕೇಂದ್ರಗಳು ಈ ಕಾಲದ ಹೊಸ ವಿನ್ಯಾಸ ಶೈಲಿಯನ್ನು ಹೊಂದಿವೆ. ಆಧುನಿಕ ಶೈಲಿ, ಓಪನ್ ಪ್ಲೇಸ್ ಗಳು, ನೈಸರ್ಗಿಕ ಬೆಳಕು ಬೀಳುವಂತಹ ವಿನ್ಯಾಸ ಇತ್ಯಾದಿ ಆಕರ್ಷಕ ಅಂಶಗಳನ್ನು ಈ ಸ್ಥಳಗಳು ಹೊಂದಿವೆ. ದೊಡ್ಡ ತಂಡಗಳು ಕೆಲಸ ಮಾಡಬಹುದಾದ ಶಾಂತ ವಲಯಗಳನ್ನು ಪ್ರತೀ ಕೇಂದ್ರಗಳು ಹೊಂದಿದ್ದು, ಸಹಕಾರಿ ತತ್ವಕ್ಕೆ ಪೂರಕವಾಗಿ ಮತ್ತು ಹೊಂದಿಕೊಳ್ಳುವಂತಹ ವಿನ್ಯಾಸವನ್ನು ಮಾಡಲಾಗಿದೆ. ಚಿತ್ರಕಲೆಗಳನ್ನು ಬಳಸಲಾಗಿದ್ದು, ಅತ್ಯುತ್ತಮ ಬಣ್ಣ ಸಂಯೋಜನೆಯನ್ನು ಕೂಡ ಹೊಂದಿವೆ. ನಮ್ಮ ಆಂತರಿಕ ವಿನ್ಯಾಸ ತಂಡವು ಪ್ರತಿ ಜಾಗವನ್ನು ಗ್ರಾಹಕರಿಗೆ ಅವರ ಫಿಲಾಸಫಿಗೆ ತಕ್ಕಂತೆ ಅವರ ಉತ್ಪಾದಕತೆ ಹೆಚ್ಚಿಸುವಂತೆ ಕಸ್ಟಮೈಸ್ ಮಾಡಿಕೊಡಲು ಸಿದ್ಧವಾಗಿರುತ್ತದೆ.

ಕೋವರ್ಕ್ಸ್ ಕಂಪನಿಯು ಟಾಪ್ ಫಾರ್ಚೂನ್ 500 ಕಂಪನಿಗಳು, ಸ್ಟಾರ್ಟ್‌ಅಪ್ಗಳು ಮತ್ತು ಪ್ರಮುಖ ಯುನಿಕಾರ್ನ್ಗಳಿಗೆ ಸೇವೆ ಒದಗಿಸುವ ಮೂಲಕ ವೈವಿಧ್ಯಮಯ ಹಿನ್ನೆಲೆಯ ಗ್ರಾಹಕರಿಗೆ ಸೇವೆ ಸಲ್ಲಿಸುತ್ತದೆ. ಅನರಾಕ್ನ ನ್ಯೂ ಏಜ್ ಫ್ಲೆಕ್ಸ್ ವರ್ಕ್ಸ್ಪೇಸ್ ವರದಿಯ ಪ್ರಕಾರ, ಬೆಳೆಯುತ್ತಿರುವ ಕೆಲಸ ಸ್ಥಳದ ಅಭ್ಯಾಸಗಳಿಂದಾಗಿ ಭಾರತದಲ್ಲಿ ಹೊಂದಿಕೊಳ್ಳುವ ಕಚೇರಿ ಸ್ಥಳಗಳಿಗೆ ಬೇಡಿಕೆಯು ಹೆಚ್ಚುತ್ತಿದೆ. ಬೆಂಗಳೂರು ಈ ಟ್ರೆಂಡ್ ನಲ್ಲಿ ಮುಂಚೂಣಿಯಲ್ಲಿದೆ ಮತ್ತು ಭಾರತದಲ್ಲಿನ ಹೊಂದಿಕೊಳ್ಳುವ ಕೆಲಸದ ಸ್ಥಳಗಳಲ್ಲಿ 25% ಪಾಲನ್ನು ಹೊಂದಿದೆ, ಅದರ ಹಿಂದೆಯೇ ಇರುವ ಮುಂಬೈ 13% ಪಾಲು ಹೊಂದಿದೆ. ಬ್ರೂಕ್ಫೀಲ್ಡ್ ಪ್ರಾಪರ್ಟೀಸ್ ಕ್ಯಾಂಪಸ್ ಗಳಲ್ಲಿ ಇರುವ ಕೋವರ್ಕ್ಸ್ ಕಂಪನಿಯು ರಿಟೇಲ್ ಸ್ಥಳಗಳು ಮತ್ತು ಮನರಂಜನಾ ಸೌಲಭ್ಯಗಳಂತಹ ಸೌಕರ್ಯಗಳನ್ನು ಒದಗಿಸುವ ಮೂಲಕ ಕೆಲಸದ ಸ್ಥಳಗಳ ಪ್ರೀಮಿಯಂ ಗುಣಮಟ್ಟವನ್ನು ಕಾಪಾಡಿಕೊಳ್ಳುತ್ತದೆ. ಈ ವಿಧಾನದ ಮೂಲಕ ಉದ್ಯೋಗಿಗಳ ಅಗತ್ಯಗಳನ್ನು ಪೂರೈಸುತ್ತಾ ಒಟ್ಟಾರೆಯಾಗಿ ಉದ್ಯೋಗಿಗಳ ಅನುಭವವನ್ನು ಉತ್ಕೃಷ್ಟಗೊಳಿಸುತ್ತದೆ.



**ಜಯಶ್ರೀ.ಬಿ.ಆರ್**
ಖ್ಯಾತ ಜ್ಯೋತಿಷಿ
ದೂರವಾಣಿ-9964739507
www.jyotishyavaastu.com

## ರಾಶಿ ಭವಿಷ್ಯ

**ಮೇಷ:** ಯತ್ನ ಕಾರ್ಯಗಳಲ್ಲಿ ಜಯ, ಜೂಜು ರೇಸು ಲಾಟರಿಗಳಿಂದ ಸಮಸ್ಯೆ, ಉದ್ಯೋಗ ಪ್ರಾಪ್ತಿ, ಸಂಗಾತಿಯಿಂದ ಲಾಭ.

**ವೃಷಭ:** ಉದ್ಯೋಗ ಅವಕಾಶ, ಉನ್ನತ ವಿದ್ಯಾಭ್ಯಾಸದಲ್ಲಿ ಅನುಕೂಲ, ಕೌಟುಂಬಿಕ ಅವ್ಯವಸ್ಥೆ, ದಾಂಪತ್ಯದಲ್ಲಿ ಅಸಮಾಧಾನ.

**ಮಿಥುನ:** ಆರ್ಥಿಕ ಚೇತರಿಕೆ, ಮಕ್ಕಳ ಸಹಕಾರ, ಶುಭ ಕಾರ್ಯ ಭರವಸೆ, ಸಂತಾನ ದೋಷ ನಿವಾರಣೆ.

**ಕಟಕ:** ಆರ್ಥಿಕ ಮುಗ್ಗಟ್ಟು, ಅಧಿಕ ಒತ್ತಡ, ನೋವು ನಿರಾಸೆ, ಮಾಟ ಮಂತ್ರ ತಂತ್ರದ ಆತಂಕ.

**ಸಿಂಹ:** ದುಂದು ವೆಚ್ಚ, ಮೋಜು ಮಸ್ತಿ ಕಡೆ ಒಲವು, ಭಾವನಾತ್ಮಕ ತೊಳಲಾಟ, ಪಾಲದಾರಿಕೆಯಲ್ಲಿ ಉತ್ತಮ ಅವಕಾಶ.

**ಕನ್ಯಾ:** ವೃತ್ತಿ ಪ್ರವೃತ್ತಿಯಲ್ಲಿ ಏಳಿಗೆ, ಅಧಿಕ ಲಾಭ ಗೌರವ ಪ್ರಾಪ್ತಿ, ವಿದ್ಯಾಭ್ಯಾಸದಲ್ಲಿ ಪ್ರಗತಿ, ಐಷಾರಾಮಿ ಜೀವನದ ಕನಸು.

**ತುಲಾ:** ಅವಕಾಶ ವಂಚಿತರಾಗುವಿರಿ, ಆರ್ಥಿಕ ಮುಗ್ಗಟ್ಟು, ಪ್ರೇಮ ಭಾವನೆ ತೊಳಲಾಟ, ಸ್ನೇಹಿತರಿಂದ ಅಂತರ.

**ವೃಶ್ಚಿಕ:** ಮಂದತ್ವ ಮರೆವು ನಿರಾಸೆ, ಸಂಗಾತಿ ನಡವಳಿಕೆಯಿಂದ ಬೇಸರ, ಆರ್ಥಿಕ ಸುಧಾರಣೆ, ಸ್ಥಿರಾಸ್ತಿ ಅನುಕೂಲ.

**ಧನಸ್ಸು:** ಆಕಸ್ಮಿಕ ಲಾಭ, ಉದ್ಯೋಗ ಪ್ರಾಪ್ತಿ, ದಾಂಪತ್ಯದಲ್ಲಿ ಕಲಹ, ನೆರೆಹೊರೆಯವರಿಂದ ಒತ್ತಡ.

**ಮಕರ:** ಆರ್ಥಿಕ ಸುಧಾರಣೆ, ಸಾಲದ ಸಹಕಾರ, ಗುಪ್ತ ವಿಷಯಗಳಿಂದ ಸಮಸ್ಯೆ, ಆಹಾರ ವ್ಯತ್ಯಾಸದಿಂದ ಅನಾರೋಗ್ಯ.

**ಕುಂಭ:** ಆರ್ಥಿಕ ಕೊರತೆ, ಕುಟುಂಬದವರೊಂದಿಗೆ ವಿರೋಧ, ಮಾತಿನಿಂದ ಸಮಸ್ಯೆ, ಅಧಿಕಾರಿಗಳಿಂದ ಸಮಸ್ಯೆ.

**ಮೀನ:** ವ್ಯಾಪಾರ ವ್ಯವಹಾರದಲ್ಲಿ ಅನಾನುಕೂಲ, ಸೋಲು ನಿರಾಸೆ ಉದ್ಯೋಗ ನಷ್ಟ, ಸಾಲ ಮತ್ತು ಶತ್ರು ಕಾಟದಿಂದ ಮುಕ್ತಿ, ಪ್ರೇಮಿಗಳಲ್ಲಿ ಅಂತರ.

## ಅಂತಾರಾಷ್ಟ್ರೀಯ ಚೆಸ್ ದಿನ

ನಾವು ಜುಲೈ 20 ರಂದು ಅಂತಾರಾಷ್ಟ್ರೀಯ ಚೆಸ್ ದಿನವನ್ನು ಆಚರಿಸುತ್ತೇವೆ, ಇದು ವಿಶ್ವಸಂಸ್ಥೆಯ ಶೈಕ್ಷಣಿಕ, ವೈಜ್ಞಾನಿಕ ಮತ್ತು ಸಾಂಸ್ಕೃತಿಕ ಸಂಸ್ಥೆ ಹೊಂದಿದ್ದ ಕಲ್ಪನೆಯಿಂದ ಹುಟ್ಟಿದ ದಿನವಾಗಿದೆ. ಪ್ರಪಂಚದಾದ್ಯಂತದ ಚೆಸ್ ಪ್ರೇಮಿಗಳು ತಮ್ಮ ನೆಚ್ಚಿನ ಆಟವನ್ನು ಪ್ರತಿ ವರ್ಷ ಈ ದಿನದಂದು ಆಚರಿಸುತ್ತಾರೆ, ಇದು 50 ವರ್ಷಗಳಿಗಿಂತಲೂ ಹೆಚ್ಚು ಕಾಲದ ಸಂಪ್ರದಾಯವಾಗಿದೆ. ಚೆಸ್‌ನ ಮೂಲವು ಚರ್ಚೆಯ ವಿಷಯವಾಗಿದೆ. ಬಹು ಸಿದ್ಧಾಂತಗಳು ಈ ಆಟದ ಆರಂಭವನ್ನು ಭಾರತ, ಚೀನಾ, ರಷ್ಯಾ ಮತ್ತು ಮಧ್ಯ ಏಷ್ಯಾದಂತಹ ದೇಶಗಳಿಗೆ ಕಾರಣವೆಂದು ಹೇಳುತ್ತವೆ. ಒಂದು ಜನಪ್ರಿಯ ಸಿದ್ಧಾಂತವು ಭಾರತೀಯ ಯುದ್ಧ ಆಟ – 'ಚತುರಂಗ' – ಚೆಸ್ಗೆ ಸ್ಫೂರ್ತಿ ಎಂದು ಸಲ್ಲುತ್ತದೆ. ಜನರು ಇದನ್ನು ಚದುರಂಗದ ಪೂರ್ವಗಾಮಿ ಎಂದು ಪರಿಗಣಿಸುತ್ತಾರೆ ಏಕೆಂದರೆ ಇದು ನಂತರದ ಚೆಸ್ ರೂಪಾಂತರಗಳಲ್ಲಿ ಕಂಡುಬರುವ ಎರಡು ಪ್ರಮುಖ ಲಕ್ಷಣಗಳನ್ನು ಹೊಂದಿದೆ – ವಿಭಿನ್ನ ತುಣುಕುಗಳು ವಿಭಿನ್ನ ಕಾರ್ಯಗಳನ್ನು ಹೊಂದಿದ್ದವು ಮತ್ತು ವಿಜಯವು ಒಂದು ತುಣುಕಿನ ಮೇಲೆ ಆಧಾರಿತವಾಗಿದೆ (ರಾಜ, ಆಧುನಿಕ ಚೆಸ್ನಲ್ಲಿ). ಈ ಆಟದ ಆವೃತ್ತಿಗಳು ಪೂರ್ವ, ಉತ್ತರ ಮತ್ತು ಪಶ್ಚಿಮವನ್ನು ತಲುಪಿದವು, ಪ್ರತಿ ಬಾರಿ ವಿಭಿನ್ನ ಗುಣಲಕ್ಷಣಗಳನ್ನು ಪಡೆದುಕೊಳ್ಳುತ್ತವೆ. ಚತುರಂಗದ ಒಂದು ಆವೃತ್ತಿ ಅಥವಾ 'ಶತ್ರಂಜ್' ಎಂಬ ನಂತರದ ರೂಪಾಂತರವು ಪರ್ಷಿಯಾ, ಬೈಜಾಂಟೈನ್ ಸಾಮ್ರಾಜ್ಯ ಮತ್ತು ಅರೇಬಿಯನ್ ಸಾಮ್ರಾಜ್ಯದ ಮೂಲಕ ಯುರೋಪ್ಗೆ ದಾರಿ ಮಾಡಿಕೊಟ್ಟಿತು. ಇಸ್ಲಾಮಿಕ್ ಪ್ರಭಾವದಿಂದಾಗಿ ಚೆಸ್ ತುಣುಕುಗಳು ವಿಶಿಷ್ಟವಾದ ಮಾನವ/ಪ್ರಾಣಿ ಲಕ್ಷಣಗಳನ್ನು ಹೊಂದಿರುವುದಿಲ್ಲ ಎಂದು ನಂಬಲಾಗಿದೆ. ಇಸ್ಲಾಂ ಧರ್ಮವು ಜನರು ಅಥವಾ ಪ್ರಾಣಿಗಳ ಪ್ರತಿಮೆಗಳನ್ನು ಮಾಡುವುದನ್ನು ನಿಷೇಧಿಸುತ್ತದೆ, ಆದ್ದರಿಂದ ಬಹುಶಃ ಚೆಸ್ ತುಣುಕುಗಳು ತುಂಬಾ ಅಸ್ಪಷ್ಟವಾಗಿ ಕಾಣುತ್ತವೆ. ವಿಸ್ತರಿಸುತ್ತಿರುವ ಅರೇಬಿಯನ್ ಸಾಮ್ರಾಜ್ಯವು 10 ನೇ ಶತಮಾನದ ವೇಳೆಗೆ ಉತ್ತರ ಆಫ್ರಿಕಾ, ಸಿಸಿಲಿ ಮತ್ತು ಸ್ಪೇನ್ಗೆ ಚೆಸ್ ಅನ್ನು ತೆಗೆದುಕೊಂಡಿತು. ಅದೇ ಸಮಯದಲ್ಲಿ, ಚೆಸ್ ಪ್ರಪಂಚದಾದ್ಯಂತ ಹರಡಿತು, ಪೂರ್ವ ಸ್ಲಾವ್ಸ್ ಅದನ್ನು ಕೀವಾನ್ ರುಸ್ಗೆ ತೆಗೆದುಕೊಂಡು ಹೋದರು ಮತ್ತು ವೈಕಿಂಗ್ಸ್ ಆಟವನ್ನು ಐಸ್ಲ್ಯಾಂಡ್ ಮತ್ತು ಇಂಗ್ಲೆಂಡ್ಗೆ ತಂದರು. ಚೆಸ್ನ ಜನಪ್ರಿಯತೆಯು ಸಂಪತ್ತು, ಜ್ಞಾನ ಮತ್ತು ಶಕ್ತಿಯೊಂದಿಗೆ ಸಂಬಂಧಿಸಿದೆ ಎಂಬ ಅಂಶಕ್ಕೆ ಕಾರಣವೆಂದು ಹೇಳಬಹುದು. ಇದು 15 ನೇ ಶತಮಾನದ ವೇಳೆಗೆ ಇಂಗ್ಲೆಂಡ್ನಲ್ಲಿನ ಚೆಸ್ನ ಪ್ರಸ್ತುತ ಆವೃತ್ತಿಯನ್ನು ಹೋಲುವಂತೆ ವಿಕಸನಗೊಂಡಿತು. ನಮಗೆ ತಿಳಿದಿರುವಂತೆ ಆಟವು ಶೀಘ್ರದಲ್ಲೇ ಇಂಗ್ಲಿಷ್ನಿಂದ ಸ್ಥಾಪಿಸಲ್ಪಟ್ಟಿತು, ನಮಗೆ ಚೆನ್ನಾಗಿ ತಿಳಿದಿರುವ ಕಪ್ಪು ಮತ್ತು ಬಿಳಿ ಚೌಕಗಳನ್ನು ಅಳವಡಿಸಿಕೊಂಡಿದೆ. ಆಧುನಿಕ ಇತಿಹಾಸವು ಚೆಸ್ಗೆ ಸಂಬಂಧಿಸಿದಂತೆ ಅನೇಕ ಘಟನೆಗಳು ಮತ್ತು ಸ್ಪರ್ಧೆಗಳನ್ನು ತೋರಿಸುತ್ತದೆ ಮತ್ತು ಆಟದ ಅತ್ಯಾಕರ್ಷಕ ಹೊಸ ಬದಲಾವಣೆಗಳನ್ನು ತೋರಿಸುತ್ತದೆ, ಇದು ಚೆಸ್ನ ಜನಪ್ರಿಯತೆಯನ್ನು ಹೆಚ್ಚಿಸಿತು. ಅಂತರರಾಷ್ಟ್ರೀಯ ಚೆಸ್ ಫೆಡರೇಶನ್ ಸ್ಥಾಪನೆಯ ದಿನಾಂಕವನ್ನು ಗುರುತಿಸಲು ಸಾಮಾನ್ಯ ಸಭೆಯು ಜುಲೈ 20 ಅನ್ನು ಅಂತರರಾಷ್ಟ್ರೀಯ ಚೆಸ್ ದಿನವೆಂದು ಘೋಷಿಸಿತು. ಪ್ರಪಂಚದಾದ್ಯಂತ ಲಕ್ಷಾಂತರ ಚೆಸ್ ಆಟಗಾರರು ಈ ದಿನ ಮತ್ತು ಈ ಆಟವನ್ನು ಆಚರಿಸುತ್ತಾರೆ.

# ಟೋಲ್ ಫ್ರೀ ನಂಬರ್ ಕೊಟ್ಟ ನರೇಂದ್ರ ಮೋದಿ!



**ನವದೆಹಲಿ:** ಕೇಂದ್ರ ಸರ್ಕಾರದ ಬಗ್ಗೆ ಜನರ ಸಲಹೆ, ಅಭಿಪ್ರಾಯ ಹಾಗೂ ಅನಿಸಿಕೆಗಳನ್ನು ವ್ಯಕ್ತಪಡಿಸಲು ಟೋಲ್ ಫ್ರೀ ನಂಬರ್ ನ್ನು ಪ್ರಧಾನಿ ನರೇಂದ್ರ ಮೋದಿ ಘೋಷಿಸಿದ್ದಾರೆ.

ಈ ಕುರಿತು ತಮ್ಮ ಎಕ್ಸ್ ಖಾತೆಯಲ್ಲಿ ಸಂದೇಶ ಹಂಚಿಕೊಂಡಿರುವ ಅವರು, 1800-11-7800 ಮೂಲಕ ವಾಯ್ಸ್ ರೆಕಾರ್ಡ್ ಕಳಿಸಬಹುದು ಅಥವಾ MyGov app ಮೂಲಕ ಜನರು ತಮ್ಮ ಸಲಹೆಗಳನ್ನು ಹಂಚಿಕೊಳ್ಳಬಹುದೆಂದು ಪ್ರಧಾನಿ ಮೋದಿ ಹೇಳಿದ್ದಾರೆ.

ನೀವು ಸಂದೇಶ, ಸಲಹೆ ನೋಡಬೇಕೆಂದಿದ್ದರೆ ಈ ಲಿಂಕ್‌ಗೆ ಲಾಗ್‌ಇನ್ ಆಗಿ ಮೆಸೇಜ್ ಕಳುಹಿಸಬಹುದು

ಇದೇ ಜು.28 ಭಾನುವಾರದಂದು ಮನ್ ಕೀ ಬಾತ್ ರೇಡಿಯೋ ಕಾರ್ಯಕ್ರಮವೂ ನಡೆಯಲಿದೆ. ಈ ಬಾರಿಯ ಕಾರ್ಯಕ್ರಮದ ಬಗ್ಗೆ ನನಗೆ ಅಸಂಖ್ಯಾತ ಸಲಹೆಗಳು ಬಂದಿವೆ ಎಂದು ನರೇಂದ್ರ ಮೋದಿ ಹೇಳಿದ್ದಾರೆ.

ಜೊತೆಗೆ , ಯುವ ಜನತೆ ಹೆಚ್ಚಿನ ಸಂಖ್ಯೆಯಲ್ಲಿ ಸಮಾಜದ ಬದಲಾವಣೆಯ ಬಗ್ಗೆ ತಮ್ಮ ವಿಚಾರಗಳನ್ನು ಹಂಚಿಕೊಳ್ಳುತ್ತಿರುವುದು ಸಂತಸ ತಂದಿದೆ ಎಂದು ಹೇಳಿರುವ ಪ್ರಧಾನಿ ಮೋದಿ, ಯುವ ಜನತೆಯು ಸಮಾಜವನ್ನು ರೂಪಿಸಲು ಸ್ಪಷ್ಟ ಹಾಗೂ ಒಮ್ಮತದ ಅಭಿಪ್ರಾಯಗಳನ್ನು ಹೊಂದಿದ್ದಾರೆ ಎಂದಿದ್ದಾರೆ.

# ಆರು ದಿನಗಳಲ್ಲಿ ವಿಶ್ವದ ಏಳು ಅದ್ಭುತಗಳ ಭೇಟಿ - ನೂತನ ದಾಖಲೆ



**ಈಜಿಪ್ಟ್:** ಮ್ಯಾಗ್ಡಿ ಇಸ್ಸಾ ಎಂಬ ವ್ಯಕ್ತಿ ವಿಶ್ವ ಪ್ರವಾಸ ಕೈಗೊಂಡು, ಕೇವಲ ಆರು ದಿನಗಳಲ್ಲಿ ವಿಶ್ವದ ಏಳು ಅದ್ಭುತಗಳಿರುವ 7 ಪ್ರದೇಶಗಳಿಗೆ ಭೇಟಿ ನೀಡಿ ಹೊಸ ವಿಶ್ವ ದಾಖಲೆ ಬರೆದಿದ್ದಾರೆ. ಮ್ಯಾಗ್ಡಿ ಇಸ್ಸಾಗೆ (45) ಕೇವಲ 6 ದಿನ 11 ಗಂಟೆ 52 ನಿಮಿಷಗಳಲ್ಲಿ ವಿಶ್ವದ ಹೊಸ 7 ಅದ್ಭುತಗಳಿಗೆ ಭೇಟಿ ನೀಡುವ ಮೂಲಕ ಕಳೆದ ವರ್ಷ ಜೇಮೀ ಮೆಕ್ಡೊನಾಲ್ಡ್ ನಿರ್ಮಿಸಿದ ಹಿಂದಿನ ದಾಖಲೆಯನ್ನು ಮುರಿದಿದ್ದಾರೆ.

ಮ್ಯಾಗ್ಡಿ ತನ್ನ ಪ್ರಯಾಣವನ್ನು ಗ್ರೇಟ್ ವಾಲ್ ಆಫ್ ಚೀನಾದಲ್ಲಿ ಪ್ರಾರಂಭಿಸಿ, ಭಾರತದ ತಾಜ್ ಮಹಲ್, ಜೋರ್ಡಾನ್ನ ಪುರಾತನ ನಗರ ಪೆಟ್ರಾ, ರೋಮ್ನ ಕೊಲೋಸಿಯಮ್, ಬ್ರೆಜಿಲ್ನ ಕ್ರೈಸ್ಟ್ ದಿ ರಿಡೀಮರ್, ಪೆರುವಿನ ಮಚು ಪಿಚು ಮತ್ತು ಅಂತಿಮವಾಗಿ ಮೆಕ್ಸಿಕೋದ ಪ್ರಾಚೀನ ಮಾಯನ್ ನಗರ ಚಿಚೆನ್ ಇಟ್ಜಾಗೆ ಭೇಟಿ ನೀಡಿದ್ದಾರೆ. ಪ್ರಯಾಣದ ಪ್ರತಿಯೊಂದು ಹಂತದ ಬಳಿಕವೂ ಪ್ರಯಾಣದ ಸಮಯವನ್ನು ಸಂಶೋಧಿಸುವುದು, ಉತ್ತಮ ಸಾರ್ವಜನಿಕ ಸಾರಿಗೆ ಆಯ್ಕೆಗಳನ್ನು ಮ್ಯಾಪಿಂಗ್ ಮಾಡುವುದು, ವಲಸಿಗರ ಕೇಂದ್ರಗಳಲ್ಲಿ ಸರತಿ ಸಾಲುಗಳು, ಲೇಓವರ್ಗಳು ಮತ್ತು ಮುಂದಿನ ಗಮ್ಯಸ್ಥಾನಕ್ಕೆ ತಲುಪುವ ಅತಿ ಹತ್ತಿರದ ಮಾರ್ಗವನ್ನು ಆಯ್ಕೆ ಮಾಡುವುದರಲ್ಲೇ ನಿರತರಾಗಿದ್ದರು. ಮ್ಯಾಗ್ಡಿ ಈ ಬಗ್ಗೆ ಪ್ರತಿಕ್ರಿಯಿಸಿ , ತನ್ನ ವೇಳಾಪಟ್ಟಿಯಲ್ಲಿ ಯಾವುದೇ ದೊಡ್ಡ ಅಡೆತಡೆಗಳನ್ನು ಅನುಭವಿಸಿಲ್ಲ. ಒಮ್ಮೆ, ಅವರು ಪೆಟ್ರಾಗೆ ದೈನಂದಿನ ಬಸ್ ಅನ್ನು ತಪ್ಪಿಸಿಕೊಂಡರು ಮತ್ತು ಇನ್ನೊಂದು ಬಾರಿ ಅವರು ಏಳನೇ ಅದ್ಭುತವನ್ನು ನೋಡಲು ಪೆರುವಿನಿಂದ ಮೆಕ್ಸಿಕೋಗೆ ತೆರಳುವಾಗ ವಿಮಾನ ತಪ್ಪಿಸಿಕೊಳ್ಳಬೇಕಾಯಿತು ಎಂದಿದ್ದಾರೆ.

## ಇಸ್ರೇಲ್ ದಾಳಿಯಲ್ಲಿ ಹಿಜ್ಬುಲ್ಲಾ ಕಮಾಂಡರ್ ಸಾವು

**ಬೈರೂತ್:** ಲೆಬನಾನ್ ಮೇಲೆ ಇಸ್ರೇಲ್ ನಡೆಸಿದ ದಾಳಿಯಲ್ಲಿ ಹಿಜ್ಬುಲ್ಲಾ ಸಶಸ್ತ್ರ ಹೋರಾಟಗಾರರ ಗುಂಪಿನ ಹಿರಿಯ ಕಮಾಂಡರ್ ಸಹಿತ ಐದು ಮಂದಿ ಸಾವನ್ನಪ್ಪಿರುವುದಾಗಿ ವರದಿಯಾಗಿದೆ.ದಕ್ಷಿಣ ಲೆಬನಾನ್ನ ಗ್ರಾಮವೊಂದರ ಮನೆಯ ಬಳಿ ಕ್ಷಿಪಣಿ ಅಪ್ಪಳಿಸಿದ್ದು ಮೂವರು ಸಾವನ್ನಪ್ಪಿದ್ದಾರೆ. ಮೃತರಲ್ಲಿ ಹಿರಿಯ ಕಮಾಂಡರ್ ಅಲಿ ಜಾಫರ್ ಮಾತೌಕ್ ಸಹಿತ ಇಬ್ಬರು ಹಿಜ್ಬುಲ್ಲಾ ಯೋಧರು ಸೇರಿದ್ದು ದಾಳಿಯಲ್ಲಿ ಇತರ 7 ಮಂದಿ ಗಾಯಗೊಂಡಿದ್ದಾರೆ ಎಂದು ಲೆಬನಾನ್ನ ಭದ್ರತಾ ಮೂಲಗಳು ವರದಿ ಮಾಡಿವೆ. ದಕ್ಷಿಣ ಲೆಬನಾನ್ನ ಮನೆಯಲ್ಲಿ ಹಿಜ್ಬುಲ್ಲಾ ಕಮಾಂಡ್ ಸೆಂಟರ್ ಕಾರ್ಯನಿರ್ವಹಿಸುತ್ತಿರುವ ಖಚಿತ ಮಾಹಿತಿಯನ್ನು ಆಧರಿಸಿ ದಾಳಿ ನಡೆದಿದ್ದು ಮೃತರಲ್ಲಿ ಅಲಿ ಜಾಫರ್ ಮಾತೌಕ್ ಸಹಿತ ಇಬ್ಬರು ಹಿಜ್ಬುಲ್ಲಾ ಸದಸ್ಯರು ಸೇರಿದ್ದಾರೆ. ಖಿನಾ ಪ್ರದೇಶದಲ್ಲಿ ನಡೆದ ಮತ್ತೊಂದು ದಾಳಿಯಲ್ಲಿ ಹಿಜ್ಬುಲ್ಲಾದ ಮತ್ತೊಬ್ಬ ಕಮಾಂಡರ್ ಮೃತಪಟ್ಟಿದ್ದಾನೆ ಎಂದು ಇಸ್ರೇಲ್ ಸೇನೆ ಹೇಳಿದೆ. ಈ ಮಧ್ಯೆ, ಪೂರ್ವದ ಬೆಕಾ ಕಣಿವೆಯಲ್ಲಿ ಇಸ್ರೇಲ್ನ ಡ್ರೋನ್ ದಾಳಿಯಲ್ಲಿ ಕಮಾಂಡರ್ ಮುಹಮ್ಮದ್ ಜಬಾರಾ ಮೃತಪಟ್ಟಿರುವುದಾಗಿ ಹಿಜ್ಬುಲ್ಲಾ ಮೂಲಗಳು ಹೇಳಿವೆ. ಇಸ್ರೇಲ್ ವಿರುದ್ಧದ ಭಯೋತ್ಪಾದಕ ದಾಳಿ ಮತ್ತು ಡ್ರೋನ್ ದಾಳಿಯ ಸೂತ್ರಧಾರ ಜಬಾರಾನನ್ನು ಹತ್ಯೆ ಮಾಡಲಾಗಿದೆ ಎಂದು ಇಸ್ರೇಲ್ ಸೇನೆ ಹೇಳಿದೆ.



## ಮೈಕ್ರೋಸಾಫ್ಟ್ ಸ್ಥಗಿತ -1100 ಕ್ಕೂ ಹೆಚ್ಚು ವಿಮಾನಗಳ ಹಾರಾಟ ಕ್ಯಾನ್ಸಲ್!

**ವಾಷಿಂಗ್ಟನ್:** ಜಾಗತಿಕವಾಗಿ ಮೈಕ್ರೋಸಾಫ್ಟ್ ವಿಂಡೋಸ್ ಕಂಪ್ಯೂಟರ್ಗಳಲ್ಲಿ ಕೆಲಸ ಮಾಡುವುದನ್ನು ನಿಲ್ಲಿಸಿದ್ದರಿಂದ ಅಮೆರಿಕದಲ್ಲಿ ವಿಮಾನಗಳ ಸಂಚಾರದಲ್ಲಿ ತೀವ್ರ ವ್ಯತ್ಯಯವುಂಟಾಗಿ ಪ್ರಯಾಣಿಕರು ಪರದಾಡುವಂತಾಯಿತು.

ಫೆಡರಲ್ ಏವಿಯೇಷನ್ ಅಡ್ಮಿನಿಸ್ಟ್ರೇಷನ್ (ಎಫ್‌ಎಎ) ಪ್ರಕಾರ, ಅಮೆರಿಕನ್ ಏರ್ಲೈನ್ಸ್, ಯುನೈಟೆಡ್ ಏರ್ಲೈನ್ಸ್ ಮತ್ತು ಡೆಲ್ಟಾ ಏರ್ ಲೈನ್ಸ್ ಸೇರಿದಂತೆ ಹಲವಾರು ವಿಮಾನಯಾನ ಸಂಸ್ಥೆಗಳು ಹಾರಾಟ ಕಾರ್ಯಾಚರಣೆಯನ್ನು ಸ್ಥಗಿತಗೊಳಿಸಿದವು. 1,100 ಕ್ಕೂ ಹೆಚ್ಚು ವಿಮಾನಗಳ ಸಂಚಾರ ರದ್ದಾಗಿತ್ತು. ಇಲ್ಲಿ ಯಾರಿಗೂ ಏನೂ ತಿಳಿದಿಲ್ಲ, ಗೇಟ್ ಏಜೆಂಟ್ಗಳಿಗೂ ನಮಗೆ ತಿಳಿದಿರುವಷ್ಟು ತಿಳಿದಿದೆ ಅಷ್ಟೇ ಎಂದು ಯುನೈಟೆಡ್ ಏರ್ಲೈನ್ಸ್ ಪ್ರಯಾಣಿಕರು ವಿಮಾನಯಾನ ಸಂಸ್ಥೆಯ ವಿರುದ್ಧ ಕಿಡಿಕಾರಿದ್ದಾರೆ.

ಮೈಕ್ರೋಸಾಫ್ಟ್ ಆಧಾರಿತ ಕಂಪ್ಯೂಟರ್ಗಳು ಕೆಲಸ ಮಾಡುವುದು ಸ್ಥಗಿತಗೊಂಡು ಬ್ಯಾಂಕ್ಗಳಿಂದ ಹಿಡಿದು ಮಾಧ್ಯಮ ಕಂಪನಿಗಳವರೆಗಿನ ಕೈಗಾರಿಕೆಗಳ ಮೇಲೂ ಪರಿಣಾಮ ಬೀರಿದೆ. ಮೈಕ್ರೋಸಾಫ್ಟ್ ಸಿಇಒ ಸತ್ಯ ನಾದೆಲ್ಲಾ ಸ್ಥಗಿತದ ಬಗ್ಗೆ ಪ್ರತಿಕ್ರಿಯಿಸಿ ಗ್ರಾಹಕರಿಗೆ ತಾಂತ್ರಿಕ ಮಾರ್ಗದರ್ಶನ ಮತ್ತು ಬೆಂಬಲವನ್ನು ನೀಡಲು ಮೈಕ್ರೋಸಾಫ್ಟ್ ಕ್ರೌಡ್ಸ್ಟ್ರೈಕ್ನೊಂದಿಗೆ ನಿಕಟವಾಗಿ ಕಾರ್ಯನಿರ್ವಹಿಸುತ್ತಿದೆ ಎಂದು ಹೇಳಿದ್ದಾರೆ.




# ಭಾರತದಲ್ಲಿ ಕಾರ್ಯಾಚರಣೆ ವಿಸ್ತರಿಸಿದ ಒಹ್ಮಿಯಮ್

**ಬೆಂಗಳೂರು:** ಒಹ್ಮಿಯಮ್ ಇಂಟರ್‌ನ್ಯಾಷನಲ್ (ಒಹ್ಮಿಯಮ್) ಸುಧಾರಿತ ಪ್ರೋಟಾನ್ ಎಕ್ಸ್‌ಚೇಂಜ್ ಮೆಂಬ್ರೇನ್ ಎಲೆಕ್ಟ್ರೋಲೈಜರ್ ಗಳನ್ನು ವಿನ್ಯಾಸಗೊಳಿಸುವ, ತಯಾರಿಸುವ ಮತ್ತು ನಿಯೋಜಿಸುವ ಪ್ರಮುಖ ಗ್ರೀನ್ ಹೈಡ್ರೋಜನ್ ಕಂಪನಿಯಾಗಿದ್ದು, ಬೆಂಗಳೂರು ಹೊರವಲಯದ ದೊಡ್ಡಬಳ್ಳಾಪುರದಲ್ಲಿ ತನ್ನ ಹೊಸ ಗಿಗಾಫ್ಯಾಕ್ಟರಿಯನ್ನು ಅಧಿಕೃತವಾಗಿ ಪ್ರಾರಂಭಿಸುವುದಾಗಿ ಘೋಷಿಸಿದೆ. ಸುಮಾರು 14,000 ಚದರ ಮೀಟರ್ ಉತ್ಪಾದನಾ ಸ್ಥಳಾವಕಾಶದಲ್ಲಿ ಈ ಅತ್ಯಾಧುನಿಕ ಉತ್ಪಾದನಾ ಸೌಲಭ್ಯವನ್ನು ಒಹ್ಮಿಯಮ್ ಸ್ಥಾಪಿಸಿದೆ. ಹೆಚ್ಚುತ್ತಿರುವ ಜಾಗತಿಕ ಬೇಡಿಕೆಯನ್ನು ಪೂರೈಸಲು ಶಕ್ತವಾಗಿದ್ದು, 2 ಗಿಗಾವ್ಯಾಟ್‌ಗಳಷ್ಟು ಸಂಪೂರ್ಣವಾಗಿ ಜೋಡಿಸಲಾದ ಮತ್ತು ಪರೀಕ್ಷಿಸಿದ ಎಲೆಕ್ಟ್ರೋಲೈಜರ್ ಸಿಸ್ಟಂಗಳನ್ನು ಸಾಗಿಸುವ ಸೌಲಭ್ಯವನ್ನು ಹೊಂದಿದೆ.




ನಮ್ಮ ಹೊಸ ಗಿಗಾಫ್ಯಾಕ್ಟರಿಯಲ್ಲಿ ರಿಬ್ಬನ್ ಕತ್ತರಿಸುವುದು ಒಹ್ಮಿಯಮ್ ಪ್ರಗತಿಯಲ್ಲಿ ಒಂದು ಪ್ರಮುಖ ಮೈಲುಗಲ್ಲೆನಿಸಿದೆ. ಭಾರತದಾದ್ಯಂತ ಮತ್ತು ಜಗತ್ತಿನೆಲ್ಲೆಡೆ ಬೆಳೆಯುತ್ತಿರುವ ನಮ್ಮ ಗ್ರಾಹಕರ ಬೇಡಿಕೆಗೆ ಅನುಸಾರವಾಗಿ ಗ್ರೀನ್ ಹೈಡ್ರೋಜನ್ ಪರಿಹಾರಗಳನ್ನು ತಲುಪಿಸಲು ನಮಗೆ ಅನುವು ಮಾಡಿಕೊಡುತ್ತದೆ ಎಂದು ಒಹ್ಮಿಯಮ್ CEO ಆರ್ನೆ ಬಾಲ್ಲಂಟೈನ್ ಹೇಳಿದರು. ''2GW ಎಲೆಕ್ಟ್ರೋಲೈಜರ್‌ಗಳು ವರ್ಷಕ್ಕೆ ನಾಲ್ಕು ದಶಲಕ್ಷ ಟನ್ $CO_2$ ಉತ್ಪಾದನೆಯನ್ನು ತಗ್ಗಿಸಬಹುದು ಇದು 180 ದಶಲಕ್ಷ ಮರಗಳು ಹೀರಿಕೊಳ್ಳುವ $CO_2$ಗೆ ಸಮಾನವಾಗಿರುತ್ತದೆ. ಇದು ಆರಂಭವಷ್ಟೇ. ಸಾಗಬೇಕಾದ ಹಾದಿ ಬಹುದೂರವಿದೆ'' ಎಂದರು.

ಹೊಸ ಗಿಗಾಫ್ಯಾಕ್ಟರಿ ಭಾರತದಲ್ಲಿ ಒಹ್ಮಿಯಮ್‌ನ ಎರಡನೇ ಉತ್ಪಾದನಾ ಸೌಲಭ್ಯವಾಗಿದೆ. ಆದರೆ, ಪ್ರಮುಖ ಉತ್ಪಾದನೆ, ಜೋಡಣೆ, ಗುಣಮಟ್ಟ ಭರವಸೆ, ಪರೀಕ್ಷೆ, ಗೋದಾಮು ಮತ್ತು ಸಾಗಾಟ ಸೌಲಭ್ಯಗಳನ್ನು ಒಂದೇ ಸೂರಿನಡಿ ತರುವ ಮೊದಲ ಘಟಕವಾಗಿದೆ.

ಒಹ್ಮಿಯಮ್‌ನ ವಿಶಿಷ್ಟ ಹೈಪರ್ ಮಾಡ್ಯುಲರ್ PEM ಎಲೆಕ್ಟ್ರೋಲೈಜರ್‌ಗಳ ಸಾಮೂಹಿಕ ಉತ್ಪಾದನೆ ಮತ್ತು ಸುಲಭ ಜೋಡಣೆಗಾಗಿ ವಿನ್ಯಾಸಗೊಳಿಸಲಾಗಿದೆ ಎಂದು ಸಂಸ್ಥೆಯ ಸಿಒಒ ಅಶ್ವಿನ್ ವರ್ಮಾ ವಿವರಿಸಿದರು. ಪ್ರಮಾಣೀಕೃತ, ಉತ್ತಮ ಗುಣಮಟ್ಟದ ಮತ್ತು ಪರಿಣಾಮಕಾರಿ ಉತ್ಪಾದನೆಯನ್ನು ಕಾರ್ಯಗತಗೊಳಿಸುವ ಮೂಲಕ ಸ್ಪರ್ಧಾತ್ಮಕ ವೆಚ್ಚದಲ್ಲಿ ಉತ್ತಮ ಕಾರ್ಯಕ್ಷಮತೆಯನ್ನು ಸಾಧಿಸುವ ವ್ಯವಸ್ಥೆಗಳನ್ನು ನಾವು ನಿರ್ಮಿಸಬಹುದು. ಈ ಪ್ರಮಾಣೀಕೃತ ವಿಧಾನದ ಮೂಲಕ, ನಮ್ಮ ಕಾರ್ಖಾನೆ ಉತ್ಪಾದನೆಯು ಹೆಚ್ಚುತ್ತಿರುವ ಬೇಗನೆ ಪೂರೈಸಲು ಸಾಧ್ಯವಾಗಬಹುದು, ಘಟಕದ ಸಾಮರ್ಥ್ಯವು ವಿಸ್ತರಿಸಿದಂತೆ ವೆಚ್ಚವೂ ತಗ್ಗುತ್ತದೆ'' ಎಂದು ವರ್ಮಾ ವಿವರಿಸಿದರು.

## ಒಸಾಮಾ ಬಿನ್ಲಾಡೆನ್ ಆಪ್ತ ಅಮೀನ್ ಉಲ್ ಹಖ್ ಸೆರೆ

**ಇಸ್ಲಾಮಾಬಾದ್:** ಭಯೋತ್ಪಾದಕ ಒಸಾಮಾ ಬಿನ್ ಲಾಡೆನ್ನ ಆಪ್ತ ಎನಿಸಿಕೊಂಡ ಅಲ್-ಕಾಯಿದಾ ನಾಯಕ ಅಮೀನ್ ಉಲ್ ಹಖ್ನನ್ನು ಪಾಕಿಸ್ಥಾನದ ಭಯೋತ್ಪಾದಕ ನಿಗ್ರಹ ಅಧಿಕಾರಿಗಳು ಶುಕ್ರವಾರ ಬಂಧಿಸಿದ್ದಾರೆ. ಪಾಕಿಸ್ಥಾನದ ಪಂಜಾಬ್ ಪ್ರಾಂತದಲ್ಲಿ ಹಲವು ಕುಕೃತ್ಯಗಳನ್ನು ಯೋಜಿಸಿದ ಆರೋಪದಲ್ಲಿ ಭಯೋತ್ಪಾದನ ನಿಗ್ರಹ ಇಲಾಖೆಯು ಈತನ ವಿರುದ್ಧ ಪ್ರಕರಣ ದಾಖಲಿಸಿತ್ತು. ವಿಶ್ವಸಂಸ್ಥೆಯು ಪಟ್ಟಿ ಮಾಡಿರುವ ಉಗ್ರರಲ್ಲಿ ಈತನೂ ಒಬ್ಬ. ಗುಪ್ತಚರ ಸಂಸ್ಥೆಯ ಸಹಯೋಗದೊಂದಿಗೆ ಇಲಾಖೆಯು ಕಾರ್ಯಾಚರಣೆ ನಡೆಸಿದೆ.



## ರೆಸ್ಟೋರೆಂಟ್‌ನಲ್ಲಿ ತಲೆಕೆಳಗಾದ ಧ್ವಜ

**ನವದೆಹಲಿ:** ಜಪಾನ್ನಲ್ಲಿರುವ ಭಾರತೀಯ ರೆಸ್ಟೋರೆಂಟ್ ಒಂದರಲ್ಲಿ ತ್ರಿವರ್ಣ ಧ್ವಜವನ್ನು ತಲೆಕೆಳಗೆ ಹಾಕಲಾಗಿದ್ದು, ಇದರ ವಿಡಿಯೋವೊಂದು ವೈರಲ್ ಆಗಿ ಭಾರತೀಯ ನೆಟ್ಟಿಗರ ಕೆಂಗಣ್ಣಿಗೆ ಗುರಿಯಾಗಿದೆ. ಅರಿವಿಲ್ಲದೇ ಮಾಡಿದ ತಪ್ಪಿಗೆ ರೆಸ್ಟೋರೆಂಟ್ನ ಮಾಲೀಕ ಕ್ಷಮೆ ಯಾಚಿಸಿ ಬಳಿಕ ತ್ರಿವರ್ಣ ಧ್ವಜವನ್ನು ಸರಿಯಾಗಿ ನೇತು ಹಾಕಿದ್ದಾರೆ. ಜಪಾನಿನ ಪ್ರಭಾವಿ ವ್ಲಾಗರ್ ಕೋಕಿ ಶಿಶಿಡೊ ಅವರು ತಮ್ಮ ಯೂಟ್ಯೂಬ್ ಹಾಗೂ ಇನ್ಸ್ಟಾಗ್ರಾಮ್ ವಿಡಿಯೋಗಾಗಿ ವಿಲಕ್ಷಣವಾದ 'ಜಪಾನ್ನಲ್ಲಿ 24 ಗಂಟೆಗಳ ಭಾರತೀಯ ಆಹಾರ ಚಾಲೆಂಜ್' ಅನ್ನು ಕೈಗೆತ್ತಿಕೊಂಡಿದ್ದರು. ಅದರಂತೆ ಜಪಾನ್ನಲ್ಲಿರುವ ಭಾರತೀಯ ರೆಸ್ಟೋರೆಂಟ್‌ಗೆ ಭೇಟಿ ನೀಡಿದ ಬಳಿಕ ವೀಡಿಯೊವನ್ನು ಪೋಸ್ಟ್ ಮಾಡಿದ್ದರು.

## ಕಟೀಲು ದುರ್ಗಾಪರಮೇಶ್ವರಿ ದೇವಸ್ಥಾನಕ್ಕೆ ಏಕ್ತಾ ಕಪೂರ್ ಭೇಟಿ



**ಬೆಂಗಳೂರು:** ಬಾಲಿವುಡ್ ನಿರ್ದೇಶಕಿ ಹಾಗೂ ನಿರ್ಮಾಪಕಿ ಎಕ್ತಾ ಕಪೂರ್ ಮಂಗಳೂರಿನ ಕಟೀಲು ಶ್ರೀದುರ್ಗಾಪರಮೇಶ್ವರಿ ದೇವಸ್ಥಾನಕ್ಕೆ ಭೇಟಿ ನೀಡಿದ್ದಾರೆ. ಕುಟುಂಬದ ಜೊತೆ ಕಟೀಲು ದುರ್ಗಾಪರಮೇಶ್ವರಿ ದೇವಸ್ಥಾನಕ್ಕೆ ಕುಟುಂಬ ಸದಸ್ಯರ ಜೊತೆ ಭೇಟಿ ನೀಡಿದ ನಟಿ ತಾಯಿಗೆ ವಿಶೇಷ ಪೂಜೆ ಸಲ್ಲಿಸಿದ್ದಾರೆ. ಇದೇ ಮೊದಲ ಭಾರಿಗೆ ಕಟೀಲು ಶ್ರೀದುರ್ಗಾಪರಮೇಶ್ವರಿ ದೇವಸ್ಥಾನಕ್ಕೆ ಭೇಟಿ ನೀಡಿದ ಎಕ್ತಾ ಕಪೂರ್ ದೇವಿಗೆ ವಿಶೇಷ ಪೂಜೆ ಸಲ್ಲಿಸಿದ್ದಾರೆ. ಕೆಲ ಸಮಯ ದೇವಸ್ಥಾನದಲ್ಲಿ ಕುಟುಂಬದ ಜೊತೆ ಸಮಯ ಕಳೆದಿದ್ದಾರೆ. ಬಳಿಕ ದೇವಸ್ಥಾನದ ವತಿಯಿಂದ ದೇವರ ವಿಶೇಷ ವಸ್ತ್ರ ನೀಡಿ ಗೌರವಿದ್ದಾರೆ. ನಂತರ ಶಿಬರೂರು ಕೊಡಮಣಿತ್ತಾಯ ದೈವಸ್ಥಾನಕ್ಕೆ ಎಕ್ತಾ ಕಪೂರ್ ಕುಟುಂಬ ಭೇಟಿ ಕೊಟ್ಟಿದ್ದಾರೆ.

ಇನ್ನೂ ಹಿಂದಿ ಸಿನಿಮಾರಂಗದಲ್ಲಿ ಸೀರಿಯಲ್ ಮತ್ತು ಸಿನಿಮಾ ನಿರ್ಮಾಪಕಿಯಾಗಿ ಗುರುತಿಸಿಕೊಂಡಿದ್ದಾರೆ. ಎಕ್ ವಿಲನ್, ಬಿಗ್ ಬಿ ಮತ್ತು ರಶ್ಮಿಕಾ ನಟನೆಯ 'ಗುಡ್ ಬೈ' ಸಿನಿಮಾ, ಯೂ ಟರ್ನ್ ಚಿತ್ರ ಸೇರಿದಂತೆ ಸಾಕಷ್ಟು ಸಿನಿಮಾಗಳನ್ನು ನಿರ್ಮಾಸಿ ಖ್ಯಾತಿ ಘಳಿಸಿದ್ದಾರೆ.



## ಪಾಕಿಸ್ತಾನದಲ್ಲಿ ಹಿಂದೂಗಳ ಜನಸಂಖ್ಯೆಯಲ್ಲಿ ಹೆಚ್ಚಳ

**ಇಸ್ಲಾಮಾಬಾದ್:** ಪಾಕಿಸ್ತಾನದ ಹಿಂದೂ ಸಮುದಾಯದ ಜನಸಂಖ್ಯೆಯಲ್ಲಿ ಹೆಚ್ಚಳವಾಗಿದೆ ಎಂದು 2023ರ ಜನಸಂಖ್ಯೆಯ ಅಧಿಕೃತ ದತ್ತಾಂಶ ತಿಳಿಸಿದೆ ಎಂದು ಪಿಟಿಐ ಸುದ್ದಿ ಸಂಸ್ಥೆ ವರದಿ ಮಾಡಿದೆ. ಜನಗಣತಿಯನ್ವಯ 2017ರಲ್ಲಿ 35 ಲಕ್ಷವಿದ್ದ ಈ ಸಮುದಾಯದ ಜನಸಂಖ್ಯೆಯು 2023ರಲ್ಲಿ 38 ಲಕ್ಷಕ್ಕೆ ಏರಿಕೆಯಾಗಿದೆ ಎಂದು ತಿಳಿದುಬಂದಿದೆ. ಈ ಮೂಲಕ ಹಿಂದೂ ಸಮುದಾಯವು ಪಾಕಿಸ್ತಾನದ ಅತ್ಯಂತ ದೊಡ್ಡ ಅಲ್ಪಸಂಖ್ಯಾತ ಸಮುದಾಯ ಎಂದು ಪಾಕಿಸ್ತಾನ ಅಂಕಿಅಂಶ ಕಾರ್ಯಾಲಯ (ಪಿಬಿಎಸ್) ನೀಡಿರುವ 'ಜನಸಂಖ್ಯೆ ಮತ್ತು ವಸತಿ ಗಣತಿ- 2023'ರ ದತ್ತಾಂಶವನ್ನು ಆಧರಿಸಿ, ಅಲ್ಲಿಯ ಡಾನ್ ಸುದ್ದಿಪತ್ರಿಕೆ ವರದಿ ಮಾಡಿದೆ. 2023ರ ಜನಗಣತಿಯಂತೆ ದೇಶದ ಒಟ್ಟು ಜನಸಂಖ್ಯೆ 24.08 ಕೋಟಿ. ಅಂಕಿ ಅಂಶಗಳ ಪ್ರಕಾರ ಮುಸ್ಲಿಮರ ಜನಸಂಖ್ಯೆಯಲ್ಲಿ ಅಲ್ಪ ಇಳಿಕೆಯಾಗಿದೆ. 2017ರಲ್ಲಿ ಮುಸ್ಲಿಂ ಸಮುದಾಯದ ಜನಸಂಖ್ಯೆಯು ಶೇ 96.47ವಿತ್ತು. 2023ರಲ್ಲಿ ಶೇ 96.35ಕ್ಕೆ ಅಲ್ಪ ಇಳಿಕೆ ಕಂಡಿದೆ. 26 ಲಕ್ಷ ಇದ್ದ ಕ್ರಿಶ್ಚಿಯನ್ನರ ಜನಸಂಖ್ಯೆಯು 33 ಲಕ್ಷಕ್ಕೆ ಏರಿಕೆಯಾಗಿದೆ. ಅಲ್ಲದೇ, ಪಾಕಿಸ್ತಾನದಲ್ಲಿ ಅಹ್ಮದೀಯರು 1.62 ಲಕ್ಷ, ಸಿಖ್ ಸಮುದಾಯದವರು 15,998 ಮತ್ತು ಪಾರ್ಸಿಗಳು 2,348 ಸಂಖ್ಯೆಯಲ್ಲಿದ್ದಾರೆ.



# ಬಾಂಗ್ಲಾದೇಶದಲ್ಲಿ ಭುಗಿಲೆದ್ದ ಹಿಂಸಾಚಾರ: ಕರ್ಫ್ಯೂ ಜಾರಿ!



**ಬಾಂಗ್ಲಾದೇಶ:** ಬಾಂಗ್ಲಾದೇಶದಲ್ಲಿ ಹಿಂಸಾಚಾರ ಭುಗಿಲೆದ್ದಿದ್ದು, ಇದುವರೆಗೆ 105 ಮಂದಿ ಮೃತಪಟ್ಟಿದ್ದಾರೆ. ಮುನ್ನೆಚ್ಚರಿಕೆ ಕ್ರಮವಾಗಿ ಕರ್ಫ್ಯೂ ಜಾರಿಗೊಳಿಸಲಾಗಿದೆ.

ದೇಶಾದ್ಯಂತ ಅಶಾಂತಿ ವಾತಾವರಣ ಮೂಡಿದ ಹಿನ್ನೆಲೆಯಲ್ಲಿ ಬಾಂಗ್ಲಾದೇಶದ ಅಧಿಕಾರಿಗಳು ರಾಷ್ಟ್ರವ್ಯಾಪಿ ಕರ್ಫ್ಯೂ ವಿಧಿಸಿದ್ದಾರೆ.

ವಿದ್ಯಾರ್ಥಿ ಪ್ರತಿಭಟನಾಕಾರರು ಮತ್ತು ಪೊಲೀಸರ ನಡುವಿನ ಘರ್ಷಣೆಯಲ್ಲಿ ಕನಿಷ್ಠ 105 ಜನರು ಸಾವನ್ನಪ್ಪಿದ್ದಾರೆ ಎಂದು ಮೂಲಗಳು ತಿಳಿಸಿದೆ.

ಉದ್ಯೋಗಗಳ ಬಗ್ಗೆ ಸರ್ಕಾರದ ಅಸ್ತಿತ್ವದಲ್ಲಿರುವ ಕೋಟಾ ನೀತಿಯಲ್ಲಿ ಸುಧಾರಣೆಗಳನ್ನು ವಿದ್ಯಾರ್ಥಿಗಳು ಒತ್ತಾಯಿಸುತ್ತಿರುವುದರಿಂದ ಬಾಂಗ್ಲಾದೇಶದ ಪ್ರಧಾನಿ ಶೇಖ್ ಹಸೀನಾ ಅವರಿಗೆ ಇದು ಕಠಿಣ ರಾಜಕೀಯ ಸವಾಲನ್ನು ಒಡ್ಡಿದೆ.

ರಾಷ್ಟ್ರವನ್ನುದ್ದೇಶಿಸಿ ಮಾಡಿದ ದೂರದರ್ಶನ ಭಾಷಣದಲ್ಲಿ, ಪ್ರಧಾನಿ ಶೇಖ್ ಹಸೀನಾ ಅವರು ಸಮಸ್ಯೆಯನ್ನು ಶಾಂತಿಯುತವಾಗಿ ಪರಿಹರಿಸಲು ಮಾತುಕತೆಗೆ ವಿದ್ಯಾರ್ಥಿಗಳನ್ನು ಆಹ್ವಾನಿಸಿದರು. ಪ್ರಸ್ತುತ ಪರಿಸ್ಥಿತಿಯನ್ನು ಗಮನಿಸಿದರೆ, ವಿದ್ಯಾರ್ಥಿಗಳು ಸರ್ಕಾರದ ಪ್ರಸ್ತಾಪವನ್ನು ಸ್ವೀಕರಿಸುತ್ತಾರೆಯೇ ಎಂಬುದು ಸ್ಪಷ್ಟವಾಗಿಲ್ಲ.

ವಿದೇಶಾಂಗ ಸಚಿವಾಲಯದ ವಕ್ತಾರ ರಣಧೀರ್ ಜೈಸ್ವಾಲ್, ಇದು ದೇಶದ ''ಆಂತರಿಕ'' ವಿಷಯ ಎಂದು ಶುಕ್ರವಾರ ಹೇಳಿದ್ದಾರೆ. ಪ್ರಸ್ತುತ ಬಾಂಗ್ಲಾದೇಶದಲ್ಲಿ 8,500 ವಿದ್ಯಾರ್ಥಿಗಳು ಸೇರಿದಂತೆ ಸುಮಾರು 15,000 ಭಾರತೀಯರು ವಾಸಿಸುತ್ತಿದ್ದಾರೆ, ಅವರೆಲ್ಲರೂ ಸುರಕ್ಷಿತರಾಗಿದ್ದಾರೆ ಎಂದು ಎಂಇಎ ವಕ್ತಾರರು ತಿಳಿಸಿದ್ದಾರೆ.

## ಕಾಲೇಜು ವಿದ್ಯಾರ್ಥಿನಿಯ ಅಪಹರಿಸಿ ಕೂಡಿಹಾಕಿ 12 ದಿನಗಳ ಕಾಲ ಸಾಮೂಹಿಕ ಅತ್ಯಾಚಾರ

**ಗಾಜಿಯಾಬಾದ್:** ಗಾಜಿಯಾಬಾದ್‌ನ ಕಾಲೇಜು ವಿದ್ಯಾರ್ಥಿನಿಯನ್ನು ಆರೋಪಿಗಳು ಅಪಹರಿಸಿ ಹೋಟೆಲನಲ್ಲಿ ಬಂಧಿಯಾಗಿರಿಸಿ 12 ದಿನಗಳ ಕಾಲ ಸಾಮೂಹಿತ ಅತ್ಯಾಚಾರವೆಸಗಿರುವ ಘಟನೆ ವರದಿಯಅಗಿದೆ. ಬಾಲಕಿಯ ಮೇಲೆ ಮೀರತ್ ಹಾಗೂ ಜಮ್ಮು ಹೋಟೆಲ್‌ನಲ್ಲಿ ಅತ್ಯಾಚಾರ ಮಾಡಿದ್ದಾರೆ. ಆರೋಪಿಗಳು ಬಾಲಕಿಯ ಅಶ್ಲೀಲ ವಿಡಿಯೋವನ್ನು ಕೂಡ ಮಾಡಿದ್ದಾರೆ. ಇದಾದ ಬಳಿಕ ಆಕೆಗೆ ಬೆದರಿಕೆ ಹಾಕಿದ್ದಾರೆ. ಜುಲೈ 6 ರಂದು ಗಾಜಿಯಾಬಾದ್‌ನ ಭೋಜ್‌ಪುರ್ ಪೊಲೀಸ್ ಠಾಣೆ ಬಳಿ ಬಿಟ್ಟು ಹೋಗಿದ್ದಾರೆ.



ಗಾಜಿಯಾಬಾದ್ ಹಾಗೂ ಮೀರತ್ ಪೊಲೀಸರು ತಮ್ಮ ವ್ಯಾಪ್ತಿಗೆ ಬರುವುದಿಲ್ಲ ಎಂದು ತಪ್ಪಿಸಿಕೊಳ್ಳಲು ಪ್ರಯತ್ನಿಸಿದ್ದರು. ಬಳಿಕ ಕುಟುಂಬದವರು ಎಸ್‌ಎಸ್‌ಪಿಗೆ ದೂರು ನೀಡಿದ್ದು, ತನಿಖೆ ಆರಂಭಿಸಲಾಗಿದೆ.

ಮೋದಿನಗರ ಗ್ರಾಮದ ನಿವಾಸಿಯಾಗಿರುವ ಬಾಲಕಿ ಇಲ್ಲಿನ ಕಾಲೇಜೊಂದರಲ್ಲಿ ಓದುತ್ತಿದ್ದಳು. ಜೂನ್ 24ರಂದು ಕಾಲೇಜಿಗೆ ಹೋದವಳು ನಾಪತ್ತೆಯಾಗಿದ್ದಳು. ಕುಟುಂಬದವರು ಹುಡುಕಾಟ ನಡೆಸಿ, ನಾಪತ್ತೆ ಪ್ರಕರಣವನ್ನೂ ದಾಖಲಿಸಿದ್ದರು.

ಇದೀಗ ವಿದ್ಯಾರ್ಥಿನಿಯನ್ನು ಆಸ್ಪತ್ರೆಗೆ ದಾಖಲಿಸಲಾಗಿದ್ದು, ಚೇತರಿಸಿಕೊಳ್ಳುತ್ತಿದ್ದಾಳೆ, ಜೂನ್ 24ರಂದು ಬೆಳಗ್ಗೆ 11 ಗಂಟೆ ಸುಮಾರಿಗೆ ತನ್ನನ್ನು ಇಬ್ಬರು ಅಪಹರಿಸಿದ್ದರು ಎಂದು ಆಕೆ ತಿಳಿಸಿದ್ದಾಳೆ. ದೂರಿನ ಆಧಾರದ ಮೇಲೆ ಇದೀಗ ಪೊಲೀಸರು ತನಿಖೆ ನಡೆಸುತ್ತಿದ್ದಾರೆ, ವಿದ್ಯಾರ್ಥಿನಿಯನ್ನು ಇರಿಸಿದ್ದ ಹೋಟೆಲ್‌ನ ಸಿಸಿಟಿವಿ ದೃಶ್ಯಾವಳಿಗಳನ್ನು ಪೊಲೀಸರು ಪರಿಶೀಲಿಸಿದ್ದಾರೆ.

ಇಬ್ಬರೂ ಆರೋಪಿಗಳು ವಿದ್ಯಾರ್ಥಿನಿಯನ್ನು ಜಮ್ಮುವಿಗೆ ಕರೆದೊಯ್ದು ಆರು ದಿನಗಳ ಕಾಲ ಅಲ್ಲಿನ ಹೋಟೆಲ್?ನಲ್ಲಿ ಒತ್ತೆಯಾಳಾಗಿ ಇರಿಸಿದ್ದರು. ಇಲ್ಲಿ ನಾಲ್ವರು ಯುವಕರು ತನ್ನ ಮೇಲೆ ಸಾಮೂಹಿಕ ಅತ್ಯಾಚಾರವೆಸಗಿದ್ದಾರೆ ಎಂದು ವಿದ್ಯಾರ್ಥಿನಿ ಆರೋಪಿಸಿದ್ದಾಳೆ.

# ರಿಲಯನ್ಸ್ ಇಂಡಸ್ಟ್ರೀಸ್ ಮೊದಲ ತ್ರೈಮಾಸಿಕ ಫಲಿತಾಂಶ ಪ್ರಕಟ; 17,448 ಕೋಟಿ ರೂಪಾಯಿ ಲಾಭ ಘೋಷಣೆ



**ಮುಂಬೈ:** ರಿಲಯನ್ಸ್ ಇಂಡಸ್ಟ್ರೀಸ್ ನಿಂದ 2024-25ನೇ ಸಾಲಿನ ಪ್ರಥಮ ತ್ರೈಮಾಸಿಕದ, ಅಂದರೆ ಏಪ್ರಿಲ್ ನಿಂದ ಜೂನ್ ತಿಂಗಳ ತನಕದ ಹಣಕಾಸು ಫಲಿತಾಂಶವನ್ನು ಶುಕ್ರವಾರ ಪ್ರಕಟಿಸಲಾಗಿದೆ. ಕಾರ್ಯಾಚರಣೆಯಿಂದ 2.36 ಲಕ್ಷ ಕೋಟಿ ರೂಪಾಯಿ ಬಂದಿದ್ದು, ಒಂದು ವರ್ಷದ ಹಿಂದಿನ ಇದೇ ಅವಧಿಯಲ್ಲಿ ಕಾರ್ಯಾಚರಣೆಯಿಂದ 2.10 ಲಕ್ಷ ಕೋಟಿ ಆದಾಯ ಬಂದಿತ್ತು. ಎಲ್ಲ ಸೆಗ್ಮೆಂಟ್ ಗಳಿಂದಲೂ ಉತ್ತಮವಾದ ಕೊಡುಗೆ ಬಂದಿದ್ದರಿಂದ ಒಂದು ವರ್ಷದ ಹಿಂದಿನ ಇದೇ ಅವಧಿಗೆ ಹೋಲಿಸಿದರೆ ಮೊದಲ ತ್ರೈಮಾಸಿಕದಲ್ಲಿ ಶೇಕಡಾ 11.5ರಷ್ಟು ಆದಾಯದಲ್ಲಿ ಏರಿಕೆ ಆಗಿ, 2.58 ಲಕ್ಷ ಕೋಟಿ ರೂಪಾಯಿ ಬಂದಿದೆ. ಮುಕೇಶ್ ಅಂಬಾನಿ ನೇತೃತ್ವದ ರಿಲಯನ್ಸ್ ಇಂಡಸ್ಟ್ರೀಸ್ ಸಮೂಹವು 17,448 ಕೋಟಿ ರೂಪಾಯಿ ಲಾಭವನ್ನು ಘೋಷಣೆ ಮಾಡಿದೆ.

ತೈಲ ಹಾಗೂ ಅನಿಲ ಸೆಗ್ಮೆಂಟ್ ಆದಾಯವು ಕಳೆದ ವರ್ಷದ ಇದೇ ಅವಧಿಗೆ ಹೋಲಿಸಿದರೆ ಈ ತ್ರೈಮಾಸಿಕದಲ್ಲಿ ಶೇ 33.4ರಷ್ಟು ಹೆಚ್ಚಾಗಿ 6,179 ಕೋಟಿ ರೂಪಾಯಿ ಬಂದಿದೆ. KG D6 ಹಾಗೂ CBM ಕ್ಷೇತ್ರದಲ್ಲಿ ಕಡಿಮೆ ಮೊತ್ತಕ್ಕೆ ಭಾಗಶಃ ಸರಿದೂಗಿದ್ದರಿಂದ ಮತ್ತು ಹೆಚ್ಚಿನ ವಾಲ್ಯೂಮ್ ನಿಂದ ಇದು ಸಾಧ್ಯವಾಗಿದೆ. ಇದೇ ಸೆಗ್ಮೆಂಟ್ ತ್ರೈಮಾಸಿಕ ಇಬಿಐಟಿಡಿಎ 5,210 ಕೋಟಿ ರೂಪಾಯಿ ಆಗಿದ್ದು, ಕಳೆದ ವರ್ಷದ ಇದೇ ಅವಧಿಗೆ ಹೋಲಿಸಿದರೆ ಶೇ 29.8ರಷ್ಟು ಹೆಚ್ಚಳವಾಗಿದೆ.

ತೈಲದಿಂದ ರಾಸಾಯನಿಕ ತನಕದ ಸೆಗ್ಮೆಂಟ್ ಆದಾಯವು ಕಳೆದ ವರ್ಷದ ಇದೇ ಅವಧಿಗೆ ಹೋಲಿಸಿದರೆ ಶೇ 18.1ರಷ್ಟು ಹೆಚ್ಚಳವಾಗಿ, 1,57,133 ರೂಪಾಯಿ ಬಂದಿದೆ. ಇನ್ನು ಇದೇ ಸೆಗ್ಮೆಂಟ್ ಇಬಿಐಟಿಡಿಎ ಕಳೆದ ವರ್ಷದ ಇದೇ ಅವಧಿಗೆ ಹೋಲಿಸಿದರೆ ಶೇಕಡಾ 14.3ರಷ್ಟು ಇಳಿಕೆಯಾಗಿ, 13,093 ಕೋಟಿ ಬಂದಿದೆ.

ರಿಲಯನ್ಸ್ ರೀಟೇಲ್ ಸಗಟು ಆದಾಯವು ಕಳೆದ ವರ್ಷದ ಇದೇ ಅವಧಿಗೆ ಹೋಲಿಸಿದರೆ ಶೇ 8.1ರಷ್ಟು ಏರಿಕೆಯಾಗಿ, 75,615 ಕೋಟಿ ರೂಪಾಯಿ ಆಗಿದೆ. ಈ ತ್ರೈಮಾಸಿಕದ ಇಬಿಐಟಿಡಿಎ ಕಳೆದ ವರ್ಷದ ಇದೇ ಅವಧಿಗೆ ಹೋಲಿಸಿದರೆ ಶೇ 10.5ರಷ್ಟು ಹೆಚ್ಚಳವಾಗಿ, 5,664 ಕೋಟಿ ರೂಪಾಯಿ ಮುಟ್ಟಿದೆ. ರಿಲಯನ್ಸ್ ರೀಟೇಲ್ ತನ್ನ ಮಳಿಗೆಗಳ ಸಂಖ್ಯೆಯನ್ನು 331ರಷ್ಟು ಹೆಚ್ಚಿಸಿ, 18,918 ತಲುಪಿದೆ. ಈಗ ಒಟ್ಟಾರೆ 8.13 ಕೋಟಿ ಚದರಡಿ ಪ್ರದೇಶದಲ್ಲಿ ಕಾರ್ಯ ನಿರ್ವಹಿಸುತ್ತದೆ. ನೋಂದಾಯಿತ ಗ್ರಾಹಕರ ಸಂಖ್ಯೆಯು 31.6 ಕೋಟಿ ಆಗಿದ್ದು, ಒಟ್ಟಾರೆ ವಹಿವಾಟುಗಳ ಸಂಖ್ಯೆ ವರ್ಷದಿಂದ ವರ್ಷಕ್ಕೆ ಶೇ 6.4ರಷ್ಟು ಹೆಚ್ಚಳವಾಗಿ, 33.4 ಕೋಟಿ ದಾಖಲಾಗಿದೆ.

**ರಿಲಯನ್ಸ್ ಜಿಯೋ:** ರಿಲಯನ್ಸ್ ಜಿಯೋ ಕಳೆದ ತ್ರೈಮಾಸಿಕದಲ್ಲಿ 5,337 ಕೋಟಿ ರೂಪಾಯಿಯ ನಿವ್ವಳ ಲಾಭ ಘೋಷಿಸಿದ್ದ ಕಂಪನಿಯು ಈ ತ್ರೈಮಾಸಿಕದಲ್ಲಿ 5,445 ಕೋಟಿ ರೂಪಾಯಿ ನಿವ್ವಳ ಲಾಭವನ್ನು ಗಳಿಸಿದೆ. ರಿಲಯನ್ಸ್ ಜಿಯೋ ಬಳಕೆದಾರರ ಸಂಖ್ಯೆಯನ್ನು ಹೆಚ್ಚಿಸಿಕೊಳ್ಳುವುದು ಮತ್ತೆ ಮುಂದುವರಿದಿದೆ. ಜೂನ್ ಗೆ ಕೊನೆಯಾದ ತ್ರೈಮಾಸಿಕದಲ್ಲಿ 90 ಲಕ್ಷ ಬಳಕೆದಾರರು ಸೇರ್ಪಡೆಯಾಗಿದ್ದಾರೆ. ಅಂದ ಹಾಗೆ ವರ್ಷದ ಹಿಂದಿನ ಇದೇ ಹಣಕಾಸು ತ್ರೈಮಾಸಿಕದಲ್ಲಿ ಜಿಯೋ 4,863 ಕೋಟಿ ರೂಪಾಯಿ ಲಾಭ ಗಳಿಸಿತ್ತು.

ಕಾರ್ಯಾಚರಣೆ ಮೂಲಕ ಬರುವಂಥ ಆದಾಯವು 26,478 ಕೋಟಿ ರೂಪಾಯಿಗೆ ಹೆಚ್ಚಳವಾಗಿದೆ. ಕಳೆದ ತ್ರೈಮಾಸಿಕದಲ್ಲಿ ಕಾರ್ಯಾಚರಣೆ ಮೂಲಕವಾಗಿ 25,959 ಕೋಟಿ ರೂಪಾಯಿ ಆದಾಯ ಬಂದಿತ್ತು. ವರ್ಷದ ಹಿಂದಿನ ಇದೇ ಅವಧಿಯಲ್ಲಿ 24,042 ಕೋಟಿ ರೂಪಾಯಿ ಕಾರ್ಯಾಚರಣೆ ಮೂಲಕ ಆದಾಯ ಪಡೆದದ್ದನ್ನು ಇಲ್ಲಿ ಉಲ್ಲೇಖಿಸಬಹುದು.

# ಸುರಂಗ ಕೊರೆದಿದ್ದ ಸದ್ದಾಂ ಪೊಲೀಸರ ಬಲೆಗೆ

**ಕೋಲ್ಕತ್ತಾ:** ಉದ್ಯಮಿಯೊಬ್ಬರ ಮೇಲೆ ಹಲ್ಲೆ ನಡೆಸಿದ ಪ್ರಕರಣದ ಪ್ರಮುಖ ಆರೋಪಿ ಸದ್ದಾಂ ಸರ್ದಾರ್‌ನನ್ನು ಪಶ್ಚಿಮ ಬಂಗಾಳ ಪೊಲೀಸರು ಬಂಧಿಸಿದ್ದಾರೆ.



ಪಶ್ಚಿಮ ಬಂಗಾಳದ ದಕ್ಷಿಣ 24 ಪರಗಣ ಜಿಲ್ಲೆಯ ಕುಲ್ತಾಲಿಯಲ್ಲಿ ಕಾರ್ಯಾಚರಣೆ ನಡೆಸಿದ ಪೊಲೀಸರು ಸದ್ದಾಂನನ್ನು ಬಂಧಿಸುವಲ್ಲಿ ಯಶಸ್ವಿಯಾಗಿದ್ದಾರೆ.

ಆರೋಪಿಯ ಬಂಧನದ ವೇಳೆ ಸದ್ದಾಂ ತನ್ನ ಮನೆಯಿಂದ ಬಾಂಗ್ಲಾದೇಶಕ್ಕೆ ತಲುಪುವ ಗುಪ್ತ ಸುರಂಗವನ್ನು ಕಂಡು ಬೆಚ್ಚಿಬಿದ್ದಿದ್ದಾರೆ.

ಸುರಂಗವು 40 ಅಡಿ ಉದ್ದವಿದೆ ಎನ್ನಲಾಗಿದ್ದು ಆತ ಮಲಗುವ ಕೋಣೆಯ ಕೆಳಗೆ ನಿರ್ಮಿಸಿದ್ದ ಎಂದು ಪೊಲೀಸರು ತಿಳಿಸಿದ್ದಾರೆ.

ನಕಲಿ ಚಿನ್ನದ ವಿಗ್ರಹ ವ್ಯಾಪಾರ ದ ಕಸುಬು ಮಾಡುತ್ತಿದ್ದ ಸದ್ದಾಂ ವಿರುದ್ಧ ವಂಚನೆ ಮತ್ತು ಲೂಟಿ ಆರೋಪಗಳಿದ್ದವು. ನಕಲಿ ಚಿನ್ನದ ವಿಗ್ರಹಗಳನ್ನು ಸಾಮಾಜಿಕ ಜಾಲತಾಣಗಳಲ್ಲಿ ಮಾರಾಟ ಮಾಡಿ, ಜನರಿಂದ ಹಣ ಪಡೆದು ವಸ್ತುಗಳನ್ನು ತಲುಪಿಸದೆ ಸದ್ದಾಂ ಸರ್ದಾರ್ ಹಲವರನ್ನು ವಂಚಿಸಿದ್ದ. ಈ ಕುರಿತು ಹಲವು ದೂರುಗಳು ದಾಖಲಾಗಿದ್ದವು. ದೂರಿನನ್ವಯ ಕಾರ್ಯಾಚರಣೆಗಿಳಿದ ಪೊಲೀಸರು ಕುಲ್ತಾಲಿ ಪ್ರದೇಶದ ಕೆಯುರಖಾಲಿ ಗ್ರಾಮದ ಸದ್ದಾಂ ಮನೆಯ ಮೇಲೆ ದಾಳಿ ನಡೆಸಿ ಆತನನ್ನು ಬಂಧಿಸಿದ್ದಾರೆ.

Postal Registration No.KA/BGW-1823/2019-2021, Posted at Patrika Channel, RMS Bhavan, Bengaluru PSO, Mysore Road, Bengaluru- 560020, RNI No.KARKAN/2002/08054

# ಹಾರರ್ ಸಿನಿಮಾದಲ್ಲಿ 'ಹಗ್ಗ' ಹಿಡಿದು ಸೂಪರ್ ಹೀರೋ ಆದ ಅನು ಪ್ರಭಾಕರ್

ವಸಂತ ಸಿನಿ ಕ್ರಿಯೇಷನ್ಸ್ ಲಾಂಛನದಲ್ಲಿ ರಾಜ್ ಭಾರದ್ವಾಜ್ ನಿರ್ಮಿಸಿರುವ, ಅವಿನಾಶ್ ಎನ್ ನಿರ್ದೇಶನದ ಹಾಗೂ ಅನು ಪ್ರಭಾಕರ್, ಹರ್ಷಿಕಾ ಪೂಣಚ್ಚ, ವೇಣು ಪ್ರಮುಖಪಾತ್ರದಲ್ಲಿ ನಟಿಸಿರುವ 'ಹಗ್ಗ' ಚಿತ್ರದ ಟೀಸರ್ ಬಿಡುಗಡೆ ಸಮಾರಂಭ ಇತ್ತೀಚಿಗೆ ನೆರವೇರಿತು. ಖ್ಯಾತ ನಿರ್ದೇಶಕ ಆರ್. ಚಂದ್ರು, ಟೀಸರ್ ಅನಾವರಣ ಮಾಡಿ ಚಿತ್ರತಂಡಕ್ಕೆ ಶುಭ ಕೋರಿದರು. ನಿರ್ಮಾಪಕರಾದ ಕೆ.ಮಂಜು, ದಯಾಳ್ ಅವರು ಸೇರಿದಂತೆ ಅನೇಕ ಗಣ್ಯರು 'ಹಗ್ಗ' ಚಿತ್ರದ ಟೀಸರ್ ಬಿಡುಗಡೆ ಸಮಾರಂಭದಲ್ಲಿ ಉಪಸ್ಥಿತರಿದ್ದರು.

ಟೀಸರ್ ಬಿಡುಗಡೆ ನಂತರ ಮಾತನಾಡಿದ ನಿರ್ದೇಶಕ ಅವಿನಾಶ್, ನಾನು ಮೂಲತಃ ಮ್ಯೆಕಾನಿಕಲ್ ಎಂಜಿನಿಯರ್. ಸಿನಿಮಾ ನಿರ್ದೇಶನ ನನ್ನ ಕನಸು. ಆ ಕನಸು 'ಹಗ್ಗ' ಚಿತ್ರದ ಮೂಲಕ ಈಡೇರಿದೆ. ಈ ಚಿತ್ರದಲ್ಲಿ ಅನು ಪ್ರಭಾಕರ್, ವೇಣು, ಹರ್ಷಿಕಾ ಪೂಣಚ್ಚ ಈ ಚಿತ್ರದ ಪ್ರಮುಖ ಪಾತ್ರದಲ್ಲಿ ಅಭಿನಯಿಸಿದ್ದಾರೆ. ಆದರೆ 'ಹಗ್ಗ'ನೇ ನಮ್ಮ ಚಿತ್ರದ ನಾಯಕ. ಹಾರರ್ ಜಾನರ್‌ನ ಚಿತ್ರವಾದರೂ, ಚಿತ್ರದಲ್ಲಿ ಒಂದು ಪ್ರಮುಖ ಸಂದೇಶ ಸಹ ಇದೆ ಎಂದರು.

ಚಿತ್ರಕ್ಕೆ ನಾನೇ ಕಥೆ ಬರೆದು ನಿರ್ಮಾಣ ಮಾಡಿದ್ದೇನೆ. ಅವಿನಾಶ್ ನಿರ್ದೇಶನ ಮಾಡಿದ್ದಾರೆ.




ಟೀಸರ್ ಬಿಡುಗಡೆ ಬಂದಿರುವ ಎಲ್ಲಾ ಗಣ್ಯರಿಗೂ ಧನ್ಯವಾದ. ಈಗಾಗಲೇ ಮೋಷನ್ ಪೋಸ್ಟರ್ ಮೂಲಕ 'ಹಗ್ಗ' ಜನರ ಮನಸ್ಸಿಗೆ ಹತ್ತಿರವಾಗಿದೆ. ಈಗ ಟೀಸರ್ ಬಿಡುಗಡೆಯಾಗಿದೆ.

ಅವಿನಾಶ್ ಅವರು ಚಿತ್ರದ ಕುರಿತು ಹೇಳಿದಾಗ ನನ್ನ ಪಾತ್ರ ಬಹಳ ಇಷ್ಟವಾಯಿತು. ನನ್ನನ್ನು ಸೂಪರ್ ಹೀರೋ ಎಂದು ತೋರಿಸಿದ್ದಾರೆ. ಪಾತ್ರದ ಬಗ್ಗೆ ಹೆಚ್ಚು ಹೇಳುವ ಹಾಗಿಲ್ಲ. ಆದರೆ ಒಳ್ಳೆಯ ಪಾತ್ರ ಕೊಟ್ಟ ನಿರ್ದೇಶಕರಿಗೆ ಹಾಗೂ ನಿರ್ಮಾಪಕರಿಗೆ ಧನ್ಯವಾದ ಎಂದರು ನಟಿ ಅನು ಪ್ರಭಾಕರ್.

ನನ್ನದು ಈ ಚಿತ್ರದಲ್ಲಿ ಪತ್ರಕರ್ತೆಯ ಪಾತ್ರ. ಯಾವುದೋ ಒಂದು ವಿಷಯದ ಅನ್ವೇಷಣೆಗಾಗಿ ಹಳ್ಳಿಗೆ ಹೋಗುತ್ತೇನೆ. ಈ ಚಿತ್ರದಲ್ಲಿ ಜೀಪ್ ಕೂಡ ಡ್ರೈವ್ ಮಾಡಿದ್ದೇನೆ ಎಂದು ಹರ್ಷಿಕಾ ಪೂಣಚ್ಚ ತಿಳಿಸಿದರು. ಇದು ನನ್ನ ಮೊದಲ ಚಿತ್ರ. ನಟನೆಗೆ ತಬಲನಾಣಿ ಅವರು ಬಹಳ ಸಹಾಯ ಮಾಡಿದರು. ನಮ್ಮ ಚಿತ್ರಕ್ಕೆ ನಿಮ್ಮ ಪ್ರೋತ್ಸಾಹವಿರಲಿ ಎಂದರು ನಾಯಕ ವೇಣು. ನಟ ತಬಲ ನಾಣಿ ಸಹ ತಮ್ಮ ಪಾತ್ರದ ಬಗ್ಗೆ ಮಾಹಿತಿ ನೀಡಿದರು.

ನಿರ್ಮಾಪಕ ರಾಜ್ ಭಾರದ್ವಾಜ್ ಅವರೆ 'ಹಗ್ಗ' ಚಿತ್ರಕ್ಕೆ ಕಥೆ ಬರೆದಿದ್ದು,ಚಿತ್ರಕಥೆ ರಾಜ್ ಭಾರದ್ವಾಜ್, ಅವಿನಾಶ್ ಹಾಗೂ ಮನೋಹರ್ ಅವರದು. ಮ್ಯಾಥ್ಯೂಸ್ ಮನು ಸಂಗೀತ ನಿರ್ದೇಶನ, ಸಿನಿಟೆಕ್ ಸೂರಿ ಛಾಯಾಗ್ರಹಣ ಹಾಗೂ ಎನ್ ಎಂ ವಿಶ್ವ ಅವರ ಸಂಕಲನವಿರುವ ಈ ಚಿತ್ರಕ್ಕೆ ಮನೋಹರ್ ಎಸ್ ಪಿ ಸಂಭಾಷಣೆ ಬರೆದಿದ್ದಾರೆ.

ಅನು ಪ್ರಭಾಕರ್ ಜೊತೆ ವೇಣು, ಹರ್ಷಿಕಾ ಪೂಣಚ್ಚ, ತಬಲನಾಣಿ, ಅವಿನಾಶ್, ಭವಾನಿ ಪ್ರಕಾಶ್, ಸುಧಾ ಬೆಳವಾಡಿ, ಪ್ರಿಯ ಹೆಗ್ಡೆ, ಮೈಕೋ ಮಂಜು, ಸಂಜು ಬಸಯ್ಯ, ಸದಾನಂದ ಕಾಳಿ ಮುಂತಾದವರು ತಾರಾಬಳಗದಲ್ಲಿದ್ದಾರೆ.



# 'ಡಬಲ್ ಇಸ್ಮಾರ್ಟ್' ಸಿನಿಮಾದ ಎರಡನೇ ಹಾಡು ರಿಲೀಸ್!

ಡಬಲ್ ಇಸ್ಮಾರ್ಟ್ ಸಿನಿಮಾದ ಸ್ಟೆಪ್ಪಮಾರ್ ಹಾಡಿಗೆ ಭರ್ಜರಿ ರೆಸ್ಪಾನ್ಸ್ ಸಿಕ್ಕಿದೆ. ಇದೀಗ ಚಿತ್ರತಂಡ ಎರಡನೇ ಹಾಡನ್ನು ಬಿಡುಗಡೆ ಮಾಡಿದೆ. ಮಾರ್ ಮುಂತಾ ಚೋಡ್ ಚಿಂತಾ ಎಂಬ ಗಾನಬಜಾನಕ್ಕೆ ನಾಯಕ ಉಸ್ತಾದ್ ರಾಮ್ ಪೋತಿನೇನಿ ಹಾಗೂ ನಾಯಕಿ ಕಾವ್ಯಾ ಥಾಪರ್ ಸಖತ್ ಆಗಿ ಕುಣಿದು ಕುಪ್ಪಳಿಸಿದ್ದಾರೆ. ಕಾಸರ್ಲ ಶ್ಯಾಮ್ ಸಾಹಿತ್ಯದ ದೇಸಿ ನಂಬರ್‌ಗೆ ಮಣಿ ಶರ್ಮಾ ಟ್ಯೂನ್ ಹಾಕಿದ್ದು, ರಾಹುಲ್ ಸಿಪ್ಲಿಗುಂಜ್ ಮತ್ತು ಕೀರ್ತನಾ ಶರ್ಮಾ ಧ್ವನಿಯಾಗಿದ್ದಾರೆ. ಮಾರ್ ಮುಂತಾ ಚೋಡ್ ಚಿಂತಾ ಲಿರಿಕಲ್ ವಿಡಿಯೋದ ಜೊತೆಗೆ ಮೇಕಿಂಗ್ ವಿಡಿಯೋ ಕೂಡ ಇರೋದು ವಿಶೇಷವಾಗಿದೆ.

ಇಸ್ಮಾರ್ಟ್ ಶಂಕರ್ ಸಿನಿಮಾದ ಮುಂದುವರೆದ ಭಾಗವೇ ಈ ಡಬಲ್ ಇಸ್ಮಾರ್ಟ್ ಚಿತ್ರ. ಈ ಮೂಲಕ ಡೈರೆಕ್ಟರ್ ಪೂರಿ ಜಗನ್ನಾಥ್ ಹೊಸ ರೀತಿಯಲ್ಲಿಯೆ ಶಂಕರ್‌ನ ಕಥೆ ಹೇಳಲು ಹೊರಟ್ಟಿದ್ದಾರೆ. 2019ರಲ್ಲಿ 'ಇಸ್ಮಾರ್ಟ್ ಶಂಕರ್' ಸಿನಿಮಾ ರಿಲೀಸ್ ಆಗಿತ್ತು. ಇದರಲ್ಲಿ ಕನ್ನಡತಿ ನಭಾ ನಟೇಶ್ ಅಭಿನಯಿಸಿದ್ದರು. ಆಗ ಈ ಸಿನಿಮಾ ಕರ್ಮಷಿಯಲಿ ಸಕ್ಸಸ್ ಆಗಿತ್ತು. ಆದರೆ ಈ ಸಿನಿಮಾ ಬಂದು 5 ವರ್ಷದ ಬಳಿಕ ಪಾರ್ಟ್-2 ಡಬಲ್ ಇಸ್ಮಾರ್ಟ್ ಸಿನಿಮಾ ಬರುತ್ತಿದೆ. ಟಾಲಿವುಡ್‌ನಲ್ಲಿ ಈಗಾಗಲೇ ನಿರೀಕ್ಷೆಯನ್ನು ಕೂಡ ಹುಟ್ಟುಹಾಕಿದೆ.

ತೆಲುಗು ಮಾತ್ರವಲ್ಲದೇ ಕನ್ನಡ, ತಮಿಳು, ಮಲಯಾಳಂ ಹಾಗೂ ಹಿಂದಿ ಭಾಷೆಗಳಲ್ಲಿ 'ಡಬಲ್ ಇಸ್ಮಾರ್ಟ್' ಸಿನಿಮಾ ಬಿಡುಗಡೆ ಆಗಲಿದೆ. ಮಣಿ ಶರ್ಮಾ ಅವರು ಈ ಸಿನಿಮಾಗೆ ಸಂಗೀತ ನಿರ್ದೇಶನ ಮಾಡಿದ್ದಾರೆ. 'ಪುರಿ ಕನೆಕ್ಟ್ಸ್' ಬ್ಯಾನರ್ ಮೂಲಕ ಪುರಿ ಜಗನ್ನಾಥ್, ಚಾರ್ಮಿ ಕೌರ್ ಅವರು ಈ ಸಿನಿಮಾವನ್ನು ನಿರ್ಮಿಸಿದ್ದಾರೆ. ಈ ಚಿತ್ರದಲ್ಲಿ ರಾಮ್ ಪೊತೀನೇನಿಗೆ ನಟಿ ಕಾವ್ಯಾ ಥಾಪರ್ ಜೋಡಿ ಆಗಿದ್ದಾದೆ. ಸಂಜಯ್ ದತ್ ಈ ಸಿನಿಮಾದಲ್ಲಿ ಖಡಕ್ ವಿಲನ್ ಆಗಿಯೇ ಕಾಣಿಸುತ್ತಿದ್ದಾರೆ. ಇವರ ಈ ಸಿನಿಮಾ ಬಗ್ಗೆ ಕೂಡ ನಿರೀಕ್ಷೆ ಇದ್ದೇ ಇದೆ.

ಡಬಲ್ ಇಸ್ಮಾರ್ಟ್ ಸಿನಿಮಾದ ಶೂಟಿಂಗ್ ಇನ್ನು ನಡೆಯುತ್ತಿದೆ. ಭರದಿಂದಲೇ ಚಿತ್ರೀಕರಣ ನಡೆಯುತ್ತಿರೋ ಈ ಸಿನಿಮಾ ರಿಲೀಸ್ ಡೇಟ್ ಕೂಡ ಫಿಕ್ಸ್ ಆಗಿದೆ. ಆಗಸ್ಟ್-15 ರಂದು ಚಿತ್ರ ಎಲ್ಲೆಡೆ ರಿಲೀಸ್ ಮಾಡಲಾಗುತ್ತಿದೆ. ವಿಶ್ವದಾದ್ಯಂತ ಬರ್ತಿರೋ ಈ ಚಿತ್ರದ ಪ್ರಚಾರ ಕೂಡ ಈಗಾಗಲೇ ಶುರು ಆಗಿದೆ.





# ಚಡ್ಡಿ ಜೆಪ್ ತೆಗೆದು ಹುಡುಗರ ನಿದ್ರೆ ಗೆಡಿಸಿದ ಜೈ ಜಗದೀಶ್ ಪುತ್ರಿ

80-90ರ ದಶಕದಲ್ಲಿ ಕನ್ನಡ ಚಿತ್ರರಂಗದಲ್ಲಿ ಮಿಂಚಿದ ನಟ ಜೈ ಜಗದೀಶ್ ಮತ್ತು ಪತ್ನಿ ವಿಜಯಲಕ್ಷ್ಮಿರವರ ಜೇಷ್ಠ ಪುತ್ರಿನೇ ವೈಭವಿ ಜಗದೀಶ್. ಸೋಷಿಯಲ್ ಮೀಡಿಯಾದಲ್ಲಿ ಆಕ್ಟಿವ್ ಆಗಿರುವ ವೈಭವಿ ಜಗದೀಶ್ ಸಖತ್ ಹಾಟ್ ಆಂಡ್ ಬೋಲ್ಡ್ ಫೋಟೋಗಳನ್ನು ಅಪ್ಲೋಡ್ ಮಾಡುತ್ತಿದ್ದಾರೆ. ಕೊರೋನಾ ಲಾಕ್‌ಡೌನ್ ಸಮಯದ ನಂತರ ಫಿಟ್ನೆಸ್ ಬಗ್ಗೆ ಹೆಚ್ಚಿನ ಕಾಳಜಿ ವಹಿಸಿದ ಈ ಸುಂದರಿ ಸಿಕ್ಕಾಪಟ್ಟೆ ಸಣ್ಣಗಾಗಿದ್ದಾರೆ.



ಟ್ರಾನ್ಸ್‌ಫಾರ್ಮೇಷನ್ ನಂತರ ತುಂಬಾನೇ ಫೋಟೋ ಅಪ್ಲೋಡ್ ಮಾಡುತ್ತಿದ್ದು ಅದರಲ್ಲಿ ಜಿಪ್ ತೆಗೆದು ಫೋಟೋ ಕೊಟ್ಟಿರುವುದು ಸೆನ್ಸೇಷನ್ ಕ್ರಿಯೇಟ್ ಮಾಡುತ್ತಿದೆ.

ಹೌದು! ವಿದೇಶ ಪ್ರವಾಸ ಮಾಡಿದ ವೈಭವಿ ಜಗದೀಶ್ ಜೀನ್ಸ್ ಬಡ್ಡಿಗೆ ಹಸಿರು ಬಣ್ಣದ ಬಿಕಿನಿ ಟಾಪ್ ಧರಿಸಿದ್ದಾರೆ. ಈ ಬಡ್ಡಿಯ ಬಟನ್ ಮತ್ತು ಜಿಪ್ ತೆಗೆದಿದ್ದಾರೆ.

Aquamarine ಎಂದು ಬರೆದುಕೊಂಡಿದ್ದಾರೆ. ಇದರ ಅರ್ಥ ಅಪರೂಪಕ್ಕೆ ಸಿಗುವ ನೀಲಿ-ಹಸಿರು ಬಣ್ಣದ ಕಲ್ಲು ಎಂದು. ಇದು ಅಪರೂಪದಲ್ಲಿ ಅಪರೂಪವಾದದ್ದು.

ಈ ಪೋಸ್ಟ್‌ಗೆ ವೈಭವಿ ಜಗದೀಶ್ ಕಾಮೆಂಟ್ಸ್ ಆಫ್ ಮಾಡಿಟ್ಟಿದ್ದಾರೆ. ತಂದೆ ಭಯದಿಂದ ಆಫ್ ಮಾಡಿರಬೇಕು ಎಂದು ಕೆಲವರು ಹೇಳಿದ್ದರೆ ಇನ್ನೂ ಕೆಲವರು ಯಾವಾಗ ತಂದೆಗೆ ತಕ್ಕ ಮಗಳು ಆಗುವುದು ಎಂದು ಪ್ರಶ್ನಿಸಿದ್ದಾರೆ.

## ಸಿಂಹಿಣಿಯರ ಅಬ್ಬರಕ್ಕೆ ಪಾಕ್ ಧೂಳಿಪಟ

# ಭಾರತಕ್ಕೆ ಗೆಲುವಿನ ಶುಭಾರಂಭ!

ಸ್ಮೃತಿ ಮಂಧಾನ, ಶಫಾಲಿ ವರ್ಮಾ ಭರ್ಜರಿ ಬ್ಯಾಟಿಂಗ್ ಹಾಗೂ ರೇಣುಕಾಸಿಂಗ್, ಪೂಜಾ ವಸ್ತ್ರಾಕರ್, ಶ್ರೇಯಾಂಕಾ ಪಾಟೀಲ್ ಸಂಘಟಿತ ಬೌಲಿಂಗ್ ಪ್ರದರ್ಶನದಿಂದ ಭಾರತೀಯ ಮಹಿಳಾ ಕ್ರಿಕೆಟ್ ತಂಡ ಪಾಕ್ ವಿರುದ್ಧ 7 ವಿಕೆಟ್‌ಗಳ ಭರ್ಜರಿ ಜಯ ಸಾಧಿಸಿದೆ. ಈ ಮೂಲಕ 2024ರ ಟಿ20 ಏಷ್ಯಾಕಪ್ ಟೂರ್ನಿಯಲ್ಲಿ ಗೆಲುವಿನ ಶುಭಾರಂಭ ಕಂಡಿದೆ. ಮೊದಲು ಬ್ಯಾಟ್ ಬೀಸಿದ ಪಾಕಿಸ್ತಾನ ಭಾರತೀಯ ಬೌಲರ್‌ಗಳ ದಾಳಿಗೆ ತತ್ತರಿಸಿ 108 ರನ್‌ಗಳಿಗೆ ಆಲೌಟ್ ಆಯಿತು. ಪಾಕ್ ತಂಡ ನೀಡಿದ 109 ರನ್‌ಗಳ ಗುರಿ ಬೆನ್ನಟ್ಟಿದ ಭಾರತ ಅತ್ಯುತ್ತಮ ಬ್ಯಾಟಿಂಗ್ ಪ್ರದರ್ಶನ ನೀಡಿ, 14.1 ಎಸೆತಗಳಲ್ಲಿ 109 ರನ್ ಗಳಿಸಿ ಗೆಲುವು ಸಾಧಿಸಿತು.

ಭಾರತ ಪರ ಶಫಾಲಿ ವರ್ಮಾ 40, ಸ್ಮೃತಿ ಮಂಧಾನ 45 ರನ್ ಸಿಡಿಸಿ ಔಟಾದರೆ ಹೇಮಲತಾ 14 ರನ್ ಗಳಿಗೆ ಔಟಾದರು. ಇನ್ನು ನಾಯಕಿ ಹರ್ಮನ್ ಪ್ರೀತ್ ಕೌರ್ ಅಜೇಯ 5 ಮತ್ತು ಜೆಮಿಮಾ ರೊಡ್ರಿಗ್ಸ್ ಅಜೇಯ 3 ರನ್ ಗಳಿಸಿದರು.

ಮೊದಲು ಬ್ಯಾಟಿಂಗ್ ಮಾಡಿದ ಪಾಕ್ ಪರ ಆರಂಭಿಕರಾಗಿ ಕಣಕ್ಕಿಳಿದ ಗುಲ್ ಫಿರೋಜಾ 5 ರನ್, ಮೌನಿಬಾ ಅಲಿ 11 ರನ್ ಬಾರಿಸಿ ಔಟಾದರು. ನಂತರ ಬಂದ ಸಿದ್ರಾ ಅಮಿನ್ 25 ರನ್, ಟುಬಾ ಹಸನ್ 22 ರನ್ ಮತ್ತು ಫಾತಿಮಾ ಸನಾ ಅಜೇಯ 22 ರನ್ ಬಿಟ್ಟರೆ ಮತ್ತ್ಯಾರು ಎರಡಂಕಿ ದಾಟಲಿಲ್ಲ.






ಭಾರತದ ಪರ ದೀಪ್ತಿ ಶರ್ಮಾ 3, ರೇಣುಕಾ ಸಿಂಗ್, ಪೂಜಾ ವಸ್ತ್ರಕಾರ್ ಮತ್ತು ಕನ್ನಡತಿ ಶ್ರೇಯಾಂಕ ಪಾಟೀಲ್ ತಲಾ 2 ವಿಕೆಟ್ ಉರುಳಿಸಿದರು.

## ಲಂಕಾ ವಿರುದ್ಧ ಸರಣಿಗೆ ಟೀಂ ಇಂಡಿಯಾ ಬಲಿಷ್ಠ ತಂಡ ಪ್ರಕಟ

# ಸೂರ್ಯನಿಗೆ ಟಿ20 ನಾಯಕನ ಪಟ್ಟ!

ಇದೇ ಜುಲೈ 27ರಿಂದ ಶ್ರೀಲಂಕಾ ವಿರುದ್ಧ ನಡೆಯಲಿರುವ ದ್ವಿಪಕ್ಷೀಯ ಸರಣಿಗೆ ಭಾರತೀಯ ಕ್ರಿಕೆಟ್ ನಿಯಂತ್ರಣ ಮಂಡಳಿ ಬಲಿಷ್ಠ ಭಾರತ ತಂಡವನ್ನು ಪ್ರಕಟಿಸಿದೆ. ಈ ಪ್ರವಾಸವು ಮೂರು ಪಂದ್ಯಗಳ ಅಂತಾರಾಷ್ಟ್ರೀಯ ಟಿ20 ಸರಣಿ, ಮೂರು ಪಂದ್ಯಗಳ ಏಕದಿನ ಸರಣಿಯೂ ಆಯೋಜನೆಗೊಂಡಿದೆ.

ಟಿ20 ತಂಡಕ್ಕೆ ಸೂರ್ಯಕುಮಾರ್ ಯಾದವ್, ಏಕದಿನ ಪಂದ್ಯಕ್ಕೆ ರೋಹಿತ್ ಶರ್ಮಾ ನಾಯಕನಾಗಿ ಮುಂದುವರಿಸಿದ್ದಾರೆ. ಟಿ20 ವಿಶ್ವಕಪ್ ವಿಜೇತ ತಂಡದಲ್ಲಿ ಉಪನಾಯಕನಾಗಿದ್ದ ಹಾರ್ದಿಕ್ ಪಾಂಡ್ಯ ಅವರ ಬದಲಿಗೆ ಸೂರ್ಯಕುಮಾರ್ ಯಾದವ್‌ಗೆ ಬಿಸಿಸಿಐ ಪಟ್ಟಕಟ್ಟಿದೆ.

ಮುಂಬರುವ ಪ್ರವಾಸವು ನೂತನ ಮುಖ್ಯಕೋಚ್ ಕೋಚ್ ಗೌತಮ್ ಗಂಭೀರ್ ಅವರಿಗೆ ಮೊದಲ ಸವಾಲಾಗಿದೆ. ಈ ಸರಣಿಯೊಂದಿಗೆ ತಮ್ಮ ತರಬೇತಿಯನ್ನು ಪ್ರಾರಂಭಿಸಲು ಸಜ್ಜಾಗಿದ್ದಾರೆ. ಟಿ20 ತಂಡಕ್ಕೆ ಶುಭಮನ್ ಗಿಲ್ ಉಪನಾಯಕರಾಗಿದ್ದಾರೆ. ಹಾರ್ದಿಕ್ ಪಾಂಡ್ಯ ಕೂಡ ಸರಣಿಗೆ ಲಭ್ಯರಾಗಿದ್ದಾರೆ. ಇದರೊಂದಿಗೆ ವಾಷಿಂಗ್ಟನ್ ಸುಂದರ್, ಖಲೀಲ್ ಅಹ್ಮದ್ ಸೇರಿದಂತೆ ಅನೇಕ ಯುವ ಆಟಗಾರರು ಸ್ಥಾನ ಗಿಟ್ಟಿಸಿಕೊಂಡಿದ್ದಾರೆ. ಏಕದಿನ ಸರಣಿಯಲ್ಲಿ ಕೆ.ಎಲ್ ರಾಹುಲ್ ಸೇರಿದಂತೆ ರಿಷಭ್ ಪಂತ್ ಜೊತೆಗೆ ಸಂಜು ಸ್ಯಾಮ್ಸನ್ ವಿಕೆಟ್ ಕೀಪರ್ ಆಗಿ ಅವಕಾಶ ಪಡೆದಿದ್ದಾರೆ.




ಏಕದಿನ ತಂಡಕ್ಕೆ ವಿರಾಟ್ ಕೊಹ್ಲಿ ಮರಳಿದ್ದಾರೆ. ಕೆ.ಎಲ್ ರಾಹುಲ್ ಇಲ್ಲಿ ವಿಕೆಟ್ ಕೀಪರ್ ಕೋಟಾದಲ್ಲಿ ಅವಕಾಶ ಪಡೆದಿದ್ದಾರೆ. ವಾಷಿಂಗ್ಟನ್ ಸುಂದರ್, ಖಲೀಲ್ ಅಹಮದ್ , ಹರ್ಷಿತ್ ರಾಣಾ ಬೌಲಿಂಗ್‌ನಲ್ಲಿ ಅವಕಾಶ ಪಡೆದಿದ್ದಾರೆ. ರಿಯಾನ್ ಪರಾಗ್ ಏಕದಿನ ಮಾದರಿಯಲ್ಲಿ ತಂಡ ಸೇರಿದ್ದಾರೆ. ಎರಡೂ ತಂಡಗಳಿಗೆ ಜಸ್‌ಪ್ರೀತ್ ಬುಮ್ರಾ ಅಲಭ್ಯರಾಗಿದ್ದಾರೆ.

**ಭಾರತ ಟಿ20 ತಂಡ:** ಸೂರ್ಯಕುಮಾರ್ ಯಾದವ್ (ನಾಯಕ), ಶುಭಮನ್ ಗಿಲ್ (ಉಪನಾಯಕ), ಯಶಸ್ವಿ ಜೈಸ್ವಾಲ್, ರಿಂಕು ಸಿಂಗ್, ರಿಯಾನ್ ಪರಾಗ್, ರಿಷಭ್ ಪಂತ್ (ವಿಕೆಟ್ ಕೀಪರ್), ಸಂಜು ಸ್ಯಾಮ್ಸನ್ (ವಿಕೆಟ್ ಕೀಪರ್), ಹಾರ್ದಿಕ್ ಪಾಂಡ್ಯ, ಶಿವಂ ದುಬೆ, ಅಕ್ಷರ್ ಪಟೇಲ್, ವಾಷಿಂಗ್ಟನ್ ಸುಂದರ್, ರವಿ ಬಿಷ್ಣೋಯಿ, ಅರ್ಷ್‌ದೀಪ್ ಸಿಂಗ್, ಖಲೀಲ್ ಅಹ್ಮದ್, ಮೊಹಮ್ಮದ್ ಶಮಿ. ಸಿರಾಜ್.

**ಏಕದಿನ ತಂಡ:** ರೋಹಿತ್ ಶರ್ಮಾ (ನಾಯಕ), ಶುಭಮನ್ ಗಿಲ್ (ಉಪನಾಯಕ), ವಿರಾಟ್ ಕೊಹ್ಲಿ, ಕೆ.ಎಲ್ ರಾಹುಲ್ (ವಿಕೆಟ್ ಕೀಪರ್), ರಿಷಭ್ ಪಂತ್ (ವಿಕೆಟ್ ಕೀಪರ್), ಶ್ರೇಯಸ್ ಅಯ್ಯರ್, ಶಿವಂ ದುಬೆ, ಕುಲ್ದೀಪ್ ಯಾದವ್, ಮೊಹಮ್ಮದ್ ಶಮಿ. ಸಿರಾಜ್, ವಾಷಿಂಗ್ಟನ್ ಸುಂದರ್, ಅರ್ಷ್‌ದೀಪ್ ಸಿಂಗ್, ರಿಯಾನ್ ಪರಾಗ್, ಅಕ್ಷರ್ ಪಟೇಲ್, ಖಲೀಲ್ ಅಹ್ಮದ್, ಹರ್ಷಿತ್ ರಾಣಾ.

# ಸೆ.28ಕ್ಕೆ ವಿಶ್ವಕನ್ನಡ ಹಬ್ಬ

## ಇಸ್ರೋ ವಿಜ್ಞಾನಿ ಕಿರಣ್ ಕುಮಾರ್, ಸುಧಾಮೂರ್ತಿಗೆ ವಿಶ್ವ ಮಾನವ ಪ್ರಶಸ್ತಿ

**ಬೆಂಗಳೂರು:** ಕರ್ನಾಟಕ ಪ್ರೆಸ್ ಕ್ಲಬ್ ಕೌನ್ಸಿಲ್ ವತಿಯಿಂದ ಎರಡನೇ ವಿಶ್ವ ಕನ್ನಡ ಹಬ್ಬವನ್ನು ಸಿಂಗಪುರ ದಲ್ಲಿ ಸೆಪ್ಟೆಂಬರ್ 28ರಂದು ಏರ್ಪಡಿಸಲಾಗಿದೆ.

ಈಗಾಗಲೇ ದುಬೈ ನಲ್ಲಿ ಮೊದಲನೇ ವಿಶ್ವ ಕನ್ನಡ ಹಬ್ಬವು ಅತ್ಯಂತ ಯಶಸ್ವಿಯಾಗಿ ನಡೆದಿರುವ ಹಿನ್ನೆಲೆಯಲ್ಲಿ ಎರಡನೇ ವಿಶ್ವಕನ್ನಡ ಹಬ್ಬದ ಬಗ್ಗೆ ಹೊರ ದೇಶಗಳ ಕನ್ನಡಿಗರಲ್ಲಿ ಅಪಾರವಾದ ಆಸಕ್ತಿ ಹುಟ್ಟಿಕೊಂಡಿದೆ.

ಕರುನಾಡ ಚಕ್ರವರ್ತಿ ಹ್ಯಾಟ್ರಿಕ್ ಹೀರೋ ಶಿವರಾಜ್ ಕುಮಾರ್ ಅವರು ಸಮಸ್ತ ಕನ್ನಡಿಗರ ಪರವಾಗಿ ಸಿಂಗಾಪುರ್ ವಿಶ್ವ ಕನ್ನಡ ಹಬ್ಬಕ್ಕೆ ಆಗಮಿಸುತ್ತಿರುವುದು ಕರುನಾಡಿನ ಹೆಮ್ಮೆಯ ಪ್ರತೀಕವಾಗಿದೆ.

ಬೆಂಗಳೂರಿನ ಜಿ.ಟಿ.ಮಾಲ್‌ನಲ್ಲಿ ಆಯೋಜಿಸಲಾಗಿದ್ದ ಪತ್ರಿಕಾಗೋಷ್ಠಿ ಕಾರ್ಯಕ್ರಮ ಗಾಯಕಿ ಸುಕೃತಿ ರವರ ಪ್ರಾರ್ಥನೆ ಯಿಂದ ಆರಂಭವಾಯಿತು. ನಂತರ ಗಣ್ಯರಿಂದ ದೀಪ ಬೆಳಗುವುದರ ಮೂಲಕ ಕಾರ್ಯಕ್ರಮವು ಮುಂದುವರೆಯಿತು.

ಧಾರ್ಮಿಕ ಗುರುಗಳಾದ ಶ್ರೀ ಆನಂದ ಗುರೂಜಿ, ಎರಡನೇ ವಿಶ್ವಕನ್ನಡ ಹಬ್ಬದ ರಾಯಭಾರಿ ಖ್ಯಾತ ನಟ ವಶಿಷ್ಟ ಸಿಂಹ, ವಿಶ್ವ ಕನ್ನಡ ಹಬ್ಬದ ಸರ್ವಾಧ್ಯಕ್ಷರಾದ ಡಾ.ಸಿ. ಸೋಮಶೇಖರ, ಕರ್ನಾಟಕ ಪ್ರೆಸ್ ಕ್ಲಬ್ ಕೌನ್ಸಿಲ್ ಅಧ್ಯಕ್ಷ ಟಿ. ಶಿವಕುಮಾರ ನಾಗರ ನವಿಲೆ, ಕೆಜಿಎಫ್ ಖ್ಯಾತಿಯ ಗಾಯಕ ಮೋಹನ್ ಕೃಷ್ಣ, ಖ್ಯಾತ ನಟಿ ರೂಪಿಕಾ, ಮಹಾನಿರ್ದೇಶಕಿ ಪ್ರತಿಭಾ ಪಟವರ್ಧನ್, ಪ್ರಧಾನ ಕಾರ್ಯದರ್ಶಿ ರಂಜಿತ, ಕನ್ನಡ ಸಂಘ ಸಿಂಗಪುರ್‌ನ ಖಜಾಂಜಿ ಚಂದ್ರಶೇಖರ, ಕಾವ್ಯ, ಸೈ ರಮೇಶ್ ಮುಂತಾದವರು ಮತ್ತು ಎರಡನೇ ವಿಶ್ವಕನ್ನಡ ಹಬ್ಬದ ಎಲ್ಲಾ ಪದಾಧಿಕಾರಿಗಳು ಸಂಚಾಲಕರು ಉಪಸ್ಥಿತರಿದ್ದರು.



ಈ ಸಂದರ್ಭದಲ್ಲಿ ಸಿಂಗಪುರಿನಲ್ಲಿ ಸಾಧಕರಿಗೆ ನೀಡುವ ಪ್ರಶಸ್ತಿ ವಿಜೇತರ ಪಟ್ಟಿಯನ್ನು ಪ್ರಶಸ್ತಿಯ ಆಯ್ಕೆ ಸಮಿತಿ ಅಧ್ಯಕ್ಷರಾದ ದಿನೇಶ್ ಜೋಶಿಯವರಿಂದ ಬಿಡುಗಡೆ ಮಾಡಿ ಮಾತನಾಡಿದರು. ಅದರಲ್ಲಿ ಭಾರತದ ಪ್ರತಿಷ್ಠಿತ ಇಸ್ರೋ ವಿಜ್ಞಾನಿ ಕಿರಣ್ ಕುಮಾರ್ ಹಾಗೂ ಇನ್ಫೋಸಿಸ್‌ನ ಅಧ್ಯಕ್ಷರಾದ ಸುಧಾ ಮೂರ್ತಿ ರವರಿಗೆ ವಿಶ್ವ ಮಾನವ ಪ್ರಶಸ್ತಿ ಹಾಗೂ ಕರುನಾಡಿನ ಮತ್ತು ಭಾರತ ದೇಶದ ವಿಶಿಷ್ಟ ಸಾಧಕರಾದ ದೊಡ್ಡಣ್ಣ, ಶ್ರೀಪ್ರಸಾದ್ ಗುರೂಜಿ, ಗುರುಕಿರಣ್, ಗಾಯಕಿ ಮಂಗಲಿ, ಆಶಾ ವಿ, ಉಮೇಶ್ ಕುಮಾರ್, ಕಿಕ್ಕೇರಿ ಕೃಷ್ಣಮೂರ್ತಿ, ಹರೀಶ್ ಕುಮಾರ್ ಮತ್ತು ಪದ್ಮ ನಾಗರಾಜ್ ರವರಿಗೆ ವಿಶ್ವ ಮಾನ್ಯ ಪ್ರಶಸ್ತಿ ಯನ್ನು ನೀಡಿ ಗೌರವಿಸಲಾಗುವುದು ಎಂದು ತಿಳಿಸಿದರು.

ಕರ್ನಾಟಕದ ಸಾಂಸ್ಕೃತಿಕ ಪ್ರತೀಕವಾದ ಸಾಹಿತ್ಯ ಸಂಗೀತ, ಭರತನಾಟ್ಯ, ಯಕ್ಷಗಾನ, ಕವಿ ಗೋಷ್ಠಿ ಇದರೊಂದಿಗೆ ಜಾನಪದ ನೃತ್ಯ ಜಾನಪದ ಗೀತೆ, ಗಾಯನ ಹಾಗೂ ವಿಶೇಷವಾಗಿ ಸಿದ್ದಿ ಜನಾಂಗದ ಕಲಾವಿದರು ತಮ್ಮ ಕಲಾ ನೈಪುಣ್ಯತೆಯನ್ನು ಸಿಂಗಾಪುರದ ಎರಡನೇ ವಿಶ್ವಕನ್ನಡ ಹಬ್ಬದ ವೇದಿಕೆಯಲ್ಲಿ ಪ್ರದರ್ಶನ ಮಾಡಲಿದ್ದಾರೆ.

# ಸಿದ್ದರಾಮಯ್ಯ ಮಾತನ್ನ ಯಾರೂ ನಂಬಲ್ಲ: ಸಿ.ಟಿ ರವಿ

**ಬೆಂಗಳೂರು:** ಮುಡಾ, ವಾಲ್ಮೀಕಿ ನಿಗಮದ ಅಕ್ರಮಗಳ ಬೆನ್ನಲ್ಲೇ ಈಗ ದೋಸ್ತಿಗಳು ಸರ್ಕಾರದ ವಿರುದ್ಧ ವರ್ಗಾವಣೆಗೆ ರೇಟ್ ಕಾರ್ಡ್ ಫಿಕ್ಸ್ ಮಾಡಲಾಗಿದೆ ಎಂದು ಗಂಭೀರ ಆರೋಪ ಮಾಡಿದ್ದಾರೆ. ವಿಧಾನಸೌಧದ ಗಾಂಧಿ ಪ್ರತಿಮೆ ಎದುರು ಪರಿಷತ್‌ನ ಬಿಜೆಪಿ, ಜೆಡಿಎಸ್ ಸದಸ್ಯರು ಸರ್ಕಾರದ ರೇಟ್ ಕಾರ್ಡ್ ವಿರುದ್ಧ ಧರಣಿ ನಡೆಸಿದರು.



ಈ ವೇಳೆ ಯಾವ ಇಲಾಖೆಯಲ್ಲಿ ಯಾವೆಲ್ಲ ಹುದ್ದೆಗಳಿಗೆ ಎಷ್ಟೆಷ್ಟು ರೇಟ್ ಕಾರ್ಡ್ ಫಿಕ್ಸ್ ಮಾಡಲಾಗಿದೆ ಎನ್ನುವ ಪೋಸ್ಟರ್‌ಗಳನ್ನ ಪ್ರದರ್ಶಿಸಿ ಸರ್ಕಾರದ ವಿರುದ್ಧ ಧಿಕ್ಕಾರ ಘೋಷಣೆ ಮೊಳಗಿಸಿದರು.

ಪರಿಷತ್ ಸದಸ್ಯ ಸಿ.ಟಿ.ರವಿ ಮಾತನಾಡಿ, ಸಿದ್ದರಾಮಯ್ಯ ಸರ್ಕಾರ ಭ್ರಷ್ಟಾಚಾರದ ಎಲ್ಲೆ ಮೀರಿದೆ. ಸಿದ್ದರಾಮಯ್ಯ ಅವರದ್ದು ಪಾರದರ್ಶಕ ಭ್ರಷ್ಟ ಸರ್ಕಾರ. ಇಲಾಖೆಗಳಲ್ಲಿ ವರ್ಗಾವಣೆಗೆ ರೇಟ್ ಕಾರ್ಡ್ ಫಿಕ್ಸ್ ಮಾಡಲಾಗಿದೆ. ಈ ರೇಟ್ ಕಾರ್ಡ್ ಫಿಕ್ಸ್ ಸತ್ಯ ಎಂದು ಆರೋಪಿಸಿದರು.

ನಗರಾಭಿವೃದ್ಧಿ ಇಲಾಖೆಯಲ್ಲಿ ಚದರಡಿಗೆ 100 ರೂ. ಕೊಡಬೇಕು. ಭೂ ಪರಿವರ್ತನೆಗೆ ಎಕರೆಗೆ 27 ಲಕ್ಷ ರೂ. ಫಿಕ್ಸ್. ಪೊಲೀಸ್ ಇನ್‌ಸ್ಪೆಕ್ಟರ್ ವರ್ಗಾವಣೆಗೆ 50 ಲಕ್ಷದಿಂದ 1 ಕೋಟಿ ರೂ., ಎಇ 50 ಲಕ್ಷದಿಂದ 75 ಲಕ್ಷ. ತಹಶಿಲ್ದಾರ್ 50 ಲಕ್ಷದಿಂದ 1 ಕೋಟಿ ರೂ. ಬೆಂಗಳೂರು ಎಸಿ 5 ಕೋಟಿ ರೂ. ಎಸಿಪಿ 1.5 ಕೋಟಿಯಿಂದ 2 ಕೋಟಿ. ಎಇ 20-25 ಲಕ್ಷ, ಎಸಿ (ಬೆಂಗಳೂರು) 5-7 ಕೋಟಿ, ಡಿಸಿ 1-1.5 ಕೋಟಿ ರೂ. ಕೊಡಬೇಕು ಸಬ್ ರಿಜಿಸ್ಟ್ರಾರ್ ಹರಾಜು ಹೋಲ್‌ಸೇಲ್ ಬಿಡ್ ನಡೆಸಲಾಗ್ತಿದೆ ಎಂದು ವಾಗ್ದಾಳಿ ನಡೆಸಿದರು.

ರೇಟ್ ಕಾರ್ಡ್ ಸತ್ಯ ಇದೆ. ಅಂಗೈ ಹುಣ್ಣಿಗೆ ಕನ್ನಡಿ ಬೇಕಿಲ್ಲ. ಇವರ ಭ್ರಷ್ಟಾಚಾರ ಬರಿಗಣ್ಣಿಗೆ ಕಾಣತ್ತೆ. ನಲವತ್ತು ವರ್ಷಗಳ ಸಾರ್ವಜನಿಕ ಜೀವನದಲ್ಲಿ ಒಂದೇ ಒಂದು ಕಪ್ಪುಚುಕ್ಕೆ ಇಲ್ಲ ಅಂತಾರೆ ಸಿದ್ದರಾಮಯ್ಯ. ಇದನ್ನ ಯಾರೂ ಒಪ್ಪಲ್ಲ ಎಂದು ಟಾಂಗ್ ಕೊಟ್ಟರು.

Printed, Published & Owned by N.Venugopal Krishna, Printed at DASHAPRAMATHI MUDRANALAYA, No.433/1, Chikkavitalenahalli Village, Thagachagere Post, Kasaba Hobli, Channapatna Taluk, Ramanagar District, Pin-562160. Published at No.15, Ground Floor, 12th Block, 5th Main, Kumara Park (West), Behind BDA Head Office, Bengaluru-560020. Editor: N.Venugopal Krishna, Mobile No.+91 94835 89085, email: sanjemugilu@gmail.com